ಸಂಪುಟ: 05 ಸಂಚಿಕೆ: 233 ಪುಟಗಳು: 08 ಶುಕ್ರವಾರ 07 ನವೆಂಬರ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಉನ್ನತ ಸ್ಥಾನಕ್ಕೆ ಸೇರಲು ನಾವು ಹೇಗೆ ಬೇಕಾದರೂ ಆಗಬಹುದು, ಅದಕ್ಕೆ ನಮ್ಮಲ್ಲಿ ಅದ್ಭುತ ಶಕ್ತಿ ಇದೆ.

## ಮೇಲ್ಮನವಿ ರದ್ದು ಸರ್ಕಾರಕ್ಕೆ ಹೈ ಗುದ್ದು

**ಸಾರ್ವಜನಿಕ ಸ್ಥಳದಲ್ಲಿ ಖಾಸಗಿ ಸಂಘ ಸಂಸ್ಥೆಗಳ ಸಭೆಗಳನ್ನು ನಡಸುವುದಕ್ಕೆ ಅನುಮತಿ ಕಡ್ಡಾಯಗೊಳಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಸುತ್ತೋಲೆಗೆ ತಡೆಯಾಜ್ಞೆ ನೀಡಿದ್ದ ಆದೇಶವನ್ನು ರದ್ದುಗೊಳಿಸಲು ಧಾರವಾಡ ಹೈಕೋರ್ಟ್‌ನ ದ್ವಿಸದಸ್ಯ ಪೀಠ ನಿರಾಕರಿಸಿದೆ. ಅಲ್ಲದೆ, ತಡೆಯಾಜ್ಞೆಯನ್ನು ತೆರವುಗೊಳಿಸುವ ಸಂಬಂಧ ಏಕ ಸದಸ್ಯ ಪೀಠಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸೂಚನೆ ನೀಡಿ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿಯನ್ನು ರದ್ದುಗೊಳಿಸಿ ಆದೇಶಿಸಿದೆ.**






### ಸರ್ಕಾರಕ್ಕೆ ಭಾರೀ ಮುಖಭಂಗ

**ಸಾರ್ವಜನಿಕ ಸ್ಥಳಗಳಲ್ಲಿ ಅನುಮತಿ ಕಡ್ಡಾಯ ವಿಚಾರ ತಡೆಯಾಜ್ಞೆ ತೆರವು ಕೋರಿ ಸಲ್ಲಿಸಿದ್ದ ಅರ್ಜಿ ವಜಾ**

• ಉದಯವಾಹಿನಿ, ಬೆಂಗಳೂರು

ಸರ್ಕಾರದ ಸುತ್ತೋಲೆಗೆ ತಡೆ ನೀಡಿದ್ದ ಏಕ ಸದಸ್ಯ ಪೀಠದ ಆದೇಶ ತೆರವುಗೊಳಿಸುವಂತೆ ಕೋರಿ ದ್ವಿಸದಸ್ಯ ಪೀಠಕ್ಕೆ ಸರ್ಕಾರ ಮೇಲ್ಮನವಿ ಸಲ್ಲಿಸಲಾಗಿತ್ತು. ನ್ಯಾಯಮೂರ್ತಿ ಎಸ್. ಜಿ. ಪಂಡಿತ್ ಮತ್ತು ಗೀತಾ ಕೆ. ಬಿ ಅವರಿದ್ದ ದ್ವಿಸದಸ್ಯ ಪೀಠ ವಿಚಾರಣೆ ನಡೆಸಿ ಅರ್ಜಿ ವಜಾಗೊಳಿಸಿ ಆದೇಶಿಸಿದೆ.

ಈ ವೇಳೆ ಪೀಠ, 10 ಜನರು ಸೇರಿದರೆ ಅನುಮತಿ ಬೇಕಾ... ಅದರ ಅವಶ್ಯಕತೆ ಇದೆಯಾ... ಯಾರೋ ಕೆಲವರು ಪಾರ್ಕ್‌ಗಳಲ್ಲಿ ಜೊತೆಯಾಗಿ ಹೋಗುತ್ತಾರೆ. ಅದಕ್ಕೂ ಕೂಡ ಅನುಮತಿ ಬೇಕಾ ಎಂದು ಸರ್ಕಾರದ ಪರ ವಕೀಲರಿಗೆ ಪ್ರಶ್ನಿಸಿತ್ತು. ಇದಕ್ಕೆ ವಕೀಲರು, ಸರ್ಕಾರಿ ರಸ್ತೆ ಇರುವುದು ಸಾರ್ವಜನಿಕರ ಓಡಾಟಕ್ಕೆ. ಹೀಗಾಗಿ ಅದು ಸಾರ್ವಜನಿಕರಿಗೆ ಉಪಯೋಗವಾಗಬೇಕು. ಖಾಸಗಿಯವರು ಕಾರ್ಯಕ್ರಮ ಮಾಡಲು ಬೇರೆ ಕಡೆ ಸ್ಥಳ ಬಾಡಿಗೆ ಪಡೆದು ಕಾರ್ಯಕ್ರಮ ಮಾಡಬಹುದು. ಸಾರ್ವಜನಿಕ ಆಸ್ತಿಗಳನ್ನು ಕಾಪಾಡಿಕೊಳ್ಳುವ ದೃಷ್ಟಿಯಿಂದ ಈ ಆದೇಶ ಮಾಡಲಾಗಿದೆ. ಸಾರ್ವಜನಿಕರ ಹಿತದೃಷ್ಟಿಯಿಂದ ಇದನ್ನು ಮಾಡಲಾಗಿದೆ. ಇದರಲ್ಲಿ ಕಾಯ್ದೆ 19ಎ ಉಲ್ಲಂಘನೆಯಾಗಲ್ಲ ಎಂದು ಪೀಠಕ್ಕೆ ಹೇಳಿದ್ದರು.

1 RSSಗೆ ಪರೋಕ್ಷ ಅಂಕುಶ

2 ಚಿತ್ತಾಪುರ ಪಥಸಂಚಲನಕ್ಕೆ ದಿನಾಂಕ ಫಿಕ್ಸ್..?

3 RSS ಶಾಖೆಗಳಲ್ಲಿ , ಕೇಶವ ಕೃಪದಲ್ಲಿ ಸುಳ್ಳಿನ ಕಾರ್ಖಾನೆ ನಡೆಸಿದ್ದಾರೆ

**ಯಾರ ಭಾವನೆಗಳಿಗೂ ಆರೆಸ್ಸೆಸ್ ಧಕ್ಕೆ ತರುವುದಿಲ್ಲ**

ಪಥಸಂಚಲನ ವೇಳೆ ಯಾವುದೇ ಘೋಷಣೆ ಕೂಗುವುದಿಲ್ಲ. ಕೇವಲ ಬ್ಯಾಂಡ್ ವಾದ್ಯ ನುಡಿಸಲಾಗುತ್ತದೆ. ಯಾರ ಭಾವನೆಗಳಿಗೂ ಆರ್‌ಎಸ್‌ಎಸ್ ಧಕ್ಕೆ ತರುವುದಿಲ್ಲ. ಯಾರನ್ನೂ ಅಪಹಾಸ್ಯ ಮಾಡುವುದಿಲ್ಲ. ಶಾಂತಿ ಭಂಗ ತರುವುದಿಲ್ಲ. ಇಡೀ ಪಥಸಂಚಲವನ್ನು ಡ್ರೋನ್ ಕ್ಯಾಮೆರಾ ಮೂಲಕ ಚಿತ್ರೀಕರಣ ನಡೆಸಲಾಗುತ್ತದೆ. ಗೂಗಲ್ ಮ್ಯಾಪ್ ಮೂಲಕ ಫೋಟೋಗಳನ್ನು ತೆಗೆಯಲಾಗುತ್ತದೆ. ಪಥಸಂಚಲನಕ್ಕೆ ಪರವಾನಗಿ ನೀಡಲು ಜಿಲ್ಲಾಡಳಿತ ವಿಧಿಸುವ ಎಲ್ಲಾ ಷರತ್ತುಗಳನ್ನು ಪಾಲಿಸಲಾಗುವುದು. ಸ್ವಯಂಸೇವಕರ ವಾಹನಗಳನ್ನು ಬಜಾಜ್ ಕಲ್ಯಾಣ ಮಂಟಪ ಆವರಣದಲ್ಲಿ ನಿಲ್ಲಿಸಲು ಅಗತ್ಯ ಸಿದ್ಧತೆ ಮಾಡಲಾಗಿದೆ. ಪಥಸಂಚಲನದ ಕೊನೆಯಲ್ಲಿ ಬಜಾಜ್ ಕಲ್ಯಾಣ ಮಂಟಪದೊಳಗೆ ಸ್ವಯಂಸೇವಕರ ಸಭೆ ನಡೆಸಲಿದ್ದು, ಅದಕ್ಕಾಗಿ ಈಗಾಗಲೇ ಅಗತ್ಯ ಅನುಮತಿ ಪಡೆಯಲಾಗಿದೆ.

**ಆದೇಶಕ್ಕೆ ತಡೆ ಸರ್ಕಾರಕ್ಕೆ ಹಿನ್ನಡೆ**

ಇನ್ನು ಸರ್ಕಾರಿ ವಕೀಲರ ವಾದಕ್ಕೆ ಪ್ರತಿವಾದ ಮಂಡಿಸಿದ ಅರ್ಜಿದಾರರ ಪರ ವಕೀಲರು, ಸರ್ಕಾರದ ಆದೇಶ ಸರಿಯಲ್ಲ. ಇದು ಸಂವಿಧಾನ ಬಾಹಿರವಾಗಲಿದೆ. ಸರ್ಕಾರಿ ಜಾಗ ಇರುವುದೇ ಸಾರ್ವಜನಿಕರ ಬಳಕೆಗಾಗಿಯಾಗಿದೆ. ಇದು ಸಾರ್ವಜನಿಕರ ಹಕ್ಕಿನ ಉಲ್ಲಂಘನೆಯಾಗುತ್ತದೆ. ಪಾರ್ಕುಗಳು ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿ ಇರುತ್ತವೆ. ಅವುಗಳಿಗೆ ನಿರ್ಬಂಧ ಹೇರುವುದು ಸಾರ್ವಜನಿಕರ ಹಕ್ಕಿನ ಉಲ್ಲಂಘನೆಯಾಗುತ್ತದೆ ಎಂದು ವಾದ ಮಂಡಿಸಿದರು.

**ಏನಿದು ಪ್ರಕರಣ :** ಸರ್ಕಾರ(ಪೊಲೀಸ್ ಅಧಿಕಾರಿಗಳ)ದ ಅನುಮತಿ ಪಡೆಯದೇ ನೋಂದಣಿಯಾಗಿರುವ ಅಥವಾ ನೋಂದಣಿ ಆಗದ ಸಂಘ, ಸಂಸ್ಥೆಗಳು, ಖಾಸಗಿ ಸಂಘ, ಸಂಸ್ಥೆಗಳು, ಗುಂಪುಗಳು ಸರ್ಕಾರದ ಸ್ಥಳಗಳಾದ ರಸ್ತೆಗಳು ಮತ್ತು ಉದ್ಯಾನವನಗಳು, ಆಟದ ಮೈದಾನಗಳು ಅಥವಾ ಕಟ್ಟಡಗಳನ್ನು ಬಳಕೆ ಮಾಡುವುದನ್ನು ಅಕ್ರಮ ಕೂಟ ಎಂದು ಪರಿಗಣಿಸಲಾಗುವುದು ಎಂಬುದಾಗಿ 2025ರ ಅಕ್ಟೋಬರ್ 18ರಂದು ರಾಜ್ಯ ಸರ್ಕಾರದ ಗೃಹ ಇಲಾಖೆಯ ಅಧೀನ ಕಾರ್ಯದರ್ಶಿ ಆದೇಶ ಹೊರಡಿಸಿದ್ದರು.

ಈ ಆದೇಶ ರದ್ದು ಕೋರಿ ಹುಬ್ಬಳ್ಳಿಯ ಪುನಶ್ಚೇತನ ಸೇವಾ ಟ್ರಸ್ಟ್, ವಿ-ಕೇರ್ ಫೌಂಡೇಷನ್ ಸೇರಿ ನಾಲ್ವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಧಾರವಾಡ ಏಕ ಸದಸ್ಯ ಪೀಠವು, ಸರ್ಕಾರದ ಆದೇಶಕ್ಕೆ ತಡೆಯಾಜ್ಞೆ ನೀಡಿತ್ತು. ಇದನ್ನು ಪ್ರಶ್ನಿಸಿ ಸರ್ಕಾರವು ದ್ವಿಸದಸ್ಯ ಪೀಠಕ್ಕೆ ಮೇಲ್ಮನವಿ ಅರ್ಜಿ ಸಲ್ಲಿಸಿತ್ತು.

**ಪ್ರಿಯಾಂಕ್ ಖರ್ಗೆ ವಾಗ್ದಾಳಿ**

ಆರ್‌ಎಸ್‌ಎಸ್ ಶಾಖೆಗಳಲ್ಲಿ, ಕೇಶವ ಕೃಪದಲ್ಲಿ ಸುಳ್ಳಿನ ಕಾರ್ಖಾನೆ ನಡೆಸಿದ್ದಾರೆ. ಇದನ್ನೇ ಆರ್‌ಎಸ್‌ಎಸ್ ಇತಿಹಾಸ ಅಂದುಕೊಂಡಿದ್ದಾರೆ ಎಂದು ಆರ್‌ಎಸ್‌ಎಸ್ ಮತ್ತು ಬಿಜೆಪಿ ವಿರುದ್ಧ ಸಚಿವ ಪ್ರಿಯಾಂಕ್ ಖರ್ಗೆ ವಾಗ್ದಾಳಿ ನಡೆಸಿದ್ದಾರೆ. ವಂದೇ ಮಾತರಂ ಗೀತೆ ರಾಷ್ಟ್ರಗೀತೆ ಆಗಬೇಕಿತ್ತು ಎಂಬ ಸಂಸದ ಕಾಗೇರಿ ಹೇಳಿಕೆ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಆರ್‌ಎಸ್‌ಎಸ್ ಅವರಿಗೆ ಅವರ ಇತಿಹಾಸ ಗೊತ್ತಿಲ್ಲ. ಬಿಜೆಪಿ ನಾಯಕರು, ಸ್ವಯಂ ಸೇವಕರು ಆರ್‌ಎಸ್‌ಎಸ್ ಪತ್ರಿಕೆ ಆರ್ಗನೈಸರ್ ಲೇಖನ ಓದಲಿ. ಅದನ್ನ ಓದಿದರೆ ನೀವು ಎಷ್ಟು ದೊಡ್ಡ ದೇಶ ದ್ರೋಹಿಗಳು ಅಂತ ಗೊತ್ತಾಗುತ್ತದೆ. ಆರ್‌ಎಸ್‌ಎಸ್ ಅವರು ಸಂವಿಧಾನ, ರಾಷ್ಟ್ರಧ್ವಜ, ರಾಷ್ಟ್ರಗೀತೆ ಯಾವುದಕ್ಕೂ ಗೌರವ ಕೊಟ್ಟಿಲ್ಲ. ಇದೆಲ್ಲಾ ಅವರು ಸೃಷ್ಟಿಸಿರೋ ಇತಿಹಾಸ ಎಂದು ಕಿಡಿಕಾರಿದರು. ರವೀಂದ್ರನಾಥ್ ಟಾಗೋರ್ ಅವರು ಬ್ರಿಟಿಷರಿಗೋಸ್ಕರ ಜನಗಣಮನ ಬರೆದಿಲ್ಲ. ಇದನ್ನ ಟಾಗೋರ್ ಅವರೇ ಎರಡು ಬಾರಿ ಹೇಳಿದ್ದಾರೆ. ದೇಶಕ್ಕೆ ನಾನು ಬರೆದಿರೋದು ಅಂತ. ಬಿಜೆಪಿ ಅವರು ಓದಲ್ಲ, ಮಾಡಲ್ಲ. ವಾಟ್ಸಾಪ್, ಫೇಸ್‌ಬುಕ್‌ನಲ್ಲಿ ಬರುತ್ತದೆ.

**ಹೈಕೋರ್ಟ್ ಅರ್ಜಿ ವಜಾ**

ಏಕ ಸದಸ್ಯತ್ವ ಪೀಠದಲ್ಲಿ ನೀಡಲಾಗಿದ್ದ ತಡೆಯಾಜ್ಞೆಯನ್ನ ಅದೇ ನ್ಯಾಯಾಲಯದಲ್ಲಿ ತೆರವುಗೊಳಿಸಲು ಸರ್ಕಾರದ ಪರವಾಗಿ ಅರ್ಜಿ ಸಲ್ಲಿಸುವಂತೆ ಸೂಚನೆ ನೀಡಿದ್ರು. ಸರ್ಕಾರದ ಪರ ವಕೀಲರು ಅರ್ಜಿ ಸಲ್ಲಿಸಿದ್ರು. ಕೋರ್ಟ್ ವಿಚಾರಣೆ ಬಳಿಕ ಆದೇಶವನ್ನು ಇಂದಿಗೆ ಮುಂದೂಡಲಾಗಿತ್ತು. ಇದೀಗ ಆದೇಶ ಹೊರಬಿದ್ದಿದ್ದು, ಸರ್ಕಾರ ಅರ್ಜಿ ವಜಾಗೊಂಡಿದೆ. ಸರ್ಕಾರಕ್ಕೆ ಮುಖಭಂಗವಾಗಿದೆ.

## ಎ ಖಾತಾ ಪರಿವರ್ತನೆಗೆ ಸಲ್ಲಿಕೆ ಆಗ್ತಿಲ್ಲ ಅರ್ಜಿಗಳು

• ಉದಯವಾಹಿನಿ, ಬೆಂಗಳೂರು

ಬಿ ಖಾತಾದಾರರಿಗೆ ನಗರಾಭಿವೃದ್ಧಿ ಇಲಾಖೆ ಸುವರ್ಣಾವಕಾಶ ಮಾಡಿಕೊಟ್ಟಿದೆ. ಬಿ ಖಾತೆಯಿಂದ ಎ ಖಾತಾ ಪರಿವರ್ತನೆಗೆ ಅವಕಾಶ ಮಾಡಿಕೊಟ್ಟಿದೆ. 5% ಮಾರ್ಗಸೂಚಿ ದರ ಕೂಡ ಕಟ್ಟಬೇಕಿದೆ. ಅರ್ಜಿ ಸಲ್ಲಿಕೆ ಆರಂಭ ಆಗಿ 25 ದಿನ ಆದರೂ ಇನ್ನೂ ಅರ್ಜಿ ಸಲ್ಲಿಕೆಗಳು ಸರಿಯಾಗಿ ಆಗಿಲ್ಲ. ಬೆಂಗಳೂರಿಗರು ಇದಕ್ಕೆ ನೀರಸ ಪ್ರತಿಕ್ರಿಯೆ ವ್ಯಕ್ತಪಡಿಸುತ್ತಿದ್ದಾರೆ. ಇದುವರೆಗೂ ಬರೀ 1,200 ಅರ್ಜಿ ಸಲ್ಲಿಕೆ ಆಗಿದೆ. 5% ದರ ಏರಿಕೆ ಜಾಸ್ತಿ ಆಯ್ತಾ ಅಂತ ಜನ ಮುಂದಾಗಲಿಲ್ಲವೇ ಎಂಬ ಪ್ರಶ್ನೆ ಎದ್ದಿದೆ.

ಅವರು ಈ ಯೋಜನೆ ಜಾರಿ ಮಾಡಿದ್ದು, ಇದಕ್ಕೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಟೀಕೆ ಮಾಡಿದ್ದರು. ಯಾರು ಕೂಡ ದುಡ್ಡು ಕೊಟ್ಟು ಎ ಖಾತಾ ಮಾಡಿಸಿಕೊಳ್ಳಬೇಡಿ ಅಂತಾ ಹೇಳಿದ್ದರು. ನಮ್ಮ ಸರ್ಕಾರ ಬರುತ್ತೆ ಎಂದಿದ್ದರು. ಈ ಹೇಳಿಕೆಯಿಂದ ಹೊಡೆತ ಆಯ್ತಾ ಎಂಬ ಪ್ರಶ್ನೆ ಎದ್ದಿದೆ.

## ಸಹಕಾರ ಸೊಸೈಟಿಯಲ್ಲಿ 70 ಕೋಟಿ ದುರ್ಬಳಕೆ

• ಉದಯವಾಹಿನಿ, ಬೆಂಗಳೂರು

ರಾಜಾರಾಮ್ ಮೋಹನರಾಯ್ ರಸ್ತೆಯಲ್ಲಿ ಇರುವ ಉದ್ಯೋಗಿಗಳ ಭವಿಷ್ಯ ನಿಧಿ ಸಂಸ್ಥೆಯ (ಇಪಿಎಫ್‌ಒ) ಸ್ಟಾಫ್ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯಲ್ಲಿ ನಡೆದಿರುವ 70 ಕೋಟಿ ದುರ್ಬಳಕೆ ಪ್ರಕರಣದ ತನಿಖೆಯನ್ನು ಸಿಐಡಿಗೆ ಹಸ್ತಾಂತರಿಸುವ ಸಾಧ್ಯತೆಯಿದೆ.ಸೊಸೈಟಿಯ ಅಧ್ಯಕ್ಷ ಸಿ.ಜೆ.ಮುರುಳೀಧರ್ ಅವರು ನೀಡಿದ ದೂರಿನ ಮೇರೆಗೆ ಅಕ್ಟೋಬರ್ 31ರಂದು ಕಬ್ಬನ್‌ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಸೊಸೈಟಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಸಿಇಒ) ಗೋಪಿನಾಥ್ ಹಾಗೂ ಸಿಬ್ಬಂದಿ ಲಕ್ಷ್ಮೀ ಅವರನ್ನು ಬಂಧಿಸಿದ್ದ ಪೊಲೀಸರು, ಆರೋಪಿಗಳ ಮನೆ ಮೇಲೆ ದಾಳಿ ನಡೆಸಿ ಚಿನ್ನಾಭರಣ, ಆಸ್ತಿ ಖರೀದಿಗೆ ಸಂಬಂಧಿಸಿದ ದಾಖಲೆಗಳು, ಕಾರು ಹಾಗೂ ದ್ವಿಚಕ್ರ ವಾಹನಗಳನ್ನು ಜಪ್ತಿ ಮಾಡಿಕೊಂಡಿದ್ದರು. 'ದೊಡ್ಡ ಮೊತ್ತದ ಹಣ ದುರುಪಯೋಗ ಆಗಿರುವುದು ಪತ್ತೆಯಾಗಿರುವ ಕಾರಣಕ್ಕೆ ಪ್ರಕರಣವನ್ನು ಸಿಐಡಿಗೆ ಹಸ್ತಾಂತರ ಮಾಡಲಾಗುವುದು.

## ಸ್ಮಾರ್ಟ್ ಮೀಟರ್ ಅಳವಡಿಕೆ ಅಕ್ರಮ ಆರೋಪ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆ ಸಂಬಂಧ ಟೆಂಡರ್‌ನಲ್ಲಿ ಅಕ್ರಮ ನಡೆದಿರುವ ಆರೋಪ ಕುರಿತು ಲೋಕಾಯುಕ್ತ ಪೊಲೀಸರು ವರದಿ ಸಲ್ಲಿಸುವಂತೆ ಸೂಚನೆ ನೀಡಿರುವ ವಿಶೇಷ ನ್ಯಾಯಾಲಯದ ಆದೇಶ ಪ್ರಶ್ನಿಸಿ ಇಂಧನ ಸಚಿವ ಕೆ.ಜೆ.ಜಾರ್ಜ್ ಮತ್ತು ಇತರರು ಸಲ್ಲಿಸಿರುವ ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್ ಆದೇಶ ಕಾಯ್ದಿರಿಸಿದೆ.

ಖಾಸಗಿ ದೂರು ದಾಖಲಿಸಲು ಕಚೇರಿಗೆ ನಿರ್ದೇಶಿಸಿರುವುದು ಮತ್ತು ಸ್ಮಾರ್ಟ್ ಮೀಟರ್ ಅಳವಡಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವರದಿ ಸಲ್ಲಿಸಲು ಲೋಕಾಯುಕ್ತ ಪೊಲೀಸರಿಗೆ ನಿರ್ದೇಶಿಸಿರುವ ವಿಶೇಷ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಕೆ.ಜೆ. ಜಾರ್ಜ್ ಮತ್ತು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ್ ಬೀಳಗಿ ಹಾಗೂ ತಾಂತ್ರಿಕ ವಿಭಾಗದ ನಿರ್ದೇಶಕ ಎಚ್.ಜೆ. ರಮೇಶ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿರುವ ನ್ಯಾಯಮೂರ್ತಿ ಎಂ.ಐ. ಅರುಣ್ ಅವರ ಏಕಸದಸ್ಯ ಪೀಠ ಅಂತಿಮ ಆದೇಶವನ್ನು ಕಾಯ್ದಿರಿಸಿದೆ.

## ರಾಜ್ಯದ 120 ಪೊಲೀಸ್ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ 120 ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಬೆಂಗಳೂರು ನಗರ ಮತ್ತು ಗ್ರಾಮಾಂತರ ಭಾಗಗಳಲ್ಲಿ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆಯ ವಿಷಯದಲ್ಲಿ ಕಳೆದ ಹಲವಾರು ತಿಂಗಳಿಂದ ''ಮೀನಾಮೇಷಾ'' ನಡೆಯುತ್ತಿತ್ತು.

ಎರಡು ವರ್ಷಗಳ ಸೇವಾ ಅವಧಿ ಪೂರೈಸಿ ಮೂರು-ನಾಲ್ಕು ತಿಂಗಳು ಕಳೆದರೂ ವರ್ಗಾವಣೆ ಆಗದೆ ಕಾಯುತ್ತಿದ್ದ ಅನೇಕ ಇನ್ಸ್‌ಪೆಕ್ಟರ್‌ಗಳಿಗೆ ಇದೀಗ ವರ್ಗಾವಣೆಯ ಭಾಗ್ಯ ಒಲಿದಿದೆ. ನಗರ ಮತ್ತು ಗ್ರಾಮಾಂತರ ಎರಡೂ ವಿಭಾಗಗಳಲ್ಲಿ ಕೆಲವು ಇನ್ಸ್‌ಪೆಕ್ಟರ್‌ಗಳು ''ಜಾತಕ ಪಕ್ಷಿಯಂತೆ'' ತಮ್ಮ ವರ್ಗಾವಣೆಯನ್ನು ಕಾಯುತ್ತಿದ್ದರು. ಈ ಬಾರಿ ಅವರಿಗೂ ವರ್ಗಾವಣೆ ಆದೇಶ ಬಿದ್ದಿದ್ದು, ಇಲಾಖೆ ಒಳಗೆ ಚುರುಕು ಚಟುವಟಿಕೆ ಆರಂಭವಾಗಿದೆ. ವರ್ಗಾವಣೆಯ ಪಟ್ಟಿಯು ರಾಜಕೀಯ ಪ್ರಭಾವ ಮತ್ತು ಹೈಕಮಾಂಡ್ ಹಸ್ತಕ್ಷೇಪದ ಹಾದಿಯಲ್ಲಿ ನಡೆದಿದೆಯೇ ಎಂಬ ಚರ್ಚೆಯೂ ಇಲಾಖೆ ಒಳಗೆ ಸದ್ದು ಮಾಡುತ್ತಿದೆ. ಇದೀಗ ರಾಜ್ಯ ಸರ್ಕಾರ ಅಧಿಕೃತವಾಗಿ ಆದೇಶ ಹೊರಡಿಸಿದ್ದು, ಹೊಸ ಹುದ್ದೆಗಳಿಗೆ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಕೂಡ ಶೀಘ್ರದಲ್ಲೇ ಪೂರ್ಣಗೊಳ್ಳುವ ನಿರೀಕ್ಷೆಯಿದೆ.

## ಬಿಡದಿ ಟೌನ್‌ಶಿಪ್: ಒಂದು ಇಂಚು ಭೂಮಿ ಕೊಡಬೇಡಿ

• ಉದಯವಾಹಿನಿ, ಮಂಡ್ಯ

ಬಿಡದಿ ಟೌನ್ ಶಿಪ್ ಹೆಸರಿನಲ್ಲಿ ಈ ಸರ್ಕಾರ ರೈತರ ಫಲವತ್ತಾದ ಭೂಮಿಯನ್ನು ಲೂಟಿ ಹೊಡೆಯಲು ಹೊರಟಿದೆ. ಯಾರೂ ಕೂಡ ಒಂದು ಇಂಚು ಭೂಮಿ ಕೊಡಬೇಡಿ. ಯಾರೂ ಹೆದರುವ ಅಗತ್ಯ ಇಲ್ಲ. ಜನರ ಜತೆ ನಾನಿದ್ದೇನೆ ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಅಭಯ ನೀಡಿದರು.

**ಕನಕಪುರದಲ್ಲಿ ಒಣಭೂಮಿ ಇದ್ರೆ ಅಲ್ಲಿ ಮಾಡಲಿ**

ಮಂಡ್ಯದಲ್ಲಿ ದಿಶಾ ಸಮಿತಿ ಸಭೆಯ ನಂತರ ಮಾಧ್ಯಮಗೋಷ್ಠಿಯಲ್ಲಿ ಕೇಂದ್ರ ಸಚಿವರು ಮಾತನಾಡಿದರು. ರಾಜ್ಯ ಸರ್ಕಾರದ ಬಿಡದಿ ಟೌನ್‌ಶಿಪ್‌ಗೆ ರೈತರು ವಿರೋಧ ಮಾಡುತ್ತಿದ್ದಾರೆ. ಕಳೆದ ಎರಡು ತಿಂಗಳಿನಿಂದ ರೈತರ ಅಹೋರಾತ್ರಿ ಧರಣಿ ನಡೆಸುತ್ತಿದ್ದಾರೆ. ರೈತರಿಗೆ ನುಡಿಯುವುದು ಬಿಟ್ಟು ಈ ಸರ್ಕಾರದ ರಿಯಲ್ ಎಸ್ಟೇಟ್ ಕುಳಗಳಿಗೆ ಮಿಡಿಯುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಬಿಡದಿ ಟೌನ್ ಶಿಪ್ ಮಾಡುವುದು ಕುಮಾರಸ್ವಾಮಿ ಅವರ ಕಾಲದಲ್ಲಿ ಆಗಿರುವ ತೀರ್ಮಾನ ಎಂದು ನನ್ನ ಹೆಸರಿನಲ್ಲಿ ಶೆಲ್ಟರ್ ತೆಗೆದುಕೊಳ್ಳಬೇಡಿ. ನನ್ನ ಕಾಲದ ತೀರ್ಮಾನವೇ ಬೇರೆ, ಇವತ್ತಿನ ತೀರ್ಮಾನಗಳು ಬೇರೆ ಇವೆ. ಅಂದು ಭೂಮಿ ಬೆಲೆ ದೊಡ್ಡ ಮಟ್ಟದಲ್ಲಿರಲಿಲ್ಲ.



ಆದರೆ, ಇವತ್ತು ಭೂಮಿಗೆ ಭಾರೀ ಬೆಲೆ ಬಂದಿದೆ. 9 ಸಾವಿರ ಎಕರೆ ಭೂಮಿಯನ್ನು ಟೌನ್‌ಶಿಪ್‌ಗೆ ಸ್ವಾಧೀನ ಮಾಡಿಕೊಳ್ಳಲು ಹೊರಟಿದ್ದಾರೆ. ರೈತರು ಇದಕ್ಕೆ ವಿರೋಧ ಇದ್ದಾರೆ. ನಾನು ರೈತರ ಪರ ಇದ್ದೇನೆ ಎಂದು ಸಚಿವರು ಹೇಳಿದರು. ಬಿಡದಿಯಲ್ಲಿ ಸರ್ಕಾರ ಸ್ವಾಧೀನ ಮಾಡಿಕೊಳ್ಳಲು ಹೊರಟಿರುವ ಭೂಮಿಯ ವ್ಯಾಪ್ತಿಯಲ್ಲಿಯೇ ಈಗಲ್‌ಟನ್ ಗಾಲ್ಫ್ ಕ್ಲಬ್ ಇದೆ. ಅದು ಸರಕಾರಿ ಕರಾಬು ಭೂಮಿ ಅತಿಕ್ರಮಿಸಿದೆ ಆರೋಪ ಮಾಡಲಾಗಿತ್ತು.

## ಸಂಪನ್ಮೂಲ ಕ್ರೋಢೀಕರಣ ಸಮಿತಿಯಿಂದ ಸಿಎಂಗೆ ವರದಿ ಸಲ್ಲಿಕೆ ತೆರಿಗೆ ವ್ಯಾಪ್ತಿ ವಿಸ್ತರಿಸಲು ಶಿಫಾರಸು

• ಉದಯವಾಹಿನಿ, ಬೆಂಗಳೂರು

ರಾಜ್ಯದ ಆರ್ಥಿಕ ಪರಿಸ್ಥಿತಿ ಮತ್ತು ಸುಸ್ಥಿರ ಆರ್ಥಿಕ ಬೆಳವಣಿಗೆಯನ್ನು ಬಲಪಡಿಸುವ ಉದ್ದೇಶದಿಂದ ಆಗಸ್ಟ್ 2024ರಲ್ಲಿ ರಚಿಸಿದ್ದ ಸಂಪನ್ಮೂಲ ಕ್ರೋಢೀಕರಣ ಸಮಿತಿಯು ತನ್ನ ಅಂತಿಮ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಿತು.

ಸಂಪನ್ಮೂಲ ಕ್ರೋಢೀಕರಣ ಸಮಿತಿಯು ಕೈಗೊಂಡ ಸಮಗ್ರ ವಿಶ್ಲೇಷಣೆ ಮತ್ತು ಶಿಫಾರಸುಗಳ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ವೀಕರಿಸಿದರು.

ಕರ್ನಾಟಕ ರಾಜ್ಯವು, ಭಾರತದಲ್ಲಿರುವ ಇತರೆ ರಾಜ್ಯಗಳಿಗೆ ಹೋಲಿಸಿದರೆ ಅತ್ಯುತ್ತಮ ಆರ್ಥಿಕ ಬೆಳವಣಿಗೆಯನ್ನು ಸಾಧಿಸುತ್ತಿದೆ. ರಾಜ್ಯದ ಒಟ್ಟು ರಾಜಸ್ವ ಸ್ವೀಕೃತಿಗಳಲ್ಲಿ ಸ್ವಂತ ತೆರಿಗೆ ರಾಜಸ್ವದ ಪಾಲು ಶೇ.60-70 ರಷ್ಟಿದ್ದು, ರಾಜ್ಯದ ಪ್ರಮುಖ ಆದಾಯದ ಮೂಲವಾಗಿದೆ. ವಾಣಿಜ್ಯ ತೆರಿಗೆ, ರಾಜ್ಯ ಅಬಕಾರಿ, ನೋಂದಣಿ ಮತ್ತು ಮುದ್ರಾಂಕ ಹಾಗೂ ಮೋಟಾರು ವಾಹನ ತೆರಿಗೆಗಳು ರಾಜ್ಯದ ಸ್ವಂತ ತೆರಿಗೆ ರಾಜಸ್ವದ ಪ್ರಮುಖ ಸ್ವೀಕೃತಿಗಳಾಗಿರುತ್ತದೆ.

**ಪ್ರಮುಖ ಸವಾಲುಗಳು:** ತೆರಿಗೆಯೇತರ ಆದಾಯ ಕಡಿಮೆಯಿರುವುದು,



ವಿಶೇಷವಾಗಿ ಬಳಕೆದಾರರ ಶುಲ್ಕಗಳು ಹಾಗೂ ಸರ್ಕಾರಿ ಸ್ವತ್ತುಗಳಿಂದ, ಗುತ್ತಿಗೆ ಮತ್ತು ನಗದೀಕರಣದಿಂದ ಹೆಚ್ಚಿನ ರಾಜಸ್ವ ಸೃಜಿಸಲು ವಿಪುಲ ಅವಕಾಶಗಳಿರುತ್ತದೆ. ಆಸ್ತಿ ದತ್ತಾಂಶಗಳ ಉತ್ತಮ ನಿರ್ವಹಣೆ ಮತ್ತು ಸರ್ಕಾರಿ ಆಸ್ತಿಗಳ ವ್ಯವಸ್ಥಿತ ಸಮೀಕ್ಷೆಯ ಅಗತ್ಯವಿರುತ್ತದೆ. ಮಾರ್ಗಸೂಚಿ ದರಗಳು ಮತ್ತು ಆಸ್ತಿ ತೆರಿಗೆಗಳ ಪರಿಷ್ಕರಣೆಯಿಂದಾಗಿ ಸ್ಥಳೀಯ ಸಂಸ್ಥೆಗಳು ರಾಜಸ್ವ ಸೃಜಿಸಬಹುದಾದ ಅವಕಾಶವಿರುತ್ತದೆ.

**ಪ್ರಮುಖ ಶಿಫಾರಸುಗಳು**

- ತೆರಿಗೆ ಸುಧಾರಣೆ ಮೂಲಕ ಕೆಲ ಪ್ರಮುಖ ರಾಜಸ್ವ ಮೂಲಗಳ ಮೇಲಿನ ಅತಿಯಾದ ಅವಲಂಬನೆಯನ್ನು ಕಡಿಮೆ ಮಾಡುವುದು ಮತ್ತು ತೆರಿಗೆ ವ್ಯಾಪ್ತಿಯನ್ನು ವಿಸ್ತರಿಸುವುದು.
- ಅಬಕಾರಿ ಇಲಾಖೆಯಲ್ಲಿ ಪಾರದರ್ಶಕತೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಹರಾಜು ಆಧಾರಿತ ಡಿಜಿಟಲ್ ಸನ್ನದುಗಳನ್ನು ನೀಡುವುದು.
- ಸಾರ್ವಜನಿಕ ಸೇವೆಗಳಲ್ಲಿ ಬಳಕೆದಾರ ಶುಲ್ಕಗಳನ್ನು ತರ್ಕಬದ್ಧಗೊಳಿಸುವುದು; ಪ್ರಮಾಣಾತ್ಮಕ ಬಿಲ್ಲಿಂಗ್ ವ್ಯವಸ್ಥೆಗೆ ಹಂತ ಹಂತವಾಗಿ ಸ್ಥಳಾಂತರಿಸುವುದು ಮತ್ತು ಹಣ ದುಬ್ಬರಕ್ಕೆ ಅನುಗುಣವಾಗಿ ಬಳಕೆದಾರರ ಶುಲ್ಕಗಳನ್ನು ಸ್ವಯಂಚಾಲಿತವಾಗಿ ಪರಿಷ್ಕರಿಸುವ ವ್ಯವಸ್ಥೆಯನ್ನು ರೂಪಿಸುವುದು.
- ವೈಜ್ಞಾನಿಕ ಆಸ್ತಿ ಮೌಲ್ಯಮಾಪನ, ಸಾರ್ವಜನಿಕ-ಖಾಸಗಿ ಪಾಲುದಾರಿಕೆಗಳ ಅಡಿಯಲ್ಲಿ ಗುತ್ತಿಗೆಯನ್ನು ವಿಸ್ತರಿಸುವುದು ಮತ್ತು ನಗರ ಭೂ-ಸ್ವತ್ತುಗಳನ್ನು ನಗದೀಕರಿಸುವ ಮೂಲಕ ಆದಾಯದ ಸಾಮರ್ಥ್ಯವನ್ನು ಹೆಚ್ಚಿಸುವುದು.
- ಸಿಬ್ಬಂದಿ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಮೂಲಕ ಇಲಾಖಾ ಸಾಮರ್ಥ್ಯವನ್ನು ಹೆಚ್ಚಿಸುವುದು, ಆಸ್ತಿ ಸಮೀಕ್ಷೆಗಳನ್ನು ನಿಯತಕಾಲಿಕವಾಗಿ ಮಾಡುವುದು ಮತ್ತು ತೆರಿಗೆಯೇತರ ಆದಾಯ ಮತ್ತು ಆಸ್ತಿ ನಗದೀಕರಣದ ಮೇಲ್ವಿಚಾರಣೆ ಮಾಡಲು ಆರ್ಥಿಕ ಇಲಾಖೆಯಲ್ಲಿ ಆರ್ಥಿಕ ನೀತಿ ವಿಭಾಗವನ್ನು ರಚಿಸುವುದು.

## ಮೋದಿಗೆ ಪತ್ರ ಬರೆಯುತ್ತೇನೆ ಎಂದ ಸಿದ್ದರಾಮಯ್ಯ

### ಕಬ್ಬು ಬೆಳೆಗಾರರ ಸಮಸ್ಯೆಗೆ ಕೇಂದ್ರದತ್ತ ಬೊಟ್ಟು ಮಾಡಿದ ಸಿಎಂ!

• ಉದಯವಾಹಿನಿ, ಬೆಂಗಳೂರು


ಬೆಳಗಾವಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ನಡೆಯುತ್ತಿರುವ ಕಬ್ಬು ಬೆಳೆಗಾರರ ಹೋರಾಟದ ಬಗ್ಗೆ ಸಚಿವ ಸಂಪುಟ ಸಭೆ ನಡೆಯಿತು. ಸಭೆ ಬಳಿಕ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿದ್ರು. ರೈತರ ಮುಗ್ಧತೆ ಬಳಸಿಕೊಂಡು, ತಪ್ಪು ಮಾಹಿತಿ ನೀಡುತ್ತಿದ್ದಾರೆ. ಕೇಂದ್ರ ಸರ್ಕಾರದ ಜವಾಬ್ದಾರಿ ಹೆಚ್ಚಿಗೆ ಇದ್ದರೂ, ವಿಪಕ್ಷಗಳು ರಾಜಕಾರಣ ಮಾಡಲು ಹೊರಟಿದ್ದಾರೆ. ವಿಪಕ್ಷಗಳ ಮಾತಿಗೆ ಬಲಿಯಾಗಬೇಡಿ ಅಂತ ಸಿಎಂ ಕರೆ ನೀಡಿದರು. ಇನ್ನು ಬೆಂಬಲ ಬೆಲೆ ನಿಗದಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರಲಿದ್ದು, ಈ ಕುರಿತಂತೆ ಭೇಟಿಗೆ ಅವಕಾಶ ಕೇಳಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಪತ್ರ ಬರೆಯೋದಾಗಿ ಸಿಎಂ ಹೇಳಿದ್ದಾರೆ.



**ಸಚಿವರಿಗೆ ಸಮಸ್ಯೆ ಆಲಿಸಲು ಹೇಳಿದ್ದೇನೆ:** ಶುಕ್ರವಾರ 11 ಘಂಟೆಗೆ ರಾಜ್ಯದ ಎಲ್ಲಾ ಸಕ್ಕರೆ ಕಾರ್ಖಾನೆ ಮಾಲೀಕರ ಜೊತೆ ಸಭೆ ಮಾಡ್ತಿದ್ದೇವೆ. ಇಂದಿನ ಸಭೆಯಲ್ಲಿ ಬೆಳಗಾವಿ, ಬಾಗಲಕೋಟೆ, ಬಿಜಾಪುರ ಕಬ್ಬು ಬೆಳೆಗಾರರ ಪ್ರತಿಭಟನೆ ಬಗ್ಗೆ ಸುಧೀರ್ಘ ಚರ್ಚೆ ಮಾಡಿದೆವು.

ಕ್ಯಾಬಿನೆಟ್‌ಗೂ ಮುನ್ನ ಎಂ.ಬಿ.ಪಾಟೀಲ್, ಹೆಚ್.ಕೆ.ಪಾಟೀಲ್‌ಗೂ ಮಾತನಾಡಿ ಬೆಳಗಾವಿ ಬಿಜಾಪುರಕ್ಕೆ ಹೋಗುವಂತೆ ಹೇಳಿದ್ದೆ ಅಂತ ಹೇಳಿದ್ದಾರೆ.

ಕಬ್ಬು ಬೆಳೆಗಾರರ ಪ್ರತಿಭಟನೆ ಗಂಭೀರವಾಗಿ ಪರಿಗಣಿಸಿದ್ದೇವೆ. ನಮ್ಮದು ಯಾವತ್ತೂ ರೈತ ಪರ ಸರ್ಕಾರ. ಸತೀಶ್ ಜಾರಕಿಹೊಳಿ, ಹೆಬ್ಬಾಳ್ಕರ್ ಇಬ್ಬರೂ ಸಕ್ಕರೆ ಕಾರ್ಖಾನೆ ಮಾಲೀಕರು. ಹೀಗಾಗಿ ಅವರು ರೈತರ ಬಳಿ ಹೋಗಲಿಲ್ಲ. ಎಫ್‌ಆರ್‌ಪಿ ನಿಗದಿ ಮಾಡೋರು ಕೇಂದ್ರ ಸರ್ಕಾರದವ್ರು. 06/05/2025 ರಂದು



**ಕೇಂದ್ರದ ಆದೇಶ ಜಾರಿ ಮಾಡೋದು ನಮ್ಮ ಕೆಲಸ**

**10.25 ಗಿಂತ ರಿಕವರಿ ಕಡಿಮೆ ಬಂದ್ರೆ ಕಡಿಮೆ ಮಾಡುವುದು. 9.05 ಗಿಂತ ಕಡಿಮೆ ಇದ್ರೆ ಪ್ರತಿ ಟನ್ 3290.50 ರೂ ಕೊಡಲು ಕೇಂದ್ರ ಸರ್ಕಾರ ತೀರ್ಮಾನ ಮಾಡಿದೆ. ಎಫ್‌ಆರ್‌ಪಿ ತೀರ್ಮಾನ ಮಾಡೋದು ನಾವಲ್ಲ, ಕೇಂದ್ರ ಸರ್ಕಾರ. ನಾವು ಅದನ್ನ ಅನುಷ್ಠಾನ ಮಾಡುವ ಜಾರಿ ಮಾಡುವ ಕೆಲಸ ಮಾಡ್ತೇವೆ ಅಂತ ಸಿಎಂ ಹೇಳಿದ್ರು. ಕಬ್ಬು ನಿಯಂತ್ರಣ ಸಂಬಂಧ ಕಾಯ್ದೆಗಳಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ. ಎಫ್‌ಆರ್‌ಪಿ ಪ್ರಕಾರ ಕೊಡ್ತಿದ್ದಾರೆ, ನಿಗಧಿತ ಅವಧಿಯೊಳಗೆ ಹಣ ಕೊಡ್ತಿದ್ದಾರ ಅಂತ ನೋಡೋದು ನಮ್ಮ ಕೆಲಸ. ಎಫ್‌ಆರ್‌ಪಿ ನಿಗಧಿ ಅಷ್ಟೇ ಸಕ್ಕರೆ ಮೇಲಿನ ನಿಗಧಿಯನ್ನ ಕೇಂದ್ರ ಸರ್ಕಾರವೇ ಹೊಂದಿದೆ ಅಂತ ಸ್ಪಷ್ಟಪಡಿಸಿದ್ರು.**

ನಿಗದಿ ಮಾಡಿದ್ದಾರೆ. ಟನ್‌ಗೆ 10.25 ರಿಕವರಿ, 3500 ಪ್ರತಿಟನ್‌ಗೆ, ಇನ್‌ಕ್ಲೂಡಿಂಗ್ ಟ್ರಾನ್ಸ್‌ಪೋರ್ಟ್ ಸೇರಿ 3550 ಇದೆ. 10.25 ಜಾಸ್ತಿ ರಿಕವರಿ ಇದ್ರೆ, ಹೆಚ್ಚುವರಿ ಬಂದ್ರೆ, 3.45 ರೂ ಕೊಡಲು ಹೇಳಿದ್ದಾರೆ ಅಂತ ಮಾಹಿತಿ ನೀಡಿದ್ರು.

**ಕೇಂದ್ರದ ಆದೇಶ ಜಾರಿ ಮಾಡೋದು ನಮ್ಮ ಕೆಲಸ:** 10.25 ಗಿಂತ ರಿಕವರಿ ಕಡಿಮೆ ಬಂದ್ರೆ, ಕಡಿಮೆ ಮಾಡುವುದು. 9.05 ಗಿಂತ ಕಡಿಮೆ ಇದ್ರೆ, ಪ್ರತಿ ಟನ್ 3290.50 ರೂ ಕೊಡಲು ಕೇಂದ್ರ ಸರ್ಕಾರ ತೀರ್ಮಾನ ಮಾಡಿದೆ.

ಎಫ್‌ಆರ್‌ಪಿ ತೀರ್ಮಾನ ಮಾಡೋದು ನಾವಲ್ಲ, ಕೇಂದ್ರ ಸರ್ಕಾರ. ನಾವು ಅದನ್ನ ಅನುಷ್ಠಾನ ಮಾಡುವ ಜಾರಿ ಮಾಡುವ ಕೆಲಸ ಮಾಡ್ತೇವೆ ಅಂತ ಸಿಎಂ ಹೇಳಿದ್ರು. ಕಬ್ಬು ನಿಯಂತ್ರಣ ಸಂಬಂಧ ಕಾಯ್ದೆಗಳಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ. ಎಫ್‌ಆರ್‌ಪಿ ಪ್ರಕಾರ ಕೊಡ್ತಿದ್ದಾರೆ, ನಿಗಧಿತ ಅವಧಿಯೊಳಗೆ ಹಣ ಕೊಡ್ತಿದ್ದಾರ ಅಂತ ನೋಡೋದು ನಮ್ಮ ಕೆಲಸ. ಎಫ್‌ಆರ್‌ಪಿ ನಿಗಧಿ ಅಷ್ಟೇ ಸಕ್ಕರೆ ಮೇಲಿನ ನಿಗಧಿಯನ್ನ ಕೇಂದ್ರ ಸರ್ಕಾರವೇ ಹೊಂದಿದೆ ಅಂತ ಸ್ಪಷ್ಟಪಡಿಸಿದ್ರು.

**2019ರಿಂದ ಬೆಂಬಲ ಬೆಲೆ ಏರಿಸಿಲ್ಲ:** ಸಕ್ಕರೆ ಬೆಲೆ 2019 ರಲ್ಲಿ 31 ರೂಪಾಯಿ ನಿಗದಿ ಮಾಡಿದ್ರು. ಅಂದಿನಿಂದ ಇಂದಿನವರೆಗೂ ಎಂಎಸ್‌ಪಿ ಏರಿಕೆ ಮಾಡಿಲ್ಲ. ಸಕ್ಕರೆ ರಫ್ತು ಮಾಡುವುದನ್ನ ನಿಲ್ಲಿಸಿದ್ದಾರೆ. ಇಡೀ ದೇಶಕ್ಕೆ ಕೇವಲ 10 ಲಕ್ಷ ಮೆಟ್ರಿಕ್ ಟನ್ ರಫ್ತಿಗೆ ಅವಕಾಶ ಕೊಟ್ಟಿದ್ದಾರೆ. ಕರ್ನಾಟಕ ಒಂದರಲ್ಲೇ 41 ಲಕ್ಷ ಟನ್ ಸಕ್ಕರೆ ಉತ್ಪಾದನೆ ಆಗ್ತಿದೆ. ಎಥಿನಾಲ್ ಎಷ್ಟು ತಯಾರು ಮಾಡಬೇಕು, ಎಷ್ಟು ಖರೀದಿ ಮಾಡಬೇಕು ಎಂಬುದನ್ನ ನಿಗಧಿ ಮಾಡೋದು ಕೇಂದ್ರವೇ. ಕರ್ನಾಟಕದಲ್ಲಿ 270 ಕೋಟಿ ಲೀಟರ್ ಎಥಿನಾಲ್ ಉತ್ಪಾದನೆ ಮಾಡಲಾಗ್ತಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹12,257/Gram24ct ₹11,235/Gram22ct | ಬೆಳ್ಳಿ: ₹152.50/Gram

# ಏಳು ಮಂದಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಕೇಸ್ ದಾಖಲು

## ■ ರಸ್ತೆ ತಡೆ ನಡೆಸಿ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪ: ಬಿಜೆಪಿ ಕಾರ್ಯಕರ್ತರ ವಿರುದ್ಧ ಎಫ್ಐಆರ್

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ರಸ್ತೆ ತಡೆ ನಡೆಸಿ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪದಡಿ ಬಿಜೆಪಿ ಕಾರ್ಯಕರ್ತರ ವಿರುದ್ಧ ಗುಂಡ್ಲುಪೇಟೆ ಪೋಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲು ಮಾಡಲಾಗಿದೆ. ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಬಿಜೆಪಿ ನಡೆಸಿದ ಪಾದಯಾತ್ರೆ ವೇಳೆ ರಸ್ತೆ ತಡೆ ನಡೆಸಿ ಸಂಚಾರಕ್ಕೆ ಅಡ್ಡಿಪಡಿಸಿದ್ದಾರೆ ಎಂಬ ಆರೋಪದಡಿ ಕೇಸ್ ದಾಖಲಿಸಿರುವ ಪೊಲೀಸರು ಏಳು ಮಂದಿ ಬಿಜೆಪಿ ಕಾರ್ಯಕರ್ತರ ಹೆಸರನ್ನ ಉಲ್ಲೇಖಿಸಿದ್ದಾರೆ.

ಬೊಮ್ಮಲಾಪುರ ಬಸವಣ್ಣ, ಸಂತೋಷ್ ಮಡಹಳ್ಳಿ, ಪ್ರಣಯ್ ಹಂಗಳ, ಪ್ರತಾಪ್, ಮಂಜು ಶಿವಪುರ, ಗುರು, ಶಿವಕುಮಾರ್, ಸೇರಿದಂತೆ ಹಲವರ ವಿರುದ್ಧ ಕೇಸ್ ದಾಖಲಿಸಲಾಗಿದೆ. ಕಲ್ಲುಕಟ್ಟೆ ಜಲಾಶಯದಿಂದ ಪಾದಯಾತ್ರೆ ಹೊರಟ ಬಿಜೆಪಿ ಕಾರ್ಯಕರ್ತರು ಪಟ್ಟಣದ ಕೆ ಆರ್ಸಿ ರಸ್ತೆ ಮಾರ್ಗವಾಗಿ ಸಂಚರಿಸಿ ತಹಶೀಲ್ದಾರ್ ಕಚೇರಿ ಮುಂಭಾಗ ಎಂಡಿಸಿಸಿ ಬ್ಯಾಂಕ್ ವೃತ್ತದ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆಗೆ ಮುಂದಾದ ವೇಳೆ ಪೊಲೀಸರ ಸೂಚನೆಗೂ ಬಗ್ಗದೆ ಸಂಚಾರಕ್ಕೆ ಅಡಚಣೆ ಉಂಟುಮಾಡಿರುವುದಾಗಿ ಎಫ್ಐಆರ್‌ನಲ್ಲಿ ದಾಖಲಿಸಿದ್ದಾರೆ. ಪಾದಯಾತ್ರೆಯಲ್ಲಿ ಭಾಗಿಯಾಗಿದ್ದ ವಿಪಕ್ಷ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣ ಸ್ವಾಮಿ, ಮಾಜಿ ಸಂಸದ ಪ್ರತಾಪ್ ಸಿಂಹ, ಹಾಲಿ ಸಂಸದ ಯದುವೀರ್ ಒಡೆಯರ್ ಸರ್ಕಾರದ ನಡೆಯನ್ನ ಖಂಡಿಸಿದ್ದರು. ಒಟ್ಟಾರೆಯಾಗಿ ಹೋರಾಟವನ್ನ ಹತ್ತಿಕ್ಕುವ ಕೆಲಸಕ್ಕೆ ಸರ್ಕಾರ ಮುಂದಾಗಿದೆ ಎಂದು ಬಿಜೆಪಿಗರು ಕಿಡಿಕಾರಿದ್ದಾರೆ.

**ರಸ್ತೆ ತಡೆ ನಡೆಸಿ ಸಂಚಾರಕ್ಕೆ ಅಡ್ಡಿ**



ನಮ್ಮ ಹೋರಾಟವನ್ನ ಹತ್ತಿಕ್ಕಲು ಇದಕ್ಕಿಂತ ದೊಡ್ಡದಾಗಿ ಏನು ಮಾಡಲು ಸಾಧ್ಯವಿಲ್ಲ, ಪೊಲೀಸ್ ಇಲಾಖೆ ಮೂಲಕ ಸರ್ಕಾರ ಗೂಂಡಾ ವರ್ತನೆ ತೋರುತ್ತಿದೆ, ನಾವು ಹೋರಾಟಕ್ಕಿಳಿದಿದ್ದು ನೀರಿಗಾಗಿ ಹಾಗೂ ರೈತರ ಏಳ್ಗೆಗಾಗಿ , ಸ್ಥಳೀಯ ಶಾಸಕರ ಕುಮ್ಮಕ್ಕಿನಿಂದ ಪೊಲೀಸರು ಕೇಸ್ ದಾಖಲಿಸಿರುವುದು ಖಂಡನೀಯ ಈ ಕೂಡಲೇ ನಮ್ಮ ಕಾರ್ಯಕರ್ತರ ವಿರುದ್ಧ ದಾಖಲಿಸಿರುವ ಎಫ್ಐಆರ್ ರದ್ದುಗೊಳಿಸಬೇಕು.

–ಛಲವಾದಿ ನಾರಾಯಣ ಸ್ವಾಮಿ
ವಿಧಾನ ಪರಿಷತ್ , ವಿಪಕ್ಷ ನಾಯಕ



ನಮ್ಮ ಕಾರ್ಯಕರ್ತರ ಮೇಲೆ ದೂರು ದಾಖಲಿಸಿರುವುದು ದುರುದ್ದೇಶಪೂರಿತವಾಗಿದೆ, ಯಾರದೋ ಒತ್ತಡಕ್ಕೆ ಮಣಿದು ಪೊಲೀಸರು ಎಫ್ಐಆರ್ ದಾಖಲಿಸಿರುವುದು ಖಂಡನೀಯ, ಕಾಲ್ನಡಿಗೆ ಜಾಥಾ ಕುರಿತು ಮುಂಚಿತವಾಗಿಯೇ ಪೊಲೀಸರಿಂದ ಅನುಮತಿ ಪಡೆಯಲಾಗಿತ್ತು. ಸ್ಥಳೀಯ ಶಾಸಕರು ದ್ವೇಷದ ರಾಜಕಾರಣಕ್ಕೆ ಮುಂದಾಗಿರುವುದು ಪ್ರಜಾಪ್ರಭುತ್ವಕ್ಕೆ ಮಾಡಿದ ಅಪಮಾನವಾಗಿದೆ.


–ಎನ್. ಮಹೇಶ್
ಬಿಜೆಪಿ ರಾಜ್ಯ ಉಪಾಧ್ಯಕ್ಷ

# ಜಿಬಿಎ ಉಪನಗರ ಯೋಜನೆ | ಪರಿಹಾರ ನಿರ್ಧಾರ ಸಭೆಗೆ ಅವಕಾಶ ನೀಡಿ: ರೈತರ ಆಗ್ರಹ

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಬಿಡದಿ ಹೋಬಳಿಯಲ್ಲಿ ನಿರ್ಮಿಸಲು ಮುಂದಾಗಿರುವ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಗೆ ಸ್ವಾಧೀನಪಡಿಸಿಕೊಳ್ಳಲಿರುವ ಜಮೀನಿಗೆ ಪರಿಹಾರ ದರ ನಿರ್ಧರಿಸುವ ಕುರಿತು, ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ ನಡೆಯುತ್ತಿರುವ ಸಭೆಯಲ್ಲಿ ಭಾಗವಹಿಸಲು ಎಲ್ಲಾ ರೈತರಿಗೂ ಅವಕಾಶ ನೀಡಬೇಕು ಎಂದು ಆಗ್ರಹಿಸಿ, ರೈತರು ಜಿಲ್ಲಾಧಿಕಾರಿ ಕಚೇರಿ ಎದುರು ರಸ್ತೆ ತಡೆ ನಡೆಸಿ ಗುರುವಾರ ಪ್ರತಿಭಟನೆ ನಡೆಸಿದರು.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಜಾರಿಯಾಗುತ್ತಿರುವ ಯೋಜನಾ ವ್ಯಾಪ್ತಿಯ ಜಮೀನು ಮಾಲೀಕರ ಜೊತೆ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಸಭೆ ಹಮ್ಮಿಕೊಂಡಿದ್ದಾರೆ. ಸಭೆಯಲ್ಲಿ ಭಾಗವಹಿಸಲು ಯೋಜನಾ ವ್ಯಾಪ್ತಿಯ ರೈತರ ಜೊತೆಗೆ, ಯೋಜನೆ ವಿರೋಧಿಸುತ್ತಿರುವ ರೈತರು ಸಹ ಡಿ.ಸಿ ಕಚೇರಿ ಎದುರು ಜಮಾಯಿಸಿದರು. ಆಗ ಪೊಲೀಸರು, ಹಂತ ಹಂತವಾಗಿ ಸಭೆ ನಡೆಯಲಿದರ. ಹಾಗಾಗಿ ನಿಗದಿತ ಜಮೀನು ಮಾಲೀಕರನ್ನು ಮಾತ್ರ ಸಭೆಗೆ ಬಿಡಲಾಗುತ್ತದೆ ಎಂದರು.


ಉದಯವಾಹಿನಿ ಚಿತ್ರ

**ನಮ್ಮ ಭೂಮಿ ನಮ್ಮ ಹಕ್ಕು**

ವಿರೋಧ ವ್ಯಕ್ತಪಡಿಸಿದ ರೈತರು, ಎಲ್ಲರಿಗೂ ಬಿಡಬೇಕು ಎಂದು ಪಟ್ಟು ಹಿಡಿದರು. ಆಗ ರೈತರು, ಪೊಲೀಸರ ನಡುವೆ ಮಾತಿನ ಚಕಮಕಿ ನಡೆಯಿತು. ಪೊಲೀಸರ ಮಾತಿಗೆ ಒಪ್ಪದ ರೈತರು ರಸ್ತೆಯಲ್ಲಿ ಕುಳಿತು ಪ್ರತಿಭಟಿಸಿದರು. ಸರ್ಕಾರ, ಜಿಲ್ಲಾಧಿಕಾರಿ ವಿರುದ್ಧ ಘೋಷಣೆ ಕೂಗಿದರು.

# ನಗರದಲ್ಲಿ ಎರಡು ಫ್ಲೈಓವರ್: ಸಂಸದ ಯದುವೀರ್ ವಿರೋಧ

• ಉದಯವಾಹಿನಿ, ಮೈಸೂರು

ನಗರದೊಳಗೆ ಎರಡು ಫ್ಲೈಓವರ್ ನಿರ್ಮಾಣ ಪ್ರಸ್ತಾವಕ್ಕೆ ನಮ್ಮ ವಿರೋಧವಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು. ಇಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಫ್ಲೈಓವರ್ ನಿರ್ಮಿಸಲು ಉದ್ದೇಶಿಸಲಾದ ಜೆಎಲ್‌ಬಿ ಹಾಗೂ ವಿನೋಬಾ ರಸ್ತೆ ಪಾರಂಪರಿಕ ರಸ್ತೆಗಳಾಗಿವೆ. ಅವುಗಳನ್ನು ಹಾಗೆಯೇ ಉಳಿಸಿಕೊಳ್ಳಬೇಕು' ಎಂದು ಆಗ್ರಹಿಸಿದರು.

ಜನಾಭಿಪ್ರಾಯವನ್ನೇ ಪಡೆಯದೇ ಈ ಮಾರ್ಗದಲ್ಲಿ ಫ್ಲೈಓವರ್ ನಿರ್ಮಾಣ ಕಾರ್ಯಕ್ಕೆ ಮುಂದಾಗಿದ್ದಾರೆ. ಡಿಪಿಆರ್ ಸಿದ್ಧಪಡಿಸುತ್ತಿದ್ದಾರೆ. ರಾಜ್ಯ ಸರ್ಕಾರದ ಈ ನಡೆಗೆ ನಮ್ಮ ತೀವ್ರ ವಿರೋಧವಿದೆ ಎಂದು ಹೇಳಿದರು. ವಿನೋಬಾ ರಸ್ತೆಯಲ್ಲಿ ಫ್ಲೈ ಓವರ್ ನಿರ್ಮಿಸಿದರೆ ಬದಿಯಲ್ಲಿರುವ ನೂರಾರು ಮರಗಳ ಹನನ ಆಗಲಿದೆ. ಆದ್ದರಿಂದ ಆ ಮಾರ್ಗದಲ್ಲಿ ಫ್ಲೈ ಓವರ್ ನಿರ್ಮಿಸಬಾರದು. ಅಭಿವೃದ್ಧಿ ನೆಪದಲ್ಲಿ ಮೈಸೂರಿನ ಸೌಂದರ್ಯ ಹಾಳುಗೆಡವಬಾರದು. ಪಾರಂಪರಿಕ ನಗರದ ಗುರುತನ್ನು ಉಳಿಸಿಕೊಳ್ಳಬೇಕು ಎಂದು ಒತ್ತಾಯಿಸಿದರು. ಮೈಸೂರಿನ ಪಾರಂಪರಿಕತೆ ಉಳಿಸಿಕೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ಅವರು ಗ್ರೇಟರ್ ಮೈಸೂರು ಸಭೆಯಲ್ಲಿ ಸಲಹೆ ನೀಡಿದ್ದಾರೆ. ಅದರಂತೆ ಅಧಿಕಾರಿಗಳು ನಡೆದುಕೊಳ್ಳಬೇಕು ಎಂದರು. ಫ್ಲೈ ಓವರ್ ನಿರ್ಮಾಣವೇ ಶಾಶ್ವತ ಪರಿಹಾರವಲ್ಲ. ಮೆಟ್ರೊ ರೈಲು ಮಾರ್ಗ ನಿರ್ಮಾಣಕ್ಕೆ ನಮ್ಮ ವಿರೋಧವಿಲ್ಲ. ಮುಂಬೈ ಮಾದರಿಯಲ್ಲಿ ಅಂಡರ್‌ಗೌಂಡ್‌ನಲ್ಲಿ ಮೆಟ್ರೊ ರೈಲು ನಿರ್ಮಾಣ ಮಾಡಲಿ. ಮೈಸೂರಿನ ಜನಸಂಖ್ಯೆಗೆ ಅನುಗುಣವಾಗಿ ಕಾಮಗಾರಿ ಕೈಗೊಳ್ಳಲಿ. ಗ್ರೇಟರ್ ಮೈಸೂರು ನಿರ್ಮಾಣ ಮಾಡುವಾಗ ಸ್ಥಳೀಯರಿಗೆ ಅನುಕೂಲ ಆಗುವಂತೆ ಅಭಿವೃದ್ಧಿ ಕೆಲಸಗಳನ್ನು ಮಾಡಲಿ ಎಂದು ಹೇಳಿದರು.

ವಿರೋಧದ ನಡುವೆ ಫ್ಲೈಓವರ್ ಕಾಮಗಾರಿ ಕೈಗೆತ್ತಿಕೊಂಡರೆ ಕಾನೂನಾತ್ಮಕ ಹೋರಾಟ ಮಾಡುತ್ತೇವೆ. ಜನರ ಸಹಕಾರದೊಂದಿಗೆ ಹೋರಾಟ ರೂಪಿಸುತ್ತೇವೆ ಎಂದು ತಿಳಿಸಿದರು. ಗ್ರೇಟರ್ ಮೈಸೂರು ಮಾಡುವುದರಿಂದ ಒಳಿತಾಗಲಿದೆ. ಆದರೆ, ಅದಕ್ಕೆ ತಕ್ಕಂತೆ ಪೂರ್ವ ತಯಾರಿ ಮಾಡಿಕೊಳ್ಳಬೇಕು. ಬೆಂಗಳೂರು ಮಾದರಿಯಲ್ಲಿ ಅವೈಜ್ಞಾನಿಕವಾಗಿ ನಿರ್ಮಾಣ ಮಾಡಬಾರದು ಎಂದರು.

**70 ಕೋಟಿ ಅನುದಾನ ವಾಪಸ್:** ಮೈಸೂರು ಮಹಾನಗರ ಪಾಲಿಕೆಗೆ ಅಭಿವೃದ್ಧಿ ಕಾರ್ಯಗಳಿಗೆಂದು ಕೇಂದ್ರ ಸರ್ಕಾರದಿಂದ ಬಂದಿದ್ದ 70 ಕೋಟಿ ಅನುದಾನ ವಾಪಸ್ ಹೋಗಿದೆ ಎಂದು ಯದುವೀರ್ ತಿಳಿಸಿದರು. ಪಾಲಿಕೆಯಲ್ಲಿ ಜನಪ್ರತಿನಿಧಿಗಳ ಆಡಳಿತವಿಲ್ಲ. ಅಭಿವೃದ್ಧಿ ನಡೆಯುತ್ತಿಲ್ಲ. ಹೀಗಾಗಿ ಅನುದಾನ ಬಳಕೆಯಾಗದೆ ವಾಪಸ್ ಹೋಗಿದೆ ಎಂದರು.


ಉದಯವಾಹಿನಿ ಚಿತ್ರ

**ರಾಹುಲ್ ಹೇಳಿಕೆ ಸರಿಯಲ್ಲ**

ಶೇ.10ರಷ್ಟು ಜನ ದೇಶದ ಸೇನೆಯನ್ನು ನಿಭಾಯಿಸುತ್ತಿದ್ದಾರೆ ಎಂಬ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿಕೆ ಖಂಡನೀಯ. ಅವರು ಸುಳ್ಳನ್ನು ಸತ್ಯ ಮಾಡಲು ಹೋಗುತ್ತಾರೆ. ಇದು ಸರಿಯಲ್ಲ.

– ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದ

# ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪ ಯೋಜನೆ ಪ್ರಗತಿಗೆ ಡಿಸಿ ಸೂಚನೆ

• ಉದಯವಾಹಿನಿ, ಮಡಿಕೇರಿ



ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಉಪ ಯೋಜನೆಯಡಿಯ ಕಾಯ ೯ಕ್ರಮಗಳ ಅನುಷ್ಠಾನದಲ್ಲಿ ಸಹಕಾರ, ಮೀನುಗಾರಿಕೆ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆಗಳು ದಾಪುಗಾಲಿಟ್ಟಿವೆ. ಅದರಲ್ಲೂ ಸಹಕಾರ ಇಲಾಖೆಯಲ್ಲಿ ಶೇ 100ರಷ್ಟು ಪ್ರಗತಿ ಸಾಧಿತವಾಗಿದೆ. ಇನ್ನುಳಿದಂತೆ, ಕೌಶಲ್ಯಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಡಿಮೆ ಪ್ರಗತಿ ಸಾಧಿತವಾಗಿರುವ ವಿಷಯ ಇಲ್ಲಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಗೊತ್ತಾಯಿತು.

ಪ್ರಗತಿ ಪರಿಶೀಲಿಸಿದ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರು, ಎಲ್ಲಾ ಇಲಾಖೆಗಳು ತ್ವರಿತಗತಿಯಲ್ಲಿ ಪ್ರಗತಿ ಸಾಧಿಸಬೇಕು ಎಂದು ಸ್ಪಷ್ಟ ನಿರ್ದೇಶನ ನೀಡಿದರು. ವಿವಿಧ ಇಲಾಖೆಗಳಲ್ಲಿ ವೈಯಕ್ತಿಕ ಮತ್ತು ಸಮುದಾಯ ಕಾರ್ಯಕ್ರಮಗಳನ್ನು ತಲುಪಿಸಬೇಕು. ಯಾವುದೇ ಕಾರಣಕ್ಕೂ ವಿಳಂಬ ಧೋರಣೆ ಅನುಸರಿಸಬಾರದು ಎಂದು ವೆಂಕಟ್ ರಾಜಾ ಅವರು ಸೂಚಿಸಿದರು. ಕೃಷಿ, ತೋಟಗಾರಿಕೆ, ಪಶುಪಾಲನೆ, ಮೀನುಗಾರಿಕೆ, ಇಂಧನ, ಸಹಕಾರ, ಸಮಾಜ ಕಲ್ಯಾಣ, ಮಹಿಳಾ, ಮಕ್ಕಳ ಅಭಿವೃದ್ಧಿ, ವೈದ್ಯಕೀಯ ಶಿಕ್ಷಣ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಪ್ರವಾಸೋದ್ಯಮ, ಬೃಹತ್, ಸಣ್ಣ ನೀರಾವರಿ, ಶಾಲಾ ಶಿಕ್ಷಣ, ಕಾರ್ಮಿಕ, ಲೋಕೋಪಯೋಗಿ, ಕೈಮಗ್ಗ ಮತ್ತು ಜವಳಿ, ಅರಣ್ಯ, ನಗರಾಭಿವೃದ್ಧಿ, ಯುವ ಸಬಲೀಕರಣ, ಕ್ರೀಡೆ, ಆಯುಷ್, ಕೌಶಲ್ಯಾಭಿವೃದ್ಧಿ, ಪಂಚಾಯತ್ ರಾಜ್, ಕೈಗಾರಿಕೆ, ನಗರಾಭಿವೃದ್ಧಿ, ಪದವಿ ಪೂರ್ವ ಶಿಕ್ಷಣ, ಹೀಗೆ ಎಲ್ಲಾ ಇಲಾಖೆಗಳು ಪರಿಶಿಷ್ಟ ಜಾತಿ, ಪಂಗಡಕ್ಕಾಗಿ ಇಂತಿಷ್ಟು ಹಣ ಮೀಸಲಿರಿಸಲಾಗಿದೆ. ಆದಷ್ಟು ಶೀಘ್ರ ಪ್ರಗತಿ ಸಾಧಿಸುವಂತೆ ಅವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶೇಖರ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಹೊನ್ನೇಗೌಡ ಅವರು ವಿವಿಧ ಇಲಾಖೆಗಳ ಪ್ರಗತಿ ಸಂಬಂಧ ಮಾಹಿತಿ ನೀಡಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಚಂದ್ರಶೇಖರ್, ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಮುತ್ತಪ್ಪ, ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಸಚಿನ್, ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಡಾ.ಲೋಕೇಶ್, ಜಿಲ್ಲಾ ಪಂಚಾಯಿತಿ ಸಹಾಯಕ ಕಾರ್ಯದರ್ಶಿ ಜೀವನ್ ಕುಮಾರ್, ಕಾರ್ಮಿಕ ಇಲಾಖೆಯ ಯೋಜನಾ ನಿರ್ದೇಶಕ ಶೀರಾಜ್ ಅಹಮ್ಮದ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಇಬ್ರಾಹಿಂ, ಪಂಚಾಯತ್ ರಾಜ್ ಕಾರ್ಯಪಾಲಕ ಇಂಜಿನಿಯರ್ ಜಿ.ಕೆ.ನಾಯಕ್, ಯುವ ಸಬಲೀಕರಣ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕಿ ವಿ.ಟಿ.ವಿಸ್ಮಯಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಶೈಲಜಾ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಬೆಳ್ಯಪ್ಪ, ವಿವಿಧ ಇಲಾಖೆ ಅಧಿಕಾರಿಗಳು ತಮ್ಮ ಇಲಾಖೆ ಕಾರ್ಯಕ್ರಮಗಳ ಪ್ರಗತಿ ಸಂಬಂಧ ಮಾಹಿತಿ ನೀಡಿದರು.

# ಕೋಡಿಹರಿದ ಸ್ಥಳ ಪರಿಶೀಲಿಸಿದ ಶಾಸಕ

• ಉದಯವಾಹಿನಿ, ಶಿಡ್ಲಘಟ್ಟ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಸಾದಲಿ ಬಳಿಯ ರಾಮಸಮುದ್ರ ಕೆರೆ ತುಂಬಿ ಕೋಡಿ ಹರಿಯುತ್ತಿದ್ದು, ಕೋಡಿ ಹರಿವ ಭಾಗದಲ್ಲಿ ಸ್ಥಳೀಯರ ಸಂಚಾರಕ್ಕೆ ಅಡ್ಡಿಯಾದ ಸ್ಥಳಕ್ಕೆ ಶಾಸಕ ಬಿ.ಎನ್. ರವಿಕುಮಾರ್ ಅವರು ಅಧಿಕಾರಿಗಳೊಂದಿಗೆ ಬುಧವಾರ ಭೇಟಿನೀಡಿ ಸ್ಥಳೀಯರ ಸಮಸ್ಯೆ ಆಲಿಸಿದರು. ಶೀಲಾ ಹಾಲ್ಕುರಿಕೆ ಸಾಮಾಜಿಕ ಕಾರ್ಯಕರ್ತೆ ರಂಗಭೂಮಿ ನಟಿ ಈ ಭಾಗದ ರಸ್ತೆಯಲ್ಲಿ ನೀರು ತುಂಬಿ ಸುತ್ತಮುತ್ತಲ ಗದ್ದೆ, ತೋಟಗಳಿಗೆ ತೆರಳಲು ಅಡ್ಡಿಯಾಗಿದೆ. ಇದರಿಂದ ಕೃಷಿ ಹೈನುಗಾರಿಕೆ ಚಟುವಟಿಕೆಗಳಿಗೆ ಅಡ್ಡಿಯಾಗಿದೆ ಎಂದು ಸ್ಥಳೀಯರು ಅವಲತ್ತುಕೊಂಡರು. ಕೋಡಿ ಹರಿಯುವ ನೀರು ವ್ಯರ್ಥವಾಗಿ ಆಂಧ್ರದ ಕಡೆ ಹರಿಯುತ್ತದೆ ಎಂದು ಮಾಹಿತಿ ನೀಡಿ ಹರಿಯುವ ನೀರನ್ನು ತಡೆಯುವಂತೆ ಮನವಿ ಮಾಡಿದರು. ಈ ಬಗ್ಗೆ ಪತ್ರಿಕೆಯಲ್ಲಿ ಅ. 24ರಂದು ವರದಿ ಪ್ರಕಟವಾಗಿತ್ತು.

ಸ್ಥಳೀಯವಾಗಿ ಸಂಚಾರಕ್ಕೆ ಅಡ್ಡಿಯಾಗದಂತೆ ಈ ಭಾಗದಲ್ಲಿ ಹರಿಯುವ ನೀರಿನ ಕಾಲುವೆಗೆ ತಡೆಯಾಗಿ ಮೋರಿ ನಿರ್ಮಿಸಲು ಸಾಧ್ಯವೇ ಎಂದು ಪರಿಶೀಲಿಸಿ ಸೇತುವೆ ನಿರ್ಮಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು. ಸಾದಲಿ ಕ್ರಾಸ್‌ನಿಂದ ಎಸ್.ದೇವಗಾನಹಳ್ಳಿವರೆಗೂ ರಸ್ತೆ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದ್ದು ದೂಳು ಆವರಿಸಿ ರಸ್ತೆ ಅಕ್ಕಪಕ್ಕದ ಗದ್ದೆ, ತೋಟಗಳ ಬೆಳೆ ಹಾಳಾಗುತ್ತಿದೆ. ಪ್ರಯಾಣಿಕರಿಗೂ ತೊಂದರೆ ಆಗುತ್ತಿದೆ ಎಂದು ಸಾರ್ವಜನಿಕರು ದೂರಿದರು. ರಸ್ತೆ ಕಾಮಗಾರಿ ವೇಳೆ ದೂಳಿನಿಂದ ತೊಂದರೆ ಆಗದಂತೆ ಕ್ರಮವಹಿಸಲು ಸಂಬಂಧಿಸಿದ ಕಾಮಗಾರಿ ಗುತ್ತಿಗೆದಾರರಿಗೆ ಸೂಚಿಸುವಂತೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು. ಸಾದಲಿ ಗ್ರಾಮದ ಹಕ್ಕಿಪಿಕ್ಕಿ ಕಾಲೋನಿಯಲ್ಲಿ ಹಾಗೂ ಅಲ್ಲಿಗೆ ಸಮೀಪ ಸರ್ಕಾರದಿಂದ ನೀಡಿರುವ ನಿವೇಶನಗಳ ಜಾಗದಲ್ಲಿ ವಿದ್ಯುತ್ ಸಂಪರ್ಕ ಸರಿಯಾಗಿ ಇಲ್ಲದ ಕಾರಣ ತೊಂದರೆ ಆಗುತ್ತಿದೆ ಎಂದು ಸ್ಥಳೀಯರು ಸಮಸ್ಯೆ ಹೇಳಿಕೊಂಡರು.

# ಸರ್ಕಾರಿ ಕೆಲಸ ಕೊಡಿಸುವುದಾಗಿ ಮಹಿಳೆಗೆ ವಂಚನೆ: ರೈಲ್ವೆ ನೌಕರನ ವಿರುದ್ಧ ಪ್ರಕರಣ

• ಉದಯವಾಹಿನಿ, ತುಮಕೂರು

ಸರ್ಕಾರಿ ಕೆಲಸ ಕೊಡಿಸುವುದಾ ನಂಬಿಸಿ ಮಹಿಳೆಯಿಂದ 8 ಲಕ್ಷ, 4 ಖಾಲಿ ಚೆಕ್ ಪಡೆದು ವಂಚಿಸಿದ ಆರೋಪದ ಮೇರೆಗೆ ರೈಲ್ವೆ ಇಲಾಖೆಯ ಟ್ರ್ಯಾಕ್‌ಮ್ಯಾನ್, ಸರಸ್ವತಿಪುರಂ ನಿವಾಸಿ ಎಚ್.ಆರ್.ವೆಂಕಟೇಶಯ್ಯ ವಿರುದ್ಧ ಜಯನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆಸ್ಕಾಂನಲ್ಲಿ ಸರ್ಕಾರಿ ಕೆಲಸ ಕೊಡಿಸುವುದಾಗಿ ನಂಬಿಸಿ ಚೆಕ್, ಹಣ ಪಡೆದು ವಂಚಿಸಿದ್ದಾರೆ. ಇವರ ವಿರುದ್ಧ ಕ್ರಮಕ್ಕೈಗೊಂಡು ಹಣ ವಾಪಸ್ ಕೊಡಿಸಬೇಕು ಎಂದು ಕೋರಿ ಬೆಂಗಳೂರಿನ ಸಿ.ವಿಜಯಕುಮಾರಿ ಎಂಬುವರು ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಬೆಸ್ಕಾಂನಲ್ಲಿ ಎಸ್‌ಬಿಡಿ ಅಪರೇಟರ್ ಕೆಲಸ ಕೊಡಿಸುತ್ತೇನೆ. ಇದಕ್ಕಾಗಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಅಂಕಪಟ್ಟಿ, 13 ಲಕ್ಷ ನಗದು ನೀಡಬೇಕು ಎಂದು ವೆಂಕಟೇಶಯ್ಯ ಬೇಡಿಕೆ ಇಟ್ಟಿದ್ದರು. ಉದ್ಯೋಗಕ್ಕೆ ಸೇರಿದ ನಂತರ ಹಣ ಸಂಗ್ರಹ ಮಾಡಬೇಕಾಗುತ್ತದೆ. ಭದ್ರತೆಗಾಗಿ ಮೊದಲೇ 4 ಖಾಲಿ ಚೆಕ್‌ಗಳನ್ನು ನೀಡಬೇಕು ಎಂದಿದ್ದರು. ಅದರಂತೆ ಚೆಕ್‌ಗಳನ್ನು ಸಹ ನೀಡಿದ್ದೆ ಎಂದು ಮಹಿಳೆ ದೂರಿನಲ್ಲಿ ಉಲ್ಲೇಖಿಸಿದ್ದಾರೆ. 2023ರಲ್ಲಿ ಹಣ ನೀಡಿದ ನಂತರ ಬೆಂಗಳೂರಿನಲ್ಲಿ ಕನ್ನಲ್ವೆನ್ಸಿ ಮುಖಾಂತರ ಒಂದು ತಿಂಗಳು ತರಬೇತಿ ಕೊಡಿಸಿದ್ದರು. ತರಬೇತಿ ಮುಗಿದ ನಂತರ ಬೆಸ್ಕಾಂ ವತಿಯಿಂದ ನೀಡುವಂತೆ 12,800 ಸಂಬಳ ನನ್ನ ಬ್ಯಾಂಕ್ ಖಾತೆ ಜಮಾ ಮಾಡಿದ್ದರು. ಸ್ವಲ್ಪ ದಿನ ಮನೆಯಲ್ಲಿ ಇರಿ, ಆದೇಶದ ಪ್ರತಿ ಸಿಕ್ಕ ನಂತರ ಕೆಲಸಕ್ಕೆ ಸೇರಿಸಿಕೊಳ್ಳಲಾಗುವುದು ಎಂದು ನಂಬಿಸಿದ್ದರು. ನಂತರ ಮೋಸ ಹೋಗಿರುವುದು ಗೊತ್ತಾಯಿತು ಎಂದು ವಿಜಯಕುಮಾರಿ ಆರೋಪಿಸಿದ್ದಾರೆ. ಹಣ ವಾಪಸ್ ಕೇಳಿದಾಗ 1 ಲಕ್ಷ ನೀಡಿದ್ದಾರೆ. ಬಾಕಿ ಹಣ, ಅಸಲಿ ದಾಖಲಾತಿ ಕೊಡುತ್ತಿಲ್ಲ. ಖಾಲಿ ಚೆಕ್, ದಾಖಲಾತಿ ದುರುಪಯೋಗವಾದರೆ ವೆಂಕಟೇಶಯ್ಯ ಅವರೇ ಕಾರಣ ಎಂದು ತಿಳಿಸಿದ್ದಾರೆ.

# ಅಕ್ರಮ ಗಣಿಗಾರಿಕೆ; ಅಧಿಕಾರಿಗಳ ಶಾಮೀಲು: ಚಂದ್ರಶೇಖರ್ ಆರೋಪ

• ಉದಯವಾಹಿನಿ, ಮಂಡ್ಯ

ಜಿಲ್ಲೆಯ ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಕಲ್ಲು ಗಣಿಗಾರಿಕೆ, ಕ್ರಷರ್‌ಗಳ ಮಾಲೀಕರೊಂದಿಗೆ ಕೆಲವು ಅಧಿಕಾರಿಗಳು ಶಾಮೀಲಾಗಿದ್ದಾರೆ ಎಂದು ರೈತ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಇಂಡುವಾಳು ಚಂದ್ರಶೇಖರ್ ಆರೋಪಿಸಿದರು. ಹಲವು ವರ್ಷಗಳಿಂದ ಎಗ್ಗಿಲ್ಲದೆ ನಡೆಯುತ್ತಿರುವ ಅಕ್ರಮ ಕಲ್ಲು ಗಣಿಗಾರಿಕೆಗೆ ಕಡಿವಾಣ ಹಾಕಲು ವಿಫಲವಾಗಿರುವ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಒತ್ತಾಯಿಸಿದರು. ಕೆಆರ್‌ಎಸ್ ಅಣೆಕಟ್ಟೆಗೆ ಅಪಾಯ ಇರುವುದರಿಂದ 20 ಕಿ.ಮೀ. ವ್ಯಾಪ್ತಿಯಲ್ಲಿ ಯಾವುದೇ ಗಣಿಗಾರಿಕೆ ನಡೆಸದಂತೆ ನ್ಯಾಯಾಲಯ ಆದೇಶ ನೀಡಿದೆ. ಆದರೂ ಶ್ರೀರಂಗಪಟ್ಟಣದಲ್ಲಿ ಕಲ್ಲು ಗಣಿಗಾರಿಕೆ ಉಪಟಳ ಹೆಚ್ಚಾಗಿದೆ. ಇದನ್ನು ತಡೆಯಲು ತಾಲ್ಲೂಕು ಆಡಳಿತ ಮತ್ತು ಭೂ, ಗಣಿ ವಿಜ್ಞಾನ ಇಲಾಖೆಯ ಅಧಿಕಾರಿಗಳು ನಿರ್ಲಕ್ಷ್ಯ ತೋರಿ, ನ್ಯಾಯಾಲಯ ಆದೇಶದ ಸ್ಪಷ್ಟ ಉಲ್ಲಂಘನೆ ಆಗಿದೆ ಎಂದು ಕಿಡಿಕಾರಿದರು. ಈ ಭಾಗದ ಕಾಳೇನಹಳ್ಳಿ, ಅಲಗೂಡು, ಜಕ್ಕನಹಳ್ಳಿ ಸೇರಿದಂತೆ ಅಕ್ಕಪಕ್ಕದ ಗ್ರಾಮಗಳ ರೈತರು ಹಾಗು ಗ್ರಾಮಸ್ಥರು ಬಾಧಿತರಾಗಿದ್ದಾರೆ. ಜೊತೆಗೆ ವಿ.ಸಿ.ಸಂಪರ್ಕ ನಾಲೆಯ 1.2 ಕಿ.ಮೀ. ಉದ್ದದ ಸುರಂಗದ ಪಕ್ಕದಲ್ಲಿ 20ಕ್ಕೂ ಹೆಚ್ಚು ಕಲ್ಲು ಕ್ವಾರಿಗಳು ಅಕ್ರಮವಾಗಿ ನಡೆಯುತ್ತಿವೆ. ಐದಕ್ಕೂ ಹೆಚ್ಚು ಜಲ್ಲಿ ಕ್ರಷರ್‌ಗಳು ಎಗ್ಗಿಲ್ಲದೇ ರಿಗ್ ಬೋರ್ ಬ್ಲಾಸ್ಟಿಂಗ್ ಮಾಡುತ್ತಿರುವುದರಿಂದ ನಾಲಾ ಸುರಂಗ ಕುಸಿಯುವ ಭೀತಿ ಎದುರಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಭಾಗದ ಸುರಂಗಕ್ಕೆ ಹಾನಿಯಾದರೆ ಬನ್ನೂರು, ಟಿ.ನರಸೀಪುರ, ಮಳವಳ್ಳಿ ಭಾಗದ ರೈತರಿಗೆ ನೀರು ಪೂರೈಸಲು ಸಾಧ್ಯವಾಗುವುದಿಲ್ಲ. ಕಾಳೇನಹಳ್ಳಿ ಸರ್ವೇ ನಂ.21ರಲ್ಲಿ 7.20 ಎಕರೆಯ ಕೆರೆ ಮತ್ತು ಗೋಮಾಳ ಅತಿಕ್ರಮಿಸಿ ಅಕ್ರಮವಾಗಿ ಗಣಿಗಾರಿಕೆ ಮಾಡುತ್ತಿರುವುದು ಇದಕ್ಕೆ ಕಾರಣವಾಗಿದೆ ಎಂದು ದೂರಿದರು.

**ಸರ್ಕಾರದ ಬೊಕ್ಕಸಕ್ಕೆ ಅಪಾರ ನಷ್ಟ**



ಪ್ರಧಾನ ಕಾರ್ಯದರ್ಶಿ ಎಸ್.ಮಂಜೇಶ್‌ಗೌಡ ಮಾತನಾಡಿ ಜಿಲ್ಲಾಧಿಕಾರಿ ತಹಶೀಲ್ದಾರ್ ಅವರಿಗೆ ಮನವಿ ಮಾಡಿದಾಗ ಅಧಿಕಾರಿಗಳು ಗಣಿಗಾರಿಕೆ ಮುಚ್ಚಿಸಿದ್ದರು. ಆದರೆ ಅದು ಈಗ ಕಡತಗಳಲ್ಲಿ ಮಾತ್ರ ಸ್ಥಗಿತಗೊಂಡು ರಾತ್ರೋರಾತ್ರಿ ಮರು ಪ್ರಾರಂಭವಾಗಿದೆ ಎಂದು ದೂರಿದರು. ಅಕ್ರಮ ಗಣಿಗಾರಿಕೆ ಹಾಗೂ ಕ್ರಷರ್ ನಡೆಯುವುದಕ್ಕೆ ಮಂಡ್ಯ ಮತ್ತು ಮೈಸೂರು ಜಿಲ್ಲೆಯ ಕೆಲವು ರಾಜಕಾರಣಿಗಳ ಬೆಂಬಲವಿದೆ. ಕೆಲವು ಕ್ರಷರ್ ಮತ್ತು ಕಲ್ಲು ಗಣಿಗಾರಿಕೆಗೆ ಅನುಮತಿ ಪಡೆದ ನೆಪದಲ್ಲಿ ವ್ಯಾಪ್ತಿ ಮೀರಿ ನಡೆಸಲಾಗುತ್ತಿದೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ ಅಪಾರ ರಾಜಧನ ನಷ್ಟವಾಗಿದ್ದು ಜಿಲ್ಲಾಧಿಕಾರಿ ಕ್ರಮವಹಿಸಬೇಕು. ಇಲ್ಲವಾದರೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

## ಮಿನಿ ನ್ಯೂಸ್

### ಮನೆ ತೊರೆದ ಪತ್ನಿ, ಮಗಳನ್ನು ಕೊಂದು ಆತ್ಮಹತ್ಯೆಗೆ ಶರಣಾದ ತಂದೆ

• ಉದಯವಾಹಿನಿ, ಮುಳಬಾಗಿಲು

ಕೌಟುಂಬಿಕ ಕಲಹದಿಂದ ಐದು ವರ್ಷದ ಮಗಳನ್ನು ಕೊಂದು ತಂದೆ ಆತಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾಹಕ ಘಟನೆ ತಾಲ್ಲೂಕಿನ ಮುಡಿಯನೂರು ಗ್ರಾಮದಲ್ಲಿ ಕಳೆದ ರಾತ್ರಿ ನಡೆದಿದೆ. ಮುಡಿಯನೂರು ಗ್ರಾಮದ ಲೋಕೇಶ್ (37) ಎಂಬುವರೇ ಮಗಳು ನಿಹಾರಿಕಾ(5)ಳನ್ನು ಕೊಂದು ಆತಹತ್ಯೆಗೆ ಶರಣಾದ ತಂದೆ. ಲೋಕೇಶ್ ಅವರು ವೃತ್ತಿಯಲ್ಲಿ ಎಲೆಕ್ಟ್ರಿಷಿಯನ್ ಆಗಿದ್ದು ಕೋಳಿಫಾರಂವೊಂದರ ಮೇಲ್ವಿಚಾರಕರಾಗಿ ಕೆಲಸ ಮಾಡುತ್ತಿದ್ದರು. ಇತ್ತೀಚೆಗೆ ಕೌಟುಂಬಿಕ ಕಲಹದಿಂದಾಗಿ ಪತ್ನಿ ನವ್ಯಶ್ರೀ ಮನೆ ತೊರೆದು ಹೋಗಿದ್ದರು.

ಇದಲ್ಲದೆ ಕೆಲವರ ಚುಚ್ಚುಮಾತಿನಿಂದ ಅವಮಾನ ಸಹಿಸದೆ ಮನನೊಂದಿದ್ದ ಲೋಕೇಶ್ ಅವರು ಸಾಯಲು ನಿರ್ಧರಿಸಿ ಕಳೆದ ರಾತ್ರಿ ಮಗಳು ನಿಹಾರಿಕಾಳನ್ನು ನೀರಿನ ಡ್ರಮ್‌ನಲ್ಲಿ ಮುಳಿಗಿಸಿ, ಉಸಿರುಗಟ್ಟಿಸಿ ಕೊಲೆಗೈದು ನಂತರ ಶವವನ್ನು ಕಾರಿನಲ್ಲಿಟ್ಟಿದ್ದಾರೆ. ನಂತರ ಲೋಕೇಶ್ ಮನೆ ಸಮೀಪದಲ್ಲಿರುವ ಕಾಲೇಜಿನ ಬಳಿ ಹೋಗಿ ಮರಕ್ಕೆ ನೇಣು ಬಿಗಿದುಕೊಂಡು ಆತಹತ್ಯೆಗೆ ಶರಣಾಗಿದ್ದಾರೆ. ಗುರುವಾರ ಬೆಳಗ್ಗೆ ಈ ಮಾರ್ಗದಲ್ಲಿ ಹೋಗುತ್ತಿದ್ದವರು ಗಮನಿಸಿ ತಕ್ಷಣ ಪೊಲೀಸರಿಗೆ ತಿಳಿಸಿದ್ದಾರೆ. ಸ್ಥಳಕ್ಕಾಗಮಿಸಿದ ಮುಳಬಾಗಿಲು ಗ್ರಾಮಾಂತರ ಠಾಣೆ ಪೊಲೀಸರು ಪರಿಶೀಲನೆ ನಡೆಸಿ, ಶವವನ್ನು ಕೆಳಗಿಳಿಸಿದ್ದಾರೆ. ಲೋಕೇಶ್ ಅವರಿಗೆ ಒಬ್ಬಳು ಮಗಳಿದ್ದಾಳೆ ಎಂದು ಗ್ರಾಮಸ್ಥರು ತಿಳಿಸಿದಾಗ ಪೊಲೀಸರು ಅವರ ಮನೆ ಬಳಿ ಹೋಗಿ ಮಗಳಿಗಾಗಿ ಹುಡುಕಾಟ ನಡೆಸಿದಾಗ ಕಾರಿನಲ್ಲಿ ಬಾಲಕಿಯ ಶವ ಪತ್ತೆಯಾಗಿದೆ. ಅಪ್ಪ, ಮಗಳ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

### ರೈತರ ಬಗ್ಗೆ ಕಾಳಜಿ ಇಲ್ಲದ ದರಿದ್ರ ಸರ್ಕಾರ: ಎಚ್.ಡಿ.ಕುಮಾರಸ್ವಾಮಿ

• ಉದಯವಾಹಿನಿ, ಮಂಡ್ಯ

ಸ್ವತಂತ್ರ ಸರ್ಕಾರ ಇಲ್ಲದ ವೇಳೆಯೂ ರೈತರ ಉಳಿವಿಗಾಗಿ ಶ್ರಮವಹಿಸಿದ್ದೆ. 136 ಸೀಟಿನ ಸ್ವತಂತ್ರ ಸರ್ಕಾರ, ಇವರಿಗೇನಾಗಿದೆ ದರಿದ್ರ ರೈತರನ್ನು 7 ದಿನದಿಂದ ರಸ್ತೆಯಲ್ಲಿ ಮಲಗಿಸಬೇಕಿತ್ತಾ ರೈತರ ಬಗ್ಗೆ ಕಾಳಜಿ ಇದ್ದಿದ್ದರೆ ಸರ್ಕಾರ ಈ ರೀತಿ ಮಾಡುತ್ತಿರಲಿಲ್ಲ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕುಟುಕಿದರು.

ಗುರುವಾರ ಮಾಧ್ಯಮದವರೊಂದಿಗೆ ಮಾತನಾಡಿ, ನಿನ್ನೆಯ ದಿನ ಶಾಸಕ ಮೇಟಿ ಅವರ ಅಂತಿಮ ದರ್ಶನಕ್ಕೆ ಹೋಗಿದ್ದ ಮುಖ್ಯಮಂತ್ರಿಯವರು ಅಲ್ಲೇ ಪಕ್ಕದಲ್ಲೇ ನಡೆಯುತ್ತಿದ್ದ ಪ್ರತಿಭಟನೆ ಜಾಗಕ್ಕೆ ಹೋಗಬಹುದಿತ್ತಲ್ವಾ? ಅಹಿಂದಾ ಹೆಸರಲ್ಲಿ ದೊಡ್ಡ ರ್‍ಯಾಲಿ ಮಾಡುವೆ ಎನ್ನುತ್ತಾರೆ. ಅದೆಲ್ಲಾ ಯಾವ ಪುರುಷಾರ್ಥಕ್ಕೆ? ಎಂದು ಅವರು ಪ್ರಶ್ನಿಸಿದರು. ರೈತರು ಬೆಲೆ ನಿಗದಿ ಕೇಳಿದರೆ ನಮ್ಮದಲ್ಲ ಕೇಂದ್ರ ಸರ್ಕಾರ ಹಣ ಕೊಡಬೇಕು ಎನ್ನುತ್ತಾರೆ. ಸಾಲ ಮನ್ನಾ ಮಾಡುವಾಗ ನಾನೇನು ಕೇಂದ್ರ ಸರ್ಕಾರದ ಬಳಿಗೆ ಹೋಗಿದ್ವಾ? ಸರ್ಕಾರದ ನಿರ್ಧಾರ ನೋಡಿ ಮುಂದಿನ ತೀರ್ಮಾನ ಮಾಡುತ್ತೇವೆ. ರೈತರ ಬದುಕಿನ ಜತೆ ಕಾಂಗ್ರೆಸ್ ಸರ್ಕಾರ ಚೆಲ್ಲಾಟ ಆಡುತ್ತಿದೆ ಎಂದು ಆರೋಪಿಸಿದರು.

### ಗಣಿಗಾರಿಕೆ ವಿರುದ್ಧ ಸ್ಥಳೀಯರ ಆಕ್ರೋಶ

• ಉದಯವಾಹಿನಿ, ಸೋಮವಾರಪೇಟೆ

ತಾಲ್ಲೂಕಿನ ಯಲಕನೂರು, ಹೊಸಳ್ಳಿ ಗ್ರಾಮಗಳಲ್ಲಿ ಕಲ್ಲು ಗಣಿಗಾರಿಕೆ ನಡೆಯುತ್ತಿದ್ದ ಪ್ರದೇಶಗಳಿಗೆ ಜಿಲ್ಲಾ ಗಣಿ, ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು. ಈ ವೇಳೆ ಸ್ಥಳೀಯರು ಗಣಿಗಾರಿಕೆಯಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಕಿಡಿಕಾರಿದರು. ಈ ಗ್ರಾಮಗಳಲ್ಲಿ ಅಧಿಕೃತಕ್ಕಿಂತಲೂ ಅನಧಿಕೃತ ಗಣಿಗಾರಿಕೆಗಳೇ ಹೆಚ್ಚು ನಡೆಯುತ್ತಿದ್ದು, ರಕ್ಷಣೆಗಾಗಿ ಸುತ್ತ ಕನಿಷ್ಠ ತಂತಿ ಬೇಲಿ ಅಳವಡಿಸದೆ, ಕಲ್ಲುಗಳನ್ನು ಸಿಡಿಮದ್ದು ಹಾಕಿ ಸಿಡಿಸಲಾಗುತ್ತಿತ್ತು. ಸುತ್ತಮುತ್ತಲಿನ ಗ್ರಾಮಗಳ ನೂರಾರು ಕುಟುಂಬಗಳು ದಿನಂಪ್ರತಿ ಭಯದಲ್ಲಿಯೇ ಕಾಲ ಕಳೆಯುವಂತಾಗಿತ್ತು. ಹಲವಾರು ಮನೆಗಳ ಗೋಡೆಗಳು ಸಿಡಿಮದ್ದು ಹಾಕಿ ಸಿಡಿಸುತ್ತಿದ್ದ ಶಬ್ದಕ್ಕೆ ಬಿರುಕು ಬಿಟ್ಟು ಸಮಸ್ಯೆಯಾಗಿತ್ತು. ಇಲ್ಲಿನ ಸಮಸ್ಯೆಗಳ ಬಗ್ಗೆ ಸಾಕಷ್ಟು ಬಾರಿ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡಿದರೂ, ಯಾವುದೇ ಪ್ರಯೋಜನವಾಗಿಲ್ಲ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು. ಲಾರಿಗಳಲ್ಲಿ ಕಲ್ಲನ್ನು ಸಾಗಿಸುತ್ತಿದ್ದುದ್ದರಿಂದ, ರಸ್ತೆ ದುಸ್ಥಿತಿಗೆ ತಲುಪಿದೆ. ಶಾಲಾ ಕಾಲೇಜಿಗೆ ವಿದ್ಯಾರ್ಥಿಗಳು ತೆರಳಲು ಪರದಾಡಬೇಕಾಗಿತ್ತು. ದೂಳಿನಿಂದಾಗಿ ಹಲವು ಜನರ ಆರೋಗ್ಯ ಹದಗೆಟ್ಟಿದೆ ಎಂದು ದೂರಿದರು. ಸ್ಥಳಕ್ಕೆ ಪರಿಶೀಲನೆಗೆ ಬಂದ ಅಧಿಕಾರಿಗಳು ಸ್ಥಳದ ಯಾವುದೇ ದಾಖಲೆಯನ್ನು ತಂದಿಲ್ಲ ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಕ್ರಮ ಗಣಿಗಾರಿಕೆಗಳ ವಿರುದ್ಧ ಅಧಿಕಾರಿಗಳು ಕಠಿಣ ಕ್ರಮ ಕೈಗೊಳ್ಳುತ್ತಿಲ್ಲ, ಇದೀಗ ಕಲ್ಲುಕೋರೆಗಳಿಗೆ ತಾತ್ಕಾಲಿಕವಾಗಿ ಬೀಗ ಹಾಕಲಾಗಿದೆಯಷ್ಟೆ ಎಂದೂ ಕಿಡಿಕಾರಿದರು.

# ರೈತರ ಹೋರಾಟಕ್ಕೆ ಬಿಜೆಪಿ ಶಕ್ತಿ ತುಂಬಲಿದೆ ಎಂಬ ಘೋಷಣೆ

## ● ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಬಿಜೆಪಿ ಕಾಲ್ನಡಿಗೆ : ಸಂಸದ ಯದುವೀರ್ ಒಡೆಯರ್ ಚಾಲನೆ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯಿಸಿ ಕರೆ ಕೊಟ್ಟಿದ್ದ ಕೆರೆ ನೀರಿಗಾಗಿ ಬಿಜೆಪಿ ಪಾದಯಾತ್ರೆಗೆ ಮೈಸೂರು ಕೊಡಗು ಸಂಸದ ಯಧುವೀರ್ ಒಡೆಯರ್, ವಿಪಕ್ಷ ನಾಯಕ ಆರ್.ಅಶೋಕ್ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿದರು. ತಾಲ್ಲೂಕಿನ ಶಿವಪುರ ಸಮೀಪದ ಕಲ್ಲುಕಟ್ಟೆ ಜಲಾಶಯದ ಬಳಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ರೈತರ ಹೋರಾಟಕ್ಕೆ ಬಿಜೆಪಿ ಶಕ್ತಿ ತುಂಬಲಿದೆ ಎಂಬ ಘೋಷಣೆಗಳನ್ನ ಮೊಳಗಿಸಲಾಯಿತು.

ಈ ವೇಳೆ ಮಾತನಾಡಿದ ಆರ್.ಅಶೋಕ್ ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಿ.ಎಸ್.ಯಡಿಯೂರಪ್ಪ ಅವರು ಚಾಮರಾಜನಗರ ಜಿಲ್ಲೆ ಕೆರೆಗಳಿಗೆ ನೀರು ತುಂಬಿಸಲೆಂದೇ ಮೊದಲ ಹಂತದಲ್ಲೇ 212 ಕೋಟಿ ಹಣವನ್ನ ಬಿಡುಗಡೆಗೊಳಿಸಿದ್ದರು, ಆದರೆ ಕಾಂಗ್ರೆಸ್ ಸರ್ಕಾರ ಯೋಜನೆಯನ್ನ ಮುಂದುವರಿಸಿಕೊಂಡು ಹೋಗಲು ತಿಣುಕಾಡುತ್ತಿದೆ, ಬಿಹಾರ ರಾಜ್ಯದ ಮತದಾರರಿಗೆ ಎಕರೆಗಟ್ಟಲೇ ಜಮೀನು ನೀಡಲು ಮನಸ್ಸುಳ್ಳ, ಕೇರಳ ರಾಜ್ಯಕ್ಕೆ ಮನೆ ನಿರ್ಮಾಣಕ್ಕೆ ಹತ್ತು ಕೋಟಿ ಹಣ ನೀಡುವ ಸಿದ್ದರಾಮಯ್ಯ ಸರ್ಕಾರಕ್ಕೆ ರೈತರ ಕೆರೆ ತುಂಬಿಸುವ ಸಲುವಾಗಿ ಎರಡು ಕೋಟಿ ಹಣ ನೀಡಲು ಸಾಧ್ಯವಾಗುತ್ತಿಲ್ಲ ಎಂದು ವ್ಯಂಗ್ಯವಾಡಿದರು. ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣ ಸ್ವಾಮಿ ಮಾತನಾಡಿ ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣ ಕುಂಠಿತವಾಗಿದೆ, ಮಾತೆತ್ತಿದ್ದರೆ ಗ್ಯಾರಂಟಿ ಎಂದು ದಿನ ದೂಡುತ್ತಿದ್ದಾರೆ ಅಸಮಾಧಾನ ಹೊರಹಾಕಿದರು. ಜನಸಾಮಾನ್ಯರ ಪರಿಸ್ಥಿತಿ ಅಧೋಗತಿಯಾಗಿದೆ ಎಸ್‌ಇಪಿ ಟಿಎಸ್ ಪಿ ಹಣವನ್ನ ಗ್ಯಾರಂಟಿಗೆ ಬಳಸಿಕೊಂಡರೂ ಸಹ ದಲಿತ ಸಚಿವರು ಮಾತನಾಡುತ್ತಿಲ್ಲ ಎಂದು ಕಿಡಿಕಾರಿದರು.

ಈ ಸರ್ಕಾರ ಬಂದ ದಿನದಿಂದಲೂ ದಲಿತ ಸಚಿವರು ಧ್ವನಿ ಎತ್ತುತ್ತಿಲ್ಲ, ಸಿದ್ದರಾಮಯ್ಯ ಏನು ಟೆರರಿಸ್ಟಾ, ನ್ಯಾಯ ಕೇಳಿದರೆ ಮೇಲೆ ಬೀಳ್ತಾರೆ ಎಂದು ಕಿಡಿಕಾರಿದ ನಾರಾಯಣಸ್ವಾಮಿ ಈ ಸರ್ಕಾರ ನವೆಂಬರ್ ಕ್ರಾಂತಿ ವಿಚಾರದಿಂದ ಐಸಿಯುನಲ್ಲಿದೆ ಎಂದು ಕಿಡಿಕಾರಿದರು. ಹರಿಯಾಣದಲ್ಲಿ ಮತಗಳ್ಳತನ ಆಗಿದೆ ಎಂದು ಆರೋಪಿಸಿರುವ ರಾಹುಲ್ ಗಾಂಧಿ ಹೇಳಿಕೆಗೆ ಪ್ರತಿಕ್ರಿಯಿಸಿ ಇಡೀ ಗಾಂಧಿ ಕುಟುಂಬವೇ ಕಳ್ಳ ಕುಟುಂಬವಾಗಿವೆ, ಡಾ.ಬಿ.ಆರ್. ಅಂಬೇಡ್ಕರ್ ಅವರು 1952ರಲ್ಲಿ ಚುನಾವಣೆಗೆ ಸ್ಪರ್ಧಿಸಿದಾಗ 14 ಸಾವಿರ ಮತಗಳಿಂದ ಪರಾಜಿತಗೊಂಡಿದ್ದರು, ಅವರ ಸೋಲಿಗೆ ಬೇರೆ ಕಾರಣವೇ ಇತ್ತು, ಬಾಬಾ ಸಾಹೇಬರಿಗೆ ಬಂದಂತಹ ಮತಗಳಲ್ಲಿ 74 ಸಾವಿರ ಮತಗಳು ತಿರಸ್ಕೃತಗೊಂಡಿದ್ದವು ಅಂದು ಪಾರದರ್ಶಕವಾಗಿ ಚುನಾವಣೆ ನಡೆದಿದ್ದಲ್ಲಿ ಅಂಬೇಡ್ಕರ್ ಜಯಶಾಲಿಯಾಗುತ್ತಿದ್ದರು ಆದರೆ ಬಾಬಾ ಸಾಹೇಬರನ್ನ ಸೋಲಿಸಲೇ ಬೇಕು ಎಂಬ ಹಠಕ್ಕೆ ಬಿದ್ದ ನೆಹರು ಮಾಡಿದ ಕುತಂತ್ರಕ್ಕೆ ಸೋಲು ಅನುಭವಿಸಿದರು ಹಾಗಾದರೆ ಮತ ಕಳ್ಳರು ಯಾರು ಎಂಬುದನ್ನ ಅರಿಯಬೇಕು , ಇಡೀ ಗಾಂಧಿ ಖಾಂದಾನವೇ ಚೋರಿಯಾಗಿದೆ ಇದರ ಬಗ್ಗೆ ಸಂಶಯ ಬೇಡ ಎಂದರು. ಸರ್ಕಾರದ ರೈತ ವಿರೋಧಿ ನೀತಿ, ದಲಿತರಿಗೆ ಮಾಡಿದ ಅನ್ಯಾಯದ ಕುರಿತು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್, ಸಿ ಎಸ್ ನಿರಂಜನ್ ಕುಮಾರ್ ಮಾತನಾಡಿದರು. ಬಳಿಕ ಕಲ್ಲುಕಟ್ಟೆ ಜಲಾಶಯದಿಂದ ಪಟ್ಟಣದ ತಹಶೀಲ್ದಾರ್ ಕಚೇರಿಗೆ ಸುಮಾರು ಏಳು ಕಿಲೋಮೀಟರ್ ನಷ್ಟು ಕಾಲ್ನಡಿಗೆಯಲ್ಲಿ ಕ್ರಮಿಸಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದ ಬಿಜೆಪಿ ನಾಯಕರು ಕಾರ್ಯಕರ್ತರನ್ನ ಪೊಲೀಸರು ತಡೆದರು. ಈ ವೇಳೆ ಬಿಜೆಪಿ ನಾಯಕರನ್ನ ಭೇಟಿಯಾದ ಎಡಿಸಿ ಜವರೇಗೌಡ ಡಿಸೆಂಬರ್ ಅಂತ್ಯದ ಒಳಗೆ ಎಲ್ಲಾ ಕೆರೆಗಳಿಗೂ ನೀರು ತುಂಬಿಸಲಾಗುವುದು ಅಲ್ಲಿಯವರೆಗೆ ಯಂತ್ರಗಳ ದುರಸ್ತಿಗೆ ಅವಕಾಶ ಮಾಡಿಕೊಡಬೇಕು ಎಂದು ಮನವಿ ಮಾಡಿದ ಬಳಿಕ ಮುತ್ತಿಗೆಯಿಂದ ಹಿಂದೆ ಸರಿಯಲಾಯಿತು.

ಈ ಸಂಧರ್ಭದಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ, ಮೈಸೂರು ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಮಂಡಲ ಅಧ್ಯಕ್ಷ ಮಹದೇವ ಪ್ರಸಾದ್ , ಮಾಜಿ ಶಾಸಕ ಹರ್ಷವರ್ಧನ್, ಬಾಲರಾಜು, ನೂರೊಂದು ಶೆಟ್ಟಿ, ಎಲ್.ಸುರೇಶ್, ಹಂಗಳ ಪ್ರಣಯ್, ಮಂಜು ಹುಂಡೀಪುರ, ಡಾ.ನವೀನ್ ಮೌರ್ಯ, ರವಿ ಕಮ್ರಳ್ಳಿ, ಮಂಜು ಶಿಂಡನಪುರ ಮಂಜು, ಪ್ರಕಾಶ್ ಮೂಡ್ನಾಕೂಡು, ಮಂಜು ಶಿವಪುರ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**212 ಕೋಟಿ ಹಣವನ್ನ ಬಿಡುಗಡೆ**

**ರೈತರ ಸಮಸ್ಯೆಗಳಿಗೆ ಕಿವಿಯಾಗದ ರಾಜ್ಯ ಸರ್ಕಾರ**

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರದ ಗದ್ದುಗೆ ಏರಿದ ಮೇಲೆ ರಾಜ್ಯದಲ್ಲಿ 2 ಸಾವರಕ್ಕೂ ಹೆಚ್ಚು ಮಂದಿ ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ ರೈತರ ಸಮಸ್ಯೆಗಳಿಗೆ ಕಿವಿಯಾಗದ ಇವರು ಪ್ರತಿನಿತ್ಯ ಕುರ್ಚಿಗಾಗಿ ಕಿತ್ತಾಡುತ್ತಿದ್ದಾರೆ ಇವರ ನಡೆಯನ್ನ ರಾಜ್ಯದ ಜನತೆ ಸೂಕ್ಷ್ಮವಾಗಿ ಗಮನಿಸುತ್ತಿದ್ದು ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು. ಸಂಸದ ಯಧುವೀರ್ ಒಡೆಯರ್ ಮಾತನಾಡಿ ದೇಶಕ್ಕೆ ಅನ್ನನೀಡುವ ರೈತರನ್ನ ಹೋರಾಟಕ್ಕೆ ತಳ್ಳಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ, ಕುಲಕಸುಬಿನ ಒಡೆಯನಿಂದ ಮನವಿಯನ್ನ ಸ್ವೀಕರಿಸದೆ ಬೇಡಿಕೆ ಈಡೇರಿಸಬೇಕಿದ್ದ ಸರ್ಕಾರ ಮೌನವಹಿಸಿರುವುದು ಸರಿಯಲ್ಲ, ಚುನಾಯಿತ ಸರ್ಕಾರ ತನ್ನ ಜವಾಬ್ದಾರಿಯನ್ನ ಅರಿಯಬೇಕು ಆಗಿದ್ದಲ್ಲಿ ಮಾತ್ರ ರೈತರ ಜೀವನವನ್ನ ಸಮೃದ್ಧಗೊಳಿಸಲು ಸಾಧ್ಯವಾಗುತ್ತದೆ ಎಂದರು.

ಅಂತರಾಳದಿಂದ... EDITORIAL

# ಕಬ್ಬಿನ ದರ ಹೆಚ್ಚಳಕ್ಕೆ ರೈತರ ಪಟ್ಟು; ಸರ್ಕಾರದ ಕಾಳಜಿ-ಸ್ಪಂದನ ಅಗತ್ಯ

ಕಬ್ಬಿನ ದರ ಹೆಚ್ಚಳಕ್ಕೆ ಆಗ್ರಹಿಸಿ ಬೆಳಗಾವಿಯಲ್ಲಿ ರೈತರು ನಡೆಸುತ್ತಿರುವ ಪ್ರತಿಭಟನೆ ಎರಡನೇ ವಾರಕ್ಕೆ ಕಾಲಿಟ್ಟಿದೆ. ರೈತರ ಪ್ರತಿಭಟನೆಗೆ ಸ್ಪಂದಿಸುವಲ್ಲಿ ಸರ್ಕಾರಗಳು ಅನುಸರಿಸುವ ವಿಳಂಬ ಧೋರಣೆ ಈ ಬಾರಿಯೂ ಮುಂದುವರಿದಿರುವುದು ಜನಪ್ರತಿನಿಧಿಗಳ ರೈತಕಾಳಜಿ ಮಾತುಗಳಿಗಷ್ಟೇ ಸೀಮಿತ ಎನ್ನುವುದಕ್ಕೆ ನಿದರ್ಶನದಂತಿದೆ. ಟನ್ ಕಬ್ಬಿಗೆ ರೂ.3,500 ದರ ನೀಡಬೇಕೆನ್ನುವುದು ರೈತರ ಆಗ್ರಹ. ಇಂಧನ, ರಸಗೊಬ್ಬರ, ಕೃಷಿ ಕಾರ್ಮಿಕರ ವೆಚ್ಚ ಸೇರಿದಂತೆ ಕಬ್ಬು ಬೆಳೆಗೆ ಆಗುತ್ತಿರುವ ವೆಚ್ಚ ಹೆಚ್ಚಾಗಿರುವುದರಿಂದ, ಸರ್ಕಾರವು ಕಬ್ಬಿಗೆ ಘೋಷಿಸಿರುವ ನ್ಯಾಯಸಮ್ಮತ ಮತ್ತು ಲಾಭದಾಯಕ ದರ (ಎಫ್‌ಆರ್‌ಪಿ) ಹೆಚ್ಚಾಗಬೇಕೆನ್ನುವುದು ಸಾಮಾನ್ಯ ಜ್ಞಾನ. ಜೀವನವಶ್ಯಕ ವಸ್ತುಗಳ ಬೆಲೆ ನಿಯಂತ್ರಣದ ಬಗ್ಗೆ ಸಾಮಾನ್ಯವಾಗಿ ತಲೆ ಕೆಡಿಸಿಕೊಳ್ಳದ ಸರ್ಕಾರಗಳು, ರೈತರಿಗೆ ಸಂಬಂಧಿಸಿದ ನಿರ್ಣಯಗಳನ್ನು ಕೈಗೊಳ್ಳುವಲ್ಲಿ ಚೌಕಾಸಿಗಿಳಿಯುತ್ತವೆ. ಈ ಚೌಕಾಸಿಗೆ ಜಗ್ಗದೆ ರೈತರು ತಮ್ಮ ಪ್ರತಿಭಟನೆಯನ್ನು ತೀವ್ರಗೊಳಿಸುತ್ತಿದ್ದಾರೆ. ವಿಜಯಪುರ, ಬಾಗಲಕೋಟೆ, ಧಾರವಾಡ, ಗದಗ, ಹಾವೇರಿ, ರಾಯಚೂರು, ಗದಗ, ಹಾವೇರಿ, ರಾಯಚೂರು, ಕಲಬುರಗಿ, ಶಿವಮೊಗ್ಗ, ದಾವಣಗೆರೆ, ಮಂಡ್ಯ ಜಿಲ್ಲೆಗಳ ರೈತರೂ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದಾರೆ. ರೈತರ ಆಂದೋಲನಕ್ಕೆ ಜನಬೆಂಬಲವೂ ದೊರೆಯುತ್ತಿದೆ; ರಸ್ತೆ ತಡೆ, ಪಾದಯಾತ್ರೆ, ಉಪವಾಸ, ನಿರಶನ, ಬಂದ್, ಅರೆಬೆತ್ತಲೆ ಪ್ರತಿಭಟನೆ ಸೇರಿದಂತೆ ವಿವಿಧ ರೀತಿಯಲ್ಲಿ ರೈತರ ಆಂದೋಲನ ತೀವ್ರಗೊಳ್ಳುತ್ತಿದೆ. ಬೆಳಗಾವಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ವಯಂಪ್ರೇರಿತ ಬಂದ್ ವಾತಾವರಣ ರೂಪುಗೊಂಡಿದೆ. ಟನ್‌ಗೆ ರೂ.3,500ಕ್ಕಿಂತಲೂ ಒಂದು ರೂಪಾಯಿ ಕಡಿಮೆಯಾದರೂ ಒಪ್ಪುವುದಿಲ್ಲ ಎಂದು ಪಟ್ಟು ಹಿಡಿದಿರುವ ರೈತರು, ತಮ್ಮ ಒತ್ತಾಯ ಈಡೇರದೆ ಹೋದರೆ ಈ ವರ್ಷದ ಕಬ್ಬು ನುರಿಯುವ ಹಂಗಾಮು ಆರಂಭವಾಗಲು ಬಿಡುವುದಿಲ್ಲ ಎಂದು ಹೇಳಿದ್ದಾರೆ. ಬೆಲೆ ನಿರ್ಧಾರ ನಾಲ್ಕು ಗೋಡೆಗಳ ನಡುವೆ ನಡೆಯಬೇಕಾದ ಪ್ರಕ್ರಿಯೆಯಾಗಿದ್ದು, ರಸ್ತೆಯಲ್ಲಿ ಈ ಬಗ್ಗೆ ಚರ್ಚೆ ಬೇಡ ಎಂದೂ ಸಚಿವರು ಹೇಳಿದ್ದಾರೆ. ರೈತರು ಬೀದಿಗಿಳಿಯುವ ಸ್ಥಿತಿಯನ್ನು ಸರ್ಕಾರವೇ ತಂದಿದೆ ಎನ್ನುವುದನ್ನು ಸಚಿವರು ಮರೆಯಬಾರದು. ಪ್ರತಿಭಟನೆ ಆರಂಭವಾಗಿ ವಾರದ ನಂತರ ಸ್ಥಳಕ್ಕೆ ಭೇಟಿ ನೀಡಿರುವ ಕಾನೂನು ಸಚಿವ ಎಚ್.ಕೆ. ಪಾಟೀಲ ಬೆಳೆಗಾರರ ಅಹವಾಲು ಆಲಿಸಿರುವುದು ಬಿಟ್ಟರೆ, ಸರ್ಕಾರದ ಕಡೆಯಿಂದ ರೈತರಿಗೆ ಯಾವ ಸ್ಪಂದನವೂ ದೊರೆತಿಲ್ಲ. ರೈತರಿಗೆ ನ್ಯಾಯ ದೊರಕಿಸಿಕೊಡುವ ವಿಷಯವೂ ರಾಜಕೀಯ ಕೆಸರೆರಚಾಟದ ಸಂಗತಿಯಾಗಿರುವುದು ದುರದೃಷ್ಟಕರ. ರಾಜ್ಯ ಸರ್ಕಾರ ರೈತರ ಹಿತಾಸಕ್ತಿ ರಕ್ಷಿಸುತ್ತಿಲ್ಲ ಎಂದು ಬಿಜೆಪಿ ಆರೋಪಿಸುತ್ತಿದೆ. ಕಬ್ಬಿಗೆ ಬೆಲೆ ನಿಗದಿಪಡಿಸುವುದು ಕೇಂದ್ರ ಸರ್ಕಾರಕ್ಕೆ ಸಂಬಂಧಿಸಿದ ವಿಚಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸರ್ಕಾರ ಹಾಗೂ ವಿಪಕ್ಷಗಳ ಮಾತುಗಳು ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುವ ತರ್ಕದಂತೆ ಇವೆಯೇ ಹೊರತು, ರೈತರ ಹಿತಾಸಕ್ತಿ ಇಬ್ಬರಿಗೂ ಮುಖ್ಯವಾದಂತಿಲ್ಲ. 2013-14ರಲ್ಲಿ ಕಬ್ಬಿನ ಬೆಳೆಗಾರರು ಬೆಳಗಾವಿಯಲ್ಲಿ ಇದೇ ರೀತಿ ಪ್ರತಿಭಟನೆ ನಡೆಸಿದ್ದರು, ಓರ್ವ ರೈತ ವಿಷ ಸೇವಿಸಿ ಸಾವನ್ನಪ್ಪಿದ್ದರು. ಆಗ ಸಿದ್ದರಾಮಯ್ಯನವರೇ ಮುಖ್ಯಮಂತ್ರಿ ಆಗಿದ್ದರು. ಈಗಲೂ ಪ್ರತಿಭಟನಾನಿರತ ರೈತರೊಬ್ಬರು ವಿಷ ಸೇವಿಸಿ ಆಸ್ಪತ್ರೆ ಸೇರಿದ್ದಾರೆ.

> **ರೈತರ ಬೇಡಿಕೆ ನ್ಯಾಯಯುತವಾದುದು. ಮಹಾರಾಷ್ಟ್ರದಲ್ಲಿ ಕಬ್ಬಿಗೆ ರೂ.3,410 ದರ ನೀಡಲಾಗುತ್ತಿದೆ. ಮಹಾರಾಷ್ಟ್ರದ ಬಿದ್ರಿಯ ದೂಧಗಂಗಾ ವೇದಗಂಗಾ ಸಹಕಾರ ಸಕ್ಕರೆ ಕಾರ್ಖಾನೆಯು ಪ್ರಸಕ್ತ ಸಾಲಿನಲ್ಲಿ ಟನ್ ಕಬ್ಬಿಗೆ 3,614 ಕೊಡುವುದಾಗಿ ಹೇಳಿದೆ. ನೆರೆಯ ರಾಜ್ಯದ ಕಾರ್ಖಾನೆಗಳು ಹೆಚ್ಚಿನ ದರ ನೀಡುತ್ತಿರುವಾಗ ಇಲ್ಲಿನ ಕಾರ್ಖಾನೆಗಳು ರೂ.3,010 ದರ ನೀಡುವುದನ್ನು ಒಪ್ಪಿಕೊಳ್ಳುವುದು ಹೇಗೆ? ಉಪ ಉತ್ಪನ್ನಗಳಲ್ಲಿ ಕಾರ್ಖಾನೆಗಳು ಹೆಚ್ಚಿನ ಲಾಭ ಗಳಿಸಿದರೆ, ರೈತರಿಗೆ ಹೆಚ್ಚಿನ ದರ ದೊರಕಿಸಿಕೊಡಲು ಸರ್ಕಾರ ಬದ್ಧವಾಗಿದೆ ಎಂದು ಸಕ್ಕರೆ, ಕಬ್ಬು ಅಭಿವೃದ್ಧಿ ಸಚಿವ ಶಿವಾನಂದ ಪಾಟೀಲ ಅವರು ಹೇಳಿದ್ದಾರೆ.**

ದುರಂತ ಮರುಕಳಿಸದಂತೆ ನೋಡಿಕೊಳ್ಳಬೇಕಾದ ವಿವೇಕವನ್ನು ಸರ್ಕಾರ ಪ್ರದರ್ಶಿಸಬೇಕಾಗಿದೆ. ಸಕ್ಕರೆ ಕಾರ್ಖಾನೆಗಳ ಮಾಲೀಕರಲ್ಲಿ ಬಹುತೇಕರು ರಾಜಕೀಯ ಪಕ್ಷಗಳ ಮುಖಂಡರೇ ಆಗಿದ್ದಾರೆ. ಆ ರಾಜಕೀಯ ಒತ್ತಡವನ್ನು ಮೀರಿ, ಸರ್ಕಾರ ತನ್ನ ರೈತಕಾಳಜಿಯನ್ನು ಸಾಬೀತುಪಡಿಸಬೇಕಾಗಿದೆ.

ರೈತರ ಪ್ರತಿಭಟನೆಯನ್ನು ಕಬ್ಬಿನ ಬೆಲೆ ಏರಿಕೆಯ ರೂಪದಲ್ಲಷ್ಟೇ ಸರ್ಕಾರ ಲಘುವಾಗಿ ನೋಡಬಾರದು. ಕಬ್ಬು ಬೆಳೆಯುವ ಪ್ರದೇಶಗಳ ಆರ್ಥಿಕತೆಗೆ ಸಂಬಂಧಿಸಿದ ವಿಚಾರ ಇದಾಗಿದೆ. ರೈತರು ಸಬಲರಾಗದೆ ಹಾಗೂ ಗ್ರಾಮೀಣ ಆರ್ಥಿಕತೆ ಉತ್ತಮಗೊಳ್ಳದೆ ರಾಜ್ಯ ನೆಮ್ಮದಿಯಿಂದಿರುವುದು ಸಾಧ್ಯವಿಲ್ಲ. ಹಾಗಾಗಿ, ಕಬ್ಬು ಬೆಳೆಗಾರರಿಗೆ ಉತ್ತಮ ಬೆಲೆ ದೊರಕಿಸಿಕೊಡಲು ಸರ್ಕಾರ ಪ್ರಾಮಾಣಿಕ ಪ್ರಯತ್ನ ನಡೆಸಬೇಕು. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಸಕ್ಕರೆ ಬೆಲೆಯ ಏರಿಳಿತ ಕಬ್ಬಿನ ದರದ ಮೇಲೆ ಪರಿಣಾಮ ಬೀರುತ್ತದೆ. ಆದರೆ, ಕಬ್ಬು ಅರೆಯುವ ಸಂದರ್ಭದಲ್ಲಿ ದೊರೆಯುವ ಉಪ ಉತ್ಪನ್ನಗಳೂ ಆದಾಯದ ಮೂಲವಾಗಿವೆ. ಈ ಆದಾಯದಲ್ಲಿ ಬೆಳೆಗಾರರಿಗೂ ಪಾಲು ದೊರಕಿಸುವ ದಿಸೆಯಲ್ಲಿ ಸರ್ಕಾರ ಪ್ರಯತ್ನ ನಡೆಸಬೇಕಾಗಿದೆ.



# ಅಡುಗೆಯಲ್ಲಿ ಅರಿಶಿನ ಆರೋಗ್ಯಕ್ಕೆ ಪ್ರಯೋಜನ

ಅರಿಶಿನವನ್ನು ಸಾಮಾನ್ಯವಾಗಿ ಪ್ರತಿಯೊಂದು ಅಡುಗೆಯಲ್ಲೂ ಬಳಸಲಾಗುತ್ತದೆ. ಇದು ಆಹಾರಕ್ಕೆ ಬಣ್ಣವನ್ನು ನೀಡುವುದಲ್ಲದೆ, ಆರೋಗ್ಯಕ್ಕೂ ಪ್ರಯೋಜನಕಾರಿಯಾಗಿದೆ. ಅರಿಶಿನವನ್ನು ಶತಮಾನಗಳಿಂದಲೂ ಭಾರತೀಯ ಅಡುಗೆಮನೆಗಳಲ್ಲಿ ಬಳಸಲಾಗುತ್ತಿದೆ. ಇದು ಅಜ್ಜಿಯ ಪಾಕವಿಧಾನಗಳಲ್ಲಿ ಯಾವಾಗಲೂ ಪ್ರಧಾನವಾಗಿದೆ. ಗಾಯಗಳಿಗೆ ಅರಿಶಿನ ಹಚ್ಚುತ್ತಾರೆ. ಶೀತವಾದಾಗ ಅರಿಶಿನವನ್ನು ಹಾಲಿನೊಂದಿಗೆ ಬೆರೆಸಿ ಕುಡಿಯಬೇಕು. ಇದರ ಅತ್ಯಂತ ವಿಶಿಷ್ಟ ಲಕ್ಷಣವೆಂದರೆ ಕರ್ಕ್ಯುಮಿನ್ ಸಂಯುಕ್ತ, ಇದು ಅದಕ್ಕೆ ಚಿನ್ನದ ಬಣ್ಣವನ್ನು ನೀಡುತ್ತದೆ ಮತ್ತು ಶಕ್ತಿಯುತವಾದ ಉರಿಯೂತ ನಿವಾರಕ ಮತ್ತು ಉತ್ಕರ್ಷಣ ನಿರೋಧಕ ಗುಣಗಳನ್ನು ಸಹ ಒದಗಿಸುತ್ತದೆ.



**ಅರಿಶಿನದ ಆರೋಗ್ಯ ಪ್ರಯೋಜನಗಳು:** ಪ್ರತಿದಿನ ಒಂದು ಟೀಚಮಚ ಅರಿಶಿನವನ್ನು ತಿನ್ನುವುದು ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ ಮತ್ತು ಶೀತಗಳು ಮತ್ತು ಸೋಂಕುಗಳಿಂದ ರಕ್ಷಿಸುತ್ತದೆ. ಅದಕ್ಕಾಗಿಯೇ ಅರಿಶಿನ ಹಾಲನ್ನು ಭಾರತೀಯ ಮನೆಗಳಲ್ಲಿ ಚಳಿಗಾಲದ ಪ್ರಯೋಜನಕಾರಿ ಪರಿಹಾರವೆಂದು ಪರಿಗಣಿಸಲಾಗುತ್ತದೆ. ಪ್ರತಿದಿನ ಸ್ವಲ್ಪ ಪ್ರಮಾಣದ ಅರಿಶಿನವನ್ನು ಸೇವಿಸುವುದು ದೇಹ, ಮೆದುಳು, ಕೀಲುಗಳು ಮತ್ತು ಜೀರ್ಣಕ್ರಿಯೆಗೆ ಬಹಳ ಪ್ರಯೋಜನಕಾರಿ ಎಂದು ಪರಿಗಣಿಸಲಾಗಿದೆ. ಆದ್ದರಿಂದ ಪ್ರತಿದಿನ ಅರಿಶಿನವನ್ನು ಸೇವಿಸುವುದರಿಂದ ಹಲವಾರು ಪ್ರಯೋಜನಗಳನ್ನು ಪಡೆದುಕೊಳ್ಳಬಹುದು.

**ಗ್ಯಾಸ್ಟ್ರಿಕ್, ಜೀರ್ಣಕ್ರಿಯೆ ಸಮಸ್ಯೆ ಇರುವವರಿಗೆ ಪ್ರಯೋಜನಕಾರಿ:** ನೀವು ಎದೆಯುರಿ, ಅನಿಲ ಅಥವಾ ಉಬ್ಬುವಿಕೆಯನ್ನು ಅನುಭವಿಸಿದರೆ ಅರಿಶಿನವನ್ನು ಸೇವಿಸುವುದು ಸಹ ಪ್ರಯೋಜನಕಾರಿ ಎಂದು ಪರಿಗಣಿಸಲಾಗುತ್ತದೆ. ಇದು ಜೀರ್ಣಾಂಗ ವ್ಯವಸ್ಥೆಯನ್ನು ಶಮನಗೊಳಿಸುತ್ತದೆ ಮತ್ತು ಕರುಳಿನ ಉರಿಯೂತವನ್ನು ಕಡಿಮೆ ಮಾಡುತ್ತದೆ. ನೀವು ಆಗಾಗ್ಗೆ ಹೊಟ್ಟೆ ಉಬ್ಬರ ಅಥವಾ ಜೀರ್ಣಕ್ರಿಯೆಯಲ್ಲಿ ಅಸ್ವಸ್ಥತೆಯನ್ನು ಅನುಭವಿಸುತ್ತಿದ್ದರೆ, ಅರಿಶಿನವು ಅದನ್ನು ನಿವಾರಿಸಲು ಸಹಾಯ ಮಾಡುತ್ತದೆ. ಇದರ ಉರಿಯೂತ ನಿವಾರಕ ಮತ್ತು ಉತ್ಕರ್ಷಣ ನಿರೋಧಕ ಗುಣಲಕ್ಷಣಗಳು ಜೀರ್ಣಾಂಗವ್ಯೂಹವನ್ನು ಶಾಂತಗೊಳಿಸಲು ಸಹಾಯ ಮಾಡುತ್ತದೆ.

**ಕ್ಯಾನ್ಸರ್ ಕೋಶಗಳ ಹರಡುವಿಕೆಯನ್ನು ನಿಧಾನಗೊಳಿಸುತ್ತದೆ:** ಅರಿಶಿನವು ದೇಹದಲ್ಲಿ ಹಾನಿಕಾರಕ ಫ್ರೀ ರಾಡಿಕಲ್‌ಗಳನ್ನು ನಿವಾರಿಸುವ ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ. ಇದು ಹೃದಯ ಕಾಯಿಲೆ ಮತ್ತು ಕ್ಯಾನ್ಸರ್‌ನಂತಹ ರೋಗಗಳ ಅಪಾಯವನ್ನು ಕಡಿಮೆ ಮಾಡುತ್ತದೆ ಮತ್ತು ಜೀವಕೋಶದ ದೀರ್ಘಾಯುಷ್ಯವನ್ನು ಹೆಚ್ಚಿಸುತ್ತದೆ. ಅರಿಶಿನದಲ್ಲಿರುವ ಸಂಯುಕ್ತಗಳು ಕ್ಯಾನ್ಸರ್ ಕೋಶಗಳ ಹರಡುವಿಕೆಯನ್ನು ನಿಧಾನಗೊಳಿಸುತ್ತದೆ. ನಿಮ್ಮ ಆಹಾರದಲ್ಲಿ ನಿಯಮಿತವಾಗಿ ಅರಿಶಿನವನ್ನು ಸೇರಿಸುವುದರಿಂದ ದೀರ್ಘಾವಧಿಯಲ್ಲಿ ಕ್ಯಾನ್ಸರ್ ಅಪಾಯವನ್ನು ಕಡಿಮೆ ಮಾಡಬಹುದು.



# ನೊಬೆಲ್ ಪ್ರಶಸ್ತಿ ಪುರಸ್ಕೃತರು ಸರ್ ಸಿ ವಿ ರಾಮನ್ ರವರ 137ನೇ ವರ್ಷದ ಜನ್ಮಜಯಂತಿ



ಕಲಾ ಸಾಹಿತ್ಯ



ಕೃಷ್ಣಪ್ಪ ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ವಿಶ್ವಪ್ರಸಿದ್ಧ ಭೌತವಿಜ್ಞಾನಿ ಸರ್ ಸಿವಿ ರಾಮನ್ ರವರು 1888 ನ. 07 ರಂದು ಜನಿಸಿ,ತಂದೆ ತಾಯಿಗಳಿಂದ ಉತ್ತಮ ಸಂಸ್ಕಾರ,ಶಿಸ್ತು,ಸನ್ಮಾರ್ಗ ಜೊತೆಗೆ ಗುರುಹಿರಿಯರಿಂದ ಉತ್ತಮ ಗುಣಮಟ್ಟದ ಶಿಕ್ಷಣ ಪಡೆದು, ಒಳ್ಳೆಯ ವಾತಾವರಣ ಮತ್ತು ಉತ್ತಮ ಪರಿಸರದಲ್ಲಿ ಬೆಳೆದು ಜಗತ್ತಿನ ವಿಜ್ಞಾನ ಕ್ಷೇತ್ರದಲ್ಲಿ ವಿಸ್ಮಯ ಮೂಡಿಸಿದರು.


ಭೌತಶಾಸ್ತ್ರದ ಪ್ರಾಧ್ಯಾಪಕರಾಗಿ ವಿಜ್ಞಾನ ವಿಷಯಗಳ ಬಗ್ಗೆ ವೈಜ್ಞಾನಿಕ ಸಂಶೋಧನೆಗಳನ್ನು ನಡೆಸುತ್ತಾ ಬೆಳಕು ಮತ್ತು ಕ್ಷಕಿರಣಗಳನ್ನು ಕುರಿತು ಹೆಚ್ಚಿನ ಸಂಶೋಧನೆ ನಡೆಸಿದರು.ಇವರ ಅನನ್ಯವಾದ ವೈಜ್ಞಾನಿಕ ಸಂಶೋಧನೆಗಳಿಗೆ ವಿಶ್ವಮಾನ್ಯತೆ ಪಡೆದು ಭೌತಶಾಸ್ತ್ರದಲ್ಲಿ ನೊಬೆಲ್ ಪ್ರಶಸ್ತಿ ದೊರೆಯಿತು. ನಂತರ ಭಾರತೀಯ ವಿಜ್ಞಾನ ಸಂಸ್ಥೆಗೆ ನಿರ್ದೇಶಕರಾಗಿ ನೇಮಕವಾದರು. ಭೌತಶಾಸ್ತ್ರಕ್ಕೆ ಸಂಬಂಧಿಸಿದ ಅನೇಕ ಮಹತ್ವಪೂರ್ಣ ಕೃತಿಗಳನ್ನು ಬರೆದರು. ಬೆಂಗಳೂರಿನಲ್ಲಿ ರಾಮನ್ ಸಂಶೋಧನಾ ಸಂಸ್ಥೆಯನ್ನು ಸ್ಥಾಪಿಸಿದರು.ಅನೇಕ ಪ್ರತಿಷ್ಠಿತ ಪ್ರಶಸ್ತಿಗಳೊಂದಿಗೆ ಭಾರತ ಸರ್ಕಾರವೂ ಕೂಡ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿತು. ಇವರು ವಿಜ್ಞಾನ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಪಾರ ಹಾಗೂ ಒಂದು ಮೈಲಿಗಲ್ಲು. ಸರ್ ಸಿ ವಿ ರಾಮನ್ ಅವರು 1970 ನ.21 ರಂದು ಇಹಲೋಕ ಯಾತ್ರೆಯನ್ನು ಮುಗಿಸಿ ಚಿರಸ್ಮರಣೀಯರಾದರು ಹಾಗೂ ಜಗತ್ತಿನ ವಿಜ್ಞಾನ ಕ್ಷೇತ್ರದಲ್ಲಿ ಅಮರರಾದರು ಅದರಲ್ಲೂ ಯುವ ವಿಜ್ಞಾನಿಗಳಿಗೆ ಸ್ಫೂರ್ತಿದಾಯಕರಾದರು. ಇಂತಹ ಮಹನೀಯರನ್ನು ಸ್ಮರಿಸಿ, ನೆನೆದು ಅವರ ಆತ್ಮಕ್ಕೆ ಶಾಂತಿ ಕೋರುತ್ತಾ ಇಂದು ಅವರ 137 ನೇ ವರ್ಷದ ಜನ್ಮದಿನವನ್ನು ಆಚರಿಸುವುದು ನಮ್ಮ-ನಿಮ್ಮೆಲ್ಲರ ಅದರಲ್ಲೂ ವಿಜ್ಞಾನ ಕ್ಷೇತ್ರದಲ್ಲಿ ಇರುವವರ ಆದ್ಯ ಕರ್ತವ್ಯ ಹಾಗೂ ಜವಾಬ್ದಾರಿ.

• ಉದಯವಾಹಿನಿ, ವಿಶೇಷ

# ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಲೋಕಕಲ್ಯಾಣಕ್ಕಾಗಿ ಲಕ್ಷ ದೀಪೋತ್ಸವ

• ಉದಯವಾಹಿನಿ, ಬೆಂಗಳೂರು





ಜಯನಗರ ಐದನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮ ಪೂಜ್ಯ ಶ್ರೀ1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಶ್ರೀ ಮಠದ ಹಿರಿಯ ವ್ಯವಸ್ಥಾಪಕರಾದ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಕಾರ್ತಿಕ ಮಾಸದ ಪೌರ್ಣಮಿ ಪ್ರಯುಕ್ತಲೋಕ ಕಲ್ಯಾಣಕ್ಕಾಗಿ ಲಕ್ಷ ದೀಪೋತ್ಸವದ ಕಾರ್ಯಕ್ರಮವನ್ನು ಪುಷ್ಪಗಳಿಂದ ಅಲಂಕರಿಸಿ ವಿಶೇಷವಾಗಿ ಚೋಕ್ಕವನ್ನು ಪ್ರಜ್ವಲಿಸುವ ಮೂಲಕ ಲಕ್ಷ ದೀಪೋತ್ಸವದ ಕಾರ್ಯಕ್ರಮವು ಭಕ್ತಿಯಿಂದ ಅತ್ಯಂತ ವೈಭವ ಸಂಭ್ರಮ ಸಡಗರದಿಂದ ಲೋಕಕಲ್ಯಾಣಕ್ಕಾಗಿ ನೆರವೇರಿಸಲಾಯಿತು ಎಂದು ಪುರೋಹಿತರಾದ ಶ್ರೀಯುತ ನಂದಕಿಶೋರಾಚಾರ್ಯರು ತಿಳಿಸಿದರು, ಈ ದೀಪೋತ್ಸವದಲ್ಲಿ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಸೇವಾ ಕರ್ತೃಗಳು ಭಾಗವಹಿಸಿ ಭಕ್ತಿಯಿಂದ ಗುರು ರಾಯರನ್ನು ಪ್ರಾರ್ಥಿಸುತ್ತಾ ಸಂಕಲ್ಪವನ್ನು ಮಾಡಿ ದೀಪಗಳನ್ನು ಪ್ರಜ್ವಲಿಸಿ ಪ್ರಸಾದವನ್ನು ಸ್ವೀಕರಿಸಿ ಶ್ರೀಹರಿವಾಯು ಗುರುಗಳ ಅನುಗ್ರಹಕ್ಕೆ ಪಾತ್ರರಾದರು, ಈ ಸಂದರ್ಭದಲ್ಲಿ ಶ್ರೀ ಮಠದ ಧರ್ಮಾಧಿಕಾರಿಗಳಾದ ಕೃಷ್ಣ ಗುಂಡಾಚಾರ್ಯರು, ಅರ್ಚಕ ವೃಂದದವರು ಶ್ರೀಮಠದ ಸಿಬ್ಬಂದಿಗಳು, ಗಣ್ಯರು, ಭಕ್ತರು ಭಾಗವಹಿಸಿದ್ದರು



ವಿಶ್ವಾಸ್.ಡಿ.ಗೌಡ

# ಆರೋಗ್ಯವೇ ನಿಜವಾದ ಸೌಭಾಗ್ಯ

ಮುಖೇಶ್ ಅಂಬಾನಿ ಇಂದು ಬೆಳಗ್ಗೆ ತಮ್ಮ ಬಂಗಲೆಯಲ್ಲಿ ಗೋಲ್ಡ್ ಕೋಟೆಡ್ ಮಾರ್ಬಲ್ ಡೈನಿಂಗ್ ಟೇಬಲ್ ಮೇಲೆ ಕುಳಿತಿದ್ದರು. ಮುಂಭಾಗದ ಬೆಳ್ಳಿಯ ತಟ್ಟೆ ಮತ್ತು ಬಟ್ಟಲಿನಲ್ಲಿ ಉಪ್ಪುರಹಿತ ಮೊಳಕೆ ಮತ್ತು ಸಕ್ಕರೆರಹಿತ ಚಹಾವನ್ನು ಕುಡಿಯುವುದು. ನಂತರ ಸ್ವಲ್ಪ ಸಮಯದ ನಂತರ ಉಪ್ಪುರಹಿತ ಬೆಂಡೆಕಾಯಿಯ ತರಕಾರಿ ಮತ್ತು ಎರಡು ಚಪಾತಿ ಬಿನ್ ತುಪ್ಪದ ಎಣ್ಣೆ ಮತ್ತು ಬಿಸಿ ಖನಿಜಯುಕ್ತ ನೀರನ್ನು ತೆಗೆದುಕೊಳ್ಳುತ್ತಿದ್ದರು.

7,000 ಕೋಟಿ ಬೆಲೆ ಬಾಳುವ ಮನೆ, ಹತ್ತು ಜನ ಸೇವಕರು ಉಪಹಾರ ನೀಡುತ್ತಿದ್ದರು, ಐವತ್ತು ಎಸಿಗಳು ಓಡುತ್ತಿವೆ, ಫ್ಯಾನ್‌ಗಳು ಗಾಳಿ ಬೀಸುತ್ತಿವೆ. ಕಟ್ಟಡಗಳ ಕೆಳಗೆ ಮಾಲಿನ್ಯದ ಹೊಗೆ ಬರುತ್ತಿತ್ತು. ಅಂತಹ ವಾತಾವರಣದಲ್ಲಿ ಅಂಬಾನಿ ಉಪಹಾರ ಸೇವಿಸುತ್ತಿದ್ದರು... ಕೊಟ್ಟಿಗೆಯಲ್ಲಿ ದೂರದ ಬಾವಿಯ ಬಂಡೆಯ ಮೇಲೆ ಒಬ್ಬ ಹೊಲದ ಕೆಲಸಗಾರ ಕುಳಿತಿದ್ದ.

ಅವರು 3 ಪರಾಠಗಳು, ಅರಿಶಿನ-ಮಸಾಲೆ ಬೇಯಿಸಿದ ಬೆಂಡೆಕಾಯಿ ಮತ್ತು ಕಡಲೆಯೊಂದಿಗೆ ಉಪ್ಪಿನಕಾಯಿಗಳನ್ನು ತಿನ್ನುತ್ತಿದ್ದರು. ಸಿಹಿತಿಂಡಿಯಲ್ಲಿ ಬೆಲ್ಲ ಮತ್ತು ಕುಡಿಯಲು ಪಾತ್ರೆಯಲ್ಲಿ ತಣ್ಣೀರು. ಮುಂದೆ ಹಸಿರು ಗದ್ದೆಗಳು, ತಾಜಾ ಗಾಳಿಯಲ್ಲಿ ಬೀಸುವ ಬೆಳೆಗಳು, ತಂಪಾದ ಗಾಳಿ, ಹಕ್ಕಿಗಳ ಚಿಲಿಪಿಲಿ, ಮತ್ತು ಅವನು ಆರಾಮವಾಗಿ ತಿನ್ನುತ್ತಿದ್ದನು.


7 ಶತಕೋಟಿ ರೂಪಾಯಿಗಳ ಮಾಲೀಕರು ತಿನ್ನಲಾಗದಿದ್ದನ್ನು 500 ರೂಪಾಯಿ ಗಳಿಸುವ ಕೃಷಿ ಕಾರ್ಮಿಕರು ತಿನ್ನುತ್ತಿದ್ದರು.

ಈಗ ಹೇಳಿ ಈ ಎರಡರ ನಡುವಿನ ವ್ಯತ್ಯಾಸವೇನು?

ಅಂಬಾನಿಗೆ 60 ವರ್ಷ, ಕಾರ್ಮಿಕನಿಗೂ 60 ವರ್ಷ. ಬೆಳಗಿನ ಉಪಾಹಾರದ ನಂತರ ಅಂಬಾನಿ ಮಧುಮೇಹ, ಕೊಲೆಸ್ಟ್ರಾಲ್ ಮತ್ತು ಬಿಪಿ ಮಾತ್ರೆಗಳನ್ನು ಸೇವಿಸುತ್ತಿದ್ದರು ಮತ್ತು ಕೃಷಿ ಕೆಲಸಗಾರ ಸುಣ್ಣದ ಪಾನ್ ತಿನ್ನುತ್ತಿದ್ದರು, ಕೀಳು ಇಲ್ಲ, ಶ್ರೇಷ್ಠನೂ ಇಲ್ಲ. ಆದ್ದರಿಂದ, ಸಂತೋಷವನ್ನು ಹುಡುಕಬೇಡಿ, ಸಂತೋಷವನ್ನು ಅನುಭವಿಸಿ......

ನಿಜವಾದ ಭಾಗ್ಯ ಸೌಭಾಗ್ಯ ಎಂದರೆ ಆರೋಗ್ಯ ಕೇವಲ ಉತ್ತಮ ಆರೋಗ್ಯ ಮಾತ್ರ ನಿಮ್ಮ ಹಣ ಆಸ್ತಿ ಕಾರುಬಾರು ಅಂತಸ್ತು ಅಧಿಕಾರ ದರ್ಪ ವೈಭವ ಇವೆಲ್ಲಾ ಕೇವಲ ಬೇರೆಯವರು ನೋಡಲಿಕ್ಕೆ ಮಾತ್ರ ಆದರೆ ನೀವು ಸ್ವಯಂ ಖುಷಿಯಿಂದ ಅನುಭವಿಸಲಿಕ್ಕಲ್ಲ.

ಭ್ರಮೆ ಬಿಟ್ಟು ಬದುಕೋಣ, ಖುಷಿಪಡಲು ಆರೋಗ್ಯ ಬೇಕು.



• ಉದಯವಾಹಿನಿ, ವಿಶೇಷ

# ಲೋಕಾಯುಕ್ತಕ್ಕೆ ಆಸ್ತಿ ವಿವರ ಸಲ್ಲಿಸದ 5 ಸಚಿವರು ಸೇರಿ 67 ಶಾಸಕರ ಪಟ್ಟಿ ಬಿಡುಗಡೆ

• ಉದಯವಾಹಿನಿ, ಬೆಂಗಳೂರು




ಕರ್ನಾಟಕ ಲೋಕಾಯುಕ್ತ, ಆಸ್ತಿ ವಿವರ ಸಲ್ಲಿಸದ ರಾಜ್ಯದ ಸಚಿವರು, ಶಾಸಕರು ಮತ್ತು ವಿಧಾನ ಪರಿಷತ್ ಸದಸ್ಯರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ಆಡಳಿರೂಢ ಕಾಂಗ್ರೆಸ್, ವಿರೋಧ ಪಕ್ಷ ಬಿಜೆಪಿ ಹಾಗೂ ಜೆಡಿಎಸ್‌ನ ಒಟ್ಟು 67 ಶಾಸಕರು ಇದ್ದಾರೆ.


> **ಆಸ್ತಿ ವಿವರ ಸಲ್ಲಿಸದ ಶಾಸಕರು**
> **ಕೆ.ಎನ್ ರಾಜಣ್ಣ, ಲಕ್ಷ್ಮಣ ಸವದಿ, ಖನೀಜ್ ಫಾತಿಮಾ, ಜನಾರ್ದನ ರೆಡ್ಡಿ, ವಿನಯ ಕುಲಕರ್ಣಿ, ಬಿ ಕೆ ಸಂಗಮೇಶ್ವರ್, ನಯನಾ ಮೊಟಮ್ಮ, ಬಿ. ಸುರೇಶ್ ಗೌಡ, ಕೆ.ಗೋಪಾಲಯ್ಯ, ಸಿ.ಪಿ.ಯೋಗೇಶ್ವರ, ಎಚ್.ಡಿ ರೇವಣ್ಣ ಹಾಗೂ ಸಿ. ಪುಟ್ಟರಂಗಶೆಟ್ಟಿ ಸೇರಿದಂತೆ 67 ಶಾಸಕರು ತಮ್ಮ ಆಸ್ತಿ ವಿವರ ಸಲ್ಲಿಸಿಲ್ಲ.**

> **ನಿಗದಿತ ನಮೂನೆಯಲ್ಲಿ ಲೋಕಾಯುಕ್ತಕ್ಕೆ ಸಲ್ಲಿಕೆ**

ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 22(1) ಮತ್ತು (2)ರ ಪ್ರಕಾರ ವಿಧಾನಸಭೆ, ವಿಧಾನಪರಿಷತ್ ಸದಸ್ಯರು ಪ್ರತಿ ವರ್ಷ ಜೂನ್ 30ರೊಳಗೆ ತಮ್ಮ ಹಾಗೂ ಕುಟುಂಬದ ಸದಸ್ಯರ ಆಸ್ತಿ ವಿವರವನ್ನು ನಿಗದಿತ ನಮೂನೆಯಲ್ಲಿ ಲೋಕಾಯುಕ್ತಕ್ಕೆ ಸಲ್ಲಿಸಬೇಕು. ಆದರೆ ರಾಜ್ಯದ ಐದು ಸಚಿವರು ಸೇರಿ 67 ಶಾಸಕರು, 28 ವಿಧಾನಪರಿಷತ್ ಸದಸ್ಯರು(ಎಂಎಲ್‌ಸಿ) ಇದುವರೆಗೂ 2024-25ನೇ ಸಾಲಿನ ಆಸ್ತಿ ವಿವರವನ್ನು ಲೋಕಾಯುಕ್ತಕ್ಕೆ ಸಲ್ಲಿಸಿಲ್ಲ. ಹೀಗಾಗಿ ಲೋಕಾಯುಕ್ತ, ಆಸ್ತಿ ವಿವರ ಸಲ್ಲಿಸದ ಶಾಸಕರ ಹೆಸರುಗಳ ಪಟ್ಟಿಯನ್ನು ಬಿಡುಗಡೆ ಮಾಡಿದೆ.

**ಆಸ್ತಿ ವಿವರ ಸಲ್ಲಿಸದ ಸಚಿವರು:** ಆಹಾರ ಮತ್ತು ನಾಗರಿಕ ಪೂರೈಕೆ, ಗ್ರಾಹಕ ವ್ಯವಹಾರ ಸಚಿವ ಕೆ ಎಚ್.ಮುನಿಯಪ್ಪ, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ವಸತಿ, ವಕ್ಸ್ ಮತ್ತು ಅಲ್ಪ ಸಂಖ್ಯಾತ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್, ಪೌರಾಡಳಿತ ಸಚಿವ ರಹೀಮ್ ಖಾನ್ ಹಾಗೂ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ. ವೆಂಕಟೇಶ್ ಅವರು ತಮ್ಮ ಆಸ್ತಿ ವಿವರವನ್ನು ಲೋಕಾಯುಕ್ತಕ್ಕೆ ಸಲ್ಲಿಸಿಲ್ಲ.

# ರಾಮಾಯಣ



## ರಾವಣನು ಸೀತಾದೇವಿಯನ್ನು ಅಪಹರಿಸಿದ್ದು

• ಹಿಂದಿನ ಸಂಚಿಕೆಯಿಂದ


120 ನೆಯ ಅಧ್ಯಾಯ

ನೀವೆಲ್ಲರೂ ಸಾಕ್ಷಿಯಾಗಿರಿ. ಈ ವಿಷಯವನ್ನು ಶ್ರೀರಾಮನಿಗೆ ತಿಳಿಯಹೇಳಿ, ತಾಯಿ-ಗೋದಾವರೀ ನದಿಯೆ, ನಿನಗೆ ನಮಸ್ಕಾರವನ್ನು ಮಾಡುತ್ತೇನೆ. ನನ್ನನ್ನು ರಾವಣನು ಬಲಾತ್ಕಾರದಿಂದ ಹಿಡಿದುಕೊಂಡು ಹೋದನೆಂದು ನನ್ನ ಪತಿಯಾದ ಶ್ರೀರಾಮನೊಡನೆ ಹೇಳು, ಎಲೈ ಮೃಗಗಳಿದ್ದಾ ನಾನು ನಿಮಗೆಲ್ಲರಿಗೂ ನಮಸ್ಕಾರವನ್ನು ಮಾಡುತ್ತೇನೆ. ನನ್ನ ಪ್ರಾಣಕಾಂತನಾದ ಶ್ರೀರಾಮನ ಸಂಗಡ ಆತನ ಪ್ರಾಣಗಳಿಗಿಂತಲೂ ಅಧಿಕಳಾಗಿದ್ದ ನನ್ನನ್ನು ರಾವಣನು ಬಲಾತ್ಕಾರದಿಂದ ಹಿಡಿದುಕೊಂಡು ಹೋದನೆಂದು ಹೇಳಿ. ನಿಮ್ಮ ಮಾತನ್ನು ಕೇಳಿ ಮಹಾಪರಾಕ್ರಮಶಾಲಿಯಾದ ಶ್ರೀರಾಮನು ರಾವಣನನ್ನು ಯುದ್ಧದಲ್ಲಿ ಸಂಹರಿಸಿ ನನ್ನನ್ನು ತಿರುಗಿ ಕರೆತರುವನು. ನನ್ನ ಪತಿಯಾದ ಶ್ರೀರಾಮನು ನಾನು ಯಮಲೋಕವನ್ನೈದಿದರೂ ತಿರುಗಿ ಕರೆತರುವನು ಎಂದು ದೈನ್ಯಸ್ವರದಿಂದ ಹಂಬಲಿಸಿದಳು. ಮಾರ್ಗದಲ್ಲಿ ಒಂದು ದೊಡ್ಡ ಮರದಮೇಲೆ ಕುಳಿತಿದ್ದ ಜಟಾಯುವನ್ನು ಕಂಡು ಜಟಾಯು ಲೋಕದಲ್ಲಿ ಯಾರೂ ದಿಕ್ಕಿಲ್ಲದಿರುವ ಸ್ತ್ರೀಯನ್ನು ಹಿಡಿದುಕೊಂಡು ಹೋಗುವಂತೆ ನನ್ನನ್ನು ಬಲವಂತನಾದ ರಾವಣನು ಹಿಡಿದುಕೊಂಡು ಹೋಗುತ್ತಿದ್ದಾನೆ. ಈತನು ಮಹಾದುರಾತ್ಮನು. ಆಯುಧಪಾಣಿಯಾಗಿ ಅತ್ಯಂತ ಕ್ರೂರ ಬುದ್ಧಿಯುಳ್ಳವನಾಗಿದ್ದಾನೆ. ಈತನನ್ನು ತಡೆದು ಬಿಡಿಸಿಕೊಳ್ಳುವುದಕ್ಕೆ ನಿನಗೆ ಶಕ್ತಿಯಿಲ್ಲ. ನನ್ನ ಪತಿಯಾದ ಶ್ರೀರಾಮನೊಡನೆಯೂ ನನ್ನ ಮೈದುನನಾದ ಲಕ್ಷ್ಮಣನೊಡನೆಯೂ ಈ ಸಂಗತಿಯನ್ನು ವಿವರವಾಗಿ ಹೇಳು ಎಂದು ಗೋಳಾಡಿದಳು.

**ಜಟಾಯುವು ರಾವಣನಿಗೆ ಹೇಳಿದ ಬುದ್ಧಿವಾದ**

ಆಗ ಸೀತಾದೇವಿಯು ಮೊರೆಯಿಟ್ಟ ಧ್ವನಿಯನ್ನು ಕೇಳಿ ಜಟಾಯುವು ಎಚ್ಚೆತ್ತನು. ಅವನು ಕಣ್ಣು ತೆರೆದು ರಾವಣನನ್ನೂ ಮೊರೆಯಿಡುವ ಸೀತಾದೇವಿಯನ್ನೂ ಕಂಡನು, ಆ ಜಟಾಯುವು ರಾವಣನನ್ನು ಕುರಿತು ವಿನಯದಿಂದ ಹೀಗೆ ಹೇಳಿದನು: ಎಲೈ ರಾವಣ, ನಾನು ಪುಣ್ಯಕಥೆಗಳನ್ನು ಕೇಳುವ ಸಮಯದಲ್ಲಿ ನೀನು ಅತ್ಯಂತ ಧರ್ಮಿಷ್ಠನೂ ಮೇರೆ ಮರ್ಯಾದೆಗಳನ್ನು ಬಲ್ಲವನೂ ಸತ್ಯಸಂಧನೂ ಎಂದು ಹೇಳಿದ್ದನ್ನು ಕೇಳಿದ್ದೇನೆ. ನಾನು ಸಮಸ್ತ ಹದ್ದುಗಳಿಗೂ ಒಡೆಯನಾದ ಜಟಾಯು. ಇಂದ್ರ ವರುಣರಿಗೆ ಸಮಾನನಾದ ಶ್ರೀರಾಮನು ಸಕಲಲೋಕಗಳಿಗೂ ಹಿತವನ್ನೇ ಮಾಡುವವನು. ದಶರಥಮಹಾರಾಯನು ಮಹಾಪ್ರಸಿದ್ಧನಾಗಿದ್ದವನು, ಆತನ ಮಗನಾಗಿ ಲೋಕನಾಯಕನಾದ ಶ್ರೀರಾಮನ ಪತ್ನಿಯಾದ ಈ ಪತಿವ್ರತಾಶಿರೋಮಣಿಯನ್ನು ಅಪಹರಿಸಿಕೊಂಡು ಹೋಗುವುದು ನಿನಗೆ ಧರ್ಮವಲ್ಲ, ನೀನು ಧರ್ಮಿಷ್ಟನಾಗಿರುವುದರಿಂದ ಪರಸ್ತ್ರೀಯನ್ನು ಅಪಹರಿಸುವುದು ಉಚಿತವಲ್ಲ. ಅರಸನು ರಾಜಸ್ತ್ರೀಯನ್ನು ರಕ್ಷಿಸಬೇಕಲ್ಲದೆ ಕೆಡಿಸಬಾರದು. ಇಂಥ ನೀಚಬುದ್ಧಿಯನ್ನು ಬಿಡು, ಪರಾಕ್ರಮಿಯಾದವನು ಪರಸ್ತ್ರೀಯರಿಗೆ ಎರಡೆಣಿಸಿದರೆ ಲೋಕದಲ್ಲಿ ಅಪಕೀರ್ತಿಗೊಳಗಾಗುವನು.

**ಮುಂದುವರಿಯುವುದು...**



• ಉದಯವಾಹಿನಿ, ವಿಶೇಷ



ಶ್ರೀ. ಸುಭಾಷ್ ಹೇಮಣ್ಣಾ
ಚವ್ಹಾಣ, ಪರಮವಾಡಿ ತಾಂಡೆ,

ಕಾಗಿನೆಲೆಯಾದಿಕೇಶವನ ನೆಲೆನಂಬಿ
ಬದುಕಿದ ದಾಸ
ಅಚ್ಚು ಮೆಚ್ಚು ವೈರಾಗ್ಯ ನಿಧಿ ತಮಗೆ ಗುರು ವ್ಯಾಸ
ಒಳಗಣ್ಣು ತೆರೆದಿತ್ತ ವ್ಯಾಸಗುರುವಿನ
ಶಿಷ್ಯೋತ್ತಮ ಕನಕನಾತ
ಸತ್ಯ ಶುದ್ಧ ತತ್ವ ರತ್ನ ಕೃತಿ ಸಾಹಿತ್ಯ ಸಂಗೀತ ಕಾಲಾತೀತ
ಒಲವು ನಲಿವು ಕಾವ್ಯರಸದೊರತೆ ನಳಚರಿತೆ
ಭಕುತಿರಸ ಮುಕುತಿಗೆ ಪಾರಂಗತವು ಹರಿಚರಿತೆ
ಮೇಲು ಕೀಳುಗಳಾಳರ್ಥ ತತ್ವವು ರಾಮಧಾನ್ಯ ಚರಿತ್ರೆ
ಭವಪಾಶ ಬಿಡಿಸ್ವ ಮೋಹನ ತರಂಗಣಿ ಮಧುಪಾತ್ರೆ
ಬಂಕಾಪುರ ಬಾಡದೂರಿನ ವೀರಾದಿವೀರ ಡಣ್ಣಾಯಕ
ಹರಿಯ ಕೂಗಿಗೆ ಮಾಡಿದಾತ ಲೋಕ ಮಾಸದ ಕಾಯಕ
ಬಲಿ ವಾಮಾಚಾರ ಕಣ್ಕಟ್ಟು ಜಾದು ತೊರೆದಾತ ನಾಯಕ
ಆತ್ಮ ಮೋಕ್ಷ ಕಲ್ಯಾಣ ಜ್ಞಾನ ಭಕ್ತಿ ಮೆರೆದಾತ ಜನ ಸೇವಕ
ಕುಲದ ನೆಲೆಯ ಕೊಳೆ ಕಾಲದ್ವಂಗವಿರದವನು ಕನಕ
ಸಾಮರಸ್ಯದ ಪದಹೊಸೆದ್ಹಾಡಿದವನು ಮನುಕುಲ ತಿಲಕ
ಕನಕವ ಹಂಚಿದ ನಿರ್ಮೋಹಿ ಕರುಣ ರತ್ನ ಕಲ್ಪತರು
ಬಳಲಿದವರ ಸಂಕಟ ಹರಣ ಮಾಡಿದವ ದಾಸಮೇರು

# ಕನಕನಿಗೇಕೆ ಕುಲದ ಪಟ್ಟ?

ಬಚ್ಚಮ್ಮ ಬೀರಪ್ಪ ಉದರದುದಾರ ಕುಡಿ ಕನಕದಾಸ
ವೈಚಾರಿಕಾಚಾರ ವಿಚಾರಭರಣ ಕನಕ ಮನವಾಸ
ಹರಿಹರರನು ಮೇಳೈಸಿದಾ ಜನಮಾನಸದ ಪರಮಭಕ್ತ
ಹಿಂದೆ ಮುಂದೆ ಬೈದವರಿಗೆ ಅಂದಣವನಿತ್ತ ಮಹಾಸಂತ
ಕುಲಗೇಡಿಗಳಿಗೆ ಕುಲದ ನೆಲೆಯ ಕೇಳಿದಾತ ಕನಕಗುರು
ತತ್ವೇಂದ್ರಿಯಗಳ ಕುಲ ಕೇಳಿ ಮೂಡಿಸದವರು ಆತ್ಮದರು
ದೇವನೊಲಿದಾತನೆ ಕುಲಜನೆಂದು ಕುಲಮದ ಹರಿದಾತರು
ಸಮರಸ ಸಾಮರಸ್ಯ ತೊಟ್ಟಿಲು ತೂಗಿದಾತ ಕನಕದಾಸರು
ಕುಲದ್ಹಂಗು ಹರಿದ ಕನಕ ಸಂತನಿಗೇಕೆ ಕುಲಮತದ ಪಟ್ಟ
ಜಾತಿ ವಿನಾಶಕೆ ಈಗಲಾದರೂ ಹಾಕಿರಯ್ಯ ಒಮ್ಮನದಿ ಮಟ್ಟ
ಭೂವಾಗಸ ಜಲಾಗ್ನಿ ವಾಯುಗಿರದ ಕುಲ ಗೋತ್ರ!
ಬೇಡವೆ ಬೇಡೆಮಗೆ ಮತಹೀನ ಮತಿ ಭ್ರಾಂತಿ ತಿಳಿ ಭಾತೃ!!

● ಸರಕಾರ ನನ್ನನ್ನು ಟಾರ್ಗೇಟ್ ಮಾಡಿ ಟೋಲ್ ನಿರ್ಮಾಣ ಮಾಡಿದೆ ಕರೆಮ್ಮ ಜಿ ನಾಯಕ

# ದೇವದುರ್ಗದಲ್ಲಿ ನ.7ರಿಂದ ಸದ್ದಿಲ್ಲದೆ ಎರಡು 'ಟೋಲ್‌ಗೇಟ್' ಪುನಾರಂಭ

• ಉದಯವಾಹಿನಿ ದೇವದುರ್ಗ

ಸಾರ್ವಜನಿಕರ ಭಾರಿ ವಿರೋಧದ ನಡುವೆಯೂ ತಾಲ್ಲೂಕಿನಲ್ಲಿ ಮತ್ತೆ ಟೋಲ್‌ಗೇಟ್ ಪುನಾರಂಭ ಮಾಡಲು ಸಿದ್ಧತೆ ನಡೆದಿದೆ. ನ.7ರಿಂದ ಎರಡೂ ಟೋಲ್ ಆರಂಭಿಸಲು ಸಹಾಯಕ ಆಯುಕ್ತರು ಆದೇಶ ಹೊರಡಿಸಿದ್ದು, ಸೂಕ್ತ ಭದ್ರತೆ, ಮೇಲ್ವಿಚಾರಣೆಗೆ 14 ಅಧಿಕಾರಿಗಳನ್ನು ನೇಮಿಸಿದ್ದಾರೆ.

ಹಿಂದುಳಿದ ತಾಲ್ಲೂಕಿನಲ್ಲಿ ಟೋಲ್‌ಗೇಟ್ ಆರಂಭಿಸಿದ್ದಕ್ಕೆ ಭಾರಿ ವಿರೋಧ ವ್ಯಕ್ತವಾಗಿತ್ತು. ಫೆಬ್ರವರಿಯಲ್ಲಿ ನಾನಾ ಸಂಘಟನೆಗಳು ದೊಡ್ಡಮಟ್ಟದ ಹೋರಾಟ ಮಾಡಿದ್ದವು. ಕಲ್ಮಲಾ ತಿಂಥಣಿ ಬ್ರಿಡ್ಜ್ ರಾಜ್ಯ ಹೆದ್ದಾರಿಗೆ ಹೊಂದಿಕೊಂಡ ಕಾಕರಗಲ್ ಹಾಗೂ ಜಾಲಹಳ್ಳಿಯಲ್ಲಿ ಎರಡು ವರ್ಷಗಳ ಹಿಂದೆ ಅವೈಜ್ಞಾನಿಕವಾಗಿ ಎರಡು ಟೋಲ್‌ಗೇಟ್ ನಿರ್ಮಿಸಲಾಗಿತ್ತು.

ಕೇವಲ 74 ಕಿ.ಮೀ. ವ್ಯಾಪ್ತಿಯಲ್ಲಿ ಎರಡೆರಡು ಟೋಲ್‌ಗೇಟ್ ಪ್ರಾರಂಭಿಸಿದ್ದರಿಂದ ಭಾರಿ ಜನಾಕ್ರೋಶ, ಪ್ರತಿಭಟನೆ, ಗೇಟ್ ಮೇಲೆ ದಾಳಿಯಂತ ಹೋರಾಟಗಳು ನಡೆದಿದ್ದವು. ಅಲ್ಲದೆ, ಶಾಸಕಿ ಕರೆಮ್ಮ ಜಿ.ನಾಯಕ, ಸಂಸದ ಜಿ.ಕುಮಾರ ನಾಯಕ ಅವರು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಪತ್ರ ಬರೆದಿದ್ದರು.

**ಬೆಂಗಳೂರಿನಲ್ಲಿ ಸಭೆ:** ಟೋಲ್‌ಗೇಟ್ ರದ್ದಿಗಾಗಿ ಬೆಂಗಳೂರಿನಲ್ಲಿ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅಧ್ಯಕ್ಷತೆಯಲ್ಲಿ ಜುಲೈ 30ರಂದು ತುರ್ತು ಸಭೆ ಜರುಗಿತ್ತು.

ಸಭೆಯಲ್ಲಿ ಟೋಲ್‌ಗೇಟ್ ಯಾವುದೇ ಕಾರಣಕ್ಕೂ ರದ್ದು ಮಾಡುವುದಿಲ್ಲ, ಬೇಕಾದ ಅಗತ್ಯ ಸೌಲಭ್ಯ ಕಲ್ಪಿಸುತ್ತೇವೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದರು. ಇದರಿಂದ ಕೆರಳಿದ್ದ ಶಾಸಕಿ ಕರೆಮ್ಮ ಜಿ.ನಾಯಕ ಸಭೆಯಿಂದ ಹೊರನಡೆದು ವಿಧಾನಸೌಧ ಮುಂದೆ ಕಣ್ಣೀರು ಹಾಕಿದ್ದರು. ಇದರಿಂದ ತಾತ್ಕಾಲಿಕವಾಗಿ ಮೂರು ತಿಂಗಳ ಕಾಲ ಎರಡು ಟೋಲ್‌ಗೇಟ್ ಬಂದ್ ಮಾಡಲಾಗಿತ್ತು.


**ಹೋರಾಟಕ್ಕೆ ನಿರ್ಧಾರ:** ಟೋಲ್ ಆರಂಭಕ್ಕೆ ಎಲ್ಲಿಯೂ ಸೌಲಭ್ಯ ಕಲ್ಪಿಸಿಲ್ಲ. ಈಗ ಏಕಾಏಕಿ ನ.7ರಿಂದ ಟೋಲ್‌ಗೇಟ್ ಪುನಾರಾಂಭಕ್ಕೆ ಅಧಿಕಾರಿಗಳು ತಯಾರಿ ನಡೆಸಿದ್ದಾರೆ. ಟೋಲ್‌ಗೇಟ್ ಮತ್ತೆ ಆರಂಭವಾಗುತ್ತಿರುವ ಕಾರಣ ಜನರು ಹಂತಹಂತವಾಗಿ ಹೋರಾಟ ನಡೆಸಲು ಮುಂದಾಗಿದ್ದು, ಪಕ್ಷಾತೀತ ಹೋರಾಟದ ಜತೆಗೆ ಕಾನೂನು ಸಮರಕ್ಕೂ ತಯಾರಿ ನಡೆದಿದೆ.

ರಾಜಕೀಯ ನಾಯಕರು ಒಳಗೊಂಡಂತೆ ನಾನಾ ಸಂಘಟನೆಗಳು ಇದಕ್ಕೆ ಕೈಜೋಡಿಸಲು ಮುಂದಾಗಿವೆ. ದೇವದುರ್ಗ ಎಲ್ಲಾ ರೀತಿಯಿಂದಲೂ ಹಿಂದುಳಿದಿದ್ದು, ಟೋಲ್‌ಗೇಟ್ ಅಗತ್ಯವೇ ಇರಲಿಲ್ಲ. ಸರಕಾರ ನನ್ನನ್ನು ಟಾರ್ಗೇಟ್ ಮಾಡಿ ಟೋಲ್ ನಿರ್ಮಾಣ ಮಾಡಿದೆ. ನಾನು ಸಭೆಯಿಂದ ಹೊರಬಂದು ಪ್ರತಿಭಟಿಸಿದ್ದೇನೆ. ಟೋಲ್ ಮತ್ತೆ ಆರಂಭದ ಬಗ್ಗೆ ಮಾಹಿತಿಯಿಲ್ಲ, ತಾಲ್ಲೂಕಿನ ಜನರ ಜತೆ ಮಾತುಕತೆ ನಡೆಸಿ, ಮುಂದಿನ ಕಾನೂನು ಹೋರಾಟದ ಬಗ್ಗೆ ತೀರ್ಮಾನಿಸುತ್ತೇವೆ ಎಂದಿದ್ದಾರೆ ಕರೆಮ್ಮ ಜಿ.ನಾಯಕ ಶಾಸಕಿ,

ದೇವದುರ್ಗ, ತಾಲ್ಲೂಕಿನಲ್ಲಿ ರೈತರು, ಕೂಲಿಕಾರರು, ಬಡವರೇ ಹೆಚ್ಚಿದ್ದಾರೆ. ದೊಡ್ಡ ಕಂಪನಿ, ಕಾರ್ಖಾನೆಗಳೇ ಇಲ್ಲ. ಇಲ್ಲಿ ಟೋಲ್‌ಗೇಟ್ ಬೇಕಿರಲಿಲ್ಲ. ಯಾವುದೇ ಕಾರಣಕ್ಕೂ ತಾಲ್ಲೂಕಿನಲ್ಲಿ ಟೋಲ್‌ಗೇಟ್ ಆರಂಭಿಸಬಾರದು ಎಂದಿದ್ದಾರೆ ಶಿವರಾಜ ನಾಯಕ ಕೊತ್ತದೊಡ್ಡಿ ಸಂಚಾಲಕ, ಅಖಂಡ ದೇವದುರ್ಗ ಹೋರಾಟ ಸಮಿತಿ.

**ಯಾವ ಅಧಿಕಾರಿಗಳ ನೇಮಕ?**

**ಒಂದು ಟೋಲ್‌ಗೇಟ್‌ಗೆ ನಿತ್ಯ ಒಬ್ಬರಂತೆ 14 ಅಧಿಕಾರಿಗಳನ್ನು ನೇಮಿಸಿ ಮೇಲ್ವಿಚಾರಣೆ ನೀಡಲಾಗಿದೆ. ಕಾಕರಗಲ್ ಟೋಲ್ ಗೇಟ್‌ಗೆ ಪಿಡಬ್ಲ್ಯುಡಿ ಎಇಇ ಬನ್ನಪ್ಪ, ಸಾಮಾಜಿಕ ಅರಣ್ಯಾಧಿಕಾರಿ ಬೂದೆಪ್ಪ, ಜೆಸ್ಕಾಂ ಎಇಇ ವೆಂಕಟೇಶ ಚಿಲ್ಕರಾಗಿ, ಕಾರ್ಮಿಕ ನಿರೀಕ್ಷಕ ಮಲ್ಲಪ್ಪ, ಎಸ್ಟಿ ಕಲ್ಯಾಣಧಿಕಾರಿ ಮಂಜುಳಾ ಅಸುಂಡಿ , ಜಿಪಂ ಎಇಇ ಹೀರಾಲಾಲ್ , ತೋಟಗಾರಿಕೆ ಇಲಾಖೆ ನಿರ್ದೇಶಕ ಖಾದರ್‌ಪಾಷಾ ಅವರನ್ನು ನೇಮಿಸಲಾಗಿದೆ. ಜಾಲಹಳ್ಳಿ ಟೋಲ್‌ಗೇಟ್‌ಗೆ ಕೆಆರ್‌ಐಡಿಎಲ್ ಎಇಇ ವಿಜಯಕುಮಾರ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಬಾಬು , ಅರಣ್ಯಾಧಿಕಾರಿ ಅಲ್ಲಾಮುದ್ದಿನ್ , ಅಲ್ಪಸಂಖ್ಯಾತರ ಇಲಾಖೆ ಅಧಿಕಾರಿ ಮಹಿಮೂದ್ , ಬಸವರಾಜ, ಕೆಬಿಜೆಎನ್‌ಎಲ್ ಎಇಇ ನಾಗರಾಜ ಉಪನೋಂದಣಾಧಿಕಾರಿ ಸುರೇಶ ಕರ್ಕಿ ಅವರನ್ನು ನೇಮಿಸಲಾಗಿದೆ.**


ಉದಯವಾಹಿನಿ ಚಿತ್ರ

**ಕಾನೂನು ಹೋರಾಟಕ್ಕೆ ಜನರ ಸಿದ್ಧತೆ**

- **ಎರಡೂ ಟೋಲ್ ಆರಂಭಿಸಲು 14 ಅಧಿಕಾರಿಗಳ ನೇಮಿಸಿ ಎಸಿ ಆದೇಶ**
- **ಟೋಲ್ ಆರಂಭಕ್ಕೆ ಎಲ್ಲಿಯೂ ಸೌಲಭ್ಯ ಕಲ್ಪಿಸಿಲ್ಲ. ಈಗ ಏಕಾಏಕಿ ನ.7ರಿಂದ ಟೋಲ್‌ಗೇಟ್ ಪುನಾರಾಂಭಕ್ಕೆ ಅಧಿಕಾರಿಗಳು ತಯಾರಿ ನಡೆಸಿದ್ದಾರೆ.**
- **. ಸರಕಾರ ನನ್ನನ್ನು ಟಾರ್ಗೇಟ್ ಮಾಡಿ ಟೋಲ್ ನಿರ್ಮಾಣ ಮಾಡಿದೆ ಕರೆಮ್ಮ ಜಿ ನಾಯಕ**

## ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಅಪೂರ್ಣ: ಸಮಸ್ಯೆ ನೂರು

• ಉದಯವಾಹಿನಿ ಕಾರ್ಕಳ

ತಾಲ್ಲೂಕಿನ ಸಾಣೂರಿನಿಂದ ಬಿಕರ್ನಕಟ್ಟೆ ತನಕ ಸಾಗುವ ಚತುಷ್ಪಥ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ಪೂರ್ಣಗೊಳ್ಳದ ಕಾರಣ ನಿರಂತರ ಸಮಸ್ಯೆಗಳು ಕಾಡುತ್ತಿವೆ. ಗ್ರಾಮದಲ್ಲಿ 2 ಕಿಲೊಮೀಟರ್ ಸರ್ವಿಸ್ ರಸ್ತೆ ನಿರ್ಮಾಣದ ಪ್ರಸ್ತಾವನೆಗೆ ಇನ್ನೂ ಅಂಗೀಕಾರ ಸಿಗದ ಕಾರಣ ಗ್ರಾಮಸ್ಥರು ಪೇಟೆ ದಾಟಲು ಕಷ್ಟಪಡುತ್ತಿದ್ದಾರೆ. ಹೆದ್ದಾರಿ ಅಕ್ಕಪಕ್ಕದ ವಾಹನಗಳು ಮತ್ತು ಜನರು ನೇರವಾಗಿ ಮುಖ್ಯರಸ್ತೆಗೆ ಬರುತ್ತವೆ. ಇದರಿಂದ ಅಪಘಾತಗಳು ಸಂಭವಿಸುತ್ತಿವೆ.

ಗ್ರಾಮಸ್ಥರು ಹಲವು ಬಾರಿ ಪ್ರತಿಭಟನೆ ಮಾಡಿದ್ದರಿಂದ ಶಾಸಕರು, ಸಂಸದರು ಮತ್ತು ಜಿಲ್ಲಾಧಿಕಾರಿ ಕಾಮಗಾರಿ ಪರಿಶೀಲನೆ ನಡೆಸಿದ್ದಾರೆ. ಆದರೂ ಪ್ರಗತಿ ಕಂಡುಬರಲಿಲ್ಲ. ತಿರುವುಗಳಲ್ಲಿ ಗೊಂದಲವಾಗದಂತೆ ಬ್ಲಿಂಕರ್, ಬೆಳಕಿನ ವ್ಯವಸ್ಥೆ, ಫ್ಲೋರಸೆಂಟ್ ಸ್ಟಿಕ್ಕರ್ ಅಳವಡಿಸಬೇಕು ಎಂದು ಪ್ರಯಾಣಿಕರು ಆಗ್ರಹಿಸಿದ್ದಾರೆ. ಸಾಣೂರು ರಾಷ್ಟ್ರೀಯ ಹೆದ್ದಾರಿಯ ಹೊಸ ಸೇತುವೆ ಡಾಂಬರೀಕರಣ ಪೂರ್ಣಗೊಂಡಿದ್ದು ವಾಹನ ಚಲಾವಣೆಗೆ ಅವಕಾಶ ಕಲ್ಪಿಸಿಲ್ಲ. ರಸ್ತೆ ಕಾಮಗಾರಿ ನಡೆಯುವ ಅಕ್ಕಪಕ್ಕದಲ್ಲಿ ಮಣ್ಣು, ಕಬ್ಬಿಣದ ಸಾಮಗ್ರಿ ರಾಶಿ ಬಿದ್ದಿದೆ. ಇದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ತೊಂದರೆಯಾಗುತ್ತಿದೆ. ಪ್ರಾಣಿಗಳು ಹತ್ತಿರ ಹೋದರೆ ಕೊರಳಿಗೆ ಬೀಳುವ ಅಪಾಯವಿದೆ ಎನ್ನುತ್ತಾರೆ ಜನರು.ಕಾಮಗಾರಿ ಸಂದರ್ಭದಲ್ಲಿ ಸರ್ಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜಿನ ಕಾಂಕ್ರಿಟ್ ಪ್ರವೇಶದ್ವಾರ ಹಾಗೂ ಬಸ್ ಪ್ರಯಾಣಿಕರ ತಂಗುದಾಣ ಕಿತ್ತು ಹಾಕಿರುವ ಕಾರಣ ಸಾರ್ವಜನಿಕರು ಬಿಸಿಲಲ್ಲೇ ಕಾಯಬೇಕಾಗಿದೆ. ಮುರತಂಗಡಿ ಇರ್ವತ್ತೂರು ಜಂಕ್ಷನ್‌ನಲ್ಲಿ ಸರ್ವಿಸ್ ರಸ್ತೆ ಅಪೂರ್ಣವಾಗಿದೆ. ರಾತ್ರಿ ಹೈ ಮಾಸ್ಟ್ ದೀಪವಾದರೂ ಇರಬೇಕಿತ್ತು ಎಂಬುದು ವಾಹನ ಚಾಲಕರ ಆಗ್ರಹ. ಸಾಣೂರು ಪುಲ್ಕೆರಿ-ಬೈಪಾಸ್ ವೃತ್ತದ ಬಳಿಯೂ ಇದೇ ಸಮಸ್ಯೆ ಎನ್ನುತ್ತಾರೆ ಸ್ಥಳೀಯರು.


ಉದಯವಾಹಿನಿ ಚಿತ್ರ

**ಸಾಣೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬಾಕಿ ಉಳಿದಿರುವ ಕಾಮಗಾರಿಗಳನ್ನು ರಾಷ್ಟ್ರೀಯ ಹೆದ್ದಾರಿ ಇಲಾಖೆಯವರು ಆದಷ್ಟು ಬೇಗ ಪೂರ್ಣಗೊಳಿಸಿ ಸುರಕ್ಷತೆಗೆ ಆದ್ಯತೆ ನೀಡಬೇಕು. -ಸಾಣೂರು ನರಸಿಂಹ ಕಾಮತ್**

## ಅಕ್ರಮ, ಕರ್ತವ್ಯಲೋಪ: 8 ಉಪ ನೋಂದಣಾಧಿಕಾರಿಗಳ ಕಚೇರಿ ಮೇಲೆ ಲೋಕಾಯುಕ್ತ ದಾಳಿ: ಪರಿಶೀಲನೆ

• ಉದಯವಾಹಿನಿ ಕಾರವಾರ

ಅಕ್ರಮ, ಕರ್ತವ್ಯಲೋಪ ಎಸಗುತ್ತಿರುವ ದೂರುಗಳ ಹಿನ್ನೆಲೆಯಲ್ಲಿ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದ ಲೋಕಾಯುಕ್ತ ಪೊಲೀಸರು ಜಿಲ್ಲೆಯ 8 ಉಪ ನೋಂದಣಾಧಿಕಾರಿ ಕಚೇರಿಗಳ ಮೇಲೆ ದಾಳಿ ನಡೆಸಿ, ಪರಿಶೀಲನೆ ನಡೆಸಿದರು. ಕಾರವಾರ, ಮುಂಡಗೋಡ ಸೇರಿದಂತೆ ವಿವಿಧ ಉಪ ನೋಂದಣಾಧಿಕಾರಿ ಕಚೇರಿಗಳಲ್ಲಿ ಲೋಕಾಯುಕ್ತ ಎಸ್‌ಪಿ ಕುಮಾರಚಂದ್ರ ಸೂಚನೆ ಆಧರಿಸಿ ಡಿಎಸ್‌ಪಿ ಧನ್ಯಾ ನಾಯಕ ನೇತೃತ್ವದಲ್ಲಿ ಕಾರವಾರ, ಉಡುಪಿ ಸೇರಿ ರಾಜ್ಯದ ವಿವಿಧ ಜಿಲ್ಲೆಗಳ ಅಧಿಕಾರಿಗಳನ್ನು ಒಳಗೊಂಡ ತಂಡವು ಪ್ರತ್ಯೇಕವಾಗಿ ಪರಿಶೀಲನೆ ಕೈಗೊಂಡವು.

ಕಾರವಾರದಲ್ಲಿ ಜಿಲ್ಲಾ ನೋಂದಣಾಧಿಕಾರಿ ಫಣೀಂದ್ರ ಅವರನ್ನು ಉಡುಪಿ ಲೋಕಾಯುಕ್ತ ಡಿಎಸ್‌ಪಿ ಮಂಜುನಾಥ ಅವರು ವಿಚಾರಣೆ ನಡೆಸಿದರು. ಬಳಿಕ ಉಪ ನೋಂದಣಾಧಿಕಾರಿ, ಕಚೇರಿಯ ಸಿಬ್ಬಂದಿಯನ್ನು ವಿಚಾರಣೆ ನಡೆಸಲಾಯಿತು. ದಾಖಲೆಗಳ ಪರಿಶೀಲನೆ ನಡೆಸಿದ ಅಧಿಕಾರಿಗಳು, ಹಲವು ದಾಖಲೆಗಳನ್ನು ವಶಕ್ಕೆ ಪಡೆದರು. ಕಚೇರಿಗೆ ಬಂದಿದ್ದ ಸಾರ್ವಜನಿಕರಿಂದಲೂ ಅಭಿಪ್ರಾಯ ಸಂಗ್ರಹಿಸಿದ ಅಧಿಕಾರಿಗಳು ಸರ್ಕಾರ ನಿಗದಿಪಡಿಸಿದ ಶುಲ್ಕ ಮೀರಿ ಹಣ ಪಡೆಯಲಾಗುತ್ತಿದೆಯೇ ಎಂದು ಪ್ರಶ್ನಿಸಿದರು. ಉಪ ನೋಂದಣಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರ ಕೆಲಸಕ್ಕೆ ಲಂಚ ಪಡೆಯುತ್ತಿರುವ ದೂರು ಹೆಚ್ಚಿದ್ದವು. ಜೊತೆಗೆ ಜಮೀನು, ವಿವಾಹ ನೋಂದಣಿಯಲ್ಲಿ ಅಕ್ರಮ ಎಸಗುತ್ತಿರುವ ದೂರುಗಳು ಬಂದಿದ್ದವು.

ಲೋಕಾಯುಕ್ತ ಸಂಸ್ಥೆಯು ಈಗಾಗಲೆ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡಿದ್ದು, ಈ ಹಿಂದೆ ಅಂಕೋಲಾ ಮತ್ತು ಹೊನ್ನಾವರದಲ್ಲಿ ತಪಾಸಣೆ ನಡೆಸಲಾಗಿತ್ತು. ಮುಂದುವರಿದ ಭಾಗವಾಗಿ 8 ಉಪ ನೋಂದಣಾಧಿಕಾರಿ ಕಚೇರಿಗಳಲ್ಲಿ ಪರಿಶೀಲಿಸಲಾಯಿತು' ಎಂದು ಲೋಕಾಯುಕ್ತ ಡಿಎಸ್‌ಪಿ ಧನ್ಯಾ ನಾಯಕ ತಿಳಿಸಿದರು.


ಉದಯವಾಹಿನಿ ಚಿತ್ರ

## ಸಕ್ಕರೆ ಕಾರ್ಖಾನೆಗಳು ಉಳಿಯಬೇಕಾದರೆ, ರೈತರಿಗೆ ಸೂಕ್ತ ಬೆಲೆ ನೀಡಿ: ಬೆಳ್ಳುಬ್ಬಿ ಒತ್ತಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ ಕೊಲ್ಹಾರ

ರೈತರು ಬೆಳೆದಂತೆ ಬೆಳೆಗಳಿಗೆ ಸೂಕ್ತ ಬೆಲೆ ನೀಡಿ ಮುಂದೆ ಕಟಾವು ತಡವಾದರೆ ಬೆಳೆಯುವ ಕಬ್ಬು ಸರಿಯಾಗಿ ಬೆಳವಣಿಗೆ ಆಗೋದಿಲ್ಲ ನಷ್ಟ ಆಗುತ್ತದೆ. ಕಾರ್ಖಾನೆಗಳು ಉಳಿಯಬೇಕು ಅಂದ್ರೆ, ಸಂಕಷ್ಟದಲ್ಲಿರುವ ರೈತರ ಬೆಳೆದಂತ ಕಬ್ಬಿನ ದರ ಶೀಘ್ರದಲ್ಲಿ ನಿಗದಿಪಡಿಸಿ ಎಂದು ಮಾಜಿ ಸಚಿವ ಎಸ್ ಕೆ ಬೆಳ್ಳುಬ್ಬಿ ಸರ್ಕಾರಕ್ಕೆ ಒತ್ತಾಯಿಸಿದರು. ಪಟ್ಟಣದಲ್ಲಿ ಮಾಜಿ ಸಚಿವ ನೇತೃತ್ವದಲ್ಲಿ ಶ್ರೀ ದ್ಯಾಮವ್ವ ದೇವಿ ದೇವಸ್ಥಾನದಿಂದ ತಾಲೂಕು ದಂಡಾಧಿಕಾರಿ ಕಚೇರಿವರೆಗೆ ಪಾದಯಾತ್ರೆ ಮೂಲಕ ಆಗಮಿಸಿ ತಾಲ್ಲೂಕು ದಂಡಾಧಿಕಾರಿ ಮೂಲಕ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯವರಿಗೆ ಮನವಿ ಸಲ್ಲಿಸಿ ಮಾತನಾಡಿದವರು, ಮಳೆ ಹಾನಿಗೆ ಸಿಲುಕಿರುವ ಬೆಳೆಗಳ ಪರಿಹಾರ ಘೋಷಣೆಗೊಳಿಸಿ ಮತ್ತು 3500 ದರ ಕಬ್ಬಿಗೆ ಸೂಕ್ತ ಬೆಂಬಲ ಬೆಲೆಯನ್ನು ರೈತರ ಬೇಡಿಕೆಯಂತೆ ಈ ಕೂಡಲೇ ನೀಡಲು ಆದೇಶಿಸಬೇಕು ಹಾಗೂ ಆಯುರ್ವೇದ ಮತ್ತು ಸಾವಯುವ ಕೃಷಿಯಲ್ಲಿ ಕ್ರಾಂತಿಯನ್ನು ಮಾಡುತ್ತಿರುವ ರಾಷ್ಟ್ರೀಯ ಸಂತ ಶ್ರೀ ಅದೃಷ್ಟ ಕಾಡಸಿದ್ದೇಶ್ವರ ಕಣ್ಣೇರಿ ಮಠ ಸ್ವಾಮೀಜಿಗಳಿಗೆ ವಿಜಯಪುರ ನಗರವನ್ನು ಪ್ರವೇಶಿಸದಂತೆ ಹಾಕಿರುವ ನಿರ್ಬಂಧನೆಯನ್ನು ಈ ಕೂಡಲೆ ತೆರುವುಗೊಳಿಸಬೇಕೆಂದು ಒತ್ತಾಯಿಸಿ, ರೈತರ ಬೇಡಿಕೆಯಾಗಿರುವ ಸೂಕ್ತ ಬೆಲೆಯನ್ನು ನಿಗದಿಪಡಿಸಿ,ಇಲ್ಲವಾದಲ್ಲಿ ರಾಷ್ಟ್ರೀಯ ಹೆದ್ದಾರಿ ತಡೆದು ಉಗ್ರವಾದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ಮೂಲಕ ತಿಳಿಸಿದರು. ವಿರೂಪಾಕ್ಷ ಕೂಲಕಾರ, ಪುಂಡಲಿಕ್ ಬಾಟಿ, ಪ್ರಶಾಂತ್ ಪವಾರ್, ಶ್ರೀಶೈಲ ಗೌಡ್ ಬಿರಾದರ್, ಶಿವಪ್ಪ ಹಂಗರಗಿ ಇದ್ದರು.

## ಬಾಲಕರ ವಸತಿನಿಲಯಕ್ಕೆ ಸೌಕರ್ಯಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ

• ಉದಯವಾಹಿನಿ ಶಿಗ್ಗಾವಿ

ಪಟ್ಟಣದಲ್ಲಿರುವ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಮೂಲಭೂತ ಸೌಕರ್ಯ ನೀಡುವಂತೆ ಆಗ್ರಹಿಸಿ ವಿದ್ಯಾರ್ಥಿಗಳು ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಕಚೇರಿಗಳ ಸಂಕೀರ್ಣದ ಮುಂದೆ ಪ್ರತಿಭಟನೆ ನಡೆಸಿ ಶಿರಸ್ತೇದಾರ್ ವಿಶ್ವನಾಥ್ ತತ್ತಿ ಅವರಿಗೆ ಮನವಿ ಸಲ್ಲಿಸಿದರು. ಪಟ್ಟಣದಲ್ಲಿನ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ ಕಳೆದ 13 ವರ್ಷಗಳಿಂದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ. ಅದರಲ್ಲಿ ಸುಮಾರು 170 ವಿದ್ಯಾರ್ಥಿಗಳಿದ್ದಾರೆ. ಈವರೆಗೆ ಮೂಲಭೂತ ಸೌಕರ್ಯಕ್ಕಾಗಿ ಪರದಾಡುತ್ತಿದ್ದಾರೆ.

ವಸತಿ ನಿಲಯದಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಬೆಡ್, ಕಾಟುಗಳು ಇಲ್ಲ. ಊಟದ ಹಾಲ್ ಅತೀ ಚಿಕ್ಕದಾಗಿದೆ. ಇಲ್ಲ ವಿದ್ಯಾರ್ಥಿಗಳಿಗೆ ಕುಳಿತುಕೊಳ್ಳಲು ಸಾಧ್ಯವಿಲ್ಲ. ಅಲ್ಲದೆ ಈವರೆಗೆ ಕಂಪ್ಯೂಟರ್ ಲ್ಯಾಬ್ ಇಲ್ಲ. ಸದ್ಯ ನಿರ್ಮಾಣವಾಗುತ್ತಿರುವ ಹಾಸ್ಟೆಲ್ ಕಟ್ಟಡವು ಪಟ್ಟಣದಿಂದ ಸುಮಾರು 7 ಕಿ.ಮೀ ಅಂತರದಲ್ಲಿದೆ. ಅದರಲ್ಲೂ ಅದನ್ನು ಗುಡ್ಡದಲ್ಲಿ ನಿರ್ಮಾಣ ಮಾಡುತ್ತಿದ್ದಾರೆ. ಅದರ ಮುಂದೆ ಸ್ಮಶಾನವಿದೆ. ಅದರಿಂದ ವಿದ್ಯಾರ್ಥಿಗಳು ಭಯಪಡುವಂತಾಗಿದೆ. ಅಲ್ಲದೆ ಕಾಡು, ಅರಣ್ಯ ಪ್ರದೇಶವಿರುವ ಕಾರಣ ಪ್ರಾಣಿಗಳ ಹಾವಳಿ ಇದೆ. ಹೀಗಾಗಿ ತಕ್ಷಣ ಸ್ಥಳ ಬದಲಾವಣೆ ಮಾಡಿ ನೂತನ ವಸತಿ ನಿಲಯದ ಕಟ್ಟಡ ನಿರ್ಮಾಣ ಮಾಡಬೇಕು ಎಂದು ಪ್ರತಿಭಟನಾ ನಿರತ ವಿದ್ಯಾರ್ಥಿಗಳು ಆಗ್ರಹಿಸಿದರು. ಶಿರಸ್ತೇದಾರ್ ವಿಶ್ವನಾಥ್ ತತ್ತಿ ಭೇಟಿ ನೀಡಿ ಮಾತನಾಡಿ, ಪ್ರಸ್ತುತ ಇರುವ ಹಾಸ್ಟೆಲ್‌ನಲ್ಲಿ ಕಾಟು, ಊಟದ ಹಾಲ್, ಕಂಪ್ಯೂಟರ್ ಲ್ಯಾಬ್ ವ್ಯವಸ್ಥೆ ಮಾಡುತ್ತೇವೆ. ಆದರೆ ಈಗಾಗಲೇ ಸರ್ಕಾರದಿಂದ ಮಂಜೂರಿಯಾದ ಹಾಸ್ಟೆಲ್ ಕಟ್ಟಡವು ನಿರ್ಮಾಣದ ಹಂತದಲ್ಲಿದ್ದು ಅದನ್ನು ಬದಲಿಸಲು ಸರ್ಕಾರದ ಮಟ್ಟದಲ್ಲಿ ಅಧಿಕಾರಿಗಳು ಪ್ರಯತ್ನ ಮಾಡುತ್ತಾರೆ. ಅದಕ್ಕೆ ಇನ್ನೂ ಕಾಲಾವಕಾಶ ಬೇಕು. ಉಳಿದ ಸೌಕರ್ಯಕ್ಕಾಗಿ ವ್ಯವಸ್ಥೆ ಮಾಡಿಸುತ್ತೇನೆ ಎಂದು ಸೂಕ್ತ ಭರವಸೆ ನೀಡಿದರೂ ಸಹ ಅದಕ್ಕೆ ಒಪ್ಪದ ವಿದ್ಯಾರ್ಥಿಗಳು ಪ್ರತಿಭಟನೆಯನ್ನು ಮುಂದುವರೆಸಿದರು.


ಉದಯವಾಹಿನಿ ಚಿತ್ರ

**ವಿದ್ಯಾರ್ಥಿಗಳಿಗೆ ಈಗಾಗಲೇ ಶಿರಸ್ತೇದಾರ್ ವಿಶ್ವನಾಥ್ ತತ್ತಿ ಎಲ್ಲಾ ತಿಳಿಸಿದ್ದಾರೆ. ಅದರಂತೆ ಕೆಲವು ಸೌಲಭ್ಯಗಳನ್ನು ಸದ್ಯ ಇರುವ ಕಟ್ಟಡದಲ್ಲಿ ವಾರದಲ್ಲಿ ನೀಡುತ್ತೇವೆ. ಪಟ್ಟಣದಲ್ಲಿ ಹಳೆ ಬಸ್ ನಿಲ್ದಾಣದ ಎದುರು ಇರುವ ಸ.ನಂ. 220/ಬ ಕ್ಷೇತ್ರ 29 ಗುಂಟೆ ತಾಲ್ಲೂಕು ಪಂಚಾಯಿತಿ ಧರ್ಮಶಾಲೆ ಖುಲ್ಲಾ ಜಾಗೆ ಅಥವಾ ತಾಲ್ಲೂಕು ಪಂಚಾಯಿತಿ ವ್ಯಾಪ್ತಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯದ ಪಕ್ಕದಲ್ಲಿ ಅಥವಾ ಎದುರುಗಡೆ ಇರುವ ನಿವೇಶನ ಹಾಗೂ ಶಿಗ್ಗಾವಿ ಪುರಸಭೆ ವ್ಯಾಪ್ತಿ ನಾಗರಿಕ ಸೌಲಭ್ಯಕ್ಕೆ ಮೀಸಲಿಟ್ಟ ನಿವೇಶನಗಳನ್ನು ಪಡೆಯಲು ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಲಾಗುವುದು. ಸರ್ಕಾರ ಅನುಮತಿ ನಂತರ ಪಟ್ಟಣದಲ್ಲಿಯೇ ಮೆಟ್ರಿಕ್ ನಂತರದ ವಸತಿ ನಿಲಯದ ಕಟ್ಟಡವನ್ನು ನಿರ್ಮಿಸಿ ಕೊಡುತ್ತೇವೆ ಎಂಬ ಭರವಸೆ ನೀಡಿದ ನಂತರ ವಿದ್ಯಾರ್ಥಿಗಳು ವಿಷಯಕ್ಕೆ ಸಂಬಂಧಿಸಿದಂತೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಸರಸ್ವತಿ ಗಜಕೋಶ ಅವರಿಂದ ಲಿಖಿತ ರೂಪದಲ್ಲಿ ಬರೆಯಿಸಿಕೊಂಡು ಪ್ರತಿಭಟನೆ ಹಿಂಪಡೆದರು. -ಪ್ರಶಾಂತ್ ವಾರಗಪ್ಪನವರ, ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ**

## ತ್ಯಾಜ್ಯದಿಂದ ತುಂಬಿದ ಪುಷ್ಕರಣಿ,ಹಳ್ಳ: ಬನಶಂಕರಿ ದರ್ಶನಕ್ಕೆ ಬರುವ ಭಕ್ತರ ಪರದಾಟ

• ಉದಯವಾಹಿನಿ ಬಾದಾಮಿ

ಉತ್ತರ ಕರ್ನಾಟಕದ ಪವಿತ್ರ, ಪುಣ್ಯ ಕ್ಷೇತ್ರವಾದ ಆದಿಶಕ್ತಿ ದೇವತೆ ಬನಶಂಕರಿ ದೇವಾಲಯದ ಪರಿಸರದಲ್ಲಿ ಹರಿದ್ರಾತೀರ್ಥ ಪುಷ್ಕರಣಿ ಮತ್ತು ಸರಸ್ವತಿ ಹಳ್ಳದಲ್ಲಿ ತ್ಯಾಜ್ಯವು ಭರ್ತಿಯಾಗಿ ಹಳ್ಳದ ನೀರು ಕಪ್ಪಾಗಿ ಸುತ್ತ ದುರ್ವಾಸನೆ ಹರಡಿದೆ.

ಹರಿದ್ರಾತೀರ್ಥ ಪುಷ್ಕರಣಿ ಮತ್ತು ಸರಸ್ವತಿ ಹಳ್ಳವನ್ನು ಭರ್ತಿಮಾಡಲು ಮಲಪ್ರಭಾ ಎಡದಂಡೆ ಕಾಲುವೆಯಿಂದ ನೀರು ಬಿಡಲಾಗಿದೆ. ಕಾಲುವೆ ನೀರಿನ ಜೊತೆಗೆ ಬಾದಾಮಿ ಚರಂಡಿ ನೀರು ಹರಿದು ಹಳ್ಳದ ನೀರು ಕಪ್ಪಾಗಿ ಹರಿಯುತ್ತಿದೆ. ಕೆಲವು ಭಕ್ತರು ಸರಸ್ವತಿ ಹಳ್ಳದಲ್ಲಿ ಸ್ನಾನ ಮಾಡುವುದು ಕಂಡು ಬಂದಿತು. ಬನಶಂಕರಿ ದೇವಾಲಯದ ಎದುರಿಗೆ ವಿಶಾಲವಾದ ಹರಿದ್ರಾತೀರ್ಥ ಪುಷ್ಕರಣಿ ಕಾಲುವೆ ನೀರಿನಿಂದ ಭರ್ತಿಯಾಗಿದೆ. ಮೆಟ್ಟಿಲುಗಳ ಮೇಲೆ ಪ್ಲಾಸ್ಟಿಕ್ ಬಾಟಲ್, ಬಟ್ಟೆ, ಕಸ ಹರಡಿದೆ. ಆಗ್ನೆಯ ದಿಕ್ಕಿನಲ್ಲಿ ತ್ಯಾಜ್ಯ ತುಂಬಿ ಸುತ್ತ ದುರ್ವಾಸನೆ ಹರಡಿದೆ. ಸರಸ್ವತಿ ಹಳ್ಳದ ನೀರು ಸಂಪೂರ್ಣವಾಗಿ ಕಪ್ಪಾಗಿ ಹರಿಯುತ್ತಿದೆ. ನೀರಾವರಿ ಕಾಲುವೆ ನೀರಿನ ಜೊತೆಗೆ ಬಾದಾಮಿ ಚರಂಡಿ ನೀರು ಹಳ್ಳಕ್ಕೆ ಸೇರುವುದರಿಂದ ನೀರು ಕಪ್ಪಾಗಿ ಹರಿಯುತ್ತಿದೆ. ಭಕ್ತರಿಗೆ ಗೊತ್ತಿರದೇ ಕೆಲವರು ಇಲ್ಲಿ ಸ್ನಾನ ಮಾಡುವರು.


ಉದಯವಾಹಿನಿ ಚಿತ್ರ

**ನಾವು ಪ್ರತಿ ಹುಣ್ಣಿಮೆಗೆ ದೇವಾಲಯಕ್ಕೆ ಬರುತ್ತೇವೆ. ಜಾತ್ರೆಯಲ್ಲಿ ಇದ್ದ ತ್ಯಾಜ್ಯವನ್ನು ಇನ್ನೂ ತೆಗೆದಿಲ್ಲ. ಹರಿದ್ರಾತೀರ್ಥ ಪುಷ್ಕರಣಿ ಮತ್ತು ಸರಸ್ವತಿ ಹಳ್ಳದಲ್ಲಿ ದುರ್ವಾಸನೆ ಹರಡಿದೆ. ಪುಣ್ಯ ಕ್ಷೇತ್ರವು ಸ್ವಚ್ಛವಾಗಿರಬೇಕು. -ಮಲ್ಲನಗೌಡ ಪಾಟೀಲ, ಭಕ್ತ**

## ಪಂಚಾಯಿತಿ ಮೂಲಕ ಮಳಿಗೆಗೆ ಅನುಮತಿ

• ಉದಯವಾಹಿನಿ ವಿಟ್ಲ

ಪಟ್ಟಣ ಪಂಚಾಯತಿ ತಿಂಗಳ ಸಾಮಾನ್ಯ ಸಭೆಯಲ್ಲಿ ಇಲ್ಲಿನ ಪಂಚಲಿಂಗೇಶ್ವರ ದೇವರ ಕಾಲಾವಧಿ ಜಾತ್ರೆಯ ತಾತ್ಕಾಲಿಕ ಮಳಿಗೆಗಳ ಏಲಂ ಬದಲು ಪಂಚಾಯತಿಯಿಂದ ನೇರ ಅನುಮತಿ ನೀಡುವ ನಿರ್ಣಯ ಕೈಗೊಳ್ಳಲಾಯಿತು.

ಅಧ್ಯಕ್ಷ ಕರುಣಾಕರ ನಾಯೊಟ್ಟು ಈ ವಿಷಯ ಪ್ರಸ್ತಾಪಿಸಿದಾಗ ಸದಸ್ಯರು ಅಂಗೀಕರಿಸಿ ನಿರ್ಣಯ ಕೈಗೊಳ್ಳುವಂತೆ ಸೂಚಿಸಿದರು. ಪ್ರತಿ ಸಲ ಜಾತ್ರೆಯ ಮಳಿಗೆಗಳ ಏಲಂ ಸಮಸ್ಯೆ ಸೃಷ್ಟಿಸುತ್ತದೆ. ಅದಕ್ಕಾಗಿ ಮಳಿಗೆಗಳಿಗೆ ಪಂಚಾಯತಿಯಿಂದ ನೇರವಾಗಿ ಅನುಮತಿ ಪಡೆದು ಪಂಚಾಯತಿಯೇ ವ್ಯವಸ್ಥೆ ನೋಡಿಕೊಳ್ಳುವಂತೆ ಆಗಲಿ ಎಂದು ಒತ್ತಾಯಿಸಿದರು.

'ಬಸ್ ನಿಲುಗಡೆ' ಎಂಬ ನಾಮಫಲಕ ಹಾಕಿರುವ ಸ್ಥಳದಲ್ಲಿ ದ್ವಿಚಕ್ರ ಮತ್ತು ಇತರ ವಾಹನಗಳನ್ನು ನಿಲ್ಲಿಸಿ ಬಸ್ ನಿಲುಗಡೆ ತಡೆ ಒಡ್ಡುತ್ತಾರೆ ಎಂದು ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು. ಪೊಲೀಸ್ ಹೆಡ್ ಕಾನ್‌ಸ್ಟೆಬಲ್ ಹರೀಶ್ ಮಾತನಾಡಿ, ಪೊಲೀಸ್ ಇಲಾಖೆಯ ಸಹಕಾರ ಸದಾ ಇದೆ. ಟ್ರಾಫಿಕ್ ನಿಯಮ ಉಲ್ಲಂಘನೆ ಆದದ್ದು ಗಮನಕ್ಕೆ ಬಂದರೆ ತಕ್ಷಣ ಕ್ರಮ ಕೈಗೊಳ್ಳಲಾಗುವುದು. ಸದಸ್ಯರು ತಮ್ಮ ವಾರ್ಡ್‌ಗಳಲ್ಲಿ ಟ್ರಾಫಿಕ್ ಅವ್ಯವಸ್ಥೆ, ಅಕ್ರಮ ಚಟುವಟಿಕೆ, ಅಪರಾಧ ಕೃತ್ಯಗಳ ಕುರಿತು ಗಮನಕ್ಕೆ ತನ್ನಿ ಎಂದರು.


ಉದಯವಾಹಿನಿ ಚಿತ್ರ

# ಜಿಲ್ಲಾಕೇಂದ್ರದಲ್ಲಿ ಬೀದಿ ನಾಯಿಗಳ ಹಾವಳಿ: ಸಾರ್ವಜನಿಕರು ಪರದಾಟ

### ಶಾಲೆಗಳು ಹಾಗೂ ಅಂಗನವಾಡಿಗಳ ಸುತ್ತಲೂ ಇದೇ ಪರಿಸ್ಥಿತಿ ನಿರ್ಮಾಣವಾಗಿದ್ದು ಮಕ್ಕಳಿಗೆ ನಾಯಿ ಕಚ್ಚಿದರೆ ಹೇಗೆ ಎನ್ನುವ ಆತಂಕ

• ಉದಯವಾಹಿನಿ ಕೊಪ್ಪಳ

ಜಿಲ್ಲಾ ಕೇಂದ್ರದಲ್ಲಿ ಜನನಿಬಿಡ ಪ್ರದೇಶದಲ್ಲಿ ಬೀದಿನಾಯಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಪರದಾಡುವಂತಾಗಿದೆ. ನಗರಸಭೆ ಸಮೀಪ, ಮಾರುಕಟ್ಟೆ ಪ್ರದೇಶ, ಸಾಲರಜಂಗ್ ರಸ್ತೆ, ಸಿಂಪಿಲಿಂಗಣ್ಣ ರಸ್ತೆ, ಲೇಬರ್ ವೃತ್ತ, ಗಂಜ್ ಸರ್ಕಲ್, ಜವಾಹರ ರಸ್ತೆ ಹಾಗೂ ಗವಿಮಠದ ಆವರಣ ಹೀಗೆ ಅನೇಕ ಕಡೆ ನಾಯಿಗಳ ಹಾವಳಿ ಹೆಚ್ಚಾಗಿದೆ. ಶಾಲೆಗಳು ಹಾಗೂ ಅಂಗನವಾಡಿಗಳ ಸುತ್ತಲೂ ಇದೇ ಪರಿಸ್ಥಿತಿ ನಿರ್ಮಾಣವಾಗಿದ್ದು ಮಕ್ಕಳಿಗೆ ನಾಯಿ ಕಚ್ಚಿದರೆ ಹೇಗೆ ಎನ್ನುವ ಆತಂಕ ಪೋಷಕರನ್ನು ಕಾಡುತ್ತಿದೆ.

ಬೀದಿನಾಯಿಗಳು ಕಳೆದ ವರ್ಷ ಎರಡು ದಿನಗಳಲ್ಲಿ ಆರು ಜನರ ಮೇಲೆ ದಾಳಿ ಮಾಡಿವೆ. ಇದರಲ್ಲಿ ಮಕ್ಕಳೂ ಸೇರಿದ್ದರು. ಕನಕಗಿರಿ ಓಣಿಯಲ್ಲಿ ಐದು ವರ್ಷದ ಮಗುವಿನ ಕಿವಿಯ ಹಿಂಭಾಗ, ಕುತ್ತಿಗೆ ಬಳಿ ನಾಯಿ ಕಚ್ಚಿತ್ತು. ಶಾಲೆಗೆ ಹೊರಟಿದ್ದ ಘಟನೆ ನಡೆದಿದ್ದರಿಂದ ಬಾಲಕನ ಸಮವಸ್ತ್ರ ರಕ್ತವಾಗಿತ್ತು. ಮೂರು ವರ್ಷಗಳ ಹಿಂದೆ ಸಜ್ಜಿ ಹೊಲ ಓಣಿಯ ನಿವಾಸಿ ಮುತ್ತು ಭೀಮಪ್ಪ ಎಂಬುವರ ನಾಲ್ಕು ವರ್ಷದ ಪುತ್ರ ಪುರುಷೋತ್ತಮ ನಾಯಿ ಕಡಿತಕ್ಕೆ ಒಳಗಾಗಿದ್ದರು. ಅವರಿಗ ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಚಿಕಿತ್ಸೆ ಕೊಡಿಸಲಾಗಿತ್ತು. ಬೀದಿನಾಯಿಗಳ ನಿರ್ವಹಣೆ ಹೊಣೆ ಹೊತ್ತಿರುವ ಇಲ್ಲಿನ ನಗರಸಭೆ ಹಲವು ದಿನಗಳ ಹಿಂದೆ ಸಂತಾನ ಶಕ್ತಿ ಹರಣ ಶಸ್ತ್ರಚಿಕಿತ್ಸೆಯನ್ನು ಸಂಬಂಧಿಸಿದ ಇಲಾಖೆ ಮೂಲಕ ಆರಂಭಿಸಿತ್ತು. ಇತ್ತೀಚೆಗೆ ಅದು ಸ್ಥಗಿತವಾಗಿದೆ.


ಉದಯವಾಹಿನಿ ಚಿತ್ರ

**ಅನೇಕ ಕಡೆ ನಾಯಿಗಳ ಹಾವಳಿ**

**ಉಪಲೋಕಾಯುಕ್ತರಿಂದಲೂ ಸೂಚನೆ**

**ಜಿಲ್ಲಾಕೇಂದ್ರಕ್ಕೆ ಇತ್ತೀಚೆಗೆ ಭೇಟಿ ನೀಡಿದ್ದ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಅವರು ನಾಯಿಗಳನ್ನು ಎರಡು ತಿಂಗಳೊಳಗೆ ಸ್ಥಳಾಂತರಿಸಬೇಕು ಎಂದು ನಗರಸಭೆ ಅಧಿಕಾರಿಗಳಿಗೆ ಸೂಚಿಸಿದ್ದರು. ಈ ಕುರಿತು ಸುಪ್ರೀಂ ಕೋರ್ಟ್ ಆದೇಶವಿದೆ. ತ್ವರಿತವಾಗಿ ಕ್ರಮ ವಹಿಸಬೇಕು ಎಂದು ಹೇಳಿದ್ದರು.**

ನಿತ್ಯ ಸಾವಿರಾರು ಸಂಖ್ಯೆಯಲ್ಲಿ ಭೇಟಿ ನೀಡುವ ಇಲ್ಲಿನ ಪ್ರಸಿದ್ಧ ಗವಿಸಿದ್ದೇಶ್ವರ ಮಠದ ಆವರಣದಲ್ಲಿ ಸಾಕಷ್ಟು ಬೀದಿ ನಾಯಿಗಳು ಬೀಡುಬಿಟ್ಟಿದ್ದವು. ಜಿಲ್ಲೆ ಮತ್ತು ಹೊರಜಿಲ್ಲೆಗಳಿಂದ ಗವಿಮಠಕ್ಕೆ ಭೇಟಿ ನೀಡುವ ಭಕ್ತರು ನೀಡುವ ಆಹಾರವನ್ನೂ ನೆಚ್ಚಿಕೊಂಡು ಸಾಕಷ್ಟು ನಾಯಿಗಳು ಅಲ್ಲಿಗೆ ಬರುತ್ತಿವೆ. ಇವು ಏಕಾಏಕಿ ದಾಳಿ ನಡೆಸಿದರೆ ಹೇಗೆ ಎಂದು ಸಾರ್ವಜನಿಕರು ಪ್ರಶ್ನಿಸುತ್ತಾರೆ. ನಾಯಿಗಳ ಹಾವಳಿ ಕುರಿತು ಎಸ್‌ಡಿಪಿಐ ಪಕ್ಷದ ಪ್ರಮುಖರು ನಗರಸಭೆ ಹಿಂದಿನ ಅಧ್ಯಕ್ಷ ಸುರೇಶ ಬಬಲಾದಿ ಅವರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಕ್ರಮ ವಹಿಸಿರಲಿಲ್ಲ. ಹಿಂದಿನ ಆಯುಕ್ತರಿಗೆ ಬೀದಿನಾಯಿಗಳ ಹಾವಳಿ ಕುರಿತು ಲಿಖಿತವಾಗಿಯೇ ದೂರು ಕೊಟ್ಟಿದ್ದೇವೆ. ಸಾಮಾಜಿಕ ತಾಣದಲ್ಲಿಯೂ ಸಮಸ್ಯೆಯನ್ನು ಹಂಚಿಕೊಂಡಿದ್ದೇವೆ. ಆದರೂ ಕ್ರಮವಾಗಿಲ್ಲ' ಎಂದು ಹೇಳಿದರು.

**ಬೀದಿ ನಾಯಿಗಳಿಗೆ ರೇಬಿಸ್ ಲಸಿಕೆ ಹಾಕಿಸಲಾಗುತ್ತಿದ್ದು, ಸಂತಾನ ಶಕ್ತಿ ಹರಣ ಶಸ್ತ್ರಚಿಕಿತ್ಸೆಗೂ ಕ್ರಮ ವಹಿಸಲಾಗಿದೆ. ಜನರಿಗೆ ತೊಂದರೆಯಾಗದಂತೆ ನೋಡಿಕೊಳ್ಳುವೆ. -ವೆಂಕಟೇಶ್ ನಾಗನೂರು, ನಗರಸಭೆ ಪೌರಾಯುಕ್ತ**

**ಬೀದಿನಾಯಿಗಳು ಹಿಂದೆ ಮಕ್ಕಳ ಮೇಲೆ ದಾಳಿ ಮಾಡಿ ಗಾಯಗೊಳಿಸಿವೆ. ಮತ್ತೆ ಅದೇ ಸಮಸ್ಯೆ ಆಗಬಾರದು. ಈಗಲೇ ಎಚ್ಚರ ವಹಿಸಬೇಕು. -ಸಲೀಂ ಖಾದ್ರಿ, ಕೊಪ್ಪಳ ವಿಧಾನಸಭಾ ಕ್ಷೇತ್ರದ ಎಸ್‌ಡಿಪಿಐ ಅಧ್ಯಕ್ಷ**

## ಮಿನಿ ನ್ಯೂಸ್

### ಸೋಮಾರಿತನ ಇದ್ದರೆ ಸಾಧನೆ ಸಾಧ್ಯವಿಲ್ಲ: ನಿರ್ಮಲಾನಂದನಾಥ ಸ್ವಾಮೀಜಿ

• ಉದಯವಾಹಿನಿ ಶಿವಮೊಗ್ಗ

ಸೋಮಾರಿತನ ಇದ್ದರೆ ಏನನ್ನೂ ಮಾಡಲು ಸಾಧ್ಯವಿಲ್ಲ. ನಾವು ಎಷ್ಟೇ ಓದಿರಲಿ, ಏನೇ ಸಾಧನೆ ಮಾಡಿರಲಿ, ನಮ್ಮಲ್ಲಿ ಸೋಮಾರಿತನ ಜೊತೆಗೂಡಿದಾಗ ಏನನ್ನೂ ಮಾಡಲು ಸಾಧ್ಯವಿಲ್ಲ' ಎಂದು ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದರು.

ಇಲ್ಲಿನ ಆದಿಚುಂಚನಗಿರಿ ಶಾಖಾಮಠದ ಸಮುದಾಯಭವನದಲ್ಲಿ ಗುರುವಾರ ಆಯೋಜಿಸಿದ್ದ 35ನೇ ವಾರ್ಷಿಕೋತ್ಸವದ ಎರಡನೇ ದಿನದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಾಧನೆ ಸಿಗಬೇಕೆಂದರೆ ಸೋಮಾರಿತನ ಕೈಬಿಟ್ಟು, ಬದ್ಧತೆ ಹಾಗೂ ಛಲ ಬೆಳೆಸಿಕೊಳ್ಳಬೇಕು. ಅದಕ್ಕೆ ಸಾಕಷ್ಟು ನಿದರ್ಶನಗಳು ಕಾಣಸಿಗುತ್ತವೆ' ಎಂದರು.

ಆದಿಚುಂಚನಗಿರಿ ಮಹಾಸಂಸ್ಥಾನ ಆರಂಭಗೊಂಡು 50 ವರ್ಷಗಳು ಉರುಳಿವೆ. ಮಠ ಕೇವಲ ಸಮಾಜದ ಕಾರ್ಯಕ್ಕೆ ಸೀಮಿತವಾಗದೇ, ಮಕ್ಕಳಿಗೆ ಅತ್ಯುತ್ತಮ ಶಿಕ್ಷಣ ನೀಡಿ ರಾಜ್ಯದಾದ್ಯಂತ ಲಕ್ಷಾಂತರ ಸಾಧಕರನ್ನು ಹೊರತಂದಿದೆ' ಎಂದರು. ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಮೊದಲ ಬಾರಿಗೆ ಕೃಷಿ ವಿಜ್ಞಾನ ಕಾಲೇಜು ಆರಂಭಿಸಿದ್ದು, ಅದರ ಮೂಲಕ ನಿರಂತರ ಕೃಷಿ ಸಂಶೋಧನೆಗಳನ್ನು ಕೈಗೊಂಡಿದೆ. ಯಾರೇ ಆಗಲಿ ಸಮಾಜದ ಒಂದು ಮಟ್ಟದಲ್ಲಿ ಗುರುತಿಸಿಕೊಳ್ಳುವ ಜೊತೆಗೆ ಶಿಕ್ಷಣ, ಆರೋಗ್ಯ ಹಾಗೂ ಗ್ರಾಮೀಣ ಭಾಗದ ಮೂಲ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸಬೇಕು' ಎಂದು ಹೇಳಿದರು.

### ಬಡ ಜನರಿಗೆ ಸರ್ಕಾರಿ ಆಸ್ಪತ್ರೆಗಳೇ ಆಧಾರ: ಶಾಸಕ ಸಿ.ಸಿ. ಪಾಟೀಲ

• ಉದಯವಾಹಿನಿ ರೋಣ

ಬಡ ಜನತೆಯ ಆರೋಗ್ಯ ರಕ್ಷಣೆಯಲ್ಲಿ ಸರ್ಕಾರಿ ಆಸ್ಪತ್ರೆ ಹಾಗೂ ವೈದ್ಯರ ಪಾತ್ರ ಪ್ರಮುಖವಾಗಿದೆ. ಆಧುನಿಕ ದಿನಮಾನಗಳಲ್ಲಿ ಚಿಕಿತ್ಸೆ ದುಬಾರಿಯಾಗುತ್ತಿದ್ದು, ಬಡ ಜನತೆಗೆ ಸರ್ಕಾರಿ ಆಸ್ಪತ್ರೆಗಳ ಆಧಾರವಾಗಿವೆ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು. ತಾಲ್ಲೂಕಿನ ಹೊಳೆಆಲೂರು ಗ್ರಾಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ವತಿಯಿಂದ ನಿರ್ಮಿಸಲಾದ ನೂತನ ಸಮುದಾಯ ಆರೋಗ್ಯ ಕೇಂದ್ರ ಉದ್ಘಾಟಿಸಿ ಮಾತನಾಡಿದರು.

ರೋಗಿಗಳು ಉತ್ತಮ ಚಿಕಿತ್ಸೆ ಪಡೆದಾಗ ಮಾತ್ರ ಸುಸಜ್ಜಿತ ಆಸ್ಪತ್ರೆ ನಿರ್ಮಾಣ ಮಾಡಿದ ಸರ್ಕಾರದ ಉದ್ದೇಶ ಸಾರ್ಥಕವಾಗುತ್ತದೆ. ನಾನು ಸಚಿವನಿದ್ದ ಸಂದರ್ಭದಲ್ಲಿ ನರಗುಂದ ಪಟ್ಟಣದ ಸರ್ಕಾರಿ ಆಸ್ಪತ್ರೆಯನ್ನು ನೂರು ಹಾಸಿಗೆಗಳ ಆಸ್ಪತ್ರೆ ಹಾಗೂ ಹೊಳೆ ಆಲೂರಿನ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೆ ಏರಿಸಲಾಗಿದೆ ಎಂದರು. ಹೊಳೆಆಲೂರು ಗ್ರಾಮದಲ್ಲಿ ನಿರ್ಮಾಣಗೊಂಡ ಬಹುತೇಕ ಹೊಸ ಕಟ್ಟಡಗಳು ನನ್ನ ಅವಧಿಯ ಕೊಡುಗೆಗಳಾಗಿವೆ. ಪ್ರವಾಹ ಸಂದರ್ಭದಲ್ಲಿ ಅಂದಿನ ಮುಖ್ಯಮಂತ್ರಿ ಯಡಿಯೂರಪ್ಪ ಅವರ ನೇತೃತ್ವದಲ್ಲಿ ಪ್ರವಾಹ ಪರಿಸ್ಥಿತಿ ಸಮರ್ಥವಾಗಿ ನಿರ್ವಹಿಸಿದ ತೃಪ್ತಿ ನನಗಿದೆ' ಎಂದರು.

### ಮಹಾರಾಷ್ಟ್ರ ಮಾದರಿಯಲ್ಲಿ ಕಬ್ಬು ಖರೀದಿಗೆ ಆಗ್ರಹ

• ಉದಯವಾಹಿನಿ ನರಗುಂದ

ರಾಜ್ಯ ಸರ್ಕಾರ ಮಹಾರಾಷ್ಟ್ರ ಮಾದರಿಯಲ್ಲಿ ಕಬ್ಬು ಖರೀದಿಗೆ ಬೆಲೆ ನಿಗದಿ ಮಾಡಬೇಕು ಎಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಅಧ್ಯಕ್ಷ ಉಮೇಶ ಮರ್ಚಪ್ಪನವರ ಆಗ್ರಹಿಸಿದರು.

ಪಟ್ಟಣದ ಮಿನಿ ವಿಧಾನಸೌಧದಲ್ಲಿ ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆ ತಾಲ್ಲೂಕು ಘಟಕದ ವತಿಯಿಂದ ತಹಶೀಲ್ದಾರ್ ಶ್ರೀಶೈಲ ತಳವಾರ ಅವರಿಗೆ ಮನವಿ ಸಲ್ಲಿಸಿದರು. ಬೆಳಗಾವಿ, ಬಾಗಲಕೋಟೆ, ವಿಜಯಪುರ, ಗದಗ ಜಿಲ್ಲೆಗಳ ರೈತರು ಸರ್ಕಾರಕ್ಕೆ ಹಲವು ಬಾರಿ ಬೆಲೆ ನಿಗದಿ ಮಾಡಬೇಕೆಂದು ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ ಎಂದು ಆರೋಪಿಸಿದರು.

### ಕಾಮಗಾರಿಗೂ ಮುನ್ನ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ: ಅಬ್ಬಯ್ಯ

• ಉದಯವಾಹಿನಿ ಹುಬ್ಬಳ್ಳಿ

ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಮುನ್ನ ಇಲಾಖೆಗಳ ಮಧ್ಯೆ ಸಮನ್ವಯ ಸಾಧಿಸಿದರೆ ಸರ್ಕಾರಿ ಯೋಜನೆಗಳು ಜನರಿಗೆ ಸಮರ್ಪಕವಾಗಿ ತಲುಪಲು ಸಾಧ್ಯ ಎಂದು ಶಾಸಕ ಪ್ರಸಾದ ಅಬ್ಬಯ್ಯ ಹೇಳಿದರು. ಹಳೇ ಹುಬ್ಬಳ್ಳಿಯ ವಾರ್ಡ್ ಸಂಖ್ಯೆ 72ರ ಕಟಗರ ಓಣಿ ಹಾಗೂ ಕರ್ಜಗಿ ಓಣಿಯಲ್ಲಿ 15ನೇ ಹಣಕಾಸು ಯೋಜನೆಯ ಅನುದಾನದಲ್ಲಿ ಒಳರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಇಲಾಖೆಗಳ ಮಧ್ಯೆ ಸಮನ್ವಯದ ಕೊರತೆಯಿಂದ ಅಭಿವೃದ್ಧಿ ಕಾರ್ಯಗಳು ಗುಣಮಟ್ಟ ಕಳೆದುಕೊಳ್ಳುತ್ತಿವೆ. ಅದರಲ್ಲೂ ಸಿ.ಸಿ. ರಸ್ತೆ, ಒಳಚರಂಡಿ, ಪೈಪ್‌ಲೈನ್ ಕಾಮಗಾರಿ ಕೈಗೊಳ್ಳುವ ಮುನ್ನ ಪೂರ್ವಸಿದ್ಧತೆ, ಸಮನ್ವಯ ಅತ್ಯಗತ್ಯ' ಎಂದು ಹೇಳಿದರು.

24/7 ನೀರು ಸರಬರಾಜು ಯೋಜನೆಗಾಗಿ ರಸ್ತೆಗಳನ್ನು ಎಲೆಂದರಲ್ಲಿ ಅಗೆದು ಕ್ಷೇತ್ರದಲ್ಲಿ ರಸ್ತೆಗಳ ಗುಣಮಟ್ಟ ಕೆಟ್ಟಿದೆ. ಈ ರೀತಿ ಮುಂದುವರಿದರೆ ಶಿಸ್ತು ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಅಧಿಕಾರಿಗಳನ್ನು ಎಚ್ಚರಿಸಿದರು. ಒಳಚರಂಡಿ ಕಾಮಗಾರಿಗೆ ರೂ.40 ಕೋಟಿ ಹಾಗೂ ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆ ರೂ.100 ಕೋಟಿ ಅನುದಾನ ಶೀಘ್ರ ಮಂಜೂರು ಆಗಲಿದೆ' ಎಂದರು.

### ಜಾನುವಾರಿಗೆ ಕಾಲುಬಾಯಿ ರೋಗ ತಡೆ ಉಚಿತ ಲಸಿಕೆ

• ಉದಯವಾಹಿನಿ ಯಾಕತಪುರ

ಬೀದರ್ ತಾಲ್ಲೂಕಿನ ಯಾಕತಪುರ ಗ್ರಾಮದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಸಿಬ್ಬಂದಿ ಜಾನುವಾರಿಗೆ ಕಾಲುಬಾಯಿ ರೋಗ ಉಚಿತ ಲಸಿಕೆ ನೀಡಿದರು.

ಹಿರಿಯ ಪಶುವೈದ್ಯಾಧಿಕಾರಿ ಡಾ.ಸರಿತಾ ಪಾಟೀಲ ಮಾತನಾಡಿ, 'ಕಾಲುಬಾಯಿ ರೋಗ ಜಾನುವಾರಿಗೆ ವೈರಾಣುವಿನಿಂದ ಬರುವ ರೋಗವಾಗಿದೆ. ಒಂದು ಜಾನುವಾರಿನಿಂದ ಇನ್ನೊಂದು ಜಾನುವಾರಿಗೆ ಹರಡುತ್ತದೆ. ರೈತರು ರೋಗ ತಡೆಗೆ ಜಾನುವಾರಿಗೆ ತಪ್ಪದೆ ಲಸಿಕೆ ಹಾಕಿಸಬೇಕು. ಡಿ. 3ರವರೆಗೆ ಕಾಲುಬಾಯಿ ರೋಗ ಲಸಿಕೆ ಅಭಿಯಾನ ಜರುಗಲಿದೆ' ಎಂದು ತಿಳಿಸಿದರು. ನಾಗೋರಾ ಗ್ರಾ.ಪಂ ಉಪಾಧ್ಯಕ್ಷ ನರಸಪ್ಪ ಜಾನಕನೋರ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ, 'ರೈತರು ಕಾಲುಬಾಯಿ ರೋಗ ಲಸಿಕೆ ಅಭಿಯಾನದ ಪ್ರಯೋಜನ ಪಡೆಯಬೇಕು' ಎಂದು ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಸಂತೋಷದ ಚೈತನ್ಯದಾಯಕ – ಪ್ರಿಯವಾದ ಚಿತ್ತದ – ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ, ಖುಷಿಯನ್ನು ತರುತ್ತದೆ. ಪ್ರೀತಿಯ ಇಂದ್ರಜಾಲ ನಿಮ್ಮನ್ನು ಕಟ್ಟಿಹಾಕಲಿದೆ.

**ವೃಷಭ** ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ಕೈಬಿಡಬೇಡಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ.

**ಮಿಥುನ** ಎಲ್ಲರಿಗೂ ಸಹಾಯ ಮಾಡುವ ನಿಮ್ಮನ್ನು ದಣಿಸುತ್ತದೆ. ಕೆಲವು ಪ್ರಮುಖ ಯೋಜನೆಗಳನ್ನು ಕಾರ್ಯಗತಗೊಳಿಸಲಾಗುತ್ತದೆ ಹಾಗೂ ಅವು ನಿಮಗೆ ಹೊಸ ಆರ್ಥಿಕ ಲಾಭ ತರುತ್ತವೆ.

**ಕರ್ಕಾಟಕ** ಮುಂಗೋಪ ನಿಮ್ಮನ್ನು ಇನ್ನೂ ಹೆಚ್ಚು ತೊಂದರೆಯಲ್ಲಿ ಸಿಲುಕಿಸಬಹುದು. ಮನೆಯಲ್ಲಿ ಯಾವುದೇ ಕಾರ್ಯಕ್ರಮ ನಡೆಯುವ ಕಾರಣದಿಂದಾಗಿ ನಿಮ್ಮ ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ಸಿಂಹ** ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು. ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ.

**ಕನ್ಯಾ** ತಪ್ಪು ಸಮಯದಲ್ಲಿ ತಪ್ಪು ವಿಷಯಗಳನ್ನು ಹೇಳದಿರಲು ಪ್ರಯತ್ನಿಸಿ – ನೀವು ಪ್ರೀತಿಸುವವರನ್ನು ನೋಯಿಸದಂತೆ ಎಚ್ಚರ ವಹಿಸಿ. ಇಂದು ನೀವು ಒಂದು ಹೃದಯ ಒಡೆಯುವುದನ್ನು ತಪ್ಪಿಸುತ್ತೀರಿ.

**ತುಲಾ** ಕಣ್ಣಿನ ಪೊರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು.

**ವೃಶ್ಚಿಕ** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಉದ್ಯೋಗವನ್ನು ಮಾಡುವ ಜನರು, ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

**ಧನಸ್ಸು** ಆರೋಗ್ಯದ ಆರೈಕೆ ಮಾಡಿಕೊಳ್ಳಬೇಕು. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ.

**ಮಕರ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಸಂಶಯಾಸ್ಪದ ಹಣಕಾಸು ವ್ಯವಹಾರಗಳಲ್ಲಿ ಸಿಲುಕಿಕೊಳ್ಳದಂತೆ ಎಚ್ಚರಿಕೆ ವಹಿಸಿ.

**ಕುಂಭ** ಹೆಚ್ಚಿನ ಕ್ಯಾಲೊರಿ ಆಹಾರವನ್ನು ತಪ್ಪಿಸಿ ಮತ್ತು ನಿಮ್ಮ ವ್ಯಾಯಾಮವನ್ನು ತಪ್ಪದೆ ಮಾಡಿ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ಮೀನ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು.

### ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ತ್ರೈಮಾಸಿಕ ಸಮನ್ವಯ ಸಮಿತಿ ಪ್ರಗತಿ ಪರಿಶೀಲನಾ ಸಭೆ

# ತಂಬಾಕು ಕಾರ್ಯಾಚರಣೆ ಹೆಚ್ಚಳಕ್ಕೆ ಉಪವಿಭಾಗಾಧಿಕಾರಿ ಸೂಚನೆ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲೆಯಾದ್ಯಂತ ತಂಬಾಕು ನಿಯಂತ್ರಣ ಕಾಯ್ದೆ ಕುರಿತ ಕಾರ್ಯಾಚರಣೆಯನ್ನು ಹೆಚ್ಚಳ ಮಾಡುವ ಮೂಲಕ ಕೋಟ್ಪಾ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು ಎಂದು ಉಪವಿಭಾಗಾಧಿಕಾರಿ ಮಹೆಬೂಬ್ ಜಿಲಾನಿ ಖುರೇಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ತ್ರೈಮಾಸಿಕ ಸಮನ್ವಯ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತಂಬಾಕು ನಿಯಂತ್ರಣಕ್ಕಾಗಿ ಇರುವ ಕೋಟ್ಪಾ ಕಾಯ್ದೆಯನ್ನು ತಾಲ್ಲೂಕು ಹಂತಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ತಂಬಾಕು ಕಾರ್ಯಾಚರಣೆಗಾಗಿ ತಾಲ್ಲೂಕುವಾರು ಗುರಿನಿಗದಿಪಡಿಸಿ, ಪ್ರಗತಿ ಸಾಧಿಸಬೇಕು ಎಂದು ತಾಕೀತು ಮಾಡಿದರು.

ಕೋಟ್ಪಾ ಕಾಯ್ದೆಯ ಕಟ್ಟುನಿಟ್ಟಿನ ಜಾರಿಗಾಗಿ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ್‌ಗಳ ಅಧ್ಯಕ್ಷತೆಯಲ್ಲಿ ನಿಯಮಿತವಾಗಿ ಸಮಿತಿ ಸಭೆಗಳನ್ನು ನಡೆಸಬೇಕು. ಜಿಲ್ಲಾ ಮಟ್ಟ ಹಾಗೂ ತಾಲ್ಲೂಕು ಮಟ್ಟದ ಸಮಿತಿಗಳು ತಂಬಾಕು ಉತ್ಪನ್ನ ಮಾರಾಟ ಅಂಗಡಿಗಳಿಗೆ ಪದೇ ಪದೇ ದಾಳಿ ನಡೆಸಿ, ಕಾಯ್ದೆ ಉಲ್ಲಂಘನೆ ಕಂಡುಬಂದಲ್ಲಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ತಾಕೀತು ಮಾಡಿದರು. ಪಟ್ಟಣ ಪಂಚಾಯಿತಿ ಪುರಸಭೆ, ನಗರಸಭೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸಹ ತಂಬಾಕು ಉತ್ಪನ್ನಗಳನ್ನು ಅಕ್ರಮವಾಗಿ ಮಾರಾಟ ಮಾಡುವವರ ವಿರುದ್ಧ ಹಾಗೂ ತಂಬಾಕು ಉತ್ಪನ್ನಗಳನ್ನು ದುಷ್ಪಾರಿಣಾಮಗಳ ಬಗ್ಗೆ ವಿಶೇಷವಾಗಿ ಬೀದಿಬದಿ ವ್ಯಾಪಾರಿಗಳಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲೆಯಾದ್ಯಂತ ಎಲ್ಲಾ ದೇವಸ್ಥಾನಗಳನ್ನು, ಪ್ರವಾಸಿ ತಾಣಗಳನ್ನು ತಂಬಾಕು ಮುಕ್ತಗೊಳಿಸಬೇಕು. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲೆಯಾದ್ಯಂತ ಕನಿಷ್ಟ 30 ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳೆಂದು 9ನೇ ಡಿಸೆಂಬರ್ ಒಳಗಾಗಿ ಘೋಷಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ.ಪ್ರಭುದೇವ್ ಮಾತನಾಡಿ, ಜಿಲ್ಲಾ ಮತ್ತು ತಾಲ್ಲೂಕು ಹಂತದಲ್ಲಿ ಪೊಲೀಸ್, ನಗರ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳ ತಂಡದಿಂದ ಕಾರ್ಯಾಚರಣೆ ಆಗಬೇಕು. ತಂಬಾಕು ಕಾರ್ಯಾಚರಣೆಯಲ್ಲಿ ಸಮಿತಿಯ ಅಧಿಕಾರಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಹೇಳಿದರು. ತಂಬಾಕು ಮುಕ್ತ ಯುವ ಅಭಿಯಾನಕ್ಕೆ ಈಗಾಗಲೇ ಚಾಲನೆ ನೀಡಲಾಗಿದ್ದು, ಜಿಲ್ಲೆಯಾದ್ಯಂತ 9ನೇ ಡಿಸೆಂಬರ್ ಒಳಗಾಗಿ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ರಾಜ್ಯ ತಂಬಾಕು ನಿಯಂತ್ರಣ ಕೋಶದ ವಿಭಾಗೀಯ ಸಂಯೋಜಕ ಮಹಾಂತೇಶ್ ಮಾತನಾಡಿ, 2025ರ ಜುಲೈ ರಿಂದ ಸೆಪ್ಟೆಂಬರ್ 2025ರ ವರೆಗೆ ತಂಬಾಕು ಕಾರ್ಯಾಚರಣೆಗೆ ಸಂಬಂಧಿಸಿಂತೆ ಜಿಲ್ಲೆಯಲ್ಲಿ 72 ಗುರಿ ನಿಗದಿಪಡಿಸಲಾಗಿದ್ದು, 23 ಪ್ರಗತಿ ಸಾಧಿಸಲಾಗಿದೆ. ಒಟ್ಟು 421 ಪ್ರಕರಣಗಳು ದಾಖಲಾಗಿದ್ದು, ರೂ.44,400 ದಂಡ ವಿಧಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ಸರ್ವೇಕ್ಷಣಾ ಘಟಕದ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಚಂದ್ರಶೇಖರ್ ಕಂಬಾಳಿಮಠ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ತಹಶೀಲ್ದಾರ್ ಗೋವಿಂದರಾಜ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಸೇರಿದಂತೆ ಆರೋಗ್ಯ ಇಲಾಖೆಯ ತಾಲ್ಲೂಕು ವೈದ್ಯಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.



ಉದಯವಾಹಿನಿ ಚಿತ್ರ

**ಹೆಚ್ಚಿನ ಅರಿವು ಮೂಡಿಸಬೇಕು ಎಂದು ಸಲಹೆ**

**ಪಟ್ಟಣ ಪಂಚಾಯಿತಿ ಪುರಸಭೆ, ನಗರಸಭೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸಹ ತಂಬಾಕು ಉತ್ಪನ್ನಗಳನ್ನು ಅಕ್ರಮವಾಗಿ ಮಾರಾಟ ಮಾಡುವವರ ವಿರುದ್ಧ ಹಾಗೂ ತಂಬಾಕು ಉತ್ಪನ್ನಗಳನ್ನು ದುಷ್ಪಾರಿಣಾಮಗಳ ಬಗ್ಗೆ ವಿಶೇಷವಾಗಿ ಬೀದಿಬದಿ ವ್ಯಾಪಾರಿಗಳಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲೆಯಾದ್ಯಂತ ಎಲ್ಲಾ ದೇವಸ್ಥಾನಗಳನ್ನು, ಪ್ರವಾಸಿ ತಾಣಗಳನ್ನು ತಂಬಾಕು ಮುಕ್ತಗೊಳಿಸಬೇಕು. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲೆಯಾದ್ಯಂತ ಕನಿಷ್ಟ 30 ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳೆಂದು 9ನೇ ಡಿಸೆಂಬರ್ ಒಳಗಾಗಿ ಘೋಷಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.**

**ಪ.ಪಂಚಾಯಿತಿ ಪುರಸಭೆ, ನಗರಸಭೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಸಹ ತಂಬಾಕು ಉತ್ಪನ್ನಗಳನ್ನು ಅಕ್ರಮವಾಗಿ ಮಾರಾಟ ಮಾಡುವವರ ವಿರುದ್ಧ ಹಾಗೂ ತಂಬಾಕು ಉತ್ಪನ್ನಗಳನ್ನು ದುಷ್ಪಾರಿಣಾಮಗಳ ಬಗ್ಗೆ ವಿಶೇಷವಾಗಿ ಬೀದಿಬದಿ ವ್ಯಾಪಾರಿಗಳಿಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲೆಯಾದ್ಯಂತ ಎಲ್ಲಾ ದೇವಸ್ಥಾನಗಳನ್ನು, ಪ್ರವಾಸಿ ತಾಣಗಳನ್ನು ತಂಬಾಕು ಮುಕ್ತಗೊಳಿಸಬೇಕು. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಜಿಲ್ಲೆಯಾದ್ಯಂತ ಕನಿಷ್ಟ 30 ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳೆಂದು 9ನೇ ಡಿಸೆಂಬರ್ ಒಳಗಾಗಿ ಘೋಷಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.**

## ತಣ್ಣಗಾದ ಪ್ರಕೃತಿಯ ಮುನಿಸು, ಕೃಷಿಕರು, ಮೀನುಗಾರರು ಖುಷ್

• ಉದಯವಾಹಿನಿ ಕುಂದಾಪುರ

ಕಳೆದ 2 ದಿನಗಳಿಂದ ವರುಣ ಸಂಪೂರ್ಣ ಮರೆಯಾಗಿರುವ ಹಿನ್ನೆಲೆಯಲ್ಲಿ ಸ್ಥಗಿತಗೊಂಡಿದ್ದ ಭತ್ತ ಕಟಾವು ಕಾರ್ಯಕ್ಕೆ ರಣೋತ್ಸವ ಮೂಡಿಬಂದಿದೆ. ಇನ್ನೊಂದೆಡೆ ಕಡಲಿನ ಮುನಿಸು ತಣ್ಣಗಾಗಿರುವುದರಿಂದ ಮೀನುಗಾರರು ಬದುಕಿನ ತುತ್ತಿಗಾಗಿ ಕಡಲಿಗಿಳಿದಿದ್ದಾರೆ.

ಅಕಾಲಿಕ ಮತ್ತು ನಿರಂತರ ಮಳೆಯ ಕಾರಣಕ್ಕೆ ಕರಾವಳಿಯಲ್ಲಿ ಸ್ಥಗಿತಗೊಂಡಿದ್ದ ಭತ್ತ ಕಟಾವು ಕಾರ್ಯ ಚುರುಕುಗೊಂಡಿದೆ. ಅನ್ಯರಾಜ್ಯಗಳಿಂದ ಭತ್ತ ಕಟಾವಿಗೆ ಆಗಮಿಸಿದ್ದ ಯಂತ್ರಗಳು ಸಮರೋಪಾದಿಯಲ್ಲಿ ಗದ್ದೆಗಿಳಿದಿವೆ. ಹೇಳದೆ ಬರುವ ಮಳೆಯಿಂದ ಭೀತರಾಗಿರುವ ರೈತರು ಕಟಾವು ಕಾರ್ಯಕ್ಕಾಗಿ ರಣೋತ್ಸವ ತೋರಿದ್ದಾರೆ.

10–15 ದಿನಗಳ ಹಿಂದೆ ಜಿಲ್ಲೆಯಲ್ಲಿ ಕೊಯ್ಲು ಆರಂಭಗೊಂಡಿದ್ದರು ಆಗಾಗ್ಗೆ ಬರುತ್ತಿದ್ದ ಮಳೆ ರೈತರನ್ನು ಹೈರಾಣಗೊಳಿಸಿತ್ತು. ದೀಪಾವಳಿ ಆಸುಪಾಸು ಪ್ರತಿ ವರ್ಷವು ಮಳೆ ಬಂದು ಹೋಗುವುದು ಇರುವಂತದ್ದೇ ಎಂಬ ಲೆಕ್ಕಾಚಾರ ಈಗ ಉಲ್ಟಾಪಲ್ಟಾ ಆಗಿತ್ತು. ತುಳಸೀಪೂಜೆ ಹೊತ್ತಲ್ಲಿ ಮಳೆ ಸಂಪೂರ್ಣ ನಿಲುಗಡೆಯಾಗಿರುವುದರಿಂದ ಬಿದ್ದು ಹೋಗುವಷ್ಟರ ಮಟ್ಟಿಗೆ ಬಲಿತ ಭತ್ತದ ತೆನೆ ಮನೆ ಸೇರಿಸಲು ಎದ್ದು ಬಿದ್ದು ಓಡಾಟ ಆರಂಭಿಸಿದ್ದಾರೆ. ಆಗಸ್ಟ್ ತಿಂಗಳಲ್ಲಿ 6–7 ದಿನಗಳ ಮಟ್ಟಿಗೆ ಮೀನುಗಾರಿಕೆ ನಡೆದಿದೆ. ಸೆಪ್ಟೆಂಬರ್‌ನಲ್ಲಿ ಎರಡು ವಾರ ನಡೆದಿದೆ. ಅಷ್ಟಿಷ್ಟು ಮೀನುಗಾರಿಕೆ ನಡೆದಿದ್ದರು ಮತ್ಸ್ಯಕ್ಷಾಮ ಪ್ರಕೋಪ ಮುಂದುವರಿದಿದೆ. ಭೂತಾಯಿ, ಬಂಗುಡೆ ಹೊರತುಪಡಿಸಿ ಬೇರಾವ ಮೀನುಗಳು ಬಲೆಗೆ ಬೀಳುತ್ತಿಲ್ಲ. ಅದಾಗಿಯೂ ಮೀನುಗಾರರು ಕಡಲಿಗಿಳಿದಿದ್ದಾರೆ. ಎಲ್ಲಾ ಬಗೆಯ ಬೋಟ್‌ಗಳು ಕಾರ್ಯಾಚರಣೆ ಆರಂಭಿಸಿವೆ.

ಹವಾಮಾನ ವೈಪರೀತ್ಯದ ಪರಿಣಾಮ ಮೀನುಗಾರಿಕೆ ಅಡಕತ್ತರಿಗೆ ಸಿಲುಕಿತ್ತು. ಕಳೆದೆರಡು ದಿನಗಳಿಂದ ಕಡಲು ಸಹಜ ಸ್ಥಿತಿಗೆ ಮರಳಿದೆ. ಎಲ್ಲಾ ಬಗೆಯ ಬೋಟ್‌ಗಳು ಕಡಲಿಗಿಳಿದಿವೆ. ಸಹಜ ಸ್ಥಿತಿ ಮುಂದುವರಿಯಲಿ ಎಂಬ ಪ್ರಾರ್ಥನೆ ಸಲ್ಲಿಸುತ್ತಿದ್ದೇವೆ ಎಂದಿದ್ದಾರೆ, ನಾಗರಾಜ ಕಾಂಚನ್, ಮೀನುಗಾರ ಮುಖಂಡ, ಕೋಡಿ.



ಉದಯವಾಹಿನಿ ಚಿತ್ರ

**ತಣ್ಣಗಾದ ಕಡಲು**

**ಮೀನುಗಾರಿಕಾ ಋತು ಆರಂಭಗೊಂಡು ಎರಡು ತಿಂಗಳು ಕಳೆದಿದ್ದರೂ ಪ್ರಕೃತಿಯ ಮುನಿಸಿನ ಕಾರಣಕ್ಕೆ ಸರಿಯಾಗಿ ಕಡಲಿಗಿಳಿಯಲು ಸಾಧ್ಯವಾಗದೆ ಕಂಗೆಟ್ಟಿದ್ದ ಮೀನುಗಾರರು ಕಳೆದ 2 ದಿನಗಳಿಂದ ಕಡಲು ತಣ್ಣಗಾಗಿರುವುದರಿಂದ ಮತ್ತೆ ಮೀನು ಬೇಟೆ ಆರಂಭಿಸಿದ್ದಾರೆ. ಟ್ರಾಲಿಂಗ್ ನಿಷೇಧ ತೆರವಾದ ಬಳಿಕ ಸಮುದ್ರಪೂಜೆ ಮುಗಿಸಿ ಇನ್ನೇನು ಸಮುದ್ರಕ್ಕಿಳಿಯಬೇಕು ಎನ್ನುವ ಹೊತ್ತಲ್ಲಿ ಕಡಲಲ್ಲಿಉಂಟಾದ ತೂಫಾನ್ ಸುಧಾರಣೆ ಕಾಣುತ್ತಿದೆ ಅನ್ನುವಷ್ಟರಲ್ಲಿ ಚಂಡಮಾರುತದ ಪರಿಣಾಮ ಬೋಟ್‌ಗಳು ಬಂದರಿನಲ್ಲೇ ಉಳಿಯುವಂತೆ ಮಾಡಿತ್ತು.**

## ಕಾಮಗಾರಿ ಅನುಷ್ಠಾನಕ್ಕೆ ಸೂಚನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಚನ್ನಮ್ಮನ ಕಿತ್ತೂರು

ಸಾರ್ವಜನಿಕರಿಗೆ ಪ್ರಮುಖವಾಗಿರುವುದು ಕುಡಿಯುವ ನೀರು ಈ ಕಾರ್ಯ ಪ್ರತಿ ಗ್ರಾಪಂ ವ್ಯಾಪ್ತಿಯಲ್ಲಿ ಸರಾಗವಾಗಿ ಅನುಷ್ಠಾನಗೊಳ್ಳಬೇಕು ಎಂದು ಶಾಸಕ ಬಾಬಾಸಾಹೇಬ ಪಾಟೀಲ ತಿಳಿಸಿದರು. ಗ್ರಾಮಾಭಿವೃದ್ಧಿ ಮತ್ತು ಪಂಚಾಯತ ರಾಜ್, ಜಿಪಂ ಬೆಳಗಾವಿ, ತಾಪಂ, ಇವರುಗಳ ಸಂಯುಕ್ತ ಆಶ್ರಯದಲ್ಲಿ ತಾಪಂ ಸಭಾಭವನದಲ್ಲಿ ನಡೆದ ಕರ್ನಾಟಕ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದರು. ಅಭಿವೃದಿ ಕಾರ್ಯಗಳು ಗುಣಮಟ್ಟದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ತೀವ್ರ ನಿಗಾವಹಿಸಿ ಅಚ್ಚುಕಟ್ಟಾಗಿ ಆ ಕೆಲಸವಾಗುವಂತೆ ನೋಡಿಕೊಳ್ಳಬೇಕು ಎಂದು ಖಡಕ್ಕಾಗಿ ಸೂಚಿದರು.

ಸಭೆಯಲ್ಲಿ ತಹಶೀಲ್ದಾರ ಕಲ್ಲನಗೌಡ ಪಾಟೀಲ ಮಾತನಾಡಿ ಕಿತ್ತೂರು–ಬೈಲಹೊಂಗಲ ಜಂಟಿಯಾಗಿ ಕಾರ್ಯನಿರ್ವಹಿಸುತ್ತಿದ್ದು ಕೇವಲ ಬೆರಳೆಣಿಕೆ ಮೇಲೆ ಕಛೇರಿಗಳು ಬಂದಿದ್ದು ಇನ್ನುಳಿದ ಇಲಾಖೆಗಳು ಎರಡು ತಾಲ್ಲೂಕುಗಳಿಗೆ ಅಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಇದಾಗಬಾರದಂತೆ ಸಾರ್ವಜನಿಕರ ಅನುಕೂಲಕ್ಕಾಗಿ ಸದ್ಯದಲ್ಲಿ 9 ಇಲಾಖೆಗಳನ್ನು ಆಡಳಿತ ಸೌಧಕ್ಕೆ ತರಲಾಗುವುದು. ಕೊಠಡಿಗಳನ್ನು ಹಂಚಿಕೆ ಮಾಡಲಾಗಿದೆ. ಸದ್ಯದಲಿ ಕಾರ್ಯನಿರ್ವಹಿಸುವವು ಎಂದು ತಿಳಿಸಿದರು.

## ಅಕ್ರಮ ಗೋವುಗಳ ಸಾಗಾಟ: ರಕ್ಷಣೆ

• ಉದಯವಾಹಿನಿ ಕಲಬುರಗಿ

ಗೂಡ್ಸ್ ವಾಹನಗಳಲ್ಲಿ ಅಕ್ರಮವಾಗಿದ್ದ ಸಾಗಿಸುತ್ತಿದ್ದ ಗೋವು ಮತ್ತು ಕರುಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ನಗರದ ರಿಂಗ್ ರಸ್ತೆ ಅಫಜಲಪುರ ಕ್ರಾಸ್ ಹತ್ತಿರ ಎರಡು ಗೂಡ್ಸ್ ವಾಹನಗಳಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 10 ಹಸುಕರುಗಳನ್ನು ನಗರದ ಅಶೋಕ ನಗರ ಠಾಣೆ ಪೊಲೀಸರು ರಕ್ಷಿಸಿದ್ದಾರೆ. ಘಟನೆಯಲ್ಲಿ ವಾಹನಗಳ ಚಾಲಕರು ವಾಹನಗಳನ್ನು ಸ್ಥಳದಲ್ಲಿಯೇ ಬಿಟ್ಟು ಪರಾರಿಯಾಗಿದ್ದಾರೆ. ವಾಹನದ ಮಾಲೀಕರು ಮತ್ತು ಚಾಲಕರ ವಿರುದ್ಧ ಪ್ರಕರಣ ದಾಖಲಾಗಿದ್ದು, ಜಾನುವಾರುಗಳನ್ನು ಸ್ಥಳೀಯ ಗೋಶಾಲೆಗೆ ಸೇರಿಸಲಾಗಿದೆ.

## ಮೂಲಭೂತ ಸೌಲಭ್ಯಗಳಿಗೆ ಮನವಿ

• ಉದಯವಾಹಿನಿ ಬಳ್ಳಾರಿ

ನಗರದ ಇನ್ನಾರೆಡ್ಡಿ ಕಾಲೋನಿ ರಸ್ತೆಗಳು, ಚರಂಡಿ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಮತ್ತು ಬುಡಾ ಪಾರ್ಕನ್ನು ಅಭಿವೃದ್ಧಿ ಪಡಿಸಲು ಇನ್ನಾರೆಡ್ಡಿ ಕಾಲೋನಿ ರೆಸಿಡೆಂಟ್ಸ್ ವೆಲ್ಫೇರ್ ಅಸೋಸಿಯೇಷನ್ ನಗರ ಶಾಸಕರು ಮತ್ತು ಪಾಲಿಕೆ ಆಯುಕ್ತರಿಗೆ ಮನವಿ ಮಾಡಿದೆ.

ಇನ್ನಾರೆಡ್ಡಿ ಕಾಲೋನಿ ರೆಸಿಡೆಂಟ್ಸ್ ವೆಲ್ಫೇರ್ ಅಸೋಸಿಯೇಷನ್ ಅಧ್ಯಕ್ಷ ವಿ.ಜನಾರ್ಧನ ಮತ್ತು ಪ್ರಧಾನ ಕಾರ್ಯದರ್ಶಿ ಕೆ.ಎಂ. ಮಂಜುನಾಥ ಅವರು ಶಾಸಕ ಭರತ್ ರೆಡ್ಡಿ ಮತ್ತು ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ ಅವರಿಗೆ ಮನವಿ ಪತ್ರ ಬರೆದು ಬಳ್ಳಾರಿ ನಗರದ ವಾರ್ಡ ಸಂಖ್ಯೆ 34 ರಲ್ಲಿ ಬರುವ ಇನ್ನಾರೆಡ್ಡಿ ಕಾಲನಿಯ ಎಲ್ಲಾ ರಸ್ತೆಗಳ ಒಳ ಚರಂಡಿ ಮತ್ತು ಕುಡಿಯುವ ನೀರಿನ ವ್ಯವಸ್ಥೆಗಳ ಅಭಿವೃದ್ಧಿ ಪಡಿಸುವ ಕಾಮಗಾರಿಯ ಮೊತ್ತ ಕ್ರಮಸಂ. 29, ಪುಟ 28,ರ 37ರ ಪ್ರಕಾರ, ಈ ಕಾಮಗಾರಿ ಬೆಂಗಳೂರು ಹಂತದಲ್ಲಿ ಇದೆ ಎಂದು ಗೊತ್ತಾಗಿದೆ, ಈ ವಿಷಯದಲ್ಲಿ ತಾವು ಮುತುವರ್ಜಿ ವಹಿಸಿ ಕೆಲಸಮಾಡಿಸಿಕೊಡಬೇಕೆಂದು ಕಾಲನಿಯ ಒಳ ಹೋಗುವ ಒಂದನೇ ಮುಖ್ಯರಸ್ತೆ ಮಳೆ ಬಂದ ಸಮಯದಲ್ಲಿ ಮನುಷ್ಯರು ಮತ್ತು ವಾಹನಗಳ ಓಡಾಟಕ್ಕೆ ಬಹಳಷ್ಟು ತೊಂದರೆ ಆಗ್ತಾ ಇದನ್ನು ಕೂಡ ಸರಿಪಡಿಸುವುದರಲ್ಲಿ ಸಹಾಯ ಮಾಡಬೇಕೆಂದು ಕೋರುತ್ತೇವೆ.

ಹಾಗೂ ಕಾಲೋನಿಯ ಬುಡಾ ಉದ್ಯಾನವಕ್ಕೆ ಮಹಾ ನಗರ ಪಾಲಿಕೆಯ ಆಯುಕ್ತರು ಒಂದು ವರ್ಷದ ನಿರ್ವಹಣಾ ವೆಚ್ಚವನ್ನು ಭರಿಸುವುದಕ್ಕೆ ಆದೇಶನೀಡಿದ್ದರು ಅದರಲ್ಲಿ ಹತ್ತು ತಿಂಗಳ ಹಣವನ್ನು ನೀಡಿದ್ದಾರೆ. ಆದರೆ ಉಳಿದ ಹಣವನ್ನು ಕಳೆದ ನಾಲ್ಕು ತಿಂಗಳಿಂದ ಕೊಡ್ತಾ ಇಲ್ಲ, ಟೆಂಡರು ಮುಗಿದಿರುತ್ತದೆ ಎಂದು ಹೇಳುತ್ತಿದ್ದಾರೆ. ಆದ್ದರಿಂದ ಪಾರ್ಕ್ ನಿರ್ವಹಣೆ ಕಷ್ಟವಾಗುತ್ತಿದೆ. ನಮ್ಮ ಈ ಸಮಸ್ಯೆಗಳಿಗೆ ಪರಿಹಾರ ಸೂಚಿಸಬೇಕೆಂದು ಮನವಿ ಮಾಡಿದ್ದಾರೆ.

## ಲೋಕಾಯುಕ್ತ ಬಲೆಗೆ ಬಿದ್ದ ಪಿಡಿಓ

• ಉದಯವಾಹಿನಿ ಔರಾದ್

ನಿವೇಶನದ ಡಿಜಿಟಲ್ ಖಾತಾ ಮಾಡಿಕೊಡಲು 12 ಸಾವಿರ ಲಂಚ ಪಡೆಯುತ್ತಿದ್ದ ವೇಳೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯೊಬ್ಬರು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ತಾಲ್ಲೂಕಿನ ಧೂಪತಮಹಾಗಾಂವ ಗ್ರಾಮ ಪಂಚಾಯತ್ ಪಿಡಿಓ ಅನಿತಾ ರಾಠೋಡ್ ಸಿಕ್ಕಿ ಬಿದ್ದ ಅಧಿಕಾರಿ. ಧೂಪತಮಹಾಗಾಂವ ಗ್ರಾ.ಪಂ. ವ್ಯಾಪ್ತಿಯಲ್ಲಿ ಬರುವ ಜೀರ್ಗಾ(ಬಿ) ಗ್ರಾಮದ ರಾಜಕುಮಾರ ಪಾಟೀಲ ಎಂಬುವವರ ನಿವೇಶನದ ಡಿಜಿಟಲ್ ಖಾತಾ ಮಾಡಿಕೊಡಲು ಪಿಡಿಓ ಅನಿತಾ ಅವರು 12 ಸಾವಿರ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಈ ಸಂಬಂಧ ರಾಜಕುಮಾರ್ ಅವರು ಲೋಕಾಯುಕ್ತ ಪೊಲೀಸರಿಗೆ ದೂರು ಸಲ್ಲಿಸಿದ್ದರು. ಪಿಡಿಓ ಅನಿತಾ ರಾಠೋಡ್ ಹಾಗೂ ಅವರ ಪತಿ ದಯಾನಂದ ರಾಠೋಡ್ ಬುಧವಾರ ಗ್ರಾಮ ಪಂಚಾಯತ್ ಕಚೇರಿಯಲ್ಲಿ ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ.

## ಪ್ರತಿ ಮಗುವಿಗೂ ಶಿಕ್ಷಣ : ಅಧಿಕಾರಿಗಳು ಶ್ರಮಿಸಲಿ

• ಉದಯವಾಹಿನಿ ಕಮಲನಗರ

ಪಟ್ಟಣದ ವ್ಯಾಪ್ತಿಯಲ್ಲಿನ 6–14 ವರ್ಷದ ಮಕ್ಕಳು ಶಾಲೆಯಿಂದ ಹೊರಗುಳಿಯಬಾರದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಪ್ರತಿ ಮನೆಗೆ ಭೇಟಿ ನೀಡಿ ಪಾಲಕರ ಮನವೊಲಿಸಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಪುನ: ಶಾಲೆಗೆ ಕರೆ ತಂದಾಗ ಮಾತ್ರ ಶಿಕ್ಷಣ ಪ್ರತಿ ಮಗುವಿನ ಮೂಲಭೂತ ಹಕ್ಕು ಎಂಬುದಕ್ಕೆ ಹೊಸ ಅರ್ಥ ಬರುತ್ತದೆ ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶುಶೀಲಾಬಾಯಿ ಮಹೇಶ ಸಜ್ಜನಶೇಟ್ಟಿ ಹೇಳಿದರು.

ಪಟ್ಟಣದ ಮಾದರಿ ಪ್ರಾಥಮಿಕ ಶಾಲೆ ಆವರಣದಲ್ಲಿ ಮಂಗಳವಾರ ಸಿಆರ್‌ಪಿ ನಾಗೇಶ–ಅಶ್ವಿನಿ ಸಂಗಮೆ ಅವರಿಗೆ ನಡೆದ ಬೀಳ್ಕೊಡುಗೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಶಾಲೆಯಿಂದ ಯಾವ ಮಕ್ಕಳು ಹೊರಗೆ ಉಳಿಯದಂತೆ ಸರ್ಕಾರವು ಈ ಯೋಜನೆಗಳನ್ನು ಜಾರಿಗೆ ತಂದಿದ್ದು, ಸಂವಿಧಾನಾತ್ಮಕವಾಗಿ ನೀಡಿರುವ ಉಚಿತ ಕಡ್ಡಾಯ ಶಿಕ್ಷಣವನ್ನು ಎಲ್ಲಾ ಮಕ್ಕಳಿಗೆ ಸಮಾನವಾಗಿ ಸಿಗುವಂತೆ ಮಾಡಲು ಅಧಿಕಾರಿಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳ ಪ್ರಯತ್ನ ಅತ್ಯಗತ್ಯವಾಗಿದೆ. ಸ್ವಸ್ಥ ಮತ್ತು ಅಭಿವೃದ್ಧಿ ರಾಷ್ಟ್ರದ ಮಾನದಂಡಕ್ಕೆ ಶಿಕ್ಷಣ ಅತ್ಯಗತ್ಯವಾಗಿದೆ ಎಂದರು.



ಉದಯವಾಹಿನಿ ಚಿತ್ರ

## ಮುಂದುವರೆದ ಕುದರಿ ಸಾಲವಾಡಗಿ ಮನೆಗಳ ನೆಲಸಮ ಹೋರಾಟ 4ನೇ ದಿನದಲ್ಲಿ ಅಹೋರಾತ್ರಿ ಧರಣಿ

• ಉದಯವಾಹಿನಿ ಬಸವನಬಾಗೇವಾಡಿ

ತಾಲ್ಲೂಕಿನ ಕುದರಿಸಾಲವಾಡಗಿ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಅಗಲೀಕರಣ ನೆಪದಲ್ಲಿ ಕೆಲ ನಿವಾಸಿಗಳ ಸ್ವಂತ ಮನೆಗಳನ್ನು ಹಾಗೂ ಸಾಂಸ್ಕೃತಿಕ ಕಟ್ಟಡಗಳನ್ನು ಏಕಾಏಕಿ ನೆಲಸಮ ಕ್ರಮವನ್ನು ವಿರೋಧಿಸಿ ಪಟ್ಟಣದ ಮಿನಿವಿಧಾನ ಸೌಧ ಮುಂಭಾಗದಲ್ಲಿ ಕಳೆದ 23 ದಿನಗಳಿಂದ ಆಯೋಜಿಸಿದ ಅನಿರ್ಧಿಷ್ಟ ಧರಣಿ ಸತ್ಯಾಗ್ರಹವು ಮಂಗಳವಾರದಿಂದ ಆರಂಭಗೊಂಡ ಅಹೋರಾತ್ರಿ ಧರಣಿ ಶುಕ್ರವಾರ ನಾಲ್ಕನೇ ದಿನಕ್ಕೆ ಪಾದಾರ್ಪಣೆ ಮಾಡಿದೆ.

ಸ್ಥಳಕ್ಕೆ ಅಶೋಕಗೌಡ ಎಸ್. ಪಾಟೀಲ ಅವರು ಭೇಟಿ ನೀಡಿ ಮಾತನಾಡುತ್ತಾ, ಮನೆ ಕಳೆದು ಕೊಂಡಿರುವ ನಿರಾಶ್ರೀತರಿಗೆ ನ್ಯಾಯ ಸಿಗದಿದ್ದರೆ ಮುಂಬರುವ ದಿನಗಳಲ್ಲಿ ಉಪವಾಸ ಸತ್ಯಾಗ್ರಹ ಕೈಗೊಳ್ಳಲು ಧರಣಿ ನಿರತರು ನಿರ್ಧಾರ ಕೈಗೊಂಡಿದ್ದಾರೆ ಎಂದು ಎಚ್ಚರಿಕೆ ನೀಡಿದರು.

ಇದೇ ಸಮಯದಲ್ಲಿ ಶಾಂತಗೌಡ ನಾಡಗೌಡ, ನಜೀರ್ ಅಹ್ಮದ್ ಪಟೇಲ, ಡಾ. ಹಸನ್ ಢವಳಗಿ, ಶರಣಪ್ಪ ಕತಗಾರ, ದಸ್ತಗಿರ ಅತ್ತಾರ, ಭಾಷಾ ಅತ್ತಾರ, ಮೊಮ್ಮದ ಮುಲ್ಲಾ, ಶ್ರೀಕಾಂತ ಹಚಡದ, ಬಾಬು ನದಾಫ, ಅಲ್ತಾಫ ಅತ್ತಾರ, ಚಂದ್ರಕಲಾ ಕಳ್ಳಿಮನಿ, ಪವಾಡವ್ವ ಇಂಗಳಗಿ, ಆಜರು ಅತ್ತಾರ, ಆಜರಾ ನಾಯ್ಕೋಡಿ, ಮುನಿರಾ ಬೇಗಮ, ಸೈದಾಬಿ ಅತ್ತಾರ, ಶರಣಪ್ಪ ಇಂಗಳಗಿ ಸೇರಿದಂತೆ ಅನೇಕರು ಧರಣಿ ಸ್ಥಳದಲ್ಲಿ ಹಾಜರಿದ್ದರು.



ಉದಯವಾಹಿನಿ ಚಿತ್ರ

## ಗ್ರಾಚ್ಯುಟಿ ಮೊತ್ತ ಪಾವತಿಸುವಂತೆ ನಿವೃತ್ತ ಅಂಗನವಾಡಿ ನೌಕರರ ಒತ್ತಾಯ

• ಉದಯವಾಹಿನಿ, ಕುಷ್ಟಗಿ

ನಿವೃತ್ತಿಯಾಗಿರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ತಮಗೆ ಸುಪ್ರೀಂಕೋರ್ಟ್ ಆದೇಶದ ಪ್ರಕಾರ ಗ್ರಾಚ್ಯುಟಿ ಮೊತ್ತವನ್ನು ಪಾವತಿಸುವಂತೆ ಒತ್ತಾಯಿಸಿದ್ದಾರೆ. ಈ ವಿಷಯ ಕುರಿತು ಮುಖ್ಯಮಂತ್ರಿಗೆ ಬರೆದ ಮನವಿಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಯಲ್ಲಮ್ಮ ಹಂಡಿ ಅವರಿಗೆ ಸಲ್ಲಿಸಿದರು.ಮಾತನಾಡಿದ ಪ್ರಮುಖರು, '2011–2023ರ ಅವಧಿಯಲ್ಲಿ ನಿವೃತ್ತಿಯಾಗಿರುವ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಗ್ರಾಚ್ಯುಟಿ ಪಾವತಿ ಕಾಯ್ದೆ 1972ರ ಅನ್ವಯ ಗ್ರಾಚ್ಯುಟಿ ಮೊತ್ತವನ್ನು ಪಾವತಿಸುವಂತೆ ಸುಪ್ರೀಂಕೋರ್ಟ್ ತೀರ್ಪು ನೀಡಿದೆ. ಹಾಗಾಗಿ ಅಂಗನವಾಡಿಯ ಎಲ್ಲಾ ನೌಕರರಿಗೂ ಈ ನಿಬಂಧನೆಗಳು ಅನ್ವಯಿಸುತ್ತವೆ. ನ್ಯಾಯಾಲಯದ ತೀರ್ಪನ್ನು ಒಪ್ಪಿ ಆದೇಶ ಜಾರಿ ಮಾಡುವಂತೆ ಒತ್ತಾಯಿಸಿ ಚಳವಳಿ ನಡೆಸಿದ ಪರಿಣಾಮ ರಾಜ್ಯ ಮಹಿಳಾ ಮತ್ತು ಮಕ್ಕಳ ಇಲಾಖೆ 2023ರ ಏಪ್ರಿಲ್‌ನಲ್ಲಿ ಗ್ರಾಚ್ಯುಟಿ ಪಾವತಿಸುವ ಕುರಿತು ಆದೇಶ ಹೊರಡಿಸಿತ್ತು. ನಂತರ ರೂ.183 ಕೋಟಿ ಅನುದಾನ ಬಿಡುಗಡೆ ಮಾಡುವಂತೆ ಸಭೆಯ ನಿರ್ಣಯಗಳನ್ನು ಹಣಕಾಸು ಇಲಾಖೆಗೆ ಸಲ್ಲಿಸಲಾಗಿತ್ತು.

ಆದರೆ ಈ ವಿಷಯದಲ್ಲಿ ಹಣಕಾಸು ಇಲಾಖೆ ಅನುದಾನ ಬಿಡುಗಡೆ ಮಾಡದೆ ನೌಕರರನ್ನು ಸತಾಯಿಸುತ್ತಾ ಬಂದಿದೆ ಎಂದು ದೂರಿದರು. ವಿಳಂಬ ಮಾಡದೆ ಗ್ರಾಚ್ಯುಟಿ ಪಾವತಿಗೆ ಸರ್ಕಾರ ಕ್ರಮ ಕೈಗೊಳ್ಳಬೇಕು' ಎಂದು ಆಗ್ರಹಿಸಿದರು.

## ಸ್ವದೇಶಿ ಉತ್ಪನ್ನ ಖರೀದಿಸಿ, ಬಳಸಿರಿ: ಸಿಮೆಂಟ್ ಮಂಜು

• ಉದಯವಾಹಿನಿ ಆಲೂರು

ಪ್ರತಿಯೊಬ್ಬರೂ ದೇಸಿ ಉತ್ಪನ್ನಗಳನ್ನು ಖರೀದಿಸಿ ಬಳಸುವ ಮೂಲಕ ಸ್ವಾವಲಂಬಿ ಮತ್ತು ಆರ್ಥಿಕ ಸದೃಢ ದೇಶವನ್ನಾಗಿ ಮಾಡಲು ಶ್ರಮಿಸಬೇಕು ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು. ಪಟ್ಟಣದ ಸರ್ಕಾರಿ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿನ ವಿವಿಧ ಸಮಿತಿಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಮೆರಿಕ ನಮ್ಮ ದೇಶದ ಉತ್ಪನ್ನಗಳ ಮೇಲೆ ಶೇ 50 ರಷ್ಟು ಸುಂಕ ವಿಧಿಸಲು ಮುಂದಾಗಿದೆ. ಆದರೆ ನಮ್ಮ ಪ್ರಧಾನ ಮಂತ್ರಿ ಇಂತಹ ಬೆದರಿಕೆಗೆ ಬಗ್ಗದೆ, ಸ್ವದೇಶಿ ಉತ್ಪನ್ನಗಳನ್ನು ಕೊಂಡು ಬಳಸಲು ಮನವಿ ಮಾಡಿದ್ದಾರೆ. ಎಲ್ಲರೂ ಕೈ ಜೋಡಿಸಿದರೆ ಮುಂದಿನ 10 ವರ್ಷಗಳಲ್ಲಿ ದೇಶ ಸಂಪದ್ಭರಿತ ದೇಶವಾಗುತ್ತದೆ. ವಿದ್ಯಾರ್ಥಿಗಳು ದೇಶದ ಸಂಪತ್ತಾಗಿ ಬೆಳೆಯಬೇಕು ಎಂದರು. ಖಾಸಗಿ ಶಾಲೆ ವ್ಯಾಮೋಹದಿಂದ ಹೊರಬಂದು ಸರ್ಕಾರಿ ಶಾಲೆ, ಕಾಲೇಜುಗಳನ್ನು ಉಳಿಸಲು ಪೋಷಕರು, ವಿದ್ಯಾರ್ಥಿಗಳು ಮುಂದಾಗಬೇಕು ಎಂದರು.



ಉದಯವಾಹಿನಿ ಚಿತ್ರ

# ಪ್ರತಿಟನ್ ಕಬ್ಬಿಗೆ 3500 ರೂ.ಬೆಂಬಲ ಬೆಲೆ ನಿಗಧಿಪಡಿಸುವಂತೆ ಒತ್ತಾಯಿಸಿ ಪ್ರತಿಭಟನೆ

### • ರಸಗೊಬ್ಬರ ಬಿತ್ತನೆ ಬೀಜ ಕೂಲಿಕಾರ್ಮಿಕರ ಸಂಬಳ ಉಳುಮೆ ವೆಚ್ಚ ಸೇರಿದಂತೆ ರೈತರು ಕಬ್ಬು ಬೆಳೆಯಲು ದುಬಾರಿ ಖರ್ಚು

• ಉದಯವಾಹಿನಿ, ಚಿಂಚೋಳಿ

ರೈತರು ಬೆಳೆದ ಕಬ್ಬು ಬೆಳೆಗೆ ಪ್ರತಿಟನಗೆ 3500ರೂ. ನಿಗದಿಪಡಿಸುವವರೆಗೆ ಸಕ್ಕರೆ ಕಾರ್ಖಾನೆಗಳು ಪ್ರಾರಂಭಿಸಬಾರದು ಎಂದು ಒತ್ತಾಯಿಸಿ ಪಟ್ಟಣದ ಚಂದಾಪೂರದ ಪ್ರಜಾಸೌಧ ಎದುರು ಭಾರತೀಯ ಕಿಸಾನ್ ಸಂಘಟನೆ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟ ವತಿಯಿಂದ ಅಣುಕು ಶವಯಾತ್ರೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ ಮೂಲಕ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರಿಗೆ ಮನವಿಪತ್ರ ಸಲ್ಲಿಸಿದರು.

ರಸಗೊಬ್ಬರ ಬಿತ್ತನೆ ಬೀಜ ಕೂಲಿಕಾರ್ಮಿಕರ ಸಂಬಳ ಉಳುಮೆ ವೆಚ್ಚ ಸೇರಿದಂತೆ ರೈತರು ಕಬ್ಬು ಬೆಳೆಯಲು ದುಬಾರಿ ಖರ್ಚುವೆಚ್ಚ ತಗಲುತ್ತಿದೆ,ಗುಜರಾತ್ ಪ್ರತಿಟನಗೆ 4400ರೂ,ಪಂಜಾಬ್ 3800ರೂ,ಉತ್ತರಪ್ರದೇಶ 3500ರೂ,ಸೇರಿದಂತೆ ಬೆಳಗಾವಿ 3500ರೂ.ಕ್ಕಿಂತ ಹೆಚ್ಚಾಗಿ ನೀಡುತ್ತಿದೆ ಹಾಗಾಗಿ ರಾಜ್ಯ ಸರ್ಕಾರ ಮಧ್ಯಪ್ರವೇಶ ಮಾಡಿ ಸುಪ್ರೀಂಕೋರ್ಟ್ ಐವರು ನ್ಯಾಯಾಧೀಶರ ಪೀಠದ ಆದೇಶದಂತೆ ಎಸ್.ಎ.ಪಿ ನಿಗಧಿಪಡಿಸಲು ಅವಕಾಶ ನೀಡಿದೆ ರಾಜ್ಯ ಸರ್ಕಾರ ಪ್ರತಿಟನ ಕಬ್ಬಿಗೆ 500ರೂ.ಬೆಲೆ ನಿಗಧಿಪಡಿಸಬೇಕು. ಯುವ ಹೋರಾಟಗಾರ ಎಂಪಿ ಗೋಪಾಲ ಗಾರಂಪಳ್ಳಿ ಮಾತನಾಡಿ ಟನ್ ಕಬ್ಬಿನ ಇಳುವರಿ ಆಧಾರದಲ್ಲಿ 5000ರೂ.ಬೆಲೆ ನಿಗಧಿಪಡಿಸಬೇಕು, ಡಾ.ಸ್ವಾಮಿನಾಥನ್ ಆಯೋಗದ ವರದಿಯಂತೆ ಬೆಂಬಲ ಬೆಲೆ ನಿಗಧಿಪಡಿಸಬೇಕು,ರಾಜ್ಯ ಸರ್ಕಾರ 2022–23ರಲ್ಲಿ ಕಬ್ಬು ಸರಬರಾಜು ಮಾಡಿ ಟನ್ ಕಬ್ಬಿಗೆ ಹೆಚ್ಚುವರಿ 100ರೂ.ಬಾಕಿಯಿರುವ ಅಂದಾಜು 1ಕೋಟಿ ರೂ. ಹಣ ರೈತರಿಗೆ ನೀಡಬೇಕು.

ಕಬ್ಬು ಸರಬರಾಜು ಮಾಡಿದ 14ದಿನದಲ್ಲಿ ರೈತರಿಗೆ ಹಣ ಪಾವತಿ ಮಾಡಬೇಕು, 12ತಿಂಗಳಲ್ಲಿ ರೈತರ ಕಬ್ಬು ಕಟಾವು ಮಾಡಬೇಕು, ಕಬ್ಬಿನ ಉಪ ಉತ್ಪನ್ನಗಳಾದ ಮೊಲಾಸಸ್, ಕಾಕಂಬಿ,ಎಥನಾಲ್,ಡಿಸ್ಟಿಲರಿಸ್, ಸಹವಿದ್ಯುತ್, ಬಯೋ ಕಾಂಪೋಸ್ಟ್, ಪಶು ಆಹಾರ, ಬಗಾಸ್ ಇತರೆ ಉತ್ಪನ್ನಗಳ ಲಾಭಂಶದಲ್ಲಿ ರೈತರಿಗೆ ಪಾಲು ನೀಡಬೇಕು,ಕಾಟಾವು ಸಾಗಾಣಿಕೆ ವೆಚ್ಚಕ್ಕೆ ಸಂಬಂಧ ಕಾರ್ಖಾನೆ ಮತ್ತು ಕಬ್ಬು ಬೆಳೆಗಾರರ ನಡುವೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳಲು ಸಮಿತಿ ರಚಿಸಿ ಸರ್ಕಾರದ ಮಾರ್ಗಸೂಚಿ ಪಾಲಿಸಬೇಕು.

ತಮಿಳುನಾಡು ಮಾದರಿಯಲ್ಲಿ ಸರ್ಕಾರ ಟನ್ ಕಬ್ಬಿಗೆ 500ರೂ.ಪ್ರೋತ್ಸಾಹಧನ ನೀಡಬೇಕು,ಕೇಂದ್ರ ಸರ್ಕಾರ 2023–24ರಲ್ಲಿ ಎಫ್‌ಆರ್‌ಪಿ ದರವನ್ನು ಕೆಜಿಗೆ 10ಪೈಸೆ ಕ್ವಿಂಟಲ್ 10ರೂ.ಟನಗೆ 100ರೂ. ಹೆಚ್ಚಳ ಮಾಡಿರುವುದು ರೈತ ವಿರೋಧಿಯಾಗಿದ್ದು ಇದನ್ನು ವಾಪಸ್ಸು ಪಡೆದು ಪ್ರತಿಟನ್‌ಗೆ 5000ರೂ.ಬೆಲೆ ನಿಗಧಿಪಡಿಸಬೇಕು, ತೂಕದಲ್ಲಿ ಮೋಸ ಕಂಡುಬರುತ್ತಿದ್ದು ತಡೆಗಟ್ಟಬೇಕು,ಕಬ್ಬಿನ ತಳಿ ನಾಟಿ ಮಾಡಲು ರೈತನಿಗೆ ಮುಕ್ತ ಅವಕಾಶ ಇರಬೇಕು,ಎಥೆನಾಲ್ ಪ್ರಮಾಣ ಶೇ.25ಕ್ಕೆ ಹೆಚ್ಚಿಸಬೇಕು,ದುಬಾರಿ ಕಟಾವು ಸಾಗಾಣಿಕೆ ವೆಚ್ಚಕ್ಕೆ ಕಡಿವಾಣ ಹಾಕಬೇಕು ಎಂದರು.

ಕೆಎಂ ಬಾರಿ,ರವಿಶಂಕರರೆಡ್ಡಿ ಮುತ್ತಂಗಿ,ರಾಮರೆಡ್ಡಿ ಪೊಲೀಸ್ ಪಾಟೀಲ,ಹಣಮಂತ ಪೂಜಾರಿ,ಜಾಫರ್ ಖಾನ್,ವೀರೇಶ ಎಂಪಳ್ಳಿ,ಚೇತನ ನಿರಾಳ್ಕರ,ಮೋಹನ್ ಐನಾಪೂರ,ಶಂಕರ ಶಿವಪೂರಿ,ಮಾತನಾಡಿದರು.

ಈ ಸಂದರ್ಭದಲ್ಲಿ ಕೃಷ್ಣ ದಯಾಳ,ರಾಜು ಇದಲಾಯಿ,ಅಹೇಮದ್ ಬಾಗಬಾನ್, ಜಗನ್ನಾಥ ಅಣವಾರ,ತುಳಸಿರಾಮ ಪೋಳ್, ಗೌರಿಶಂಕರ ಉಪ್ಪಿನ, ಶ್ರೀಕಾಂತ ಜಾನಕಿ,ಭಾಗ್ಯವಂತ, ಹರೀಶ ದೇಗಲಮಡಿ, ಪೃಥ್ವಿರಾಜ್, ಸತೀಶ್,ಶಿವಪ್ಪಾ, ವೀರಶೆಟ್ಟಿ, ಮಹೇಶ ರಾಣಾಪೂರ,ಅನೇಕರಿದ್ದರು.



ಉದಯವಾಹಿನಿ ಚಿತ್ರ

**ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರಿಗೆ ಮನವಿಪತ್ರ**

**ಸರ್ಕಾರ ಕಬ್ಬು ಖರೀದಿ ಮತ್ತು ಸರಬರಾಜು ನಿಯಂತ್ರಣ ಅಧಿನಿಯಮ 2013 ತಿದ್ದುಪಡಿ ಅಧಿನಿಯಮ 2014ರ ಕಲಂ 4(ಎ) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ರಾಜ್ಯದ ಎಥೆನಾಲ್ ಉತ್ಪಾದಿಸುವ ಮತ್ತು ಉತ್ಪಾದಿಸದೆ ಇರುವ ಸಕ್ಕರೆ ಕಾರ್ಖಾನೆಗಳು 2022–23ರ ಎಫ್‌ಆರ್.ಪಿ ಜೋತೆಗೆ ಪ್ರತಿಟನಗೆ 100ರೂ. ಹೆಚ್ಚುವರಿಯಾಗಿ ಪಾವತಿಸಲು ಆದೇಶಿಸಿದೆ.** –ಮಾರುತಿ ಗಂಜಗಿರಿ, ಹೋರಾಟಗಾರ

## ಮುನಿಯದಿರಲಿ ಎಂದು ಸೇನಾಧ್ಯಕ್ಷರಿಗೆ ಅಸೀಮ ಅಧಿಕಾರ ನೀಡಲು ಸಂವಿಧಾನ ಬದಲಾಯಿಸಲಿದೆ ಪಾಕಿಸ್ತಾನ


# ಹೆಚ್ಚಿನ ಅಧಿಕಾರ ನೀಡಲು ಸಂವಿಧಾನ ತಿದ್ದುಪಡಿಗೆ ಮುಂದಾದ ಪಾಕಿಸ್ತಾನ ಸರ್ಕಾರ

**ಇಸ್ಲಾಮಾಬಾದ್:** ಪಾಕಿಸ್ತಾನ, ವಿದೇಶಗಳಲ್ಲಿ ಸೇನಾ ಮುಖ್ಯಸ್ಥ ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಅವರ ಪ್ರಭಾವ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಅವರಿಗೆ ಹೆಚ್ಚಿನ ಮಿಲಿಟರಿ ಅಧಿಕಾರ ನೀಡಲು ಪಾಕಿಸ್ತಾನವು ತನ್ನ ಸಂವಿಧಾನವನ್ನೇ ಬದಲಾಯಿಸಲು ನಿರ್ಧರಿಸಿದೆ. ಈ ನಿಟ್ಟಿನಲ್ಲಿ ಪ್ರಧಾನಮಂತ್ರಿ ಶೆಹಬಾಜ್ ಷರೀಫ್ ಸರ್ಕಾರವು ಶೀಘ್ರದಲ್ಲೇ ಸಂಸತ್ತಿನಲ್ಲಿ 27ನೇ ಸಾಂವಿಧಾನಿಕ ತಿದ್ದುಪಡಿ ಮಂಡಿಸಲಿದೆ ಎಂದು ಮೂಲಗಳು ಖಚಿತಪಡಿಸಿವೆ.



ಪಾಕಿಸ್ತಾನ ಸಾಂವಿಧಾನಿಕ ತಿದ್ದುಪಡಿ ಪ್ರಸ್ತಾವನೆ ಸಶಸ್ತ್ರ ಪಡೆಗಳ ಆಜ್ಞೆಗೆ ಸಂಬಂಧಿಸಿದ ಪ್ರಸ್ತಾವಿತ ಬದಲಾವಣೆಗಳನ್ನು ಒಳಗೊಂಡಿದ್ದು, ಇದು ಜಾರಿಯಾದಲ್ಲಿ ಫೀಲ್ಡ್ ಮಾರ್ಷಲ್ ಅಸೀಮ ಮುನೀರ್ ಹೆಚ್ಚಿನ ಮಿಲಿಟರಿ ಅಧಿಕಾರವನ್ನು ಪಡೆದುಕೊಳ್ಳಲಿದ್ದಾರೆ. ಪಾಕಿಸ್ತಾನದ ಮೇಲೆ ಮುನೀರ್ ಕಬ್ಬಿಣದ ಹಿಡಿತವನ್ನು ಸಾಧಿಸಲಿದ್ದು, ಇದಕ್ಕೆ ಅಲ್ಲಿನ ಸರ್ಕಾರವೇ ಅನುವು ಮಾಡಿಕೊಡುತ್ತಿರುವುದು ಸೋಜಿಗದ ಸಂಗತಿಯಾಗಿದೆ.

**ಪ್ರಸ್ತಾವಿತ ತಿದ್ದುಪಡಿಗಳು ಯಾವುವು?:** ಪಾಕಿಸ್ತಾನಿ ಮಾಧ್ಯಮ ವರದಿಗಳ ಪ್ರಕಾರ, 27ನೇ ತಿದ್ದುಪಡಿಯ ಅಡಿಯಲ್ಲಿ ಪ್ರಸ್ತಾವಿತ ಬದಲಾವಣೆಗಳು ಸಂವಿಧಾನದ 243ನೇ ವಿಧಿಗೆ ಬದಲಾವಣೆಯನ್ನು ಒಳಗೊಂಡಿವೆ. ಇದು ಸೇನಾ ಮುಖ್ಯಸ್ಥರ ನೇಮಕಾತಿ ಮತ್ತು ಸಶಸ್ತ್ರ ಪಡೆಗಳ ಆಜ್ಞೆಯನ್ನು ನಿಯಂತ್ರಿಸುತ್ತದೆ. ಈ ಪ್ರಸ್ತಾವನೆಯು ಸಾಂವಿಧಾನಿಕ ನ್ಯಾಯಾಲಯಗಳನ್ನು ಸ್ಥಾಪಿಸುವುದು, ಮುಖ್ಯ ಚುನಾವಣಾ ಆಯುಕ್ತರ ನೇಮಕಾತಿ ಪ್ರಕ್ರಿಯೆಯನ್ನು ಸುಗಮಗೊಳಿಸುವುದು, ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಗಳನ್ನು ಮರುಸ್ಥಾಪಿಸುವುದು ನ್ಯಾಯಾಧೀಶರ ವರ್ಗಾವಣೆಯ ವಿಷಯವನ್ನು ಸಹ ಒಳಗೊಂಡಿದೆ ಎಂದು ಸ್ಪಷ್ಟಪಡಿಸಲಾಗಿದೆ. ಫೆಡರಲ್ ಸಂಪನ್ಮೂಲಗಳಲ್ಲಿ ಪ್ರಾಂತ್ಯಗಳ ಪಾಲನ್ನು ಕಡಿಮೆ ಮಾಡಲು, ಶಿಕ್ಷಣ, ಜನಸಂಖ್ಯಾ ಕಲ್ಯಾಣ ಸಚಿವಾಲಯಗಳ ನಿಯಂತ್ರಣವನ್ನು ಪ್ರಾಂತ್ಯಗಳಿಂದ ಫೆಡರಲ್ ಸರ್ಕಾರಕ್ಕೆ ವರ್ಗಾಯಿಸಲು, ರಾಷ್ಟ್ರೀಯ ಹಣಕಾಸು ಆಯೋಗದ ಅಡಿಯಲ್ಲಿ, ಪ್ರಾಂತೀಯ ಪಾಲಿನ ರಕ್ಷಣೆಯನ್ನು ಕೊನೆಗೊಳಿಸಲು ಈ ತಿದ್ದುಪಡಿ ಪ್ರಸ್ತಾವನೆ ಸೂಚಿಸುತ್ತದೆ.



ತತ್ವಗಳು, ಕಾನೂನುಗಳು, ಸಂವಿಧಾನಕ್ಕೆ ಅನುಗುಣವಾಗಿ ನಾವು 27ನೇ ತಿದ್ದುಪಡಿಯನ್ನು ಪ್ರಸ್ತಾಪಿಸುತ್ತಿದ್ದೇವೆ. ಈ ತಿದ್ದುಪಡಿಗಳು ಕಾನೂನಾಗಿ ಜಾರಿಯಾದರೆ ಪಾಕಿಸ್ತಾನಕ್ಕೆ ಹೆಚ್ಚಿನ ಅನುಕೂಲ ಆಗಲಿದೆ. ನಾವು ಹಾಗೆ ಮಾಡಲು ನಮ್ಮೆಲ್ಲ ಶಕ್ತಿಯನ್ನು ಬಳಸಿಕೊಳ್ಳುತ್ತೇವೆ ಎಂದು ಇಶಾಕ್ ದಾರ್ ಹೇಳಿದ್ದಾರೆ.

**ತಿದ್ದುಪಡಿಗೆ ವಿರೋಧ:** ಇನ್ನು ಶೆಹಬಾಜ್ ಷರೀಫ್ ಸರ್ಕಾರ ಸಂವಿಧಾನಕ್ಕೆ ತರಲು ಉದ್ದೇಶಿಸಿರುವ ತಿದ್ದುಪಡಿ ಪ್ರಸ್ತಾವನೆಗೆ ಭಾರೀ ವಿರೋಧವೂ ವ್ಯಕ್ತವಾಗಿದೆ. ಸರ್ಕಾರವು ಸರಿಯಾದ ಕಾರ್ಯವಿಧಾನವನ್ನು ಅನುಸರಿಸದೆ, ಸಂವಿಧಾನವನ್ನು ಬದಲಾಯಿಸಲು ಪ್ರಯತ್ನಿಸುತ್ತಿದೆ ಎಂದು ವಿರೋಧ ಪಕ್ಷವಾದ ಪಾಕಿಸ್ತಾನ್ ತೆಹ್ರೀಕ್-ಎ-ಇನ್ಸಾಫ್ ಪಕ್ಷ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಇದೇ ವಿಚಾರವಾಗಿ ಮಾತನಾಡಿರುವ ಮಾಜಿ ಸೆನೆಟರ್ ಮುಸ್ತಫಾ ನವಾಜ್ ಖೋಖರ್, ತಿದ್ದುಪಡಿಯು ಹೊಸ ಕಮಾಂಡರ್-ಇನ್-ಚೀಫ್ ಸ್ಥಾನವನ್ನು ಪರಿಚಯಿಸಲು, ಪಾಕಿಸ್ತಾನದ ನಾಗರಿಕ-ಮಿಲಿಟರಿ ಶ್ರೇಣಿಯನ್ನು ಪರಿಣಾಮಕಾರಿಯಾಗಿ ಪುನರ್ ರಚಿಸಲು ಪ್ರಯತ್ನಿಸುತ್ತದೆ. ಈ ಕ್ರಮವು ದೇಶದ ಮೂಲಸೌಕರ್ಯವನ್ನು ಸಂಪೂರ್ಣವಾಗಿ ಬದಲಾಯಿಸುತ್ತದೆ. ಈ ತಿದ್ದುಪಡಿ ನಾಗರಿಕ ಶ್ರೇಷ್ಠತೆಯ ಕಲ್ಪನೆಗೆ ವಿರುದ್ಧವಾಗಿದ್ದು, ರಾಷ್ಟ್ರದ ಅಡಿಪಾಯವನ್ನು ಅಲುಗಾಡಿಸುತ್ತದೆ ಎಂದು ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ಪ್ರಮುಖ ರಾಜಕಾರಣಿ ಮತ್ತು ಪಿಪಿಪಿ ಸೆನೆಟರ್ ರಜಾ ರಬ್ಬಾನಿ ಕೂಡ, ಈ ಕ್ರಮವು ಪ್ರಾಂತೀಯ ಸ್ವಾಯತ್ತತೆಗೆ ಹಾನಿ ಮಾಡುತ್ತದೆ ಮತ್ತು 18ನೇ ತಿದ್ದುಪಡಿಯ ಉತ್ತಮ ಕೆಲಸವನ್ನು ರದ್ದುಗೊಳಿಸುತ್ತದೆ ಎಂದು ಕಿಡಿಕಾರಿದ್ದಾರೆ. ಇದೇ ಅಭಿಪ್ರಾಯವನ್ನು ಪಾಕಿಸ್ತಾನದ ಹಲವು ನಾಗರಿಕ ಸಂಘಟನೆಗಳೂ ಕೂಡ ವ್ಯಕ್ತಪಡಿಸಿವೆ.

**ಸಂಖ್ಯಾಬಲ:** ಶೆಹಬಾಜ್ ಷರೀಫ್ ಸರ್ಕಾರವು ಸೆನೆಟ್ ಮತ್ತು ರಾಷ್ಟ್ರೀಯ ಅಸೆಂಬ್ಲಿಯಲ್ಲಿ, ಪ್ರತ್ಯೇಕವಾಗಿ ಮೂರನೇ ಎರಡರಷ್ಟು ಬಹುಮತದೊಂದಿಗೆ ತಿದ್ದುಪಡಿಯನ್ನು ಅಂಗೀಕರಿಸಬೇಕಾಗಿದೆ. 336 ಸದಸ್ಯರನ್ನು ಹೊಂದಿರುವ ಎನ್ಎಯಲ್ಲಿ ಇದು ಅಗತ್ಯವಿರುವ ಸಂಖ್ಯೆಯನ್ನು ಹೊಂದಿದೆ. ಸರ್ಕಾರ ಒಟ್ಟು 233 ಸದಸ್ಯರ ಬೆಂಬಲವನ್ನು ಹೊಂದಿದೆ. ಆದರೆ 96 ಸದಸ್ಯರ ಸೆನೆಟ್‌ನಲ್ಲಿ, ಆಡಳಿತ ಪಕ್ಷ ಕೇವಲ 61 ಸದಸ್ಯರನ್ನು ಹೊಂದಿದೆ ಮತ್ತು ಅಗತ್ಯವಿರುವ ಮೂರನೇ ಎರಡರಷ್ಟು ಬಹುಮತವನ್ನು ಪಡೆಯಲು ಕನಿಷ್ಠ ಮೂರು ವಿರೋಧ ಪಕ್ಷದ ಸದಸ್ಯರ ಅಗತ್ಯವಿದೆ. ಮೌಲಾನಾ ಫಜ್ಲುರ್ ರೆಹಮಾನ್ ನೇತೃತ್ವದ ಜಮಿಯತ್ ಉಲೇಮಾ-ಎ-ಇಸ್ಲಾಂ ಫಜಲ್ ಬೆಂಬಲ ಪಡೆಯಲು ಸರ್ಕಾರ ಪ್ರಯತ್ನಿಸುತ್ತಿದೆ.

### ಭುಟ್ಟೋ ಬಿಚ್ಚಿಟ್ಟ ಸತ್ಯ

**ಪಾಕಿಸ್ತಾನದ ಸಂವಿಧಾನಕ್ಕೆ 27ನೇ ತಿದ್ದುಪಡಿಗೆ ಬೆಂಬಲ ನೀಡುವಂತೆ, ಪ್ರಧಾನಿ ಶೆಹಬಾಜ್ ಸರ್ಕಾರ ತಮ್ಮನ್ನು ಸಂಪರ್ಕಿಸಿದೆ. ಈ ಬಗ್ಗೆ ನಾವು ವಿಸ್ತೃತವಾಗಿ ಚರ್ಚಿಸಿ ನಿರ್ಧಾರಕ್ಕೆ ಬರುತ್ತೇವೆ ಎಂದು ಪಾಕಿಸ್ತಾನ ಪೀಪಲ್ಸ್ ಪಾರ್ಟಿ ಮುಖ್ಯಸ್ಥ ಬಿಲಾವಲ್ ಭುಟ್ಟೋ ಜರ್ದಾರಿ ತಮ್ಮ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಟ್ವೀಟ್ ಮಾಡಿದ್ದಾರೆ. ಭುಟ್ಟೋ ಅವರ ಈ ಟ್ವೀಟ್ ಪಾಕಿಸ್ತಾನದ ಸಂವಿಧಾನದಲ್ಲಿನ ಬದಲಾವಣೆಗಳ ಕುರಿತು ಊಹಾಪೋಹಗಳಿಗೆ ರೆಕ್ಕೆಪುಕ್ಕ ನೀಡಿದ್ದು, ಫೀಲ್ಡ್ ಮಾರ್ಷಲ್ ಅಸಿಮ್ ಮುನೀರ್ ಮತ್ತಷ್ಟು ಬಲಶಾಲಿಯಾಗುವ ಮುನ್ಸೂಚನೆಯನ್ನು ನೀಡಿದೆ.**

**ಮಿಲಿಟರಿ ನೇರ ಆಡಳಿತದ ಇತಿಹಾಸ, ನಾಗರಿಕ ಸರ್ಕಾರಗಳ ಮೇಲೆ ಸೇನೆಯ ವ್ಯಾಪಕ ಪ್ರಭಾವ, ರಾಷ್ಟ್ರೀಯ ಭದ್ರತೆ, ಆರ್ಥಿಕತೆಯಲ್ಲಿ ಅದರ ಹಸ್ತಕ್ಷೇಪಕ್ಕೆ ಪಾಕಿಸ್ತಾನ ಕುಖ್ಯಾತಿ ಪಡೆದುಕೊಂಡಿದೆ. ನಾಗರಿಕ ಆಡಳಿತದಿಂದ ಸೇನೆಯನ್ನು ದೂರ ಇಡಬೇಕು ಎಂಬ ಕೂಗು ದಶಕಗಳಿಂದ ಕೇಳಿಬರುತ್ತಲೇ ಇದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಶೆಹಬಾಜ್ ಷರೀಫ್ ಅವರ ಸರ್ಕಾರ, ಸಂವಿಧಾನ ಬದಲಾವಣೆ ಮೂಲಕ ಅಸಿಮ್ ಮುನೀರ್ ಅವರಿಗೆ ಹೆಚ್ಚಿನ ಅಧಿಕಾರ ನೀಡುತ್ತಿರುವುದು ಭಾರೀ ಚರ್ಚೆಗೆ ಗ್ರಾಸವಾಗಿದೆ. ಇದೇ ವಿಚಾರವಾಗಿ ಪಾಕಿಸ್ತಾನದ ಸಂಸತ್ತಿನ ಮೇಲ್ಮನೆಯಾದ ಸೆನೆಟ್‌ನಲ್ಲಿ ಮಾತನಾಡಿರುವ ಪಾಕಿಸ್ತಾನದ ಉಪಪ್ರಧಾನಿ ವಿದೇಶಾಂಗ ಸಚಿವ ಇಶಾಕ್ ದಾರ್, ಸಂವಿಧಾನಕ್ಕೆ 27ನೇ ತಿದ್ದುಪಡಿ ಪ್ರಸ್ತಾವನೆಯನ್ನು ದೃಢಪಡಿಸಿದರು. ಅಲ್ಲದೇ ಇಶಾಕ್ ದಾರ್ ಅವರು ಈ ತಿದ್ದುಪಡಿ ಅಗತ್ಯತೆಯನ್ನು ಒತ್ತಿ ಹೇಳಿದ್ದಾರೆ.**

ಉದಯ ವಾಹಿನಿ

ಪ್ರಾದೇಶಿಕ

ಶುಕ್ರವಾರ
07 ನವೆಂಬರ್ 2025



## ಮಿನಿ ನ್ಯೂಸ್

### ರಾಹುಲ್‌ಗಾಂಧಿ ಆರೋಪ ನಿರಾಕರಿಸಿದ ಬ್ರೇಜಿಲ್ ಮಾಡಲ್

**ನವದೆಹಲಿ:** ರಾಹುಲ್‌ಗಾಂಧಿ ಅವರು ಮಾಡಿದ್ದ ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಮತಗಳ್ಳತನದ ಆರೋಪವನ್ನು ಸ್ವತಃ ಬ್ರೆಜಿಲಿಯನ್ ಮಾಡೆಲ್ ಅಲ್ಲಗಳೆದಿದ್ದಾರೆ. ಹರಿಯಾಣ ಚುನಾವಣೆಯಲ್ಲಿ ಭಾರೀ ಅಕ್ರಮ ನಡೆದಿದೆ. ಬ್ರೆಜಿಲ್ ರೂಪದರ್ಶಿ 22 ಕಡೆ ಮತ ಚಲಾಯಿಸಿದ್ದಾರೆ ಎಂದು ಸುದ್ದಿಗೋಷ್ಠಿ ನಡೆಸಿ ರಾಹುಲ್ ಗಾಂಧಿ ಗಂಭೀರ ಆರೋಪ ಮಾಡಿದ್ದರು. ಈ ಆರೋಪದ ಬಗ್ಗೆ ಬ್ರೆಜಿಲ್ ಮಾಡೆಲ್ ಲಾರಿಸಾ ಪ್ರತಿಕ್ರಿಯೆ ನೀಡಿ ರಾಹುಲ್ ಆರೋಪವನ್ನು ಸಾರಾಸಗಟಾಗಿ ನಿರಾಕರಿಸಿದ್ದಾರೆ. ರಾಹುಲ್ ನನ್ನ ಹಳೆಯ ಫೋಟೊ ಬಳಸಿ ಸೀಮಾ, ಸರಸ್ವತಿ ಎಂದು ಕರೆಯುತ್ತಿದ್ದಾರೆ. ನಾನು ಬ್ರೆಜಿಲಿಯನ್ ಇದು ರಾಜಕೀಯ ನಾಟಕದಂತೆ ಕಾಣುತ್ತಿದೆ. ಮಾಧ್ಯಮಗಳು ನನ್ನನ್ನು ಸಂಪರ್ಕಿಸಲು ಪ್ರಯತ್ನಿಸುತ್ತಿವೆ ಎಂದು ಅವರು ತಿಳಿಸಿದ್ದಾರೆ.

ಭಾರತದ ಚುನಾವಣೆಯಲ್ಲಿ ತನ್ನ ಹೆಸರು ಕೇಳಿಬಂದಿರುವುದಕ್ಕೆ ಲಾರಿಸಾ ಅಚ್ಚರಿ ವ್ಯಕ್ತಪಡಿಸಿದ್ದಾರೆ. ಈ ಫೋಟೊ ನನ್ನ ಆರಂಭಿಕ ಮಾಡೆಲಿಂಗ್ ದಿನಗಳ ಹಳೆಯ ಸ್ಟಾಕ್ ಫೋಟೊ. ನಾನೀಗ ಮಾಡೆಲ್ ಅಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಯಾರಾದ್ರೂ ಗಂಟೆಗೆ 20 ವೋಟ್ ಹಾಕೋಕೆ ಸಾಧ್ಯವಾ ಎಂದು ಬಿಜೆಪಿ ಪ್ರಶ್ನೆ ಭಾರತದ ರಾಜಕೀಯಕ್ಕೂ ನನಗೂ ಯಾವುದೇ ಸಂಬಂಧವಿಲ್ಲ. ನನ್ನ ಫೋಟೊವನ್ನು ಸ್ಟಾಕ್ ಇಮೇಜ್ ಪ್ಲಾಟ್‌ಫಾರ್ಮ್‌ನಿಂದ ಖರೀದಿಸಲಾಗಿದೆ. ನಾನು ಎಂದಿಗೂ ಭಾರತಕ್ಕೆ ಹೋಗಿಲ್ಲ. ನಾನು ಬ್ರೆಜಿಲಿಯನ್ ಡಿಜಿಟಲ್ ಇನ್‌ಫ್ಲುಯೆನ್ಸರ್ ಮತ್ತು ಕೇಶ ವಿನ್ಯಾಸಕಿ. ನಾನು ಭಾರತೀಯ ಜನರನ್ನು ಪ್ರೀತಿಸುತ್ತೇನೆ ಎಂದು ತಿಳಿಸಿದ್ದಾರೆ.

### ಹರಿಯಾಣದಂತೆ ಬಿಹಾರದಲ್ಲೂ ಮತಗಳ್ಳತನ ಯತ್ನ ನಡೆಯುತ್ತಿದೆ

**ಮೊತಿಹಾರಿ:** ಹರಿಯಾಣದಲ್ಲಿ ಮತಗಳ್ಳತನ ಮಾಡಿದಂತೆ ಬಿಹಾರದಲ್ಲೂ ಮಾಡಲು ಎನ್‌ಡಿಎ ತಯಾರಿ ನಡೆಸುತ್ತಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ಹೇಳಿದ್ದಾರೆ.

ಸೀತಮ್‌ಹಾರಿ, ಚಂಪಾರಣ್ಯ ಜಿಲ್ಲೆಯಲ್ಲಿ ನಡೆದ ಚುನಾವಣಾ ಸಮಾವೇಶದಲ್ಲಿ ಮಾತನಾಡಿದ ಅವರು, ಸಂವಿಧಾನ, ಪ್ರಜಾಸತಾತ್ಮಕ ಹಕ್ಕುಗಳನ್ನು ದುರ್ಬಲಗೊಳಿಸಲು ಚುನಾವಣಾ ಆಯೋಗವು ಕೇಂದ್ರ ಸರ್ಕಾರದೊಂದಿಗೆ ಸೇರಿಕೊಂಡಿದೆ ಎಂದು ಆರೋಪಿಸಿದ್ದಾರೆ.

ಹರಿಯಾಣದಲ್ಲಿ ಇಡೀ ಚುನಾವಣೆಯನ್ನು ಕಳ್ಳತನ ಮಾಡಿದಂತೆ, 65 ಲಕ್ಷ ಮತದಾರರನ್ನು ಪಟ್ಟಿಯಿಂದ ಕೈಬಿಡುವ ಮೂಲಕ ಬಿಹಾರದಲ್ಲೂ ಆ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಮಹಾತ್ಮ ಗಾಂಧಿಯಂತೆ ರಾಹುಲ್ ಗಾಂಧಿ ಕೂಡ ನಿಮ್ಮ, ಸತ್ಯದ ಪರವಾಗಿ ಹೋರಾಟ ಮಾಡುತ್ತಿದ್ದಾರೆ. ದೇಶಕ್ಕೆ ದ್ರೋಹ ಮಾಡಿದವರನ್ನು ಜನರು ಎಂದಿಗೂ ಮರೆಯುವುದಿಲ್ಲ ಎಂದು ಹೇಳಿದ್ದಾರೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯುಕ್ತರಾದ ವಿವೇಕ್ ಜೋಶಿ ಜಾಗೂ ಎಸ್.ಎಸ್ ಸಂಧು ಅವರು ಭಾರತದ ಸಂವಿಧಾನ, ಪ್ರಜಾಪ್ರಭುತ್ವವನ್ನು ಅಣಕಿಸುತ್ತಿದ್ದಾರೆ. ನಿವೃತ್ತಿ ಬಳಿಕ ನೆಮ್ಮದಿಯ ಜೀವನ ಸಾಗಿಸುತ್ತೇವೆ ಎಂದು ನೀವು ಅಂದುಕೊಂಡಿದ್ದರೆ ಅದು ನಡೆಯುವುದಿಲ್ಲ ಎಂದು ಎಚ್ಚರಿಸಿದ್ದಾರೆ.

### ನ.8ರಂದು 4 ವಂದೇ ಭಾರತ್ ರೈಲುಗಳಿಗೆ ಮೋದಿ ಚಾಲನೆ

**ನವದೆಹಲಿ:** ನವೆಂಬರ್ 8ರಂದು ಎರ್ನಾಕುಲಂ-ಬೆಂಗಳೂರು ಸೇರಿದಂತೆ ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ.

ನವೆಂಬರ್ 8ರಂದು ವಾರಾಣಸಿಗೆ ಪ್ರಧಾನಿ ಮೋದಿ ಭೇಟಿ ನೀಡಲಿದ್ದಾರೆ. ಈ ವೇಳೆ ನಾಲ್ಕು ಹೊಸ ವಂದೇ ಭಾರತ್ ರೈಲುಗಳ ಸಂಚಾರವನ್ನು ಉದ್ಘಾಟಿಸಲಿದ್ದಾರೆ ಎಂದು ಪ್ರಧಾನಿ ಕಾರ್ಯಾಲಯದ ಅಧಿಕೃತ ಪ್ರಕಟಣೆ ತಿಳಿಸಿದೆ.

### ಅಕ್ರಮ ವಲಸಿಗರಿಂದ ಉದ್ಯೋಗ ನಷ್ಟ; ಭದ್ರತಾ ಬೆದರಿಕೆ: ಅಮಿತ್ ಶಾ

**ಬೆತಿಯಾ:** ಬಾಂಗ್ಲಾದೇಶದ ಅಕ್ರಮ ವಲಸಿಗರು ಉದ್ಯೋಗಗಳನ್ನು ಕಸಿದುಕೊಳ್ಳುತ್ತಿದ್ದು, ದೇಶದ ಭದ್ರತೆಗೆ ಬೆದರಿಕೆ ಒಡ್ಡುತ್ತಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುರುವಾರ ಹೇಳಿದ್ದಾರೆ. ಆದರೆ ಬಿಹಾರ ವಿಧಾನಸಭಾ ಚುನಾವಣೆಯು ಪೂರ್ವ ರಾಜ್ಯವನ್ನು ನುಸುಳುಕೋರರಿಂದ ಮುಕ್ತಗೊಳಿಸಲಿದೆ ಎಂದು ಅಮಿತ್ ಶಾ ಹೇಳಿದ್ದಾರೆ. ಪಶ್ಚಿಮ ಚಂಪಾರಣ್ ಮತ್ತು ಮೋತಿಹಾರಿ ಜಿಲ್ಲೆಗಳಲ್ಲಿ ಚುನಾವಣಾ ಸಮಾವೇಶ ಉದ್ದೇಶಿಸಿ ಮಾತನಾಡಿದ ಅಮಿತ್ ಶಾ, ಆರ್‌ಜೆಡಿ ಅಧಿಕಾರದಲ್ಲಿದ್ದಾಗ ಹತ್ಯೆ, ಅತ್ಯಾಚಾರ ಪ್ರಕರಣಗಳು ಸಾಮಾನ್ಯವಾಗಿತ್ತು. ಆದರೆ ಎನ್‌ಡಿಎ ಸರ್ಕಾರದಲ್ಲಿ ಅವುಗಳಿಗೆ ಯಾವುದೇ ಸ್ಥಾನವಿಲ್ಲ ಎಂದಿದ್ದಾರೆ.

ಬಿಹಾರದಲ್ಲಿ ಜಂಗಲ್ ರಾಜ್ ತಡೆಯಲು ಪ್ರಧಾನಿ ನರೇಂದ್ರ ಮೋದಿ, ಸಿಎಂ ನಿತೀಶ್ ಕುಮಾರ್ ಅವರಿಂದ ಮಾತ್ರ ಸಾಧ್ಯ. ಮತ್ತೊಂದೆಡೆ ಲಾಲೂ ಪ್ರಸಾದ್, ರಾಹುಲ್ ಗಾಂಧಿ ನುಸುಳುಕೋರರಿಗೆ ದಾರಿ ಮಾಡಿ ಕೊಡಲು ಪ್ರಯತ್ನಿಸುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ. ಬಿಹಾರವು ಇಂದಿರಾ ಗಾಂಧಿ ಅವರ ಭ್ರಷ್ಟಾಚಾರದ ವಿರುದ್ಧ ಹೋರಾಟ ನಡೆಸಿತು. ತುರ್ತು ಪರಿಸ್ಥಿತಿಯನ್ನು ವಿರೋಧಿಸಿತು. ಆದರೆ ಈಗ ಆರ್‌ಜೆಡಿಯ ಸಹಾಯದಿಂದ ಕಾಂಗ್ರೆಸ್ ರಾಜ್ಯವನ್ನು ಆಳಲು ಯತ್ನಿಸುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

## ನಿರ್ಧರಿಸಿದ ಆರೋಪಿ ಮುಸ್ಕಾನ್ ಕುಟುಂಬ



**ಮೀರಟ್ (ಉತ್ತರ ಪ್ರದೇಶ):** ಅಳಿಯ ಸೌರಭ್ ರಜಪೂತ್ ಕೊಲೆ ಪ್ರಕರಣದಲ್ಲಿ ಮಗಳು ಮುಸ್ಕಾನ್ ಜೈಲು ಸೇರಿದ ನಂತರ ನಮ್ಮ ಕುಟುಂಬದ ಪರಿಸ್ಥಿತಿ ತೀರಾ ಹದಗೆಟ್ಟಿದೆ. ಸಂಬಂಧಿಕರು, ಸಮಾಜ ನಮ್ಮಿಂದ ಅಂತರ ಕಾಯ್ದುಕೊಳ್ಳುತ್ತಿದೆ. ಕುಟುಂಬದ ಆರ್ಥಿಕ ಪರಿಸ್ಥಿತಿಯೂ ಹದಗೆಟ್ಟಿದೆ ಎಂದು ಮುಸ್ಕಾನ್ ತಂದೆ ಪ್ರಮೋದ್ ರಸ್ತೋಗಿ ನೋವು ತೋಡಿಕೊಂಡಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಈ ಪರಿಸರದಲ್ಲಿ ಬದುಕಲು ನಮಗೆ ಸಾಧ್ಯವಿಲ್ಲ. ಆ ಕಾರಣಕ್ಕೆ ಮನೆ ಮಾರಾಟ ಮಾಡಿ ದೂರ ಹೋಗಲು ನಿರ್ಧರಿಸಿದ್ದೇವೆ ಎಂದು ಅವರು ತಿಳಿಸಿದ್ದಾರೆ. ಅವರ ಮನೆಯ ಗೇಟಿನಲ್ಲಿ ಮನೆ ಮಾರಾಟಕ್ಕಿದೆ ಎಂಬ ಬೋರ್ಡ್ ಇದೀಗ ಎಲ್ಲರ ಗಮನ ಸೆಳೆದಿದೆ. ಕೊಲೆ ಪ್ರಕರಣದ ನಂತರ ನಮ್ಮ ಆಭರಣ ಅಂಗಡಿಯಲ್ಲಿ ವ್ಯವಹಾರ ಇಲ್ಲದೇ ಮುಚ್ಚುವ ಹಂತಕ್ಕೆ ಬಂದಿದೆ. ಗ್ರಾಹಕರು ನನ್ನ ಅಂಗಡಿಯತ್ತ ಸುಳಿಯುತ್ತಿಲ್ಲ. ಕಿರಿಯ ಮಗಳು ಮನೆಯಲ್ಲಿ ಟ್ಯೂಷನ್ ಕೊಡುತ್ತಿದ್ದಳು. ಇದೀಗ ಮಕ್ಕಳನ್ನು ಕಳುಹಿಸಲು ಪೋಷಕರು ಹಿಂಜರಿಯುತ್ತಿದ್ದರಿಂದ ಆ ಆದಾಯವು ನಿಂತಿದೆ ಎಂದು ದುಃಖ ವ್ಯಕ್ತಪಡಿಸಿದ್ದಾರೆ.

ಇದೇ ವರ್ಷ ಮಾರ್ಚ್ 3ರಂದು ಸೌರಭ್ ರಜಪೂತ ಅವರ ಕೊಲೆ ನಡೆದಿತ್ತು. ಪ್ರಿಯತಮ ಸಾಹಿಲ್ ಶುಕ್ಲಾ ಜೊತೆ ಸೇರಿ ಪತಿಯನ್ನು ಕೊಂದಿರುವುದಾಗಿ ಮುಸ್ಕಾನ್ ಮನೆಯವರ ಬಳಿ ತಿಳಿಸಿದ್ದಳು. ಆಕೆಯ ಕುಟುಂಬ ಈ ವಿಷಯವನ್ನು ಪೊಲೀಸರಿಗೆ ತಿಳಿಸಿದ್ದರು. ಸೌರಭ್ ಕೊಲೆ ಮಾಡಿ, ದೇಹವನ್ನು ನಾಲ್ಕು ತುಂಡುಗಳಾಗಿ ಕತ್ತರಿಸಿ, ನೀಲಿ ಡ್ರಮ್‌ಗೆ ತುಂಬಿ ಸಿಮೆಂಟ್‌ನಿಂದ ಮುಚ್ಚಿದ್ದರು. ಮಾರ್ಚ್ 19ರಂದು ಮುಸ್ಕಾನ್ ಮತ್ತು ಸಾಹಿಲ್ ಅವರನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ನಂತರ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಯಿತು. ಸದ್ಯ ಮೀರತ್ ಜಿಲ್ಲಾ ಜೈಲಿನಲ್ಲಿ ಇರಿಸಲಾಗಿದ್ದು, ಅಲ್ಲಿ ಮುಸ್ಕಾನ್ ಗರ್ಭಿಣಿಯಾಗಿದ್ದಾಳೆ. ಏತನ್ಮಧ್ಯೆ, ಮಗುವಿನ ಡಿಎನ್ಎ ಪರೀಕ್ಷೆ ನಡೆಸುವಂತೆ ಸೌರಭ್ ಕುಟುಂಬ ಒತ್ತಾಯಿಸಿದ್ದು, ಪರೀಕ್ಷೆಯಲ್ಲಿ ಮಗು ಸೌರಭ್ ಅವರದ್ದೇ ಎಂದು ಸಾಬೀತಾದರೆ ಮಾತ್ರ ಆ ಮಗುವನ್ನು ಸ್ವೀಕರಿಸುವುದಾಗಿ ತಿಳಿಸಿದೆ. ಮಗಳ ಜೊತೆಗಿನ ಎಲ್ಲಾ ಸಂಬಂಧವನ್ನು ಕಡಿದುಕೊಂಡಿರುವ ರಸ್ತೋಗಿ ಕುಟುಂಬ, ಜೈಲಿನಲ್ಲಿರುವ ಮಗಳನ್ನು ಭೇಟಿ ಮಾಡಲು ಬರುತ್ತಿಲ್ಲ ಎಂದು ಜೈಲು ಸಿಬ್ಬಂದಿ ತಿಳಿಸಿದ್ದಾರೆ. ಸಾಹಿಲ್‌ನನ್ನು ನೋಡಲು ಅವನ ಸಹೋದರ ಮತ್ತು ಅಜ್ಜಿ ಬಂದು ಹೋಗುತ್ತಿದ್ದಾರೆ ಎಂದು ಹೇಳಿದ್ದಾರೆ.

# ಫಿಲಿಪೈನ್ಸ್‌ನಲ್ಲಿ ಕಲ್ಮಾಗಿ ಚಂಡಮಾರುತ ಅಬ್ಬರ

## 144 ಬಲಿ ; ತುರ್ತು ಪರಿಸ್ಥಿತಿ ಘೋಷಿಸಿದ ಫಿಲಿಪೈನ್ ಅಧ್ಯಕ್ಷ

**ಮನಿಲಾ:** ಫಿಲಿಪೈನ್ಸ್ ದೇಶದಲ್ಲಿ 'ಕಲ್ಮಾಗಿ' ಎಂಬ ಭೀಕರ ಚಂಡಮಾರುತ ಅಪ್ಪಳಿಸಿ ಕನಿಷ್ಠ 114 ಮಂದಿಯ ಪ್ರಾಣ ಬಲಿ ಪಡೆದಿದೆ. ಈ ದುರಂತದಲ್ಲಿ ನೂರಾರು ಮಂದಿ ನಾಪತ್ತೆಯಾಗಿದ್ದಾರೆ. ದೇಶದ ಕೇಂದ್ರ ಭಾಗದಲ್ಲಿ ಈ ಚಂಡಮಾರುತ ತೀವ್ರ ಹಾನಿ ಮಾಡಿದೆ. ಈ ಹಿನ್ನೆಲೆಯಲ್ಲಿ, ಫಿಲಿಪೈನ್ಸ್ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೋಸ್ ಜೂನಿಯರ್ ಅವರು ದೇಶಾದ್ಯಂತ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ.



**ಫಿಲಿಪೈನ್ಸ್ ನಲ್ಲಿ ತುರ್ತು ಪರಿಸ್ಥಿತಿ:** ಈ ಚಂಡಮಾರುತ ಈ ವರ್ಷ ದೇಶವನ್ನು ಅಪ್ಪಳಿಸಿದ ಅತ್ಯಂತ ಮಾರಕ ನೈಸರ್ಗಿಕ ವಿಕೋಪವಾಗಿದ್ದು, ಪ್ರವಾಹದಿಂದಾಗಿ 114 ಜನ ಸಾವನ್ನಪ್ಪಿದ್ದಾರೆ ಮತ್ತು 127 ಮಂದಿ ಇನ್ನೂ ನಾಪತ್ತೆಯಾಗಿದ್ದಾರೆ, ಅವರಲ್ಲಿ ಹಲವರು ಹೆಚ್ಚು ಹಾನಿಗೊಳಗಾದ ಸೆಬು ಪ್ರಾಂತ್ಯದಲ್ಲಿದ್ದಾರೆ. ಇನ್ನು ಈ ಬೆನ್ನಲ್ಲೇ ದೇಶಾದ್ಯಂತ ತುರ್ತು ಪರಿಸ್ಥಿತಿ ಘೋಷಣೆಯಾಗಿದೆ.

**127 ಮಂದಿ ಇನ್ನೂ ನಾಪತ್ತೆ**

ಈ ಕುರಿತು ಮಾಹಿತಿ ನೀಡಿರುವ ಫಿಲಿಪೈನ್ಸ್‌ನ ನಾಗರಿಕ ರಕ್ಷಣಾ ಕಚೇರಿ ಕಲ್ಮಾಗಿ ಚಂಡಮಾರುತವು ಸೆಬು ಪ್ರಾಂತ್ಯದಲ್ಲಿ ಆಕಸ್ಮಿಕ ಪ್ರವಾಹವನ್ನು ಉಂಟುಮಾಡಿತು. ನದಿಗಳು ಮತ್ತು ಇತರ ಜಲಮಾರ್ಗಗಳು ಉಕ್ಕಿ ಹರಿದವು. ಇದರಿಂದಾಗಿ ವಸತಿ ಪ್ರದೇಶಗಳು ಜಲಾವೃತಗೊಂಡವು. ನಿವಾಸಿಗಳು ತಮ್ಮ ಛಾವಣಿಗಳ ಮೇಲೆ ಏರಿ, ಪ್ರವಾಹದ ನೀರಿನಿಂದ ಪಾರಾಗಲು ಸಹಾಯಕ್ಕಾಗಿ ಮೊರೆ ಇಡಬೇಕಾದ ಪರಿಸ್ಥಿತಿ ಎದುರಾಗಿದೆ. ಇನ್ನು, ಚಂಡಮಾರುತದ ಅಬ್ಬರದಿಂದ ಸುಮಾರು 20 ಲಕ್ಷ ಜನರು ತೊಂದರೆಗೀಡಾಗಿದ್ದಾರೆ. 5.60 ಲಕ್ಷಕ್ಕೂ ಹೆಚ್ಚು ಗ್ರಾಮಸ್ಥರು ನಿರಾಶ್ರಿತರಾಗಿದ್ದಾರೆ. ಇವರಲ್ಲಿ ಸುಮಾರು 4.50 ಲಕ್ಷ ಜನರನ್ನು ತುರ್ತು ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿದೆ ಎಂದು ತಿಳಿಸಿದೆ. ಸೆಬು ಪ್ರಾಂತ್ಯದಲ್ಲಿಯೇ ಕನಿಷ್ಠ 71 ಜನರು ಮೃತಪಟ್ಟಿದ್ದಾರೆ. 65 ಮಂದಿ ನಾಪತ್ತೆಯಾಗಿದ್ದಾರೆ, 69 ಮಂದಿ ಗಾಯಗೊಂಡಿದ್ದಾರೆ. ಅಲ್ಲದೆ, ಸೆಬು ಸಮೀಪವಿರುವ ನೆಗ್ರೋಸ್ ಆಕ್ಸಿಡೆಂಟಲ್ ಪ್ರಾಂತ್ಯದಲ್ಲಿ 62 ಮಂದಿ ನಾಪತ್ತೆಯಾಗಿದ್ದಾರೆ ಎಂದು ನಾಗರಿಕ ರಕ್ಷಣಾ ಕಚೇರಿ ಹೇಳಿದೆ. ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಸೆಬು ಗವರ್ನರ್ ಪಮೆಲಾ ಬಾರಿಕುಯಾಟ್ರೊ, ಸೆಬು ಪ್ರಾಂತ್ಯದಲ್ಲಿ ವರ್ಷಗಟ್ಟಲೆ ನಡೆದ ಕಲ್ಲು ಗಣಿಗಾರಿಕೆ ಚಟುವಟಿಕೆಗಳಿಂದಾಗಿ ನದಿಗಳು ಮುಚ್ಚಿಹೋಗಿ, ಪ್ರವಾಹ ಉಂಟಾಗಲು ಕಾರಣವಾಗಿದೆ. ಅಲ್ಲದೆ, ಕಳಪೆ ಪ್ರವಾಹ ನಿಯಂತ್ರಣ ಯೋಜನೆಗಳು ಪರಿಸ್ಥಿತಿಯನ್ನು ಇನ್ನಷ್ಟು ಹದಗೆಡಿಸಿರಬಹುದು, ನಾವು ಪ್ರವಾಹದಿಂದ ಉಂಟಾಗುತ್ತಿರುವ ಪರಿಸ್ಥಿತಿಯನ್ನು ನಿಯಂತ್ರಿಸಲು ನಮ್ಮ ಕೈಲಾದ ಎಲ್ಲಾ ಪ್ರಯತ್ನಗಳನ್ನು ಮಾಡಿದ್ದೇವೆ, ಆದರೆ ಪ್ರವಾಹದಂತಹ ಅನಿರೀಕ್ಷಿತ ಘಟನೆಗಳು ಸಂಭವಿಸುತ್ತವೆ ಎಂದು ಹೇಳಿದ್ದಾರೆ.

**ಪ್ರಕೃತಿ ವಿಕೋಪದ ಕೇಂದ್ರ ಬಿಂದುವಿನಂತಿದೆ ಫಿಲಿಪೈನ್ಸ್:** ಫಿಲಿಪೈನ್ಸ್ ದೇಶವು ಪ್ರತಿ ವರ್ಷ ಸುಮಾರು 20 ಚಂಡಮಾರುತಗಳು, ಬಿರುಗಾಳಿಗಳಿಂದ ತತ್ತರಿಸುತ್ತದೆ. ಈ ದೇಶವು ಆಗಾಗ್ಗೆ ಭೂಕಂಪಗಳಿಂದಲೂ ಬಾಧಿತವಾಗುತ್ತದೆ ಮತ್ತು ಹನ್ನೆರಡಕ್ಕೂ ಹೆಚ್ಚು ಸಕ್ರಿಯ ಅಗ್ನಿಪರ್ವತಗಳನ್ನು ಹೊಂದಿದ್ದು, ಇದು ವಿಶ್ವದ ಅತ್ಯಂತ ವಿಪತ್ತು-ಪೀಡಿತ ದೇಶಗಳಲ್ಲಿ ಒಂದಾಗಿದೆ.

ಇನ್ನು, ಸೆಬು ಪ್ರಾಂತ್ಯವು ಸೆಪ್ಟೆಂಬರ್ 30ರಂದು ಸಂಭವಿಸಿದ 6.9 ತೀವ್ರತೆಯ ಭೂಕಂಪದಿಂದ ಇನ್ನೂ ಚೇತರಿಸಿಕೊಳ್ಳುತ್ತಿತ್ತು. ಆ ಭೂಕಂಪದಲ್ಲಿ ಕನಿಷ್ಠ 79 ಜನರು ಮೃತಪಟ್ಟಿದ್ದರು ಮತ್ತು ಸಾವಿರಾರು ಜನರು ನಿರಾಶ್ರಿತರಾಗಿದ್ದರು. ಮನೆಗಳು ಕುಸಿದು ಬಿದ್ದಿದ್ದವು ಅಥವಾ ತೀವ್ರವಾಗಿ ಹಾನಿಗೊಳಗಾಗಿದ್ದವು.

ಭೂಕಂಪದಿಂದ ಸ್ಥಳಾಂತರಗೊಂಡ ಉತ್ತರ ಸೆಬು ನಿವಾಸಿಗಳಲ್ಲಿ ಸಾವಿರಾರು ಜನರನ್ನು, ಚಂಡಮಾರುತ ಅಪ್ಪಳಿಸುವ ಮೊದಲು, ದುರ್ಬಲ ಡೇರೆಗಳಿಂದ ಬಲವಾದ ಆಶ್ರಯ ಕೇಂದ್ರಗಳಿಗೆ ಸ್ಥಳಾಂತರಿಸಲಾಗಿತ್ತು. ಈಗ ಮತ್ತೆ ಗಾಯದ ಮೇಲೆ ಬರೆ ಎಳೆದಂತೆ ಸೆಬು ಪ್ರಾಂತ್ಯದ ಜನರಿಗೆ ಪ್ರವಾಹ ಇನ್ನೊಂದು ಸಮಸ್ಯೆಯಾಗಿ ಪರಿಣಮಿಸಿದೆ.

### ರಕ್ಷಣೆಗೆ ಧಾವಿಸಿದ್ದ ಸೇನಾ ಹೆಲಿಕಾಪ್ಟರ್ ಪತನ, 6 ಸಾವು

**ಕಲ್ಮಾಗಿ ಚಂಡಮಾರುತದಿಂದಾಗಿ ಸಂಭವಿಸಿದ ಸಾವುಗಳಲ್ಲಿ, ದಕ್ಷಿಣದ ಅಗಸಾನ್ ಡೆಲ್ ಸುರ್ ಪ್ರಾಂತ್ಯದಲ್ಲಿ ಫಿಲಿಪೈನ್ಸ್ ವಾಯುಪಡೆಯ ಹೆಲಿಕಾಪ್ಟರ್ ಪತನಗೊಂಡು ಆರು ಮಂದಿ ಮೃತಪಟ್ಟಿದ್ದಾರೆ. ಈ ಹೆಲಿಕಾಪ್ಟರ್ ಚಂಡಮಾರುತದಿಂದ ಹಾನಿಗೊಳಗಾದ ಪ್ರಾಂತ್ಯಗಳಿಗೆ ಮಾನವೀಯ ಸಹಾಯವನ್ನು ಒದಗಿಸಲು ತೆರಳುತ್ತಿತ್ತು ಎಂದು ಸೇನೆ ತಿಳಿಸಿದೆ. ಕಲ್ಮಾಗಿ ಚಂಡಮಾರುತದ ಮಾರಕ ಪರಿಣಾಮಗಳನ್ನು ಎದುರಿಸುತ್ತಿರುವಾಗಲೇ, ಪೆಸಿಫಿಕ್ ಮಹಾಸಾಗರದಿಂದ ಮತ್ತೊಂದು ಉಷ್ಣವಲಯದ ಚಂಡಮಾರುತವು ಸೂಪರ್ ಚಂಡಮಾರುತವಾಗಿ ಬಲಗೊಂಡು ಮುಂದಿನ ವಾರದ ಆರಂಭದಲ್ಲಿ ಉತ್ತರ ಫಿಲಿಪೈನ್ಸ್‌ಗೆ ಅಪ್ಪಳಿಸಬಹುದು ಎಂದು ವಿಪತ್ತು ನಿರ್ವಹಣಾ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.**

# ಬಿಹಾರದ ಡಿಸಿಎಂ ಕಾರಿನ ಮೇಲೆ ಕಲ್ಲು ತೂರಾಟ

**ಲಖಿಸರೈ:** ಭಾರೀ ಕುತೂಹಲ ಮೂಡಿಸಿದ್ದ ಬಿಹಾರ ವಿಧಾನಸಭೆಯ ಚುನಾವಣೆಯ ಮೊದಲ ಹಂತದ ಮತದಾನ ಗುರುವಾರ ನಡೆದಿದೆ. ಈ ಮಧ್ಯೆ, ಡಿಸಿಎಂ ಮತ್ತು ಲಖಿಸರೈನ ಬಿಜೆಪಿ ಅಭ್ಯರ್ಥಿ ವಿಜಯ್ ಕುಮಾರ್ ಸಿನ್ಹಾ ಅವರ ಕಾರಿನ ಮೇಲೆ ಖೋರಿಯಾರಿ ಗ್ರಾಮದಲ್ಲಿ ಗುಂಪೊಂದು ಚಪ್ಪಲಿ, ಕಲ್ಲು, ಸಗಣಿ ಎಸೆದು ದಾಳಿ ನಡೆಸಿದೆ. ವಿಜಯ್ ಕುಮಾರ್ ಸಿನ್ಹಾ ಭೂಮಿಹಾರ್ ನಾಯಕ ಮತ್ತು ಮೂರು ಬಾರಿ ಶಾಸಕರಾಗಿದ್ದಾರೆ. ಅವರು ಈ ಬಾರಿಯೂ ತಮ್ಮ ತವರು ಕ್ಷೇತ್ರದಿಂದಲೇ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದಲ್ಲಿ ಮತದಾನ ನಡೆಯುತ್ತಿರುವ ಕಾರಣ, ಖೋರಿಯಾರಿ ಗ್ರಾಮಕ್ಕೆ ಭೇಟಿ ನೀಡುತ್ತಿದ್ದರು. ಇದನ್ನು ತಡೆಯಲು ಅವರ ಕಾರಿನ ಮೇಲೆ ಕಲ್ಲು ಸಗಣಿ ಎಸೆದು, ಮುರ್ದಾಬಾದ್ ಎಂದು ಘೋಷಣೆ ಕೂಗಿ ಭಾರಿ ಪ್ರತಿಭಟನೆ ನಡೆಸಿದರು. ಆರ್‌ಜೆಡಿ ಪಕ್ಷದವರು ಈ ಕೃತ್ಯ ಎಸಗಿದ್ದಾರೆ ಎಂದು ಡಿಸಿಎಂ ಸಿನ್ಹಾ ಆರೋಪಿಸಿದ್ದಾರೆ.



**ಎದೆ ಮೇಲೆ ಬುಲ್ಡೋಜರ್ ಹರಿಸ್ತೇವೆ:** ಇವರು ಆರ್‌ಜೆಡಿ ನಾಯಕರಲ್ಲ ಗೂಂಡಾಗಳು. ಎನ್‌ಡಿಎ ಅಧಿಕಾರಕ್ಕೆ ಮರಳುತ್ತಿದೆ ಎಂದು ಅವರಿಗೆ ತಿಳಿದಿದೆ, ಅದಕ್ಕಾಗಿಯೇ ಅವರು ಗೂಂಡಾಗಿರಿಗೆ ಇಳಿದಿದ್ದಾರೆ. ಎನ್‌ಡಿಎ ಅಧಿಕಾರಕ್ಕೆ ಬಂದ ನಂತರ ಆರ್‌ಜೆಡಿ ಗೂಂಡಾಗಳ ಎದೆ ಮೇಲೆ ಬುಲ್ಡೋಜರ್ ಹರಿಯಲಿದೆ. ಗ್ರಾಮಕ್ಕೆ ಭೇಟಿ ನೀಡಲು ಗೂಂಡಾಗಳು ಬಿಡುತ್ತಿಲ್ಲ. ಮತಗಟ್ಟೆ ಏಜೆಂಟ್ ಅವರನ್ನು ವಾಪಸ್ ಕಳುಹಿಸಿದ್ದಾರೆ. ಮತ ಚಲಾಯಿಸಲು ಬಿಡಲಿಲ್ಲ. ಖೋರಿಯಾರಿ ಗ್ರಾಮದ ಬೂತ್ ಸಂಖ್ಯೆ 404, 405ರಲ್ಲಿ ಮತ ಚಲಾಯಿಸದಂತೆ ತಡೆಹಿಡಿದ್ದಾರೆ? ಎಂದು ವಿಜಯ್ ಕುಮಾರ್ ಸಿನ್ಹಾ ಕಿಡಿಕಾರಿದರು.

**ಮೊದಲ ಹಂತದ ಮತದಾನ:** ಬಿಹಾರದಲ್ಲಿ ನಡೆಯುತ್ತಿರುವ ಮೊದಲ ಹಂತದ ಮತದಾನವು ಹಲವು ಸಚಿವರು, ತೇಜಸ್ವಿ ಯಾದವ್, ಅವರ ಸಹೋದರ ತೇಜ್ ಪ್ರತಾಪ್ ಸೇರಿದಂತೆ ಪ್ರಮುಖ ಆರ್ಜೆಡಿ ನಾಯಕರ ಭವಿಷ್ಯವನ್ನು ನಿರ್ಧರಿಸಲಿದೆ. ರಾಘೋಪುರ, ಮಹುವಾ, ತಾರಾಪುರ ಕ್ಷೇತ್ರಗಳು ಹೆಚ್ಚಿನ ಗಮನ ಸೆಳೆದಿವೆ. ರಾಘೋಪುರದಲ್ಲಿ ತೇಜಸ್ವಿ ಯಾದವ್ ಸತತ ಮೂರನೇ ಬಾರಿಗೆ ಗೆಲುವು ಸಾಧಿಸಲು ಯತ್ನಿಸುತ್ತಿದ್ದಾರೆ. ಮಹುವಾದಲ್ಲಿ ತೇಜ್ ಪ್ರತಾಪ್ ಸ್ಪರ್ಧಿಸುತ್ತಿದ್ದಾರೆ. ತಾರಾಪುರದಲ್ಲಿ ಉಪ ಮುಖ್ಯಮಂತ್ರಿ ಸಮ್ರಾಟ್ ಚೌಧರಿ ಸ್ಪರ್ಧಿಸುತ್ತಿದ್ದಾರೆ.

### ಪೊಲೀಸ್ ವರ್ಸಸ್ ಡಿಸಿಎಂ

**ಜಿಲ್ಲೆಯಲ್ಲಿ ಮತದಾನ ಶಾಂತಿಯುತವಾಗಿ ನಡೆಯುತ್ತಿದೆ. ಗಲಭೆ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಯಾರನ್ನಾದರೂ ಮತ ಚಲಾಯಿಸದಂತೆ ತಡೆದಿದ್ದರೆ, ಅಲ್ಲಿ ಸರತಿ ಸಾಲು ಇರುತ್ತಿರಲಿಲ್ಲ. ಮತಗಟ್ಟೆ ಏಜೆಂಟ್‌ಗೆ ಯಾವುದೇ ಬೆದರಿಕೆ ಹಾಕಿಲ್ಲ. ನಾನು ಇಲ್ಲಿಯೇ ಬೆಂಗಾವಲಾಗಿ ಕಾಯುತ್ತಿದ್ದೇನೆ ಎಂದು ಜಿಲ್ಲಾ ಪೊಲೀಸ್ ಮುಖ್ಯಸ್ಥ ಅಜಯ್ ಕುಮಾರ್ ಅವರು ಹೇಳಿದರು. ಹಿರಿಯ ಪೊಲೀಸ್ ಅಧಿಕಾರಿಯ ಈ ಹೇಳಿಕೆಗೆ ಡಿಸಿಎಂ ಕಿಡಿಕಾರಿದ್ದಾರೆ. ಜಿಲ್ಲಾ ಪೊಲೀಸ್ ಮುಖ್ಯಸ್ಥರನ್ನು ದಡ್ಡ, ದುರ್ಬಲ ಪೊಲೀಸ್ ಎಂದು ಟೀಕೆ ಮಾಡಿದ್ದಾರೆ.**

## ತೇಜಸ್ವಿ ಯಾದವ್ ರಾಜಕೀಯ ಪತನ ಸನ್ನಿಹಿತ

**ಪಾಟ್ನಾ:** ಬಿಹಾರದ ಮುಸ್ಲಿಂ ಸಮುದಾಯದವರ ಪ್ರಾಬಲ್ಯವಿರುವ ಸೀಮಾಂಚಲ ಭಾಗದಲ್ಲಿ ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಬಿರುಸಿನ ಪ್ರಚಾರವನ್ನು ನಡೆಸುತ್ತಿದ್ದಾರೆ. ಮಹಾಘಟಬಂಧನ್ ವಿರುದ್ಧ ಅದರಲ್ಲೂ ಪ್ರಮುಖವಾಗಿ, ಮಾಜಿ ಡಿಸಿಎಂ ತೇಜಸ್ವಿ ಯಾದವ್ ವಿರುದ್ಧ ತೀವ್ರ ವಾಗ್ದಾಳಿಯನ್ನು ನಡೆಸುತ್ತಿದ್ದಾರೆ.

ಮಹಾಘಟಬಂಧನ್ ಭಾಗವಾಗಲು ಪ್ರಯತ್ನಿಸಿದರೂ, ನಮ್ಮನ್ನು ತೇಜಸ್ವಿ ಯಾದವ್ ಕಡೆಗಣಿಸಿದ್ದಾರೆ ಎಂದು ಓವೈಸಿ ಕಿಡಿಕಾರಿದ್ದಾರೆ. ಜೊತೆಗೆ, ತೇಜಸ್ವಿ ಅವರನ್ನು ಮಹಾಭಾರತದ ಕೌರವರಿಗೆ ಹೋಲಿಸಿದರೆ, ನಿಮ್ಮ ಪತನಕ್ಕೆ ನೀವೇ ಮುನ್ನುಡಿ ಬರೆದಿದ್ದೀರಾ ಎಂದು ಎಚ್ಚರಿಸಿದ್ದಾರೆ. ನಾನು ಬಿಹಾರ ಚುನಾವಣೆಗೆ ಸೀಟು ಹಂಚಿಕೆಯ ಮುನ್ನ ತೇಜಸ್ವಿ ಯಾದವ್ ಅವರನ್ನು ಸಂಪರ್ಕಿಸಿದ್ದೆ. ನಮ್ಮ ಪಾರ್ಟಿಯನ್ನೂ ಮಹಾಘಟಬಂಧನ್‌ನಲ್ಲಿ ಸೇರಿಸಿಕೊಳ್ಳಿ ಎಂದಿದ್ದೆ. ಕೇವಲ ಆರು ಸೀಟು ನಮಗೆ ಬಿಟ್ಟುಕೊಡಿ ಎಂದು ಕೇಳಿದ್ದೆ. ಆದರೆ ನನ್ನ ಮಾತನ್ನು ಅವರು ಕಡೆಗಣಿಸಿದರು ಎಂದು ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಮಹಾಭಾರತದಲ್ಲಿ ಪಾಂಡವರಿಗೆ ಐದು ಗ್ರಾಮವನ್ನು ಕೌರವ ಚಕ್ರವರ್ತಿ ದುರ್ಯೋಧನ ನೀಡಿದ್ದರೆ, ಮಹಾಭಾರತ ಯುದ್ಧವೇ ನಡೆಯುತ್ತಿರಲಿಲ್ಲ. ನಾನು ಕೂಡಾ ಕೇವಲ ಆರು ಸೀಟು ಕೇಳಿದ್ದೆ, ಅದನ್ನು ಕೊಡದೇ ತಮ್ಮ ಪತನಕ್ಕೆ ಅವರೇ ನಾಂದಿ ಹಾಡಿದ್ದಾರೆ ಎಂದು ಓವೈಸಿ ಎಚ್ಚರಿಸಿದ್ದಾರೆ. ಮಹಾರಾಷ್ಟ್ರದ ಚುನಾವಣೆಯಲ್ಲೂ ಮಹಾವಿಕಾಸ್ ಅಘಾಡಿಯು ಕೂಡಾ ಇದೇ ರೀತಿ ಮಾಡಿತ್ತು. ನಮ್ಮನ್ನು ತೀವ್ರವಾದಿಗಳು ಎಂದು ತೇಜಸ್ವಿ ಯಾದವ್ ಹೇಳಿದ್ದಾರೆ. ನಿಮ್ಮ ಈ ಟೀಕೆಗೆ ಸೀಮಾಂಚಲದ ಜನ ಈ ಬಾರಿ ಚುನಾವಣೆಯಲ್ಲಿ ಉತ್ತರಿಸಲಿದ್ದಾರೆ ಎಂದು ಓವೈಸಿ, ಆಕ್ರೋಶ ಹೊರಹಾಕಿದರು. ನಮ್ಮನ್ನು ಬಿಜೆಪಿಯ ಬಿಟೀಂ ಎಂದು ರಾಹುಲ್ ಬಾಬಾ ಕರೆಯುತ್ತಾರೆ. ಅಸಲಿಗೆ, ಒಕ್ಕೂಟದಲ್ಲಿ ಒಗ್ಗಟ್ಟು ಇಲ್ಲದೇ, ಬಿಜೆಪಿಯನ್ನು ಗೆಲ್ಲಿಸಲು ಪರೋಕ್ಷವಾಗಿ ಸಹಾಯ ಮಾಡುವುದು ಇದೇ ಕಾಂಗ್ರೆಸ್ ಪಾರ್ಟಿ ಎಂದು, ಅಸಾದುದ್ದೀನ್ ಓವೈಸಿ ವ್ಯಂಗ್ಯವಾಡಿದ್ದಾರೆ. ಸೀಮಾಂಚಲ ಭಾಗದ ಜಿಲ್ಲೆಗಳಾದ ಪುರ್ನೇಯಾ, ಕೃಷ್ಣಗಂಜ್, ಅರಾರಿಯಾ ಮತ್ತು ಕತಿಹಾರ್‌ನಲ್ಲಿ ಎರಡನೇ ಹಂತದಲ್ಲಿ ಅಂದರೆ ನವೆಂಬರ್ ಹನ್ನೊಂದರಂದು ಚುನಾವಣೆ ನಡೆಯಲಿದೆ. ಮಹಾಘಟ ಬಂಧನ್ ಪಾರ್ಟಿಗಳಿಗೆ ಸೆಡ್ಡು ಹೊಡೆಯಲು, ಒವೈಸಿ 25 ಕ್ಷೇತ್ರಗಳಲ್ಲಿ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದಾರೆ. ಬಿಜೆಪಿಯಿಂದ ದುಡ್ಡು ತೆಗೆದುಕೊಂಡ ಆರೋಪ ಮಾಡುತ್ತಿರುವ ಇಂಡಿಯಾ ಮೈತ್ರಿಕೂಟದ ನಾಯಕರ ವಿರುದ್ಧ ಓವೈಸಿ ತೊಡೆ ತಟ್ಟಿದ್ದಾರೆ. ನನಗೂ ಬಿಜೆಪಿಗೂ ಯಾವುದೇ ಸಂಬಂಧವಿಲ್ಲ ಎಂದು ಮುಸ್ಲಿಂ ಸಮುದಾಯದ ನಂಬುವ ಮಸೀದಿಯ ಮುಂದೆ ನಾನು ಪ್ರಮಾಣ ಮಾಡುತ್ತೇನೆ ಎಂದು ಓವೈಸಿ ಸವಾಲು ಎಸೆದಿದ್ದಾರೆ.



## ಭಾರತ-ಪಾಕಿಸ್ತಾನ ಸಂಘರ್ಷದಲ್ಲಿ ನಷ್ಟಗೊಂಡ ಯುದ್ಧ ವಿಮಾನಗಳ ಸಂಖ್ಯೆ ಹೆಚ್ಚಿಸಿದ ಡೊನಾಲ್ಡ್ ಟ್ರಂಪ್

# ಮತ್ತೆ ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದ ಕ್ರೆಡಿಟ್ ಪಡೆಯಲು ಟ್ರಂಪ್ ಪ್ರಯತ್ನ


**ವಾಷಿಂಗ್ಟನ್ ಡಿಸಿ:** ಭಾರತ ಮತ್ತು ಪಾಕಿಸ್ತಾನದ ನಡುವೆ ಶಾಂತಿ ಸ್ಥಾಪನೆಗೆ ಮಧ್ಯವರ್ತಿಯಾಗಿ ಕೆಲಸ ಮಾಡಿರುವುದಾಗಿ ಮತ್ತೆ ಪುನರುಚ್ಚರಿಸಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಈ ಬಾರಿ ಯುದ್ಧ ಸಮಯದಲ್ಲಿ ನಷ್ಟಗೊಂಡ ಜೆಟ್ ವಿಮಾನಗಳ ಸಂಖ್ಯೆಯನ್ನು 8ಕ್ಕೆ ಏರಿಸಿದ್ದಾರೆ. ಮಿಯಾಮಿಯಲ್ಲಿ ನಡೆದ ಅಮೆರಿಕ ವ್ಯಾಪಾರ ವೇದಿಕೆಯಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಭಾರತ-ಪಾಕಿಸ್ತಾನಕ್ಕೆ ವ್ಯಾಪಾರ ಬೆದರಿಕೆ ಹಾಕುವ ಮೂಲಕ, ಎರಡು ಪರಮಾಣು ಶಸ್ತ್ರಸಜ್ಜಿತ ರಾಷ್ಟ್ರಗಳ ನಡುವಿನ ಘೋರ ಯುದ್ಧವನ್ನು ತಡೆಯಲಾಗಿದೆ ಎಂದು ಹೇಳಿದ್ದಾರೆ. ಭಾರತ, ಪಾಕಿಸ್ತಾನದ ಜೊತೆಗೆ ಅಮೆರಿಕದ ವ್ಯಾಪಾರ ಒಪ್ಪಂದ ಮಾತುಕತೆಗಳು ನಡೆಯುತ್ತಿರುವ ಸಂದರ್ಭದಲ್ಲಿ, ಎರಡೂ ರಾಷ್ಟ್ರಗಳು ಸಂಘರ್ಷಕ್ಕಿಳಿದವು.

**ಕ್ರೆಡಿಟ್ ರೋಗಕ್ಕೆ ಮದ್ದಿಲ್ಲ**

ಈ ಯುದ್ಧ ಭೀಕರ ಸ್ವರೂಪ ಪಡೆದುಕೊಳ್ಳುತ್ತಿರುವುದನ್ನು ನಾವು ಬೇಗ ಗ್ರಹಿಸಿದೆವು. ಕೂಡಲೇ ಮಧ್ಯಸ್ಥಿಕೆವಹಿಸಿ, ಕದನ ವಿರಾಮ ಒಪ್ಪಂದ ಮಾಡಿಕೊಳ್ಳದಿದ್ದರೆ, ವ್ಯಾಪಾರ ಒಪ್ಪಂದ ಮಾತುಕತೆಗಳನ್ನು ನಿಲ್ಲಿಸುವುದಾಗಿ ಬೆದರಿಕೆ ಹಾಕಿದೆವು. ಕೂಡಲೇ ಎರಡೂ ರಾಷ್ಟ್ರಗಳು ಕದನ ವಿರಾಮಕ್ಕೆ ಸಮ್ಮತಿ ಸೂಚಿಸಿದೆವು. ನಾವು ಪರಮಾಣು ಯುದ್ಧದ ಸಂಭವನೀಯತೆಯನ್ನು ತಪ್ಪಿಸಿದೆವು ಎಂದು ಡೊನಾಲ್ಡ್ ಟ್ರಂಪ್ ಹೇಳಿಕೊಂಡಿದ್ದಾರೆ. ಡೊನಾಲ್ಡ್ ಟ್ರಂಪ್ ಇತ್ತೀಚಿಗೆ ಭಾರತಕ್ಕೆ ಶೇ. 250ರಷ್ಟು ಸುಂಕ ಬೆದರಿಕೆ ಹಾಕುವ ಮೂಲಕ, ಪಾಕಿಸ್ತಾನದೊಂದಿಗೆ ಕದನ ವಿರಾಮಕ್ಕೆ ಒಪ್ಪಿಸಲಾಗಿತ್ತು ಎಂದು ಹೇಳಿಕೆ ನೀಡಿದ್ದರು.

ಆದರೆ ಭಾರತ ಈ ವಾದವನ್ನು ಸ್ಪಷ್ಟವಾಗಿ ತಿರಸ್ಕರಿಸಿತ್ತಲ್ಲದೇ ಕದನ ವಿರಾಮ ಒಪ್ಪಂದ ಕೇವಲ ದ್ವಿಪಕ್ಷೀಯವಾಗಿದ್ದು, ಭಾರತ ಯಾವುದೇ ಬಾಹ್ಯ ಒತ್ತಡಗಳಿಗೆ ಮಣಿದಿಲ್ಲ ಎಂದು ಸ್ಪಷ್ಟಪಡಿಸಿತ್ತು. ಆದಾಗ್ಯೂ, ಭಾರತ-ಪಾಕಿಸ್ತಾನ ನಡುವಿನ ಕದನ ವಿರಾಮ ಒಪ್ಪಂದದ ಕ್ರೆಡಿಟ್ ಪಡೆಯುವ ಪ್ರಯತ್ನಗಳನ್ನು ಡೊನಾಲ್ಡ್ ಟ್ರಂಪ್ ನಿಲ್ಲಿಸಿಲ್ಲ. ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದವನ್ನು ತಮ್ಮ ಸುಂಕ ನೀತಿಯೊಂದಿಗೆ ಜೋಡಿಸಲು ಡೊನಾಲ್ಡ್ ಟ್ರಂಪ್ ಪ್ರಯತ್ನಿಸುತ್ತಿದ್ದಾರೆ. ಸುಂಕ ಸಮರವು ಅಮೆರಿಕಕ್ಕೆ ಕೇವಲ ಆರ್ಥಿಕ ಬಲ ಮಾತ್ರ ತುಂಬದೇ, ಜಾಗತಿಕ ಶಾಂತಿ ಸ್ಥಾಪನೆಗೂ ಸಹಾಯಕಾರಿಯಾಗಿದೆ ಎಂದು ಬಿಂಬಿಸಲು ರಿಪಬ್ಲಿಕನ್ ನಾಯಕ ಪ್ರಯತ್ನಿಸುತ್ತಿದ್ದಾರೆ.ಒಂದು ವರದಿಯ ಪ್ರಕಾರ ಡೊನಾಲ್ಡ್ ಟ್ರಂಪ್ ಅವರು ಇದುವರೆಗೆ ಒಟ್ಟು 60ಕ್ಕೂ ಹೆಚ್ಚು ಬಾರಿ ಭಾರತ-ಪಾಕಿಸ್ತಾನ ಕದನ ವಿರಾಮ ಒಪ್ಪಂದದ ಕ್ರೆಡಿಟ್ ಪಡೆಯುವ ಬಗ್ಗೆ ಮಾತನಾಡಿದ್ದಾರೆ.

ಈ ವಿಚಾರವಾಗಿ ಪ್ರತಿಬಾರಿ ಮಾತನಾಡಿದಾಗಲೂ, ಟ್ರಂಪ್ ಅವರು ನಷ್ಟಗೊಂಡ ಯುದ್ಧ ವಿಮಾನಗಳ ಸಂಖ್ಯೆಯನ್ನು ಬದಲಿಸುತ್ತಲೇ ಬಂದಿದ್ದಾರೆ.



**ಅಮೆರಿಕ ಅಧ್ಯಕ್ಷರು ಸಂಘರ್ಷದಲ್ಲಿ ನಷ್ಟಗೊಂಡ ಯುದ್ಧ ವಿಮಾನಗಳ ಸಂಖ್ಯೆಯನ್ನು 8ಕ್ಕೆ ಏರಿಸಿರುವುದು ಗಮನ ಸೆಳೆದಿದೆ. ಅಮೆರಿಕ ಮಧ್ಯಸ್ಥಿಕೆವಹಿಸಿಕೊಳ್ಳದಿದ್ದರೆ, ಭಾರತ-ಪಾಕಿಸ್ತಾನ ಸಂಘರ್ಷವನ್ನು ತೀವ್ರಗೊಳಿಸುತ್ತಿದ್ದವು. ನಾವು ಎರಡೂ ರಾಷ್ಟ್ರಗಳ ಉನ್ನತ ನಾಯಕತ್ವಕ್ಕೆ ವ್ಯಾಪಾರ ಬೆದರಿಕೆ ಹಾಕುವ ಮೂಲಕ, ಸಂಘರ್ಷವನ್ನು ತಪ್ಪಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದೆವು. ಮಿಲಟರಿ ಹೊಡೆದಾಟದಲ್ಲಿ 8 ಯುದ್ಧ ವಿಮಾನಗಳನ್ನು ಕಳೆದುಕೊಳ್ಳುವುದು ಎಂದರೆ ಸಾಮಾನ್ಯ ಸಂಗತಿಯಲ್ಲ. - ಡೊನಾಲ್ಡ್ ಟ್ರಂಪ್, ಅಮೆರಿಕ ಅಧ್ಯಕ್ಷ**

### ವ್ಯಾಪಾರ ಒಪ್ಪಂದ ಶೀಘ್ರ ಜಾರಿ

**ಭಾರತದ ಸ್ಪಷ್ಟ ನಿರಾಕರಣೆ ಹೊರತಾಗಿಯೂ, ಅಮೆರಿಕ ಅಧ್ಯಕ್ಷರು ಕದನ ವಿರಾಮ ಒಪ್ಪಂದ ಕ್ರೆಡಿಟ್ ಪಡೆಯಲು ಪ್ರಯತ್ನಿಸುತ್ತಿರುವುದು ವಿಚಿತ್ರವಾಗಿ ಕಂಡುಬರುತ್ತಿದೆ. ಡೊನಾಲ್ಡ್ ಟ್ರಂಪ್ ಅವರು ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಶೀಘ್ರ ಜಾರಿಯಾಗಲಿದೆ ಎಂದೂ ಹೇಳಿಕೆ ನೀಡುತ್ತಿದ್ದು, ಅದರ ನಡುವೆ ನಿತ್ಯವೂ ಕದನ ವಿರಾಮ ಒಪ್ಪಂದದಲ್ಲಿ ಮಧ್ಯಸ್ಥಿಕೆವಹಿಸಿರುವುದಾಗಿ ಪ್ರತಿಪಾದಿಸುತ್ತಿದ್ದಾರೆ.**


# ದಿ ರಾಜಾಸಾಬ್ ವದಂತಿ ತಳ್ಳಿ ಹಾಕಿದ ತಂಡ

**ಪ್ರಭಾಸ್ ನಟನೆಯ ಚಿತ್ರ**

ಪ್ರಭಾಸ್ ನಟನೆಯ 'ದಿ ರಾಜಾ ಸಾಬ್' ಸಿನಿಮಾ ಟ್ರೇಲರ್ ಮೂಲಕ ಭಾರತ ಮಾತ್ರವಲ್ಲದೆ, ಜಗತ್ತಿನ ಸಿನಿಮಾ ಪ್ರೇಕ್ಷಕರ ಗಮನ ಸೆಳೆದಿದೆ. ಫಿಕ್ಷನ್ ಕಥೆಯ ಬಗೆಗಿನ ಕುತೂಹಲ ಪ್ರಭಾಸ್ ಅಭಿಮಾನಿಗಳಲ್ಲಿಯೂ ಹೆಚ್ಚಾಗಿದೆ. ಈ ನಡುವೆ ಇದೇ ಚಿತ್ರದ ಬಿಡುಗಡೆ ಬಗ್ಗೆ ಗಾಸಿಪ್ ಹರಿದಾಡ್ತಿದೆ.

ಜನವರಿ 9ರಂದು ಪ್ಯಾನ್ ಇಂಡಿಯಾ ಮಟ್ಟದಲ್ಲಿ ದಿ ರಾಜಾಸಾಬ್ ಸಿನಿಮಾ ತೆರೆಗೆ ಬರುವುದು ಖಚಿತ ಎಂದು ಚಿತ್ರತಂಡ ಹೇಳಿದೆ. ಯಾವುದೇ ವಿಳಂಬವಿಲ್ಲದೆ, ಅತ್ಯುನ್ನತ ತಾಂತ್ರಿಕ ಗುಣಮಟ್ಟವನ್ನು ಕಾಪಾಡಿಕೊಂಡು, ಚಿತ್ರದ ಪೋಸ್ಟ್ ಪ್ರೊಡಕ್ಷನ್ ಕಾರ್ಯಗಳು ಭರದಿಂದ ಸಾಗುತ್ತಿವೆ. ಚಿತ್ರವು ಅತ್ಯಂತ ಅದ್ದೂರಿ ರೂಪದಲ್ಲಿ ಪ್ರೇಕ್ಷಕರನ್ನು ತಲುಪುವುದನ್ನು ಖಚಿತಪಡಿಸಿಕೊಳ್ಳಲು ಪ್ರತಿಯೊಂದು ವಿಭಾಗವು ಪರಿಪೂರ್ಣ ಸಮನ್ವಯದೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಈ ಲಾರ್ಜರ್ ದ್ಯಾನ್ ಲೈಫ್' ರೀತಿಯಲ್ಲಿ ಸಿನಿಮಾವನ್ನು ನಿರ್ಮಿಸಲಾಗುತ್ತಿದೆ. ಪ್ರಪಂಚದಾದ್ಯಂತದ ಪ್ರೇಕ್ಷಕರಿಗೆ ಒಂದು ಅತ್ಯುತ್ತಮ ಥಿಯೇಟರ್ ಅನುಭವ ನೀಡಲೆಂದೇ ಈ ಸಿನಿಮಾ ನಿರ್ಮಾಣಮಾಡಲಾಗಿದೆ ಎಂದಿದೆ.

ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ನಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರವನ್ನು ಮಾರುತಿ ನಿರ್ದೇಶನ ಮಾಡಿದ್ದಾರೆ.





# ಟ್ರೆಂಡಿಂಗ್ ನಲ್ಲಿ 45 ಚಿತ್ರದ ಸಾಂಗ್..

ಶಿವಣ್ಣ,ಉಪೇಂದ್ರ,ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಎಂ. ರಮೇಶ್ ರೆಡ್ಡಿ ಸೂರಜ್ ಪ್ರೊಡಕ್ಷನ್ ಬ್ಯಾನರ್‌ನಲ್ಲಿ ನಿರ್ಮಿಸುತ್ತಿರುವ ಕನ್ನಡದ ''45'' ಚಿತ್ರದ AFRO ಟಪಾಂಗ ಪ್ರಮೋಷನ್ ಸಾಂಗ್ ಇತ್ತೀಚೆಗಷ್ಟೇ ಆನಂದ್ ಆಡಿಯೋ ಮೂಲಕ ಬಿಡುಗಡೆಯಾಗಿತ್ತು.

ಮೂರೇ ದಿನಗಳಲ್ಲಿ ಈ ಹಾಡು 12 ಮಿಲಿಯನ್ ವೀಕ್ಷಣೆಯಾಗಿ ಜನಪ್ರಿಯವಾಗಿದೆ.

ಟ್ರೆಂಡಿಂಗ್‌ನಲ್ಲಿ ALL OVER ಇಂಡಿಯಾದಲ್ಲಿ ಈ ಹಾಡು 23 ನೇ ಸ್ಥಾನದಲ್ಲಿದ್ದರೆ, ಕರ್ನಾಟಕದಲ್ಲಿ ಮೊದಲ ಸ್ಥಾನದಲ್ಲಿದೆ. ಚಿತ್ರದ ನಾಯಕರಾದ ಶಿವರಾಜಕುಮಾರ್, ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅವರು ಭಾರತಕ್ಕೆ ಮೊದಲ ಬಾರಿ ಬಂದಿರುವ ಉಗಾಂಡದ ಪ್ರಸಿದ್ದ ನೃತ್ಯಗಾರರಾದ ಘೆಟ್ಟೊ ಕಿಡ್ಸ್ ಜೊತೆಗೆ ಈ ಪ್ರಮೋಷನ್ ಸಾಂಗ್ ಗೆ ಹೆಜ್ಜೆ ಹಾಕಿದ್ದಾರೆ. ಮೂವರು ನಾಯಕರ ಲುಕ್ ಗೆ ಹಾಗೂ ಹುಕ್ ಸ್ಟೆಪ್ ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಚಿತ್ರದ ಪ್ರಮೋಷನ್ ಸಾಂಗ್ ಅನ್ನೇ ಇಷ್ಟು ಅದ್ದೂರಿಯಾಗಿ ನಿರ್ಮಾಣ ಮಾಡಿರುವ ನಿರ್ಮಾಪಕ ರಮೇಶ್ ರೆಡ್ಡಿ ಅವರು, ಚಿತ್ರವನ್ನು ಇನ್ನಷ್ಟು ಅದ್ದೂರಿಯಾಗಿ ನಿರ್ಮಾಣ ಮಾಡಿರಬಹುದು ಎಂಬ ಪ್ರಶ್ನೆ ಎಲ್ಲರಲ್ಲೂ ಮನೆ ಮಾಡಿದೆ. ಮೊದಲ ನಿರ್ದೇಶನದಲ್ಲಿ ಇಂತಹ ಅದ್ಭುತ ಸಾಂಗ್ ನೀಡಿರುವ ನಿರ್ದೇಶಕ ಅರ್ಜುನ್ ಜನ್ಯ ಅವರ ಮೇಲಿರುವ ನಿರೀಕ್ಷೆ ಮತ್ತಷ್ಟು ಹೆಚ್ಚಿದೆ. ಎಂ.ಸಿ.ಬಿಜ್ಜು ಹಾಗೂ ನಿಶಾನ್ ರೈ ಈ ಹಾಡನ್ನು ಬರೆದು ಹಾಡಿದ್ದಾರೆ.


**ಮೂರು ದಿನಕ್ಕೆ 12 ಮಿಲಿಯನ್ ವೀಕ್ಷಣೆ**



# ಮೈ ನೇಮ್ ಈಸ್ ಕೆಡಿ ಟ್ರೇಲರ್ ಬಿಡುಗಡೆ

ಇಂತಿ ನಿಮ್ಮ ಭೈರಾ' ತಂಡದ ಎರಡನೇ ಪ್ರಯತ್ನ ಎನ್ನುವಂತೆ ಮೈ ನೇಮ್ ಈಸ್ ಕೆಡಿ ಚಿತ್ರದ ಟ್ರೇಲರ್‌ನ್ನು ಫಿಲಿಂ ಛೇಂಬರ್ ಮಾಜಿ ಅಧ್ಯಕ್ಷ ಬಾ.ಮ.ಹರೀಶ್, ಮಹಾರಾಣಿ ಕಾಲೇಜು ಉಪಕುಲಪತಿ ಶಿವಶಂಕರಪ್ಪ ಮತ್ತು ನಿರ್ದೇಶಕ ಟಿ.ಶಿ.ವೆಂಕಟೇಶ್ ಬಿಡುಗಡೆ ಮಾಡಿ ನಿರ್ಮಾಪಕರ ಸಾಧನೆಯನ್ನು ಕೊಂಡಾಡಿ ತಂಡಕ್ಕೆ ಶುಭ ಹಾರೈಸಿದರು. ಎಸ್‌ಎಸ್‌ಕೆಬಿ ಪ್ರೊಡಕ್ಷನ್ ಅಡಿಯಲ್ಲಿ ವೆಂಕಟೇಶ್.ಡಿ ನಿರ್ಮಾಣ ಮಾಡಿದ್ದಾರೆ. ಕುಮಾರ್.ಡಿ ಸಹ ನಿರ್ಮಾಪಕರಾಗಿ ಗುರುತಿಸಿಕೊಂಡಿದ್ದಾರೆ. ಕೆ.ಜೆ.ಚಿಕ್ಕು ಆಕ್ಷನ್ ಕಟ್ ಹೇಳಿದ್ದಾರೆ.

ನಿರ್ದೇಶಕರು ಹೇಳುವಂತೆ ಇದೊಂದು ಕಾಮಿಡಿ, ಡ್ರಾಮಾ ಸನ್ನಿವೇಶಗಳನ್ನು ಒಳಗೊಂಡಿದೆ. ಕನಕಪುರ, ಹೆಸರುಘಟ್ಟ, ಆನೇಕಲ್, ಬೆಂಗಳೂರು ಕಡೆಗಳಲ್ಲಿ 30 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ನಾಲ್ಕು ಹಾಡುಗಳು ಇರಲಿದೆ. ಡಿಸೆಂಬರ್ ತಿಂಗಳಲ್ಲಿ ತೆರೆಗೆ ತರಲು ಯೋಜನೆ ಹಾಕಲಾಗಿದೆ ಅಂತ ಕೆ.ಜಿ.ಚಿಕ್ಕು ಮಾಹಿತಿ ನೀಡಿದರು. ಆರ್ಯನ್‌ವೆಂಕಟೇಶ್ ನಾಯಕ. 'ಗಿಡುಗ'ದಲ್ಲಿ ಕಾಣಿಸಿಕೊಂಡಿದ್ದ ಭವಾನಿ ನಾಯಕಿ. ಉಳಿದಂತೆ ಹೊನ್ನವಳ್ಳಿ ಕೃಷ್ಣ, ಗಿರೀಶ್ ಜತ್ತಿ, ವಿಶ್ವ, ಯತಿರಾಜ್, ಅರಸು ಮಹಾರಾಜ್, ಸುಪ್ರೀತ್‌ಕಾಟಿ, ರೋಹಿಣಿ, ಮಾಸ್ಟರ್ ಲಕ್ಷ್.ಕೆ.ಸಿ ಮುಂತಾದವರು ನಟಿಸಿದ್ದಾರೆ. ಡಾ.ವಿ.ನಾಗೇಂದ್ರಪ್ರಸಾದ್, ಪುನೀತ್‌ರಂಗನಾಥ್, ಮನುದೇವನಹಳ್ಳಿ ಸಾಹಿತ್ಯವಿದೆ.



# ಶೆಟ್ಟಿ ದಂಪತಿ ಸಹಜವಾಗಿ ಆಕರ್ಷಣೆಯ ಬಿಂದು

ರಾಜ್ಯ ಚಲನಚಿತ್ರಪ್ರಶಸ್ತಿ ಸಮಾರಂಭ ಮೈಸೂರಿನಲ್ಲಿ ಇತ್ತೀಚೆಗೆ ನಡೆದಿತ್ತು.. ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶಸ್ತಿ ಪ್ರದಾನಿಸಿದರು..

ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಚಿತ್ರಕ್ಕೆ ಪ್ರಶಸ್ತಿ ಪಡೆದ ರಿಷಬ್ ಶೆಟ್ಟಿ ಹಾಗೂ ಪ್ರಗತಿ ಶೆಟ್ಟಿ ದಂಪತಿ ಸಹಜವಾಗಿ ಆಕರ್ಷಣೆಯ ಬಿಂದು ಆಗಿದ್ದರು.. ಪ್ರಶಸ್ತಿ ಪ್ರದಾನದ ಬಳಿಕ ಮುಖ್ಯಮಂತ್ರಿಗಳ ಭಾಷಣದಲ್ಲಿಯೂ ಕಾಂತಾರದ ಪ್ರಸ್ತಾಪ ಆಗಿತ್ತು!!.

ಕಾರ್ಯಕ್ರಮದ ಬಂದೋಬಸ್ತ್ ಮೇಲ್ವಿಚಾರಣೆಯಲ್ಲಿದ್ದ ಡಿ ಐ ಜಿ ಬೋರಲಿಂಗಯ್ಯ ಹಾಗೂ ಮೈಸೂರು ಪೊಲೀಸ್ ಆಯುಕ್ತೆ ಸೀಮಾಲಾಟ್ಕರ್ ಹೀಗೊಂದು ಫೋಟೋ ಕ್ಲಿಕ್ಕಿಸಿಕೊಂಡರು.. ಪೊಲೀಸ್ ಅಧಿಕಾರಿಗಳೂ ಸಂಭ್ರಮ ಪಟ್ಟಿದ್ದನ್ನು ಅವರ ಮುಖವೇ ಹೇಳುತ್ತಿದೆ.. ದಟ್ಸ್ ಕಾಂತಾರ..



# ಲ್ಯಾಂಡ್ ಲಾರ್ಡ್ ಟೀಸರ್ ಬಿಡುಗಡೆ

ಕೆ.ವಿ. ಸತ್ಯಪ್ರಕಾಶ್ – ಹೇಮಂತ್ ಗೌಡ ಕೆ.ಎಸ್ ನಿರ್ಮಿಸಿರುವ, ಜಡೇಶ್ ಕೆ.ಹಂಪಿ ನಿರ್ದೇಶನದ ಹಾಗೂ ದುನಿಯಾ ವಿಜಯ್, ರಚಿತರಾಮ್ ಅಭಿನಯದ 'ಲ್ಯಾಂಡ್ ಲಾರ್ಡ್' ಚಿತ್ರದ ಸರ್ವೈವರ್ ಟೀಸರ್ ಬಿಡುಗಡೆ ಸಮಾರಂಭ ನೆರವೇರಿತು. ಟೀಸರ್ ಮೂಲಕ ಚಿತ್ರತಂಡ ಬಿಡುಗಡೆಯ ದಿನಾಂಕವನ್ನೂ(ಜನವರಿ 23) ಘೋಷಣೆ ಮಾಡಲಾಗಿದೆ.

ಜನವರಿ 20 ದುನಿಯಾ ವಿಜಯ್ ಅವರ ಹುಟ್ಟುಹಬ್ಬ ಕೂಡಾ.

ನಾಯಕ ದುನಿಯಾ ವಿಜಯ್ ಮಾತನಾಡಿ ಕಷ್ಟದ ಸಮಯದಲ್ಲಿ ಕೈ ಹಿಡಿದ ಅಭಿಮಾನಿಗಳಿಗೆ ವಿಶೇಷ ಧನ್ಯವಾದ ಹೇಳಿದರು. ಇನ್ನೂ, ನಾನು ಹಾಗೂ ರಚಿತರಾಮ್ ಅವರು ಒಂದೇ ಬಡಾವಣೆಯವರು. ಮೊದಲಿನಿಂದಲೂ ಸ್ನೇಹಿತರು. ಅವರ ಜೊತೆಗೆ ಅಭಿನಯಿಸಿದ್ದು ಹಾಗೂ ತೆರೆಯ ಮೇಲೆ ಅಷ್ಟೇ ಅಲ್ಲ. ನಿಜ ಜೀವನದಲ್ಲೂ ನನ್ನನ್ನು ತಾಯಿಯ ತರಹ ಪ್ರೀತಿ ಮಾಡುವ ಹಿರಿಯ ನಟಿ ಉಮಾಶ್ರೀ ಅವರೊಂದಿಗೆ ನಟಿಸಿದ್ದು ಬಹಳ ಸಂತೋಷವಾಗಿದೆ. ನನ್ನ ಮಗಳು ರಿತನ್ಯ ಕೂಡ ಈ ಚಿತ್ರದಲ್ಲಿ ಅಭಿನಯಿಸಿದ್ದಾಳೆ. ಅನುಭವಿ ಕಲಾವಿದರ ದೊಡ್ಡ ತಾರಾಬಳಗವೇ ಈ ಚಿತ್ರದಲ್ಲಿದೆ. ತಂತ್ರಜ್ಞರ ಕಾರ್ಯವೈಖರಿಯೂ ಚೆನ್ನಾಗಿದೆ. ಚಿತ್ರ ಮೆಚ್ಚುಗೆಯಾಗುವ ಭರವಸೆಯಿದೆ ಎಂದರು.

ರಚಿತಾರಾಮ್ ಮಾತನಾಡುತ್ತಾ, ನಾನು ಈ ಚಿತ್ರದ ಕಥೆ ಕೇಳುವಾಗಲೇ ಬಹಳ ಕುತೂಹಲ ಎನಿಸಿತು. ಕಥೆ ಕೇಳುತ್ತಿರುವಾಗಲೇ ಈ ಪಾತ್ರ ನಾನೇ ಮಾಡಬೇಕು ಅಂದುಕೊಂಡೆ. ಕಥೆ ಕೇಳಿದ ಮೇಲೆ ನಾನು ದರ್ಶನ್ ಹಾಗೂ ಲೋಕೇಶ್ ಕನಕರಾಜು ಅವರಿಗೆ ಈ ಚಿತ್ರದ ಬಗ್ಗೆ ಹೇಳಿದೆ. ಅವರು ಕೂಡ ಕಥೆ ಚೆನ್ನಾಗಿದೆ ಎಂದರು. ಜಾನಿ ಜಾನಿ ಎಸ್ ಪಪ್ಪ ಚಿತ್ರದ ನಂತರ ನಾನು ದುನಿಯಾ ವಿಜಯ್ ಅವರ ಜೊತೆಗೆ ನಟಿಸಿದ್ದೇನೆ. ಈ ಚಿತ್ರತಂಡದೊಟ್ಟಿಗೆ ಕೆಲಸ ಮಾಡಿದ್ದು ಖುಷಿಯಾಗಿದೆ. ನಿಂಗವ್ವ ನನ್ನ ಪಾತ್ರದ ಹೆಸರು. ಟೀಸರ್ ಚೆನ್ನಾಗಿದೆ ಎಂದರು.

ಇದೊಂದು 80ರ ಕಾಲಘಟ್ಟದಲ್ಲಿ ನಡೆಯುವ ಈ ನೆಲದ ಕಥೆ. 45 ವರ್ಷಗಳ ಹಿಂದಿನದ್ದನ್ನು ತೆರೆಯ ಮೇಲೆ ತರುವುದು ಅಷ್ಟು ಸುಲಭವಲ್ಲ. ನಾವು ಅಂದುಕೊಂಡ ಹಾಗೆ ಚಿತ್ರ ಬಂದಿದೆ ಅಂದರೆ ಅದಕ್ಕೆ ಚಿತ್ರತಂಡದ ಸಹಕಾರವೇ ಕಾರಣ. ಇನ್ನೂ ದುನಿಯಾ ವಿಜಯ್ ಅವರ ಅಭಿನಯಕ್ಕೆ ಅಭಿಮಾನಿ ನಾನು. ರಚಿತಾರಾಮ್ ಅವರು ಅಭಿನಯಿಸಲು ಸೆಟ್ ಗೆ ಬಂದರೆ ಅವರ ಸಂಭಾಷಣೆಗೆ ವಿಷಲ್ ಬೀಳುತ್ತಿತ್ತು.

# ಟೀಮ್ ಇಂಡಿಯಾಗೆ ಭರ್ಜರಿ ಗಿಫ್ಟ್ ಘೋಷಿಸಿದ ಟಾಟಾ

ಮಹಿಳಾ ಏಕದಿನ ವಿಶ್ವಕಪ್ ಗೆದ್ದ ಭಾರತ ತಂಡಕ್ಕೆ ದೇಶದ ಪ್ರಮುಖ ಆಟೋಮೊಬೈಲ್ ಕಂಪೆನಿ ಟಾಟಾ ಮೋಟರ್ಸ್ ಭರ್ಜರಿ ಉಡುಗೊರೆ ಘೋಷಿಸಿದೆ. ನವೆಂಬರ್ 2 ರಂದು ಡಿವೈ ಪಾಟೀಲ್ ಸ್ಟೇಡಿಯಂನಲ್ಲಿ ನಡೆದ ಸೌತ್ ಆಫ್ರಿಕಾ ವಿರುದ್ಧದ ಫೈನಲ್ ಪಂದ್ಯದಲ್ಲಿ ಟೀಮ್ ಇಂಡಿಯಾ 52 ರನ್‌ಗಳ ಜಯ ಸಾಧಿಸಿತ್ತು. ಈ ಮೂಲಕ ಭಾರತ ಮಹಿಳಾ ತಂಡ ಚೊಚ್ಚಲ ವಿಶ್ವಕಪ್ ಕಿರೀಟ ಮುಡಿಗೇರಿಸಿಕೊಂಡಿದೆ.

ಈ ಐತಿಹಾಸಿಕ ಸಾಧನೆಗಾಗಿ ಇದೀಗ ಟಾಟಾ ಕಂಪೆನಿಯು ಟೀಮ್ ಇಂಡಿಯಾ ಆಟಗಾರ್ತಿಯರಿಗೆ ಹೊಚ್ಚ ಹೊಸ ಟಾಟಾ ಸಿಯೆರಾ ಎಸ್‌ಯುವಿ ಕಾರನ್ನು ನೀಡುವುದಾಗಿ ತಿಳಿಸಿದೆ. ಅಷ್ಟೇ ಅಲ್ಲದೆ ಟೀಮ್ ಇಂಡಿಯಾದ ಕೋಚ್ ಹಾಗೂ ಸಹಾಯಕ ಸಿಬ್ಬಂದಿಗಳಿಗೂ ಈ ಉಡುಗೊರೆ ಸಿಗಲಿದೆ ಎಂದು ತಿಳಿಸಿದ್ದಾರೆ.

ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ ಲಿಮಿಟೆಡ್‌ನ ಎಂಡಿ ಮತ್ತು ಸಿಇಒ ಶೈಲೇಶ್ ಚಂದ್ರ, ''ಭಾರತೀಯ ಮಹಿಳಾ ತಂಡವು ತನ್ನ ದೃಢನಿಶ್ಚಯ ಮತ್ತು ಆತ್ಮವಿಶ್ವಾಸದಿಂದ ದೇಶಕ್ಕೆ ಹೆಮ್ಮೆಯ ಕ್ಷಣವನ್ನು ನೀಡಿದೆ. ಅವರ ಸಾಧನೆಗಳನ್ನು ಗೌರವಿಸಲು ನಾವು ಸಂತೋಷಪಡುತ್ತೇವೆ. ಟಾಟಾ ಸಿಯೆರಾ ಭಾರತೀಯ ಆಟೋಮೊಬೈಲ್ ಇತಿಹಾಸದಲ್ಲಿ ಒಂದು ಪರಂಪರೆಯ ಐಕಾನ್ ವಾಹನವಾಗಿದೆ.

ಈ ಕಾರುಗಳನ್ನು ಇದೀಗ ಗೌರವಾನ್ವಿತ ವ್ಯಕ್ತಿಗಳಿಗೆ ನಾವು ಪ್ರತಿಷ್ಠಿತ ವಸ್ತುವನ್ನಾಗಿ ಉಡುಗೊರೆಯಾಗಿ ನೀಡುತ್ತಿದ್ದೇವೆ. ಟಾಟಾ ಸಿಯೆರಾ ಹಾಗೂ ಟೀಮ್ ಇಂಡಿಯಾ ಎರಡೂ ಸ್ಫೂರ್ತಿಯ ಸಂಕೇತಗಳು. ಹೀಗಾಗಿ ಹೊಚ್ಚ ಹೊಸ ವಿನ್ಯಾಸದ ಟಾಟಾ ಸಿಯೆರಾ ಕಾರನ್ನು ಭಾರತೀಯ ತಂಡಕ್ಕೆ ನೀಡುತ್ತಿದ್ದೇವೆ ಎಂದು ಟಾಟಾ ಮೋಟಾರ್ಸ್ ಪ್ಯಾಸೆಂಜರ್ ವೆಹಿಕಲ್ಸ್ ಲಿಮಿಟೆಡ್‌ನ ಎಂಡಿ ಮತ್ತು ಸಿಇಒ ಶೈಲೇಶ್ ಚಂದ್ರ ಹೇಳಿದ್ದಾರೆ.

**ನವೆಂಬರ್ 25 ರಂದು ಬಿಡುಗಡೆ:** ಟಾಟಾ ಸಿಯೆರಾ ಕಾರಿನ ಹೊಸ ಮಾಡೆಲ್ ಇನ್ನೂ ಸಹ ಬಿಡುಗಡೆಯಾಗಿಲ್ಲ. 90ರ ದಶಕದಲ್ಲಿ ರಸ್ತೆಯಲ್ಲಿ ಕಾಣಿಸಿಕೊಂಡಿದ್ದ ಸಿಯೆರಾ ಕಾರಿಗೆ ಇದೀಗ ಆಧುನಿಕ ಟಚ್ ನೀಡಲಾಗಿದ್ದು, ಈ ಮೂಲಕ ಟಾಟಾ ಕಂಪೆನಿ ಮತ್ತೊಮ್ಮೆ ತನ್ನ ಐಕಾನ್ ಕಾರನ್ನು ರಸ್ತೆಗಿಳಿಸಲು ನಿರ್ಧರಿಸಿದೆ. ಅದರಂತೆ ಇದೇ ನವೆಂಬರ್ 25 ರಂದು ಟಾಟಾ ಸಿಯೆರಾ ಕಾರು ಬಿಡುಗಡೆಯಾಗಲಿದೆ. ಇದೇ ವೇಳೆ ಟೀಮ್ ಇಂಡಿಯಾ ಆಟಗಾರ್ತಿಯರಿಗೆ ಕಾರನ್ನು ಹಸ್ತಾಂತರಿಸುವ ಸಾಧ್ಯತೆಯಿದೆ.

**ಟಾಟಾ ಸಿಯೆರಾ ಬೆಲೆ ಎಷ್ಟು:** ಹೊಸ ಸಿಯೆರಾ ವಿನ್ಯಾಸವು ಹಳೆಯ ಸಿಯೆರಾದ 'ಸುತ್ತು–ಗಾಜಿನ' ಲುಕ್‌ನಲ್ಲೇ ಇರಲಿದೆ. ಇದಾಗ್ಯೂ ಕಾರಿಗೆ ಆಧುನಿಕ ಟಚ್ ನೀಡಲಾಗಿದ್ದು, ಐಇಎ ಲೈಟ್ ಬಾರ್ ವಿಶೇಷ ಆಕರ್ಷಣೆಯಾಗಲಿದೆ. ಅಲ್ಲದೆ ಈ ಕಾರಿನಲ್ಲಿ ಟ್ರಿಪಲ್–ಸ್ಕ್ರೀನ್ ಡ್ಯಾಶ್‌ಬೋರ್ಡ್ (ಮೂರು–ಸ್ಕ್ರೀನ್ ಸೆಟಪ್), ಲೆವೆಲ್–2 ಂಆಂಖ ಮತ್ತು ಪನೋರಮಿಕ್ ಸನ್‌ರೂಫ್‌ನಂತಹ ಆಧುನಿಕ ವೈಶಿಷ್ಟ್ಯಗಳನ್ನು ಸಹ ನೀಡಲಾಗಿದೆ.

ಇನ್ನು ಟಾಟಾ ಸಿಯೆರಾ ಎರಡು ಎಂಜಿನ್ ಆಯ್ಕೆಗಳಲ್ಲಿ ಲಭ್ಯವಿರಲಿದ್ದು, 1.5–ಲೀಟರ್ ಟರ್ಬೊ ಪೆಟ್ರೋಲ್ ಮತ್ತು 2.0–ಲೀಟರ್ ಟರ್ಬೊ ಡೀಸೆಲ್ ಎಂಜಿನ್‌ನೊಂದಿಗೆ ಖರೀದಿಸಬಹುದು. ಅಲ್ಲದೆ ಮುಂಬರುವ ದಿನಗಳಲ್ಲಿ ಇದೇ ಕಾರಿನ ಎಲೆಕ್ಟ್ರಿಕ್ (ಇಗಿ) ವರ್ಷನ್ ಅನ್ನು ಸಹ ಬಿಡುಗಡೆ ಮಾಡಲಾಗುತ್ತದೆ.

**ಕೋಚ್ ಸಹಾಯಕ ಸಿಬ್ಬಂದಿಗಳಿಗೂ ಉಡುಗೊರೆ**






# ಸರಣಿಯಲ್ಲಿ ಮುನ್ನಡೆ ಸಾಧಿಸಿದ ಭಾರತ

ಭಾರತ ಹಾಗೂ ಆಸ್ಟ್ರೇಲಿಯಾ ನಡುವಿನ 4ನೇ ಟಿ20 ಪಂದ್ಯದಲ್ಲಿ ಟೀಂ ಇಂಡಿಯಾ 48 ರನ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಸೂರ್ಯಕುಮಾರ್ ನೇತೃತ್ವದ ಭಾರತ ತಂಡ 5 ಪಂದ್ಯಗಳ ಟಿ20 ಸರಣಿಯಲ್ಲಿ 2–1 ಅಂತರದ ಮುನ್ನಡೆ ಗಳಿಸಿದೆ. ಮೊದಲು ಬ್ಯಾಟ್ ಮಾಡಿದ ಭಾರತ 167 ರನ್ ಗಳಿಸಿದರೆ, ಆಸ್ಟ್ರೇಲಿಯಾ ಕೇವಲ 119 ರನ್‌ಗಳಿಗೆ ಆಲೌಟ್ ಆಯಿತು. ಭಾರತ ಹಾಗೂ ಆಸ್ಟ್ರೇಲಿಯಾ ನಡುವೆ ನಡೆದ ನಾಲ್ಕನೇ ಟಿ20 ಪಂದ್ಯವನ್ನು ಟೀಂ ಇಂಡಿಯಾ 48 ರನ್‌ಗಳಿಂದ ಗೆದ್ದುಕೊಂಡಿದೆ. ಈ ಮೂಲಕ 5 ಪಂದ್ಯಗಳ ಟಿ20 ಸರಣಿಯಲ್ಲಿ ಸೂರ್ಯಕುಮಾರ್ ಪಡೆ 2–1 ಅಂತರದ ಮುನ್ನಡೆ ಪಡೆದುಕೊಂಡಿದೆ. ಹೆರಿಟೇಜ್ ಬ್ಯಾಂಕ್ ಕ್ರೀಡಾಂಗಣದಲ್ಲಿ ನಡೆದ ಉಭಯ ತಂಡಗಳ ನಡುವಿನ ನಾಲ್ಕನೇ ಟಿ20 ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಟೀಂ ಇಂಡಿಯಾ 167 ರನ್ ಕಲೆಹಾಕಿತು. ತಂಡದ ಪರ ಶುಭ್‌ಮನ್ ಗಿಲ್ ಅತ್ಯಧಿಕ 46 ರನ್‌ಗಳ ಇನ್ನಿಂಗ್ಸ್ ಆಡಿದರು. ಈ ಗುರಿ ಬೆನ್ನಟ್ಟಿದ ಆಸ್ಟ್ರೇಲಿಯಾ 119 ರನ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡು 48 ರನ್‌ಗಳ ಹೀನಾಯ ಸೋಲು ಅನುಭವಿಸಿತು.

ಈ ಗೆಲುವಿನೊಂದಿಗೆ ಟೀಂ ಇಂಡಿಯಾ ಸರಣಿ ಸೋಲಿನಿಂದ ಪಾರಾಗಿದೆ. ಏಕೆಂದರೆ ಉಳಿದಿರುವ ಒಂದು ಪಂದ್ಯದಲ್ಲಿ ಭಾರತ ತಂಡ ಗೆದ್ದರೆ ಸರಣಿ ಅದರ ಕೈಸೇರಲಿದೆ. ಒಂದು ವೇಳೆ ಸೋತರೆ ಸರಣಿ 2–2 ರಿಂದ ಸಮಬಲಗೊಳ್ಳಲಿದೆ. ಉಭಯ ತಂಡಗಳ ನಡುವಿನ ಮೊದಲ ಪಂದ್ಯ ಮಳೆಯಿಂದ ರದ್ದಾಗಿತ್ತು. ಆ ಬಳಿಕ ನಡೆದಿದ್ದ ಎರಡನೇ ಪಂದ್ಯವನ್ನು ಆಸ್ಟ್ರೇಲಿಯಾ ಗೆದ್ದುಕೊಂಡಿತ್ತು. ನಂತರ ನಡೆದ ಮೂರನೇ ಟಿ20 ಪಂದ್ಯವನ್ನು 5 ವಿಕೆಟ್ ಗಳಿಂದ ಗೆದ್ದುಕೊಂಡಿದ್ದ ಸೂರ್ಯಕುಮಾರ್ ಪಡೆ, ಇದೀಗ ನಾಲ್ಕನೇ ಟಿ20 ಪಂದ್ಯದಲ್ಲಿ ಏಕಪಕ್ಷೀಯ ಗೆಲುವು ದಾಖಲಿಸಿದೆ.



# ಹಾರಿಸ್ ರೌಫ್‌ಗೆ ನಿಷೇಧ ಕಣಕ್ಕಿಳಿಯುವಂತಿಲ್ಲ..!

ಪಾಕಿಸ್ತಾನ್ ತಂಡದ ಪ್ರಮುಖ ವೇಗಿಗಳಲ್ಲಿ ಹಾರಿಸ್ ರೌಫ್ ಕೂಡ ಒಬ್ಬರು. ಆದರೆ ಏಷ್ಯಾಕಪ್ ಟೂರ್ನಿಯ ವೇಳೆ ದುರ್ನಡತೆ ತೋರಿದ್ದಕ್ಕಾಗಿ ಇದೀಗ ಹಾರಿಸ್ ರೌಫ್ ಎರಡು ಪಂದ್ಯಗಳ ನಿಷೇಧಕ್ಕೆ ಒಳಗಾಗಿದ್ದಾರೆ. ಹೀಗಾಗಿ ಸೌತ್ ಆಫ್ರಿಕಾ ವಿರುದ್ಧದ ದ್ವಿತೀಯ ಏಕದಿನ ಪಂದ್ಯದಲ್ಲಿ ಹಾರಿಸ್ ರೌಫ್ ಕಣಕ್ಕಿಳಿಯುವಂತಿಲ್ಲ. ಪಾಕಿಸ್ತಾನ್ ತಂಡದ ಪ್ರಮುಖ ವೇಗಿ ಹಾರಿಸ್ ರೌಫ್ ಸೌತ್ ಆಫ್ರಿಕಾ ವಿರುದ್ಧದ 2ನೇ ಏಕದಿನ ಪಂದ್ಯದಿಂದಲೂ ಹೊರಗುಳಿಯಲಿದ್ದಾರೆ. ಇದಕ್ಕೆ ಮುಖ್ಯ ಕಾರಣ ಐಸಿಸಿ ಹೇರಿರುವ ನಿಷೇಧ. ಏಷ್ಯಾಕಪ್ ಟೂರ್ನಿ ವೇಳೆ ಕ್ರೀಡಾ ಘನತೆಗೆ ಧಕ್ಕೆ ತಂದ ಹಿನ್ನಲೆ ಇಂಟರ್‌ನ್ಯಾಷನಲ್ ಕ್ರಿಕೆಟ್ ಕೌನ್ಸಿಲ್ ಹಾರಿಸ್ ರೌಫ್ ಮೇಲೆ 2 ಪಂದ್ಯಗಳ ನಿಷೇಧ ಹೇರಲಾಗಿದೆ.

ಸೆಪ್ಟೆಂಬರ್ 14 ರಂದು ನಡೆದ ಭಾರತದ ವಿರುದ್ಧದ ಪಂದ್ಯದ ವೇಳೆ ಹಾರಿಸ್ ರೌಫ್ ಸ್ಟೇಡಿಯಂನಲ್ಲಿದ್ದ ಪ್ರೇಕ್ಷಕರತ್ತ ತಿರುಗಿ ವಿಮಾನ ಹೊಡೆದುರುಳಿಸಿದ್ದೇವೆ ಎಂದು ಸಂಜ್ಞೆ ಮಾಡಿ ಸಂಭ್ರಮಿಸಿದ್ದರು. ಇದಾದ ಬಳಿಕ ಸೆಪ್ಟೆಂಬರ್ 28 ರಂದು ನಡೆದ ಭಾರತದ ವಿರುದ್ಧದ ಪಂದ್ಯದ ಮತ್ತೊಮ್ಮೆ ವಿಮಾನ ಬೀಳಿಸಿದ್ದೇವೆ ಎಂಬಾರ್ಥದಲ್ಲಿ ಕೈ ಸನ್ನೆ ಮಾಡಿ ಭಾರತೀಯ ಪ್ರೇಕ್ಷಕರನ್ನು ಪ್ರಚೋದಿಸಿದ್ದರು. ಪಾಕ್ ವೇಗಿಯ ಈ ನಡೆಯ ಬಗ್ಗೆ ಬಿಸಿಸಿಐ ಇಂಟರ್‌ನ್ಯಾಷನಲ್ ಕ್ರಿಕೆಟ್ ಕೌನ್ಸಿಲ್‌ಗೆ ದೂರು ಸಲ್ಲಿಸಿತ್ತು. ಈ ವರ್ತನೆಯನ್ನು ಗಂಭೀರವಾಗಿ ಪರಿಗಣಿಸಿರುವ ಐಸಿಸಿ, ಹಾರಿಸ್ ರೌಫ್‌ಗೆ 4 ಡಿಮೆರಿಟ್ ಪಾಯಿಂಟ್ ನೀಡಿದೆ. ಇತ್ತ ಒಂದೇ ವರ್ಷದಲ್ಲಿ ನಾಲ್ಕು ಡಿಮೆರಿಟ್ ಪಾಯಿಂಟ್ ಪಡೆದಿರುವ ಕಾರಣ ಅವರಿಗೆ 2 ಅಂತಾರಾಷ್ಟ್ರೀಯ ಪಂದ್ಯಗಳ ನಿಷೇಧ ಹೇರಲಾಗಿದೆ. ಅದರಂತೆ ಸೌತ್ ಆಫ್ರಿಕಾ ವಿರುದ್ಧ ನಡೆಯುತ್ತಿರುವ ಸರಣಿಯ ಎರಡು ಪಂದ್ಯಗಳಿಂದ ಹೊರಗುಳಿಯಬೇಕಾಗಿ ಬಂದಿದೆ.

ಹೀಗಾಗಿ ಫೈಸಲಾಬಾದ್‌ನಲ್ಲಿ ನಡೆಯಲಿರುವ ಸೌತ್ ಆಫ್ರಿಕಾ ವಿರುದ್ಧದ 2ನೇ ಏಕದಿನ ಪಂದ್ಯದಲ್ಲಿ ಹಾರಿಸ್ ರೌಫ್ ಕಣಕ್ಕಿಳಿಯುವಂತಿಲ್ಲ. ಅತ್ತ ರೌಫ್ ಹೊರಗುಳಿಯುವ ಕಾರಣ ಪಾಕ್ ಪರ ಎರಡನೇ ವೇಗಿಯಾಗಿ ನಸೀಮ್ ಶಾ ಕಾಣಿಸಿಕೊಳ್ಳಲಿದ್ದಾರೆ.



# ಶಿಖರ್ ಧವನ್, ಸುರೇಶ್ ರೈನಾಗೆ ಸೇರಿದ 11.14 ಕೋಟಿ ಮೌಲ್ಯದ ಆಸ್ತಿ ಜಪ್ತಿ

ಬೆಟ್ಟಿಂಗ್ ಆಯಪ್ ಪ್ರಚಾರಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಸಿಕ್ಕು ವಿಲವಿಲ ಎಂದು ಒದ್ದಾಡುತ್ತಿರುವ ಟೀಂ ಇಂಡಿಯಾದ ಮಾಜಿ ಕ್ರಿಕೆಟಿಗರಾದ ಶಿಖರ್ ಧವನ್ ಹಾಗೂ ಸುರೇಶ್ ರೈನಾಗೆ ಜಾರಿ ನಿರ್ದೇಶನಾಲಯ ಮತ್ತೊಂದು ಆಘಾತ ನೀಡಿದೆ.

ಈ ಇಬ್ಬರು ಕ್ರಿಕೆಟಿಗರಿಗೆ ಸೇರಿರುವ ಒಟ್ಟು 11.14 ಕೋಟಿ ರೂ ಮೊತ್ತದ ಆಸ್ತಿಯನ್ನು ಜಾರಿ ನಿರ್ದೇಶನಾಲಯ ತಾತ್ಕಾಲಿಕವಾಗಿ 2002ರ ಹಣದ ಅಕ್ರಮ ವರ್ಗಾವಣೆ ತಡೆ ಕಾಯ್ದೆ ಅಡಿಯಲ್ಲಿ ಮುಟ್ಟುಗೋಲು ಹಾಕಿಕೊಂಡಿದೆ. ಮುಟ್ಟುಗೋಲು ಹಾಕಿಕೊಂಡಿರುವ 11.14 ಕೋಟಿ ರೂ ಮೊತ್ತದಲ್ಲಿ ಸುರೇಶ್ ರೈನಾ ಅವರ ಹೆಸರಿನಲ್ಲಿರುವ 6.64 ಕೋಟಿ ರೂ. ಮೌಲ್ಯದ ಮ್ಯೂಚುವಲ್ ಫಂಡ್ ಹೂಡಿಕೆಗಳು ಮತ್ತು ಶಿಖರ್ ಧವನ್ ಅವರ ಹೆಸರಿನಲ್ಲಿರುವ 4.5 ಕೋಟಿ ರೂ ಮೌಲ್ಯದ ಸ್ಥಿರ ಆಸ್ತಿ ಸೇರಿವೆ.

ಶಿಖರ್ ಧವನ್ ಹಾಗೂ ಸುರೇಶ್ ರೈನಾ ಇಬ್ಬರೂ ವಿದೇಶಿ ಕಂಪನಿಗಳೊಂದಿಗೆ ಒಪ್ಪಂದ ಮಾಡಿಕೊಂಡು ಅಕ್ರಮ ಬೆಟ್ಟಿಂಗ್ ಪ್ಲಾಟ್‌ಫಾರ್ಮ್ ಅನ್ನು ಪ್ರಚಾರ ಮಾಡಿದ್ದಾರೆ ಎಂಬುದು ಇಡಿ ತನಿಖೆಯಿಂದ ತಿಳಿದುಬಂದಿದೆ. ಹಾಗೆಯೇ ಇವರಿಬ್ಬರು 1ಮತ್ತು ಅದರ ಅಂಗಸಂಸ್ಥೆಗಳನ್ನು ಉತ್ತೇಜಿಸಲು ವಿದೇಶಿ ಸಂಸ್ಥೆಗಳೊಂದಿಗೆ ಗೊತ್ತಿದ್ದೂ ಜಾಹೀರಾತು ಒಪ್ಪಂದಗಳನ್ನು ಮಾಡಿಕೊಂಡಿರುವುದು ಖಚಿತವಾಗಿದೆ. ಹೀಗಾಗಿ ಇವರಿಬ್ಬರ ಆಸ್ತಿಯನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಳ್ಳಲಾಗಿದೆ.

**ತನಿಖೆಯಿಂದ ತಿಳಿದುಬಂದಿದ್ದೇನು:** ಪ್ಲಾಟ್‌ಫಾರ್ಮ್ ಭಾರತದಲ್ಲಿ ಸಾವಿರಾರು ನಕಲಿ ಬ್ಯಾಂಕ್ ಖಾತೆಗಳ ಮೂಲಕ ಹಣದ ವಹಿವಾಟು ನಡೆಸುತ್ತಿತ್ತು ಎಂಬುದು ಖಚಿತವಾಗಿದೆ. ಇದಕ್ಕೆ ಪೂರಕವಾಗಿ ಇಲ್ಲಿಯವರೆಗೆ 6000 ಕ್ಕೂ ಹೆಚ್ಚು ನಕಲಿ ಖಾತೆಗಳು ಪತ್ತೆಯಾಗಿವೆ. ಈ ಖಾತೆಗಳ ಮೂಲಕ ವಿವಿಧ ಪಾವತಿ ಗೇಟ್‌ವೇಗಳ ಮೂಲಕ ಬೆಟ್ಟಿಂಗ್ ಹಣದ ನಿಜವಾದ ಮೂಲವನ್ನು ಮರೆಮಾಡಲಾಗಿದೆ. ಇದುವರೆಗೆ 1000 ಕೋಟಿ ರೂ. ಗೂ ಅಧಿಕ ಮೊತ್ತದ ಅಕ್ರಮ ಹಣ ವರ್ಗಾವಣೆಯಾಗಿರುವುದು ಪತ್ತೆಯಾಗಿದೆ.

**ಸಾರ್ವಜನಿಕರಿಗೆ ಇಡಿ ಎಚ್ಚರಿಕೆ:** ಇದೀಗ ಈ ಪ್ರಕರಣದಲ್ಲಿ ನಾಲ್ಕು ಪಾವತಿ ಗೇಟ್‌ವೇಗಳ ಮೇಲೆ ಇಡಿ ದಾಳಿ ನಡೆಸಿ 60 ಕ್ಕೂ ಹೆಚ್ಚು ಬ್ಯಾಂಕ್ ಖಾತೆಗಳನ್ನು ಮುಟ್ಟುಗೋಲು ಹಾಕಿಕೊಂಡಿದೆ. ಇದುವರೆಗೆ 4 ಕೋಟಿಗೂ ಹೆಚ್ಚು ಹಣವನ್ನು ವಶಪಡಿಸಿಕೊಳ್ಳಲಾಗಿದೆ. ಹಾಗೆಯೇ ಯಾವುದೇ ರೀತಿಯ ಆನ್‌ಲೈನ್ ಬೆಟ್ಟಿಂಗ್ ಅಥವಾ ಜೂಜಾಟ ಪ್ರಚಾರ ಅಥವಾ ಹೂಡಿಕೆಯಿಂದ ದೂರವಿರುವಂತೆ ಇಡಿ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ. ಅಕ್ರಮ ಬೆಟ್ಟಿಂಗ್ ಮತ್ತು ಜೂಜಾಟವು ಆರ್ಥಿಕ ನಷ್ಟವನ್ನು ಉಂಟುಮಾಡುವುದಲ್ಲದೆ, ಹಣ ವರ್ಗಾವಣೆ ಮತ್ತು ಇತರ ಕಾನೂನುಬಾಹಿರ ಚಟುವಟಿಕೆಗಳನ್ನು ಪ್ರೋತ್ಸಾಹಿಸುತ್ತದೆ ಎಂದು ಇಡಿ ಹೇಳಿದೆ. ಯಾವುದೇ ಅನುಮಾನಾಸ್ಪದ ಆನ್‌ಲೈನ್ ಜಾಹೀರಾತುಗಳು ಅಥವಾ ವಹಿವಾಟುಗಳು ಕಂಡುಬಂದಲ್ಲಿ ತಕ್ಷಣವೇ ಸ್ಥಳೀಯ ಪೊಲೀಸರು ಅಥವಾ ಇಡಿಗೆ ತಿಳಿಸುವಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದೆ.

**ಆಸ್ತಿ ತಾತ್ಕಾಲಿಕ ಮುಟ್ಟುಗೋಲು**

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966